ಸಂಪುಟ: 05 ಸಂಚಿಕೆ: 35 ಪುಟಗಳು: 08 ಶನಿವಾರ 19 ಏಪ್ರಿಲ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ಚಿಂತನೆಯೇ ಬಂಡವಾಳ, ಉದ್ಯಮವೇ ದಾರಿ, ಕಠಿಣ ಪರಿಶ್ರಮವೇ ಪರಿಹಾರ

## ವಿದ್ಯಾಸಿರಿ ಮೊತ್ತ 2000 ರೂ.ಗೆ ಹೆಚ್ಚಳ!



• ಉದಯವಾಹಿನಿ, ಬೆಂಗಳೂರು


ಮಡಿವಾಳ ಸಮುದಾಯದ ಮಕ್ಕಳು ಹೆಚ್ಚೆಚ್ಚು ಶಿಕ್ಷಣ ಪಡೆಯಬೇಕು ಎನ್ನುವ ಉದ್ದೇಶದಿಂದಲೇ ನಾವು ವಿದ್ಯಾಸಿರಿ ಯೋಜನೆ ಜಾರಿಗೆ ತಂದೆವು. ಈಗ ವಿದ್ಯಾಸಿರಿ ಯೋಜನೆಯ ಮೊತ್ತವನ್ನು ಪ್ರತೀ ವಿದ್ಯಾರ್ಥಿಗೆ ಎರಡು ಸಾವಿರಕ್ಕೆ ಹೆಚ್ಚಿಸಲಾಗುವುದು, ಜೊತೆಗೆ ಮಡಿವಾಳ ಸಮುದಾಯದ ಹಾಸ್ಟೆಲ್‌ಗೆ ಅಗತ್ಯ ಸವಲತ್ತು ಒದಗಿಸಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

ಮಡಿವಾಳ ಸಮುದಾಯದ ಪ್ರಗತಿಗೆ ನಮ್ಮ ಸರ್ಕಾರ ಬದ್ಧವಾಗಿದೆ. ಮುಖ್ಯವಾಹಿನಿಗೆ ಬರುವ ಪ್ರಯತ್ನ ಈ ಸಮುದಾಯದಿಂದ ಹೆಚ್ಚೆಚ್ಚು ಆಗಬೇಕು. 12ನೇ ಶತಮಾನದಲ್ಲೇ ಮಡಿವಾಳ ಮಾಚಿ ದೇವರು ಬಸವಣ್ಣನವರ ಜೊತೆ ಸೇರಿ ಸಮಾಜದ ಬದಲಾವಣೆಗೆ ಮುಂದಾಗಿದ್ದರು. ನಮ್ಮ ಸಮಾಜದಲ್ಲಿ ಜಾತಿ ವ್ಯವಸ್ಥೆ ಕಾರಣಕ್ಕೆ ಅಸಮಾನತೆ ಇದೆ. ಈ ಕಾರಣಕ್ಕೆ ಉದ್ಯೋಗ, ಶಿಕ್ಷಣ ಸಿಗದೆ ಆರ್ಥಿಕ ಅಸಮಾನತೆ ಹೆಚ್ಚಿ ಸಾಮಾಜಿಕ ಅಸಮಾನತೆ ಹೆಚ್ಚಾಯಿತು. ಬಸವಾದಿ ಶರಣರು ಜಾತಿಮುಕ್ತ ಮನುಷ್ಯ ಸಮಾಜ ನಿರ್ಮಾಣಕ್ಕೆ ಹೋರಾಡಿದ್ದರು. ಒಟ್ಟಿಗೆ ಕುಳಿತು ಊಟ ಮಾಡಲಾಗದ ಅನಿಷ್ಠ ಪದ್ಧತಿ ವಿರುದ್ಧ ಧ್ವನಿ ಎತ್ತಿ ಜಾತಿ ಅಸಮಾನತೆ ಅಳಿಸಲು ಹೋರಾಡಿದ್ದರು. ಎಲ್ಲಾ ಜಾತಿ, ಸಮುದಾಯಗಳ ಜಾತ್ಯತೀತ ಪ್ರತಿನಿಧಿಗಳನ್ನೊಳಗೊಂಡ ಅನುಭವ ಮಂಟಪದ ಉದ್ದೇಶವೇ ಜಾತಿ ಮುಕ್ತ ಸಮಾಜದ ನಿರ್ಮಾಣವಾಗಿತ್ತು. ಮಡಿವಾಳ ಸಮಾಜದಲ್ಲಿ ಯಾರೂ ಶಾಸಕರಿಲ್ಲ, ಒಬ್ಬರು ಮಾತ್ರ ಐಎಎಸ್ ಅಧಿಕಾರಿ ಇದ್ದಾರೆ.

## ತಂಬಾಕು, ಸಿಗರೇಟು ಜಾಹೀರಾತು ಹಾಕೋಹಾಗಿಲ್ಲ

• ಉದಯವಾಹಿನಿ, ಬೆಂಗಳೂರು



**ಸಿಎಂ ಕಚೇರಿಯಿಂದ ಸೂಚನೆ**

ತಂಬಾಕು, ಸಿಗರೇಟು, ಮದ್ಯ ಉತ್ಪನ್ನಗಳ ಜಾಹೀರಾತು ಸಂಪೂರ್ಣವಾಗಿ ತೆರವುಗೊಳಿಸುವಂತೆ ಮುಖ್ಯಮಂತ್ರಿ ಕಚೇರಿಯಿಂದ ಖಡಕ್ ಸೂಚನೆ ನೀಡಲಾಗಿದೆ.


ಬಸ್‌ಗಳಲ್ಲಿ ತಂಬಾಕು, ಸಿಗರೇಟು, ಮದ್ಯ ಉತ್ಪನ್ನಗಳ ಜಾಹೀರಾತುಗಳನ್ನು ಪ್ರದರ್ಶನ ಮಾಡದಂತೆ ಸಂಬಂಧಪಟ್ಟ ಪರವಾನಗಿದಾರರಿಗೆ ಈಗಾಗಲೇ ನೋಟಿಸ್ ನೀಡಲಾಗಿದ್ದು, ಅದರನ್ವಯ ಬಸ್‌ಗಳಲ್ಲಿ ಅಳವಡಿಸಲಾಗಿದ್ದ ಕೂಲ್ ಲಿಪ್ ಜಾಹೀರಾತುಗಳನ್ನು ಸಂಪೂರ್ಣವಾಗಿ ತೆರವುಗೊಳಿಸಲು ಕ್ರಮವಹಿಸಲಾಗಿರುತ್ತದೆ. ಇನ್ನು ಮುಂದೆಯೂ ಇಂತಹ ಜಾಹೀರಾತುಗಳನ್ನು ಪ್ರದರ್ಶನ ಮಾಡದಂತೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಮುಖ್ಯ ಸಂಚಾರ ವ್ಯವಸ್ಥಾಪಕರು ತಿಳಿಸಿದ್ದಾರೆ.

ಈ ಹಿನ್ನೆಲೆ, ಜಾಹೀರಾತುಗಳನ್ನು ಸಂಪೂರ್ಣವಾಗಿ ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗಿದೆ. ಇನ್ನು ಮುಂದೆ ಇಂತಹ ಜಾಹೀರಾತುಗಳನ್ನು ಪ್ರದರ್ಶನ ಮಾಡದಂತೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಮುಖ್ಯ ಸಂಚಾರ ವ್ಯವಸ್ಥಾಪಕರು ತಿಳಿಸಿರುವುದಾಗಿ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

**ಸಮಾಜದ ಹಿತದೃಷ್ಟಿಯಿಂದ ಒಳಿತಲ್ಲ:** ಸಿರಾಜ್ ಮಡಕ ಎನ್ನುವ ವ್ಯಕ್ತಿ, ಎಕ್ಸ್‌ಖಾತೆಯಲ್ಲಿ ಸಿಎಂ ಕರ್ನಾಟಕಕ್ಕೆ ಟ್ಯಾಗ್ ಮಾಡಿ, ಆರೋಗ್ಯಕ್ಕೆ ಹಾನಿಯುಂಟು ಮಾಡುವ ತಂಬಾಕು, ಸಿಗರೇಟು, ಮದ್ಯದಂತಹ ಉತ್ಪನ್ನಗಳ ಜಾಹೀರಾತನ್ನು ಸರ್ಕಾರಿ ಸ್ವಾಮ್ಯದ ಬಸ್ಸುಗಳಲ್ಲಿ ಪ್ರದರ್ಶನ ಮಾಡುವುದು ಸಮಾಜಕ್ಕೆ ಒಳಿತಲ್ಲ. ಸಮಾಜದ ಹಿತದೃಷ್ಟಿಯಿಂದ ಸರ್ಕಾರಿ ಸ್ವಾಮ್ಯದ ಬಸ್ಸುಗಳಲ್ಲಿ ಇಂತಹ ಜಾಹೀರಾತನ್ನು ಹಾಕದಿರುವುದು ಒಳಿತು. ಈ ಬಗ್ಗೆ ಗಮನ ಹರಿಸಿ ಎಂದು ಸರ್ಕಾರಕ್ಕೆ ಮನವಿ ಮಾಡಿದ್ದರು. ಇದನ್ನು ಗಮನಿಸಿದ ಮುಖ್ಯಮಂತ್ರಿಗಳ ಕಚೇರಿಯ ಕುಂದು ಕೊರತೆ ವಿಭಾಗದ ವಿಶೇಷ ಕರ್ತವ್ಯಾಧಿಕಾರಿಗಳು ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದಿದ್ದರು.

## ಪೊಲೀಸ್ ಅಧಿಕಾರಿ ಸೋಗಿನಲ್ಲಿ ಸೈರನ್ ಮೊಳಗಿಸಿ ವ್ಯಕ್ತಿ ಮೇಲೆ ಹಲ್ಲೆ

• ಉದಯವಾಹಿನಿ, ಬೆಂಗಳೂರು



ಪೊಲೀಸ್ ಅಧಿಕಾರಿ ಸೋಗಿನಲ್ಲಿ ಬಂದು ಕಾರಿನ ಸೈರನ್ ಮೊಳಗಿಸಿ ವ್ಯಕ್ತಿ ಮೇಲೆ ಹಲ್ಲೆ ನಡೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಯನ್ನು ಬೆಂಗಳೂರಿನ ಪುಲಕೇಶಿನಗರ ಪೊಲೀಸರು ಬಂಧಿಸಿದ್ದಾರೆ. ನಿತುಲ್ ರಾಜ್ ಬಂಧಿತ ಕ್ಯಾಬ್ ಚಾಲಕ, ಕಳೆದ ವಾರ ಸಂತೋಷ್ ಎಂಬುವವರು ಕಾರಿನಲ್ಲಿ ಹೋಗುತ್ತಿದ್ದಾಗ ಆರೋಪಿಯ ಕಾರಿಗೆ ಟಚ್ ಕಾರು ನಿಲ್ಲಿಸದೇ ಹೋಗಿದ್ದಕ್ಕೆ ಆಕ್ರೋಶಗೊಂಡ ಆರೋಪಿ, ಸೈರನ್ ಮೊಳಗಿಸಿ ಕಾರನ್ನು ಅಡ್ಡಹಾಕಿದ್ದಾನೆ. ಅಲ್ಲದೇ ತಾನು ಪೊಲೀಸ್ ಅಧಿಕಾರಿ ಎಂದು ಹೇಳಿ ಅವಾಚ್ಯ ಶಬ್ದಗಳಿಂದ ನಿಂದಿಸಿ ಸಂತೋಷ್ ಮೇಲೆ ಹಲ್ಲೆ ನಡೆಸಿ ಪರಾರಿಯಾಗಿದ್ದಾನೆ. ಈ ಬಗ್ಗೆ ಸಂತೋಷ್ ಪುಲಕೇಶಿ ನಗರ ಠಾಣೆಯಲ್ಲಿ ದೂರು ನೀಡಿದ್ದರು. ಸಿಸಿಟಿವಿ ಕ್ಯಾಮರಾ ಆಧರಿಸಿ ಆರೋಪಿಯ ಕಾರನ್ನು ಪತ್ತೆ ಮಾಡಿ ಆರೋಪಿಯನ್ನು ಬಂಧಿಸಿದ್ದಾರೆ.

## ಗಾಂಜಾ ನಶೆಯಲ್ಲಿ ಸಿಕ್ಕ ವಾಹನಗಳ ಗಾಜು ಪುಡಿಗೈದ ಪುಡಿರೌಡಿ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಪುಡಿರೌಡಿಗಳ ಅಟ್ಟಹಾಸ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಗಾಂಜಾ ಮತ್ತಿನಲ್ಲಿ ಪುಡಿರೌಡಿಯೊಬ್ಬ ಸಿಕ್ಕ ಸಿಕ್ಕ ವಾಹನಗಳ ಗಾಜು ಒಡೆದು ಹಾಕಿರುವ ಘಟನೆ ಕೆ.ಆರ್.ಪುರಂ ಮಾರ್ಕೆಟ್ ಬಳಿ ನಡೆದಿದೆ. ಪುಡಿರೌಡಿಯೊಬ್ಬ ಲಾಂಗ್ ಹಿಡಿದು ಕಾರು, ಗೂಡ್ಸ್ ವಾಹನಗಳ ಗ್ಲಾಸ್ ಒಡೆದು ಪುಡಿ ಪುಡಿ ಮಾಡಿದ್ದಾನೆ. ಸಾಲದ್ದಕ್ಕೆ ಲಾಂಗ್ ಹಿಡಿದು ಜನರಿಗೆ ಆವಾಸ್ ಹಾಕಿ ಬೆದರಿಕೆಯೊಡ್ಡಿದಾನೆ. ಸಾರ್ವಜನಿಕರು ಪೌಡಿರೌಡಿಯನ್ನು ಹಿಡಿದು ಕೆ.ಆರ್.ಪುರಂ ಠಾಣೆಯ ಪೊಲೀಸರಿಗೆ ಒಪ್ಪಿಸಿದ್ದಾರೆ. ಆರೋಪಿಯನ್ನು ಬಂಧಿಸಿರುವ ಪೊಲೀಸರು ವಿಚಾರಣೆ ನಡೆಸಿದ್ದಾರೆ.

## ಪರವಾನಗಿ ಉಲ್ಲಂಘನೆ: ಪಿಜಿಗಳ ಅಡುಗೆಮನೆಗೆ ಬಿಬಿಎಂಪಿ ಬೀಗ


• ಉದಯವಾಹಿನಿ, ಬೆಂಗಳೂರು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಹದೇವಪುರ ವಲಯದ ಆರೋಗ್ಯ ಅಧಿಕಾರಿಗಳು ಪಟ್ಟಣ ಯೋಜನೆ ಮತ್ತು ಪರವಾನಗಿ ನಿಯಮಗಳನ್ನು ಉಲ್ಲಂಘಿಸಿದ್ದಾರೆ ಎಂದು ಆರೋಪಿಸಿ, 100 ಪೇಯಿಂಗ್ ಗೆಸ್ಟ್ ವಸತಿಗೃಹಗಳ ಅಡುಗೆಮನೆಗಳಿಗೆ ಬೀಗ ಹಾಕಿದ್ದಾರೆ. ಈ ಕ್ರಮದಿಂದಾಗಿ ಬೆಂಗಳೂರಿನಲ್ಲಿ ಅನೇಕ ಪಿಜಿಗಳು ಖಾಲಿಯಾಗಿವೆ. ಪಿಜಿಯನ್ನು ವಸತಿಯನ್ನು ನಂಬಿಕೊಂಡಿದ್ದವರಿಗೆ ಆಘಾತವಾಗಿದೆ. ಬಿಬಿಎಂಪಿ ಆರೋಗ್ಯ ಆಯುಕ್ತ ಸುರಲ್ಕರ್ ವಿಕಾಸ್ ಕಿಶೋರ್, ಪಿಜಿ ನಿರ್ವಾಹಕರು ಕಟ್ಟಡದ ಬೈಲಾಗಳನ್ನು ಉಲ್ಲಂಘಿಸುತ್ತಿದ್ದಾರೆ ಎಂದು ಹೇಳಿದ್ದಾರೆ, ಇದು 40 ಅಡಿಗಿಂತ ಕಡಿಮೆ ರಸ್ತೆ ಅಗಲವಿರುವ ವಸತಿ ಪ್ರದೇಶಗಳಲ್ಲಿ ವಾಣಿಜ್ಯ ಚಟುವಟಿಕೆಯನ್ನು ನಿಷೇಧಿಸುತ್ತದೆ. ಹಲವಾರು ಪಿಜಿಗಳು ಕಾರ್ಯನಿರ್ವಹಿಸಲು ಅಗತ್ಯವಾದ ಪರವಾನಗಿಗಳ ಕೊರತೆಯನ್ನು ಸಹ ಗಮನಿಸಿದ್ದಾರೆ.

ಕೆಲವು ಪಿಜಿ ಸಂಘಗಳು ತಮ್ಮ ಕಟ್ಟಡಗಳು ವಸತಿ ಪ್ರದೇಶಗಳ ಅಡಿಯಲ್ಲಿ ಬರುತ್ತವೆ. ಆದ್ದರಿಂದ ಅವುಗಳನ್ನು ನಡೆಸಲು ಅನುಮತಿ ನೀಡಬೇಕು ಎಂದು ಹೇಳಿಕೊಂಡಿವೆ. ನಾವು ದಾಖಲೆಗಳನ್ನು ಸಹ ಪರಿಶೀಲಿಸುತ್ತೇವೆ ಎಂದು ಕಿಶೋರ್ ಹೇಳಿದರು. ಪಿಜಿಗಳಿಗೆ ಬೀಗ ಹಾಕುವ ಅಭಿಯಾನದ ನಂತರ, ಪಿಜಿಗಳು ನಗರಾಭಿವೃದ್ಧಿ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯನ್ನು ಸಂಪರ್ಕಿಸಿ, ಅವರ ಹಸ್ತಕ್ಷೇಪವನ್ನು ಒತ್ತಾಯಿಸಿದರು. ಹಾಸ್ಟೆಲ್‌ಗಳು, ಅಪಾರ್ಟ್‌ಮೆಂಟ್‌ಗಳು ಮತ್ತು ಧರ್ಮಶಾಲೆಗಳನ್ನು ವಸತಿ ವರ್ಗದ ಅಡಿಯಲ್ಲಿ ವರ್ಗೀಕರಿಸುವ 2015 ರ ಗೆಜೆಟ್ ಅಧಿಸೂಚನೆಯನ್ನು ಅವರು ಉಲ್ಲೇಖಿಸಿದ್ದಾರೆ. ವಿದ್ಯಾರ್ಥಿಗಳು, ಕೆಲಸ ಮಾಡುವ ಮಹಿಳೆಯರು ಮತ್ತು ನರ್ಸಿಂಗ್ ಸಿಬ್ಬಂದಿಗೆ ವಸತಿಗೃಹಗಳನ್ನು ವಸತಿ ಎಂದು ಪರಿಗಣಿಸಲಾಗುತ್ತದೆ ಎಂಬ ಜಿಎಸ್‌ಟಿ ಕೌನ್ಸಿಲ್ ಸಲ್ಲಿಸಿದ ಅರ್ಜಿಯನ್ನು ಸಹ ಸಂಘಗಳು ಉಲ್ಲೇಖಿಸಿವೆ.

### ಜನಿವಾರ ಹಾಕಿದ್ದಕ್ಕೆ CET ಪರೀಕ್ಷೆಗೆ ಅವಕಾಶ ಕೊಡದ ಸಿಬ್ಬಂದಿ

# ಜನಿವಾರ ಜಟಾಪಟಿ



**ರಾಜ್ಯದಲ್ಲಿ ಸಂಚಲನ ಸೃಷ್ಟಿಸಿದ ವಿವಾದ**


**ಬ್ರಾಹ್ಮಣ ಸಂಘಟನೆಗಳಿಂದ ಆಕ್ರೋಶ**

**ಜನಿವಾರ ತೆಗೆಸಿದ ಪ್ರಕರಣ**

• ಉದಯವಾಹಿನಿ, ಬೆಂಗಳೂರು

ಬೀದರ್‌ನಲ್ಲಿ ಜನಿವಾರ ಧರಿಸಿದ್ದ ವಿದ್ಯಾರ್ಥಿಗೆ ಸಿಇಟಿ ಪರೀಕ್ಷೆಗೆ ಅವಕಾಶ ಕೊಡದೇ, ಶಿವಮೊಗ್ಗದಲ್ಲಿ ವಿದ್ಯಾರ್ಥಿಯೊಬ್ಬನ ಜನಿವಾರ ಕಿತ್ತೆಸೆಯಲು ದರ್ಪ ಮೆರೆದು ವಿದ್ಯಾರ್ಥಿಯ ಭವಿಷ್ಯಕ್ಕೆ ಕಲ್ಲು ಹಾಕಿದ ಅಧಿಕಾರಿ, ಸಿಬ್ಬಂದಿಗಳ ವರ್ತನೆ ಅತ್ಯಂತ ಹೇಯ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಖಂಡಿಸಿದ್ದಾರೆ. ಈ ರೀತಿಯ ಬೌದ್ಧಿಕ ವಿಕೃತಿ ಹಾಗೂ ಮನುಷ್ಯತ್ವ ಇಲ್ಲದ ನಡೆ ಇನ್ನೊಂದಿರಲಾರದು, ಇದು ಕಾಂಗ್ರೆಸ್ ಸರ್ಕಾರದ ಹೀನ ಮನಸ್ಥಿತಿಯ ಮುಖವಾಡವನ್ನು ಪ್ರದರ್ಶಿಸಿದೆ ಎಂದು ಕಿಡಿಕಾರಿದ್ದಾರೆ.

ಮುಖ್ಯಮಂತ್ರಿಗಳು ಈ ಸಂಬಂಧವಾಗಿ ವಿದ್ಯಾರ್ಥಿಯ ಭವಿಷ್ಯಕ್ಕೆ ಕಲ್ಲು ಹಾಕಿ ಹಿಂದು ಸಂಪ್ರದಾಯದ ಆಚಾರ ವಿಚಾರವನ್ನು ಅಪಮಾನಿಸಿರುವ ಅಧಿಕಾರಿಗಳ ವಿರುದ್ಧ ಕ್ರಮ ತೆಗೆದುಕೊಳ್ಳಲು ಮುಂದಾಗಲಿ, ಸನಾತನ ಹಿಂದು ಧರ್ಮದ ಆಚಾರ ವಿಚಾರಗಳಿಗೆ ಮಾರ್ಗದರ್ಶನ ತೋರುವ ಸಭ್ಯ ಬ್ರಾಹ್ಮಣ ಸಮುದಾಯವನ್ನು ಅಪಮಾನಿಸಿರುವ ರಾಜ್ಯ ಸರ್ಕಾರ ಈ ಕೂಡಲೇ ಬೇಷರತ್ ಕ್ಷಮೆಯಾಚಿಸಲಿ ಎಂದು ಒತ್ತಾಯಿಸಿದ್ದಾರೆ.







1. ರಾಜ್ಯದಲ್ಲಿ ಪ್ರತ್ಯೇಕ ಎರಡು ಜನಿವಾರ ವಿವಾದ
2. ಶಿವಮೊಗ್ಗದಲ್ಲಿ ಜನಿವಾರ ಕತ್ತರಿಸಿ ಪರೀಕ್ಷೆ ಬರೆಸಿದ್ರಾ
3. ಅತಿರೇಕ, ವಿಕೃತ ಮನಸ್ಥಿತಿ ಎಂದು ಶಿಕ್ಷಣ ಸಚಿವರು ಗರಂ

**ಏನಿದು ಘಟನೆ..:** ಸಿಇಟಿ ಪರೀಕ್ಷೆಗಾಗಿ ಕಾಲೇಜಿನ ಒಳಭಾಗಕ್ಕೆ ತೆರಳುವ ಸಮಯದಲ್ಲಿ ಸಿಇಟಿ ಸಿಬ್ಬಂದಿ ಬ್ರಾಹ್ಮಣ ವಿದ್ಯಾರ್ಥಿಗಳು ಕೈಯಲ್ಲಿ ಕಟ್ಟಿಕೊಂಡಿದ್ದ ಕಾಶಿದಾರ ಮತ್ತು ಗಾಯತ್ರಿ ದೀಕ್ಷೆ ಪಡೆದ ಜನಿವಾರವನ್ನು ತೆಗೆಸಿ ಹಾಕಿರುವುದು ಮಕ್ಕಳ ಪೋಷಕರಿಂದ ತಿಳಿದು ಬಂದಿದೆ. ಈ ಕೇಂದ್ರದಲ್ಲಿ ಈ ರೀತಿ ಗಾಯತ್ರಿ ಮಂತ್ರ ದೀಕ್ಷೆ ಪಡೆದು ಅಕ್ಕ ಸಾಕ್ಷರದ ಪರಮ ಸಂಕಲ್ಪ ಮಾಡಿದ್ದ ವಿದ್ಯಾರ್ಥಿಗಳ ಜನಿವಾರವನ್ನು ಬಿಚ್ಚಿಸಿದ ಅವಮಾನಕಾರಿ ಘಟನೆ ಅಧಿಕಾರಿಗಳು ಮಾಡಿದ್ದು ಖಂಡನೀಯ ಎಂದು ಬ್ರಾಹ್ಮಣ ಸಮುದಾಯ ತೀವ್ರ ಆಕ್ರೋಶ ಹೊರಹಾಕಿದೆ. ವರ್ಷಪೂರ್ತಿ ಕಷ್ಟಪಟ್ಟು ಅಧ್ಯಯನ ಮಾಡಿ ಒಳ್ಳೆ ಭವಿಷ್ಯಕ್ಕಾಗಿ ಸಿದ್ಧತೆ ಮಾಡಿಕೊಂಡು ಬಂದಿದ್ದ ವಿದ್ಯಾರ್ಥಿಗಳ ಜನಿವಾರ ಬಿಚ್ಚಿಸುವ ಅಧಿಕಾರಿಗಳ ಕೃತ್ಯ ಬ್ರಾಹ್ಮಣ ಮತ್ತು ಹಿಂದೂ ವಿರೋಧಿಯಾಗಿದೆ. ಅಖಿಲ ಕರ್ನಾಟಕ ಬ್ರಾಹ್ಮಣ ಮಹಾ ಸಭಾ ಮತ್ತು ಶಿವಮೊಗ್ಗ ಜಿಲ್ಲೆಯ ವಿಶ್ವ ಸಂಘಟನೆಗೆ ಒಕ್ಕೂಟವು ಈ ಘಟನೆಯನ್ನು ತೀವ್ರವಾಗಿ ಖಂಡಿಸುತ್ತದೆ. ಜಿಲ್ಲಾಧಿಕಾರಿಗಳು ತಕ್ಷಣ ತನಿಖೆ ನಡೆಸಿ ಹಿಂದೂ ಪರಂಪರೆಯ ಸಂಸ್ಕಾರವಾದ ಗಾಯತ್ರಿ ಮಂತ್ರ ದೀಕ್ಷೆಯ ಪ್ರಾಮುಖ್ಯತೆ. ಘನತೆ ಗೌರವ ಗೊತ್ತಿಲ್ಲದ ಧರ್ಮ ವಿರೋಧಿ ಕೃತ್ಯ ಎಸಗಿರುವ ಹೀನ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳಲು ನಿರ್ದೇಶನ ನೀಡಬೇಕೆಂದು ತಮ್ಮನ್ನು ವಿನಂತಿಸುತ್ತೇವೆ

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ. ಸುಧಾಕರ್, ಜನಿವಾರ ತೆಗೆದು ಪರೀಕ್ಷೆ ಬರೆಯಬೇಕು ಎಂಬ ನಿಯಮವಿಲ್ಲ. ಎಲ್ಲರ ಸಂಪ್ರದಾಯವನ್ನು ಗೌರವಿಸಬೇಕು ಎಂದಿದ್ದಾರೆ. ಬೀದರ್‌ನಲ್ಲಿ ಜನಿವಾರ ಧರಿಸಿದ್ದ ವಿದ್ಯಾರ್ಥಿಗೆ ಜನಿವಾರ ತೆಗೆದು ಸಿಇಟಿ ಪರೀಕ್ಷೆ ಬರೆಯುವಂತೆ ಸೂಚಿಸಿದ ಹಿನ್ನೆಲೆಯಲ್ಲಿ ಆ ವಿದ್ಯಾರ್ಥಿ ಪರೀಕ್ಷೆ ಬರೆಯದೇ ವಾಪಸ್ಸು ಹೋಗಿದ್ದಾರೆ. ಶಿವಮೊಗ್ಗ ಜಿಲ್ಲೆಯಲ್ಲಿ ವಿದ್ಯಾರ್ಥಿಯೊಬ್ಬರ ಜನಿವಾರ ಕಿತ್ತು ಹಾಕಲಾಗಿದೆ ಎಂಬ ಆರೋಪಗಳಿವೆ. ಈ ಬಗ್ಗೆ ಸಮಗ್ರ ವರದಿ ನೀಡಲು ಸೂಚಿಸಲಾಗಿದೆ ಎಂದು ಅವರು ಹೇಳಿದ್ದಾರೆ. ಪ್ರಾಧಿಕಾರದ ಕಾರ್ಯನಿರ್ವಾಹಕ ಅಧಿಕಾರಿ ಸುಸೂತ್ರವಾಗಿ ಸಿಇಟಿ ಪರೀಕ್ಷೆ ನಡೆದಿದೆ ಎಂಬ ಮಾಹಿತಿ ನೀಡಿದ್ದರು. ಜನಿವಾರದ ವಿಚಾರದಲ್ಲಿ ನಡೆದಿದೆ ಎನ್ನಲಾದ ಘಟನೆಯ ಬಗ್ಗೆ ಕಾರ್ಯನಿರ್ವಾಹಕ ಅಧಿಕಾರಿಯಿಂದ ವರದಿ ಕೇಳಲಾಗಿದೆ. ಅವರು ವರದಿ ಕೊಟ್ಟ ನಂತರ ಮುಂದಿನ ಕ್ರಮ ಜರುಗಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.


### ಸಂಬಂಧಿಸಿದ ಸಚಿವರು ಉತ್ತರಿಸಬೇಕು



ಪರೀಕ್ಷೆ ಹಾಗೂ ಸಂದರ್ಶನ ಎದುರಿಸುವ ವೇಳೆ ಕೆಲ ವಸ್ತುಗಳನ್ನು ಕೊಂಡೊಯ್ಯುವುದು ನಿಷಿದ್ಧ. ಆದರೆ, ಜನಿವಾರ ತೊಡುವುದು ಒಂದು ಕುಟುಂಬ ಹಾಗೂ ಭಾರತೀಯ ಸಮುದಾಯದ ಆಚಾರ ವಿಚಾರಕ್ಕೆ ಸಂಬಂಧಿಸಿದ್ದು, ವಿದ್ಯಾರ್ಥಿ ಬರೆಯುವ ಪರೀಕ್ಷೆಯ ಮೇಲೆ ಜನಿವಾರ ಏನು ಪ್ರಭಾವ ಅಥವಾ ಪರಿಣಾಮ ಬೀರುತ್ತದೆ ಎಂಬುದಕ್ಕೆ ಸಂಬಂಧಿಸಿದ ಸಚಿವರು ಹಾಗೂ ಸರ್ಕಾರ ಉತ್ತರಿಸಬೇಕು. ಶಿಕ್ಷಣವೆಂದರೆ ಸಂಸ್ಕಾರ, ಅದು ಇಲ್ಲದವರು ಶಿಕ್ಷಣ ಖಾತೆಯನ್ನು ನಿರ್ವಹಿಸಿದರೆ ಏನು ಪರಿಣಾಮ ಬೀರಬಹುದು ಎನ್ನುವುದಕ್ಕೆ ಈ ಘಟನೆ ಸಾಕ್ಷಿಯಾಗಿದೆ

-ವಿಜಯೇಂದ್ರ, ಬಿಜೆಪಿ ರಾಜ್ಯಾಧ್ಯಕ್ಷ

### ಜನಿವಾರ ತೆಗೆಸಿದವರ ವಿರುದ್ಧ ಕಾನೂನು ಕ್ರಮ



ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸಿದ ಸಾಮಾನ್ಯ ಪ್ರವೇಶ ಪರೀಕ್ಷೆ ಸಂದರ್ಭದಲ್ಲಿ ವಿದ್ಯಾರ್ಥಿಗಳ ಜನಿವಾರ ತೆಗೆಸಲು ಯತ್ನಿಸಿರುವ ಆರೋಪದ ಎರಡು ಪ್ರತ್ಯೇಕ ಪ್ರಕರಣಗಳ ಬಗ್ಗೆ ಸಮಗ್ರ ವರದಿ ಪಡೆದು ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು

-ಡಾ.ಎಂ.ಸಿ. ಸುಧಾಕರ್, ಉನ್ನತ ಶಿಕ್ಷಣ ಸಚಿವ

### ಸಿಇಟಿ ನಿಯಮ ತಿಳಿದುಕೊಳ್ಳಬೇಕು



ಸಿಇಟಿ ನಿಯಮವನ್ನ ಮೊದಲು ತಿಳಿದುಕೊಳ್ಳಬೇಕು. ಅವರವರ ಆಚರಣೆಗೆ ಸಂವಿಧಾನ ಅವಕಾಶ ಕೊಟ್ಟಿದೆ. ಆಸ್ತಿಕರಾಗಿ, ನಾಸ್ತಿಕರಾಗಿ ಬದುಕಲು ಸಂವಿಧಾನದಲ್ಲಿ ಅವಕಾಶವಿದೆ. ಅಂತಹ ಧಾರ್ಮಿಕ ಆಚರಣೆಗಳನ್ನ ಯಾರೇ ಮಾಡಿದರು ಅದನ್ನ ಒಪ್ಪಬೇಕಾಗಿದೆ. ಸಿಇಟಿ ಪರೀಕ್ಷಾ ನಿಯಮದಲ್ಲಿ ಯಾವುದೇ ಗೊಂದಲ ಆಗದ ದೃಷ್ಟಿಯಿಂದ ಕ್ರಮಗಳನ್ನು ಕೈಗೊಂಡಿರುತ್ತಾರೆ. ಕೆಲವರು ಬುರ್ಖಾ ಹಾಕಿಕೊಂಡು ಬರ್ತೀನಿ ಅಂತಾರೆ. ಯಾರ್ ಬರ್ತಾರೆ ಅನ್ನೋದು ಗೊತ್ತಾಗಲ್ಲ. ಇದರಿಂದ ಅವರಿಗೆ ಗೊಂದಲ ಉಂಟಾಗುತ್ತೆ. ಇನ್ನೂ ಕೆಲವರು ಇನ್ನೊಂದು ಹಾಕಿಕೊಂಡು ಬರ್ತೀನಿ ಅಂತಾರೆ ಅವಾಗ ಗೊಂದಲ ಆಗುತ್ತೆ. ಈ ಗೊಂದಲ ನಿವಾರಣೆಗೆ ತಜ್ಞರ ಸಮಿತಿ ರಚನೆ ಮಾಡಿ.

-ಶ್ರೀ ಸಿದ್ದಲಿಂಗ ಸ್ವಾಮೀಜಿ, ಸಿದ್ಧಗಂಗಾ ಮಠ

### ಮಾಧ್ಯಮಗಳ ಮೂಲಕ ವಿಚಾರ ತಿಳಿದುಕೊಂಡಿದ್ದೇವೆ



ಈ ಬಗ್ಗೆ ನಿರ್ದೇಶನ ಕೊಡುವ ಅಧಿಕಾರ ಯಾವ ಅಧಿಕಾರಿಗೂ ಇಲ್ಲ. ಈ ರೀತಿ ಮಾಡುವುದಕ್ಕೆ ಕಾನೂನಿನಲ್ಲಿ ಅವಕಾಶ ಇಲ್ಲ. ಈ ವಿಚಾರ ನನ್ನ ವ್ಯಾಪ್ತಿಗೆ ಬರುವುದಿಲ್ಲ, ಹಾಗಾಗಿ ಸಂಬಂಧಪಟ್ಟ ಇಲಾಖೆ ಜತೆ ಚರ್ಚಿಸುವೆ. ಈ ಘಟನೆ ನನ್ನ ಜಿಲ್ಲೆಯಲ್ಲಿ ಆಗಿರುವುದರಿಂದ ಕ್ರಮಕ್ಕೆ ಸೂಚನೆ ನೀಡುತ್ತೇವೆ. ವಿದ್ಯಾರ್ಥಿಗಳ ವಿಚಾರದಲ್ಲಿ ಈ ರೀತಿ ಮಾಡುವುದು ಸರಿಯಲ್ಲ

-ಮಧು ಬಂಗಾರಪ್ಪ, ಶಿಕ್ಷಣ ಸಚಿವ

### ಸರ್ಕಾರಕ್ಕೆ ಶೋಭೆ ತರುವುದಿಲ್ಲ



ಆಳುವ ಸರ್ಕಾರಕ್ಕೆ ಏನಾಗಿದೆ ಎಂಬುದೇ ಅರ್ಥವಾಗುತ್ತಿಲ್ಲ. ಪರೀಕ್ಷಾ ಸಂದರ್ಭದಲ್ಲಿ ಕಿವಿಯೋಲೆ, ಮಾಂಗಲ್ಯ ಸರ ತೆಗೆಸುವ ವಿಚಾರವಾಗಿ ವಾದ-ವಿವಾದಗಳು ನಡೆದಿದ್ದವು. ಈಗ ಜನಿವಾರ ತೆಗೆಸಲು ಪ್ರಾರಂಭಿಸಿದ್ದಾರೆ. ಸಚಿವರಿಗೆ, ಸರ್ಕಾರಕ್ಕೆ ಮತ್ತು ಉನ್ನತ ಅಧಿಕಾರಿಗಳಿಗೆ ಗೊತ್ತಾಗದೆ ಪರೀಕ್ಷಾ ಕೇಂದ್ರದ ಸಾಮಾನ್ಯ ಸಿಬ್ಬಂದಿ ಇಂತಹ ನಿರ್ಧಾರ ತೆಗೆದುಕೊಳ್ಳಲು ಸಾಧ್ಯವಿಲ್ಲ


-ಕೋಟ ಶ್ರೀನಿವಾಸ ಪೂಜಾರಿ, ಸಂಸದ

## ಜಾತಿ ಸಮೀಕ್ಷೆ ಬಗ್ಗೆ ಬ್ರಾಹ್ಮಣ ಸಮುದಾಯ ಖಂಡನೆ

■ ಜಾತಿಗಣತಿಯ ಆಯೋಗದ ವರದಿಯಲ್ಲಿ ಬ್ರಾಹ್ಮಣ ಸಮುದಾಯಕ್ಕೆ ಅನ್ಯಾಯ ■ ಸಮೀಕ್ಷೆಯ ಆಧಾರದ ಮೇಲೆ ನಿರ್ಧಾರ ತೆಗೆದುಕೊಂಡರೆ ಹೋರಾಟ

• ಉದಯವಾಹಿನಿ, ಕಲಬುರಗಿ

ರಾಜ್ಯ ಸರ್ಕಾರದ ಜಾತಿ ಸಮೀಕ್ಷೆಯ ಕುರಿತಾಗಿ ಕಳೆದ ಎರಡು ದಿನಗಳಿಂದ ಹಲವಾರು ರೀತಿಯಲ್ಲಿ ಚರ್ಚೆಯಾಗುತ್ತಿದೆ. ಜಾತಿಗಣತಿಯ ವರದಿಯ ಪ್ರಕಾರ ಹವ್ಯಕ ಬ್ರಾಹ್ಮಣರ ಜನಸಂಖ್ಯೆ ಕೇವಲ 85 ಸಾವಿರ ಎಂದು ಮಾಧ್ಯಮಗಳ ಮೂಲಕ ಮಹಾಸಭೆಯ ಗಮನಕ್ಕೆ ಬಂದಿದೆ.



ಇದು ಸತ್ಯಕ್ಕೆ ದೂರವಾದ ವಿಚಾರವಾಗಿದ್ದು, ಹವ್ಯಕ ಸಮಾಜದ ಪ್ರಾತಿನಿಧಿಕ ಸಂಸ್ಥೆಯಾದ ಶ್ರೀ ಅಖಿಲ ಹವ್ಯಕ ಮಹಾಸಭೆಯು ಈ ಅವೈಜ್ಞಾನಿಕ ವರದಿಯನ್ನು ತಿರಸ್ಕರಿಸುವಂತೆ ಆಗ್ರಹಿಸುತ್ತದೆ. ಹವ್ಯಕ ಬ್ರಾಹ್ಮಣರು ರಾಜ್ಯದ ಉತ್ತರಕನ್ನಡ, ಶಿವಮೊಗ್ಗ, ದಕ್ಷಿಣಕನ್ನಡ ಜಿಲ್ಲೆಗಳಲ್ಲಿ ಪ್ರಬಲ ಸಮಾಜವಾಗಿದೆ.

ಕಳೆದ ಡಿಸೆಂಬರ್‌ನಲ್ಲಿ ಬೆಂಗಳೂರಿನಲ್ಲಿ ಆಯೋಜಿತವಾಗಿದ್ದ ತೃತೀಯ ವಿಶ್ವ ಹವ್ಯಕ ಸಮ್ಮೇಳನದಲ್ಲಿ ಸುಮಾರು 2 ಲಕ್ಷ ಜನ ಭಾಗವಹಿಸಿದ್ದನ್ನೂ ನಾವು ಗಮನಿಸಬಹುದಾಗಿದ್ದು, ಹವ್ಯಕ ಸಮಾಜದ ಜನಸಂಖ್ಯೆ ಸುಮಾರು 5 ಲಕ್ಷಕ್ಕೂ ಅಧಿಕವಾಗಿದೆ. ಈ ಎಲ್ಲಾ ಹಿನ್ನೆಲೆಯಲ್ಲಿ ಜಾತಿ ಸಮೀಕ್ಷೆಯನ್ನು ಖಂಡಿಸುತ್ತಾ, ಅವೈಜ್ಞಾನಿಕ ಸಮೀಕ್ಷೆಯನ್ನು ತಿರಸ್ಕರಿಸುವಂತೆ ಅಖಿಲ ಹವ್ಯಕ ಮಹಾಸಭೆ ಆಗ್ರಹಿಸಿದೆ.



**ನಮ್ಮ ಸಮುದಾಯದ ಜನಸಂಖ್ಯೆ 45 ಲಕ್ಷ ಇದೆ**

ಹಿಂದುಳಿದ ವರ್ಗಗಳ ಆಯೋಗ, ಬ್ರಾಹ್ಮಣರಲ್ಲಿ 55 ಒಳ ಪಂಗಡಗಳನ್ನು ಗುರುತಿಸಿ, ಕರ್ನಾಟಕದಲ್ಲಿ ಒಟ್ಟಾರೆ ಬ್ರಾಹ್ಮಣರ ಜನಸಂಖ್ಯೆ 15,64,741 ಎಂದು ವರದಿಯಲ್ಲಿ ಉಲ್ಲೇಖಿಸಿದೆ. ಈ ಸಮೀಕ್ಷೆಯ ಆಧಾರದ ಮೇಲೆ ನಿರ್ಧಾರ ತೆಗೆದುಕೊಂಡರೆ ಮುಂದೆ ನಾವು ಕಾನೂನು ಹೋರಾಟ ನಡೆಸಬೇಕಾಗುತ್ತದೆ. ಬ್ರಾಹ್ಮಣ ಸಮುದಾಯದಿಂದಲೇ ನಾವು ಪ್ರತ್ಯೇಕವಾಗಿ ಸಮೀಕ್ಷೆ ಮಾಡಿಸುತ್ತೇವೆ. ನಮ್ಮ ಸಮುದಾಯದ ಡಿಜಿಟಲ್ ಸರ್ವೆ ಮಾಡಿಸುತ್ತೇವೆ. ನಮ್ಮ ಸಮುದಾಯದ ಜನಸಂಖ್ಯೆ 45 ಲಕ್ಷ ಇದೆ ಎಂದು ಬ್ರಾಹ್ಮಣ ಮಹಾಸಭಾ ಮಾಜಿ ಅಧ್ಯಕ್ಷ ಅಶೋಕ್ ಹಾರನಹಳ್ಳಿ ಹೇಳಿದ್ದಾರೆ

**ಬ್ರಾಹ್ಮಣ ಸಮುದಾಯಕ್ಕೆ ಅನ್ಯಾಯ;** ಬ್ರಾಹ್ಮಣ ಮಹಾಸಭಾ ಸರ್ಕಾರಕ್ಕೆ ಸಲ್ಲಿಕೆಯಾಗಿರುವ ಜಾತಿಗಣತಿಯ ಆಯೋಗದ ವರದಿಯಲ್ಲಿ ಬ್ರಾಹ್ಮಣ ಸಮುದಾಯಕ್ಕೆ ಅನ್ಯಾಯವಾಗಿದೆ. ಅದರಲ್ಲಿ ಬ್ರಾಹ್ಮಣರ ಸಂಖ್ಯೆ 15.64 ಲಕ್ಷವೆಂದು ನಮೂದಿಸಿರುವುದು ವರದಿಯಾಗಿದೆ. ನಮ್ಮ ಮಾಹಿತಿ ಪ್ರಕಾರ, ಜಾತಿ ಜನಗಣತಿ ವೈಜ್ಞಾನಿಕವಾಗಿ ನಡೆದಿಲ್ಲ.

ಅನೇಕ ಮನೆಗಳನ್ನು ಸಂಪರ್ಕಿಸಿಲ್ಲ, ಬ್ರಾಹ್ಮಣ ಸಮುದಾಯದ ಜಾತಿ ಜನಗಣತಿ ಅವೈಜ್ಞಾನಿಕವಾಗಿ ನಡೆದಿದೆ ಎಂಬ ಕಾರಣಕ್ಕೆ ನಾವು ವಿರೋಧ ವ್ಯಕ್ತಪಡಿಸುತ್ತಿದ್ದೇವೆ. ಅಲ್ಲದೆ, ವೈಜ್ಞಾನಿಕವಾಗಿ ಮತ್ತೊಮ್ಮೆ ಜಾತಿ ಜನಗಣತಿ ನಡೆಸಬೇಕಾಗಿದೆ. ಹಾಲಿ ವರದಿಯನ್ನು ತಿರಸ್ಕರಿಸುವ ಮೂಲಕ ನಮ್ಮ ಸಮಾಜಕ್ಕೆ ನ್ಯಾಯ ಒದಗಿಸಬೇಕು ಎಂದು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಅಧ್ಯಕ್ಷ ಎಸ್. ರಘುನಾಥ್ ಹೇಳಿದ್ದಾರೆ.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.99 ₹/L ಬಂಗಾರ: ₹9,758/Gram24ct ₹8,945/Gram22ct ಬೆಳ್ಳಿ: ₹100.00/Gram

# ಬ್ರೀಡರ್ ಸತೀಶ್ ಕಳ್ಳಾಟ ಬಯಲು ಮಾಡಿದ ಇಡಿ

• ಉದಯವಾಹಿನಿ, ಬೆಂಗಳೂರು

ಸೆಲೆಬ್ರಿಟಿ ನಾಯಿ ತಳಿಗಾರ ಎಂದು ಖ್ಯಾತಿಗಳಿಸಿದ್ದ ಸತೀಶ್ ಮನೆ ಮೇಲೆ ದಾಳಿ ನಡೆಸಿದ್ದ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಸತೀಶ್ ಕಳ್ಳಾಟದ ಒಂದೊಂದೇ ಸತ್ಯಗಳನ್ನು ಬಯಲು ಮಾಡುತ್ತಿದ್ದಾರೆ. ಹೌದು.. ಸತೀಶ್ ಎಸ್ ಅವರ ಬೆಂಗಳೂರು ನಿವಾಸದ ಮೇಲೆ ದಾಳಿ ಮಾಡಿದ್ದ ಇಡಿ ಅಧಿಕಾರಿಗಳು ಇಡೀ ಮನೆಯನ್ನು ಶೋಧಿಸಿ ಹಲವು ದಾಖಲೆಗಳನ್ನು ಸಂಗ್ರಹಿಸಿದ್ದಾರೆ. ಸತೀಶ್ ತೋಳ ಮತ್ತು ಕಕೇಶಿಯನ್ ಶೆಫರ್ಡ್‌ನ ಅಪರೂಪದ ಮಿಶ್ರತಳಿ ಕ್ಯಾಡಬೊಮ್ಸ್ ಒಕಾಮಿ ಎಂಬ ತಳಿಯನ್ನು ಹೊಂದಿದ್ದಾರೆ ಎಂಬುದಕ್ಕೆ ಯಾವುದೇ ದಾಖಲೆ ಪುರಾವೆಗಳು ಕಂಡುಬಂದಿಲ್ಲ ಎಂದು ಮೂಲಗಳು ತಿಳಿಸಿದ್ದು, ಈ ಸಂಬಂಧ ಇಡಿ ಅಧಿಕಾರಿಗಳ ದಾಳಿಯಲ್ಲಿ ಯಾವುದೇ ದಾಖಲೆಗಳೂ ದೊರೆತಿಲ್ಲ ಎನ್ನಲಾಗಿದೆ. ಅಂತರರಾಷ್ಟ್ರೀಯ ಉಪಸ್ಥಿತಿಯನ್ನು ಹೊಂದಿರುವ ಮಾಧ್ಯಮ ಸಂಸ್ಥೆಗಳು ಸೇರಿದಂತೆ ಹಲವಾರು ಮಾಧ್ಯಮ ಸಂಸ್ಥೆಗಳು


ಉದಯವಾಹಿನಿ ಚಿತ್ರ

ಸತೀಶ್ (51), ಅಪರೂಪದ ತಳಿ ನಾಯಿಯ ಬಗ್ಗೆ ವರದಿ ಮಾಡಿದ್ದವು. ನಾಯಿಯನ್ನು ಅಮೆರಿಕದಲ್ಲಿ ಸಾಕಲಾಗಿದೆ ಎಂದು ಸತೀಶ್ ಸುದ್ದಿ ಸಂಸ್ಥೆಗಳಲ್ಲಿ ಒಂದಕ್ಕೆ ತಿಳಿಸಿದ್ದರು ಮತ್ತು ಅದನ್ನು ಭಾರತಕ್ಕೆ ಆಮದು ಮಾಡಿಕೊಳ್ಳಲು ಅವರು 50 ಕೋಟಿ ರೂ. ಖರ್ಚು ಮಾಡಲಾಗಿದೆ ಎಂದೂ ಹೇಳಿದ್ದರು. ನಾಯಿಯೊಂದಿಗೆ ಸತೀಶ್ ಅವರ ಛಾಯಾಚಿತ್ರಗಳು ಮತ್ತು ವಿಡಿಯೋಗಳನ್ನು ಸಾಮಾಜಿಕ ಮಾಧ್ಯಮದಲ್ಲಿ ವ್ಯಾಪಕ ವೈರಲ್ ಆಗಿತ್ತು.

**50 ಕೋಟಿ ಮೌಲ್ಯದ ನಾಯಿ ಇಡಿ ಕೆಂಗಣ್ಣು:** ನಾಯಿಯನ್ನು ಭಾರತಕ್ಕೆ ತರಲು 50 ಕೋಟಿ ರೂ ಖರ್ಚಾಗಿದೆ ಎಂಬ ಸತೀಶ್ ಹೇಳಿಕೆಯನ್ನೇ ಆಧಾರವಾಗಿಟ್ಟುಕೊಂಡು ಇಡಿ ಅಧಿಕಾರಿಗಳು ಈ ಶೋಧ ನಡೆಸಿದ್ದು, ಇದು ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆ ಅಡಿಯಲ್ಲಿ ಸಂಭವನೀಯ ಉಲ್ಲಂಘನೆಗಳನ್ನು ತನಿಖೆ ಮಾಡಲು ಇಡಿ ಯನ್ನು ಪ್ರೇರೇಪಿಸಿತು.

ಆದರೆ ಹಾಲಿ ದಾಳಿ ಮತ್ತು ಶೋಧ ಕಾರ್ಯಾಚರಣೆಯಲ್ಲಿ ಇಡಿ ಅಧಿಕಾರಿಗಳು ಅಪರೂಪದ ತಳಿಯ ಯಾವುದೇ ಕುರುಹುಗಳನ್ನು ಕಂಡುಕೊಂಡಿಲ್ಲ. ಅಲ್ಲದೆ ಸ್ವತಃ ಸತೀಶ್ ಕೂಡ ಆ ನಾಯಿ ತನ್ನದಲ್ಲ ಎಂದು ಅಧಿಕಾರಿಗಳಿಗೆ ಹೇಳಿದ್ದಾರೆ ಎನ್ನಲಾಗಿದೆ. ಸತೀಶ್ ಕೇವಲ ಛಾಯಾಚಿತ್ರಗಳಿಗೆ ಪೋಸ್ ನೀಡಿದ್ದಾರೆ ಎಂದು ವರದಿಯಾಗಿದೆ.

### 50 ಕೋಟಿ ಅಲ್ಲ.. 1 ಲಕ್ಷ ರೂ ಕೂಡ ಬೆಲೆ ಬಾಳಲ್ಲ

**ಮೂಲಗಳ ಪ್ರಕಾರ, ಛಾಯಾಚಿತ್ರದಲ್ಲಿರುವ ನಾಯಿಯು ಬೇರೊಬ್ಬ ವ್ಯಕ್ತಿಯ ಒಡೆತನದ್ದಾಗಿದ್ದು, ಸತೀಶ್ ಹೇಳಿಕೊಂಡಂತೆ ಅದರ ಮೌಲ್ಯ 50 ಕೋಟಿ ರೂ.ಗಳಾಗಿರಲಿಲ್ಲ. ಇಡಿ ಬ್ಯಾಂಕ್ ಸ್ಟೇಟ್‌ಮೆಂಟ್‌ಗಳನ್ನು ಸಹ ಪರಿಶೀಲಿಸಿದಾಗ 50 ಕೋಟಿ ರೂ.ಗಳ ವಹಿವಾಟಿನ ಯಾವುದೇ ಪುರಾವೆಗಳು ಕಂಡುಬಂದಿಲ್ಲ. ನಾಯಿಯ ಮೌಲ್ಯ 1 ಲಕ್ಷ ರೂ ಕೂಡ ಇಲ್ಲ ಎಂದು ಇಡಿ ಅಧಿಕಾರಿಗಳು ಹೇಳಿದ್ದಾರೆ ಎಂದು ವರದಿಯಾಗಿದೆ.**

## ಪುತ್ತಿಗೆ ಮಠದಲ್ಲಿ ವಸಂತ ಧಾರ್ಮಿಕ ಶಿಬಿರ ಸಮಾರೋಪ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಜಗದ್ಗುರು ಶ್ರೀಮನ್ಮಧ್ವಾಚಾರ್ಯ ಮೂಲಮಹಾಸಂಸ್ಥಾನ ಶ್ರೀಮದುಪೇಂದ್ರ ತೀರ್ಥ ಪೀಠ, ಪುತ್ತಿಗೆ ಮಠ, ಶ್ರೀ ಗೋವರ್ಧನ ಕ್ಷೇತ್ರದಲ್ಲಿ ಏ. 7ರಿಂದ ಹಮ್ಮಿಕೊಂಡಿದ್ದ ವಸಂತ ಬೇಸಿಗೆ ಶಿಬಿರವು ಏ. 16 ರಂದು ಪ್ರತಿಭಾ ಪ್ರದರ್ಶನದೊಂದಿಗೆ ಸಮಾರೋಪಗೊಂಡಿತು. ನಂತರ ಪ್ರತಿಭಾ ಪುರಸ್ಕಾರ, ಶ್ರೀ ಶ್ರೀ ಸುಗುಣೇಂದ್ರತೀರ್ಥ ಶ್ರೀಪಾದರ ಆದೇಶದಂತೆ ಶಿಬಿರಾರ್ಥಿಗಳಿಗೆ ಕೋಟಿ ಗೀತಾ ಲೇಖನದ ಪುಸ್ತಕ, ಅನುಗ್ರಹ ಪತ್ರ ವಿತರಿಸಲಾಯಿತು.

## ಹಣ ಪಡೆದು ವಂಚನೆ : ನೊಂದ ಬಿಜೆಪಿ ಕಾರ್ಯಕರ್ತ ಆತ್ಮಹತ್ಯೆ

• ಉದಯವಾಹಿನಿ, ಆನೇಕಲ್

ಹಣ ಪಡೆದು ವಂಚಿಸಿ ಹಲ್ಲೆ ನಡೆಸಿ ಕಿರುಕುಳ ನೀಡಿರುವರ ಬಗ್ಗೆ ಫೇಸ್ಬುಕ್‌ನಲ್ಲಿ ವಿಡಿಯೋ ಪೋಸ್ಟ್ ಮಾಡಿ ಬಿಜೆಪಿ ಕಾರ್ಯಕರ್ತ ಇಲ್ಲಿನ ಖಾಸಗಿ ಶಾಲೆ ಬಳಿಯ ಮರಕ್ಕೆ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಶುಕ್ರವಾರ ಬೆಳಿಗ್ಗೆ ನಡೆದಿದೆ. ಡಂಕಣಿಕೋಟೆ ಮೂಲದ ಪ್ರವೀಣ್ ಕುಮಾರ್ (35) ಆತಹತ್ಯೆಗೆ



ಶರಣಾದ ಯುವಕನಾಗಿದ್ದು ಈತ ಆನೇಕಲ್‌ನ ಸಪ್ತಗಿರಿ ಲೇಔಟ್‌ನಲ್ಲಿ ವಾಸವಾಗಿದ್ದರು. ಫೇಸ್ಬುಕ್‌ನಲ್ಲಿ ತನಗಾದ ಅನ್ಯಾಯದ ಬಗ್ಗೆ ಹೇಳಿಕೊಂಡು ಅದನ್ನು ಶುಕ್ರವಾರ ಮುಂಜಾನೆ 3 ಗಂಟೆಯಲ್ಲಿ ಪೋಸ್ಟ್ ಮಾಡಿ ಆತ್ಮಹತ್ಯೆ ಮಾಡಿಕೊಂಡಿದಾರೆ. ಕಳೆದ ಎರಡು ತಿಂಗಳಿನಿಂದ ಮಾನಸಿಕವಾಗಿ ನೊಂದಿದ್ದೇನೆ. ನನ್ನ ಸಾವಿಗೆ 7 ಜನರು ಕಾರಣ ಎಂದು ವೀಡಿಯೋದಲ್ಲಿ ಆರೋಪಿಸಿದ್ದಾರೆ. ಪೊಲೀಸರು, ಯಾರನ್ನೂ ಬಿಟ್ಟರೂ ಕಿರಣ್‌ನನ್ನು ದಯವಿಟ್ಟು ಬಿಡಬೇಡಿ. ಕಿರಣ್ ತುಂಬಾ ಹೆಣ್ಣುಮಕ್ಕಳಿಗೆ ಫೋನ್ ಮಾಡಿ ಟಾರ್ಚರ್ ಕೊಡುತ್ತಾನೆ. ಇವನು ಮಾಡಿರುವ ಅನಾಚಾರ ನನ್ನ ಮೇಲೆ ಬಂದಿದೆ.ನಾನು ನೀಡಿದ್ದ ಹಣದ ಮಾತುಕತೆಗೆ ಕರೆದು ಅಮಾನುಷವಾಗಿ ಹಲ್ಲೆ ನಡೆಸಿದ್ದಾರೆ ಎಂದು ವಿಡಿಯೋದಲ್ಲಿ ಆರೋಪಿಸಿದ್ದಾರೆ.

ಏಕಾಏಕಿ ಹತ್ತಾರು ಮಂದಿಯನ್ನ ಕರೆಸಿ, ಮೊಬೈಲ್ ಕಿತ್ತುಕೊಂಡು 2 ಗಂಟೆಗಳ ಕಾಲ ನನ್ನ ಮೇಲೆ ಹಲ್ಲೆ ನಡೆಸಿದ್ದಾರೆ. ನಾನು ಸತ್ತ ಮೇಲೆ ನನ್ನ ದೇಹದ ಮೇಲಿರುವ ಗಾಯದ ಗುರುತನ್ನ ಪರಿಶೀಲಿಸಬೇಕು. ಪೊಲೀಸರು ನ್ಯಾಯ ದೊರಕಿಸಿ ಕೊಡಬೇಕೆಂದು ಮನವಿ ಮಾಡಿಕೊಂಡು, ಆತ್ಮಹತ್ಯೆಗೆ ಶರಣಾದ ಪ್ರವೀಣ್ ಅವರ ಸಹೋದರಿ ಸೌಮ್ಯ ಮಾತನಾಡಿ, ಶ್ವೇತಾ ಎಂಬಾಕೆಗೆ ಪ್ರವೀಣ್ ಸಾಲ ನೀಡಿದ್ದ. ಬಳಿಕ ಶ್ವೇತಾಗೆ ಹಣ ವಾಪಸ್ ಮಾಡುವಂತೆ ಕೇಳಿದ್ದ. ಸಾಕಷ್ಟು ದಿನವಾದರೂ ಹಣ ನೀಡದೇ ಇದ್ದಾಗ ಮನೆ ಬಳಿ ಹೋಗಿ ಪ್ರವೀಣ್ ಕೇಳಿದ್ದ. ಶ್ವೇತಾ ಸಂಬಂಧಿಯಾಗಿದ್ದ ಪುರಸಭೆ ಸದಸ್ಯೆ ಭಾಗ್ಯಮ್ಮ ಶ್ರೀನಿವಾಸ್ ದುಡ್ಡಿನ ವಿಚಾರವಾಗಿ ಬಿಜೆಪಿ ಮುಖಂಡ ನಾಯನಹಳ್ಳಿ ಮುನಿರಾಜು ಗೌಡ ಮನೆಯಲ್ಲಿ ಮಾತುಕತೆಗೆ ಕರೆದಿದ್ದರು. ಈ ವೇಳೆ ಶ್ವೇತಾ ಕಡೆಯ ಇಪ್ಪತ್ತಕ್ಕೂ ಹೆಚ್ಚು ಮಂದಿ ಪ್ರವೀಣ್ ಫೋನ್ ಕಿತ್ತುಕೊಂಡು ಹಲ್ಲೆ ಮಾಡಿದ್ದರು ಎಂದು ಆರೋಪಿಸಿದ್ದಾರೆ. ಘಟನಾ ಸ್ಥಳಕ್ಕೆ ಆನೇಕಲ್ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

## ಪತ್ರಕರ್ತನ ಮೇಲೆ ಹಲ್ಲೆ ಮಾಡಿದ್ದ ಅರಣ್ಯ ಸಿಬ್ಬಂದಿ ಅಮಾನತು

• ಉದಯವಾಹಿನಿ, ಬೆಂಗಳೂರು

ಬೀದರ್‌ನಲ್ಲಿ ವರದಿ ಮಾಡಲು ಹೋಗಿದ್ದ ಪತ್ರಕರ್ತ ರವಿ ಬಸವರಾಜ ಬೋಸುಂಡೆ ಅವರ ಮೇಲೆ ಹಲ್ಲೆ ಮಾಡಿದ್ದ ಅರಣ್ಯ ಇಲಾಖೆ ಸಿಬ್ಬಂದಿ ದಸ್ತಗಿರಿ ಸಾಬ ಅವರನ್ನು ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಅಮಾನತು ಮಾಡಿ ಆದೇಶ ಹೊರಡಿಸಿದ್ದಾರೆ. ದಸ್ತಗಿರಿಸಾಬ ಅವರು ಕರ್ತವ್ಯ ನಿರ್ವಹಿಸುವಾಗ ಸಾರ್ವಜನಿಕರೊಂದಿಗೆ ಸೌಜನ್ಯ ಯುತವಾದ ಸ್ಪಂದನಾಶೀಲ ವರ್ತನೆಯನ್ನು ತೋರಿಸದೇ ಇರುವುದು ಹಾಗೂ ಸೌಜನ್ಯದಿಂದ ವರ್ತಿಸದೇ ಇರುವುದು ಮೇಲ್ನೋಟಕ್ಕೆ ಕಂಡುಬಂದ ಹಿನ್ನೆಲೆಯಲ್ಲಿ ಅಶಿಸ್ತು ಎಂದು ಪರಿಗಣಿಸಿ ಅಮಾನತುಗೊಳಿಸಲಾಗಿದೆ.

ಘಟನೆಯ ಬಗ್ಗೆ ತನಿಖೆಯಾಗಿ ಸತ್ಯಾಸತ್ಯತೆ ತಿಳಿಯುವ ಉದ್ದೇಶದಿಂದ, ನಿಷ್ಪಕ್ಷಪಾತ ತನಿಖೆಗೆ ಅಡ್ಡಿಯಾಗದಂತೆ ಅಮಾನತು ಮಾಡಲಾಗಿದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ. ಬೀದರ್ ನಗರದಲ್ಲಿ ಏ.15ರ ರಾತ್ರಿ ಪತ್ರಕರ್ತರೊಬ್ಬರ ಮೇಲೆ ಅರಣ್ಯ ಸಿಬ್ಬಂದಿ ಹಲ್ಲೆ ಮಾಡಿದ್ದ ಬಗ್ಗೆ ಶಿಸ್ತುಕ್ರಮ ಜರುಗಿಸಿ ವರದಿ ನೀಡಲು ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರು ಸೂಚನೆ ನೀಡಿದ್ದರು. ಪತ್ರಕರ್ತನ ಮೇಲೆ ನಡೆದ ಹಲ್ಲೆಯನ್ನು ಖಂಡಿಸಿದ್ದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯುಜೆ ) ಈ ಬಗ್ಗೆ ತಪ್ಪಿತಸ್ಥರ ಮೇಲೆ ಕ್ರಮಕ್ಕೆ ಆಗ್ರಹಿಸಿತ್ತು. ಬೀದರ್‌ನಲ್ಲಿ ಸಂಘಟನೆ ಪ್ರತಿಭಟನೆಯನ್ನೂ ನಡೆಸಿತ್ತು. ಸಚಿವರ ಸೂಚನೆ ಮೇರೆಗೆ ಅಮಾನತು ಮಾಡಿದ ಕ್ರಮವನ್ನು ಸ್ವಾಗತಿಸಿರುವ ಕೆಯುಡಬ್ಲ್ಯುಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು, ಇದು ಪತ್ರಕರ್ತರ ಸಾಂಘಿಕ ಹೋರಾಟಕ್ಕೆ ಸಿಕ್ಕ ಮನ್ನಣೆ ಎಂದು ಪ್ರತಿಕ್ರಿಯಿಸಿದ್ದಾರೆ. ತಪ್ಪು ಮಾಡಿದ ಹಲ್ಲೆಕೋರರಿಗೆ ಮುಂದುವರಿದ ಕ್ರಮ ಆಗಬೇಕೆಂದು ಆಗ್ರಹಿಸಿದ್ದಾರೆ.

## ಒಳಮೀಸಲು: ಮೇ 24ಕ್ಕೆ ಸಮಾವೇಶ

• ಉದಯವಾಹಿನಿ, ಬೆಂಗಳೂರು

ಸರ್ಕಾರದ ಬಳಿ ಇರುವ ದತ್ತಾಂಶಗಳನ್ನು ಪರಿಗಣಿಸಿ, ವಿಳಂಬ ನೀತಿ ಅನುಸರಿಸದೇ ಒಳ ಮೀಸಲಾತಿಯನ್ನು ಜಾರಿಗೊಳಿಸುವಂತೆ ಆಗ್ರಹಿಸಿ ಮೇ 24ರಂದು ಸ್ವಾತಂತ್ರ್ಯ ಉದ್ಯಾನದಲ್ಲಿ ಸಂವಿಧಾನ ಜಾಗೃತಿ ಸಮಾವೇಶವನ್ನು ಹಮ್ಮಿಕೊಳ್ಳಲಾಗುವುದು ಎಂದು ಕರ್ನಾಟಕ ಆದಿಜಾಂಬವ, ಮಾದಿಗ, ಪೌರಕಾರ್ಮಿಕ ಸಂಘಟನೆಗಳ ಒಕ್ಕೂಟ ತಿಳಿಸಿದೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಒಕ್ಕೂಟದ ರಾಜ್ಯ ಘಟಕದ ಅಧ್ಯಕ್ಷ ಹಾಗೂ ಮಾಜಿ ಸಚಿವ ಆಲ್ನೋಡ್ ಹನುಮಂತಪ್ಪ, ಪರಿಶಿಷ್ಟ ಜಾತಿಯ ಮಾದಿಗ ಸಮುದಾಯದ ಜನಸಂಖ್ಯೆಗೆ ಅನುಗುಣವಾಗಿ ಒಳ ಮೀಸಲಾತಿ ಜಾರಿಗೊಳಿಸಬೇಕು. ಅಧಿಕಾರಕ್ಕೆ ಬಂದರೆ 24 ಗಂಟೆಯೊಳಗೆ ಒಳ ಮೀಸಲಾತಿ ಜಾರಿಗೊಳಿಸುವ ಭರವಸೆಯನ್ನು ಕಾಂಗ್ರೆಸ್ ನೀಡಿತ್ತು. ಈಗ ಅಧಿಕಾರಕ್ಕೆ ಬಂದು ಎರಡೂವರೆ ವರ್ಷಗಳಾದರೂ ಜಾರಿಗೊಳಿಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಮಾದಿಗ ಸಮುದಾಯದ ಮೂಗಿಗೆ ತುಪ್ಪ ಸವರುವ ಕೆಲಸವನ್ನು ಕಾಂಗ್ರೆಸ್, ಬಿಜೆಪಿ ಮಾಡುತ್ತಿವೆ. ಚುನಾವಣೆ ಸಂದರ್ಭದಲ್ಲಿ ಮಾದಿಗರ ಎಲ್ಲಾ ಬೇಡಿಕೆಗಳನ್ನು ಈಡೇರಿಸುವ ಭರವಸೆ ನೀಡಿ, ಅಧಿಕಾರಕ್ಕೆ ಬಂದ ನಂತರ ಮೌನ ವಹಿಸುತ್ತವೆ. ಈ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ದಲಿತರಿಗೆ, ಶೋಷಿತ ವರ್ಗದವರಿಗೆ ಅನ್ಯಾಯ ಮಾಡಲಾಗುತ್ತಿದೆ ಎಂದು ಆರೋಪಿಸಿದರು.


### ಹೊರೆಯಾದ ಅಗ್ನಿ ಸುರಕ್ಷತೆ ಕಡ್ಡಾಯ ಅನುಮತಿ ನಿಯಮ, 3 ಸಾವಿರ ಪರವಾನಗಿ ವಿಳಂಬ

# ಅಗ್ನಿ ಸುರಕ್ಷತೆ: ಖಾಸಗಿ ಆಸ್ಪತ್ರೆ, ಕ್ಲಿನಿಕ್‌ಗಳಿಗೆ ಎನ್‌ಒಸಿ ಕಿರಿಕಿರಿ

• ಉದಯವಾಹಿನಿ, ಬೆಂಗಳೂರು

ಅಗ್ನಿ ಸುರಕ್ಷತೆಗೆ ಸಂಬಂಧಿಸಿದ ನಿರಾಕ್ಷೇಪಣಾ ಪ್ರಮಾಣ ಪತ್ರ (ಎನ್‌ಒಸಿ) ಪಡೆಯಬೇಕೆಂಬ ರಾಜ್ಯ ಸರಕಾರದ ಕಡ್ಡಾಯ ನಿಯಮದಿಂದಾಗಿ ರಾಜ್ಯದ ಖಾಸಗಿ ಆಸ್ಪತ್ರೆಗಳ ಹೊಸ ಪರವಾನಗಿ ಮತ್ತು ಪರವಾನಗಿ ನವೀಕರಣಕ್ಕೆ ಅಡ್ಡಿಯುಂಟಾಗಿದೆ. ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಕಾಯಿದೆ

**ಅಗ್ನಿ ಸುರಕ್ಷತಾ ಅನುಮತಿಗೆ ಸಂಬಂಧಿಸಿದಂತೆ ರಾಜ್ಯ ಸರಕಾರ ಇತ್ತೀಚೆಗೆ ಹೊರಡಿಸಿರುವ ಆದೇಶ, ಭ್ರಷ್ಟಾಚಾರಕ್ಕೆ ದಾರಿ ಕಲ್ಪಿಸಿದಂತಿದೆ. ಅಲ್ಲದೆ, ಅಗ್ನಿಶಾಮಕ ಇಲಾಖೆಯಿಂದ ಎರಡು ವರ್ಷಕ್ಕೊಮ್ಮೆ ಅಗ್ನಿ ಸುರಕ್ಷತೆಗೆ ಸಂಬಂಧಿಸಿದ ಸಲಹಾ ಪತ್ರ ಪಡೆಯುವುದು ಕಡ್ಡಾಯವಾಗಿದೆ. ಇದಕ್ಕೆ ಒಂದು ಬಾರಿಗೆ ಸಣ್ಣ ಆಸ್ಪತ್ರೆಗಳು, ಕ್ಲಿನಿಕ್‌ಗಳು 30-50 ಸಾವಿರ ರೂ. ಶುಲ್ಕ ಪಾವತಿಸಿದರೆ, 21 ಮೀಟರ್‌ಗಿಂತ ದೊಡ್ಡದಾಗಿರುವ ಆಸ್ಪತ್ರೆಗಳು ಚದರ ಅಡಿ ಲೆಕ್ಕದಲ್ಲಿ ಲಕ್ಷಾಂತರ ಶುಲ್ಕ ರೂ. ಭರಿಸಬೇಕು. ಈ ನಿಯಮವು ಆಸ್ಪತ್ರೆಗಳಿಗೆ ಹೊರೆಯಾಗಿ ಪರಿಣಮಿಸಿದೆ.**


ಉದಯವಾಹಿನಿ ಚಿತ್ರ

(ಕೆಪಿಎಂಇ) ಪ್ರಕಾರ, ಪರವಾನಗಿ ಪಡೆಯಲು ಹಾಗೂ ನವೀಕರಿಸಲು ಅಗ್ನಿ ಸುರಕ್ಷತಾ ಕ್ರಮಗಳ ಅಳವಡಿಕೆ ಹಾಗೂ ರಾಜ್ಯ ಅಗ್ನಿ ಸುರಕ್ಷಾ ವಿಭಾಗದ ನಿರಾಕ್ಷೇಪಣಾ ಪತ್ರ ಪಡೆಯುವುದು ಕಡ್ಡಾಯವಾಗಿದೆ.

ಇದರಿಂದ ಖಾಸಗಿ ಆರೋಗ್ಯ ಸಂಸ್ಥೆಗಳ ನೋಂದಣಿಯಲ್ಲಿ ವಿಳಂಬವಾಗುತ್ತಿದ್ದು, ಸಾರ್ವಜನಿಕರಿಗೆ ಒದಗಿಸುವ ವೈದ್ಯಕೀಯ ಸೇವೆಗೆ ಅಡ್ಡಿಯಾಗಿದೆ. ಈ ಹಿಂದೆ 21 ಮೀಟರ್‌ಗಿಂತ ಹೆಚ್ಚಿನ ಎತ್ತರದ ಕಟ್ಟಡ ಹೊಂದಿರುವ ಆಸ್ಪತ್ರೆಗಳು ಮಾತ್ರ ಅಗ್ನಿ ಸುರಕ್ಷತೆಗೆ ಸಂಬಂಧಿಸಿದ ಎನ್‌ಒಸಿ ಪಡೆಯಬೇಕಿತ್ತು. ಆದರೀಗ

**ಪರವಾನಗಿ ನವೀಕರಣಕ್ಕೆ ಅಡ್ಡಿ**



ಉದಯವಾಹಿನಿ ಚಿತ್ರ

ಅದಕ್ಕಿಂತ ಕಡಿಮೆ ಎತ್ತರದ ಆಸ್ಪತ್ರೆಗಳು, ಕ್ಲಿನಿಕ್‌ಗಳು ಕಡ್ಡಾಯವಾಗಿ ಎನ್‌ಒಸಿ ಪಡೆಯಬೇಕು. ಇಲ್ಲದಿದ್ದರೆ, ಆಸ್ಪತ್ರೆಗೆ ಮಾನ್ಯತೆ ನೀಡಬಾರದು. ಅಲ್ಲದೆ, ಪರವಾನಗಿ ನವೀಕರಣಗೊಳಿಸುವುದನ್ನು ತಡೆಯಬೇಕೆಂಬ ನಿಯಮ ರೂಪಿಸಲಾಗಿದೆ. ಹೀಗಾಗಿ, ರಾಜ್ಯದ 3 ಸಾವಿರ ಸಣ್ಣ ಮತ್ತು ಮಧ್ಯಮ ಆಸ್ಪತ್ರೆಗಳ ಪರವಾನಗಿ ನವೀಕರಣ ವಿಳಂಬವಾಗಿದೆ.

ಇದು ಹೀಗೇ ಮುಂದುವರಿದರೆ, ಎರಡ್ಮೂರು ತಿಂಗಳಲ್ಲಿ ಈ ಸಂಖ್ಯೆ 15 ಸಾವಿರಕ್ಕೆ ಏರಿಕೆಯಾಗಲಿದೆ ಎಂದು ಭಾರತೀಯ ವೈದ್ಯಕೀಯ ಸಂಘದ ಕಾರ್ಯದರ್ಶಿ ಡಾ. ವಿ. ಸೂರಿರಾಜು ಆತಂಕ ವ್ಯಕ್ತಪಡಿಸಿದರು. ಆದ್ದರಿಂದ ಅಗ್ನಿ ಸುರಕ್ಷತಾ ಅನುಮತಿಗೆ ಸಂಬಂಧಿಸಿದಂತೆ ಖಾಸಗಿ ಆಸ್ಪತ್ರೆಗಳು ಎದುರಿಸುತ್ತಿರುವ ಸಮಸ್ಯೆಗಳಿಗೆ ರಾಜ್ಯ ಸರಕಾರ ಪರಿಹಾರ ಕಲ್ಪಿಸುವಂತೆ ಭಾರತೀಯ ವೈದ್ಯಕೀಯ ಸಂಘ ಒತ್ತಾಯಿಸಿದೆ.

### ಸಂಘದ ಬೇಡಿಕೆಯೇನು ?

**ಅಗ್ನಿ ಸುರಕ್ಷತಾ ಕ್ರಮಗಳ ಅಳವಡಿಕೆ ಹಾಗೂ ರಾಜ್ಯ ಅಗ್ನಿ ಸುರಕ್ಷಾ ವಿಭಾಗದ ನಿರಾಕ್ಷೇಪಣಾ ಪತ್ರದ ಬಗ್ಗೆ ಸಾಕಷ್ಟು ಗೊಂದಲಗಳಿದ್ದು, ಸ್ಪಷ್ಟ ಮಾರ್ಗಸೂಚಿ ಒದಗಿಸಬೇಕು. ಅಲ್ಲದೆ, ಮಹಾರಾಷ್ಟ್ರ ಮತ್ತು ತೆಲಂಗಾಣ ರಾಜ್ಯಗಳಲ್ಲಿ ಈಗಾಗಲೇ ಜಾರಿ ಮಾಡಿದಂತೆ ರಾಜ್ಯದಲ್ಲಿಯೂ ಪ್ರತ್ಯೇಕ 'ಕರ್ನಾಟಕ ವೈದ್ಯಕೀಯ ಸಂಸ್ಥೆಗಳ ಸುರಕ್ಷತಾ ಕಾಯಿದೆ' ರೂಪಿಸಬೇಕು. ಹೀಗೆ, ಆರೋಗ್ಯ ಇಲಾಖೆ, ಗೃಹ ಇಲಾಖೆ ಹಾಗೂ ಅಗ್ನಿಶಾಮಕ ಇಲಾಖೆ ಸಮನ್ವಯದೊಂದಿಗೆ ಅಗ್ನಿ ಸುರಕ್ಷತಾ ಅನುಮತಿ ಪಡೆಯುವ ಪ್ರಕ್ರಿಯೆ ಸುಗಮಗೊಳಿಸಿ, ಸೂಕ್ತ ಸಮಯದಲ್ಲಿ ಕೆಪಿಎಂಇ ಪರವಾನಗಿ ನವೀಕರಣಕ್ಕೆ ಅನುಕೂಲ ಕಲ್ಪಿಸುವಂತೆ ಸಂಘ ಒತ್ತಾಯಿಸಿದೆ.**

## ಜಾನುವಾರುಗಳಿಗೆ ಲಸಿಕಾ ಅಭಿಯಾನ

• ಉದಯವಾಹಿನಿ, ದೇವನಹಳ್ಳಿ

ಏ.21 ರಿಂದ ಜೂ.4 ರವರೆಗೆ ಜಿಲ್ಲೆಯಾದ್ಯಂತ ಕಾಲುಬಾಯಿ ರೋಗ ಲಸಿಕಾ ಅಭಿಯಾನ ಮತ್ತು ಚರ್ಮ ಗಂಟು ರೋಗದ ಲಸಿಕಾ ಅಭಿಯಾನ ಕೈಗೊಂಡಿದ್ದು ರೈತರು ತಮ್ಮ ಜಾನುವಾರುಗಳಿಗೆ ರೋಗ ಬರದಂತೆ ತಡೆಯಲು ತಪ್ಪದೇ ಲಸಿಕೆ ಹಾಕಿಸಿ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜಿಲ್ಲಾಧಿಕಾರಿ ಎ.ಬಿ. ಬಸವರಾಜು ಹೇಳಿದ್ರು. ಬೆಂಗಳೂರು ಗ್ರಾಮಾಂತರ ಜಿಲ್ಲಾ ಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಜಾನುವಾರು ರೋಗನಿಯಂತ್ರಣ ಕಾರ್ಯಕ್ರಮದ 7ನೇಸುತ್ತಿನ ಲಸಿಕಾ ಅಭಿಯಾನದ ಪೋಸ್ಟರ್ ಬಿಡುಗಡೆಗೊಳಿಸಿ ಮಾತನಾಡಿದರು. ಪಶುಪಾಲನಾ, ಪಶುವೈದ್ಯಕೀಯ ಸೇವಾ ಇಲಾಖೆ, ಕರ್ನಾಟಕ ಸಹಕಾರಿ ಹಾಲು ಉತ್ಪಾದಕರ ಮಹಾ ಮಂಡಳಿ ಸಹಯೋಗದಲ್ಲಿ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿ

ಏ.21 ರಿಂದ ಜೂ.4 ರವರೆಗೆ ಜಿಲ್ಲೆಯಾದ್ಯಂತ


ಉದಯವಾಹಿನಿ ಚಿತ್ರ

ಕಾಲುಬಾಯಿ ರೋಗ ಲಸಿಕಾ ಅಭಿಯಾನ, ಚರ್ಮಗಂಟು ರೋಗದ ಲಸಿಕಾ ಅಭಿಯಾನ ಕೈಗೊಂಡಿದ್ದು ರೈತರು ತಮ್ಮ ಜಾನುವಾರುಗಳಿಗೆ ರೋಗ ಬರದಂತೆ ತಡೆಯಲು ತಪ್ಪದೇ ಲಸಿಕೆ ಹಾಕಿಸಬೇಕು, ಕಾಲುಬಾಯಿ ಜ್ವರವು ವೈರಾಣುವಿನಿಂದ ಜಾನುವಾರುಗಳಿಗೆ ಬರುವ ಕಾಯಿಲೆಯಾಗಿದೆ.

ಈ ರೋಗವು ಸಾಂಕ್ರಾಮಿಕ ರೋಗವಾಗಿದ್ದು, ಅತಿ ಬೇಗನೆ ಒಂದು ರಾಸು ವಿನಿಂದ ಇನ್ನೊಂದಕ್ಕೆ ನೇರ ಸಂಪರ್ಕ, ಗಾಳಿಯ ಮೂಲಕ ಹರಡುತ್ತದೆ. ಚರ್ಮಗಂಟು ರಾಗವು ವೈರಾಣುವಿನಿಂದ ಬರುವಂತಹ ರೋಗ. ಹಾಗಾಗಿ ಈ ರೋಗಗಳನ್ನು ನಿಯಂತ್ರಿಸಲು ಜಾನುವಾರುಗಳಿಗೆ ಪ್ರತಿ 6 ತಿಂಗಳಿಗೊಮ್ಮೆ ಲಸಿಕೆಯನ್ನು ಹಾಕಿಸಬೇಕು. ಲಸಿಕೆ ಹಾಕುವವರು ನಿಮ್ಮ ಗ್ರಾಮಕ್ಕೆ, ಮನೆ ಬಾಗಿಲಿಗೆ ಭೇಟಿ ನೀಡಿ ಜಾನುವಾರುಗಳಿಗೆ ಲಸಿಕೆ ಹಾಕಲಿದ್ದಾರೆ. ತಪ್ಪದೇ ನಿಮ್ಮ ಜಾನುವಾರುಗಳಿಗೆ ಲಸಿಕೆ ಹಾಕಿಸಿ ರೋಗ ಬರದಂತೆ ಜಾನುವಾರುಗಳನ್ನು ರಕ್ಷಿಸುವ ಮೂಲಕ ಆರ್ಥಿಕ ನಷ್ಟವನ್ನು ತಡೆಯಬಹುದು ಎಂದು ರೈತರಿಗೆ ಸಲಹೆ ನೀಡಿದರು.

### 1962 ಪಶು ಸಹಾಯವಾಣಿ

**ಜಾನುವಾರಗಳಿಗೆ ಅರೋಗ್ಯದ ಸಮಸ್ಯೆ ಕಂಡುಬಂದಲ್ಲಿ 1962 ಪಶು ಸಹಾಯವಾಣಿಗೆ ಕರೆಮಾಡಿ, ತಮ್ಮ ವಿಳಾಸ, ಜಾನುವಾರು ಆರೋಗ್ಯ ಸಮಸ್ಯೆ, ಮೊಬೈಲ್ ಸಂಖ್ಯೆ ಇತ್ಯಾದಿ ವಿವರಗಳನ್ನು ನೀಡಿ, ನೊಂದಾಯಿಸಿದ ನಂತರ ಹತ್ತಿರದ ಸಂಚಾರಿ ತುರ್ತು ಪಶು ಚಿಕಿತ್ಸಾಲಯದ ಆಂಬುಲೆನ್ಸ್ ಸೇವೆಯನ್ನು ಪಡೆಯಬಹುದು ಎಂದರು.**

## ಸಚಿವರು ಏರು ಧ್ವನಿಯಲ್ಲೂ ಮಾತಾಡಿಲ್ಲ

• ಉದಯವಾಹಿನಿ, ಬೆಂಗಳೂರು

ಜಾತಿ ಗಣತಿ ಎಂದು ಜನಪ್ರಿಯವಾಗಿರುವ ಸಾಮಾಜಿಕ, ಶೈಕ್ಷಣಿಕ ಸಮೀಕ್ಷಾ ವರದಿಯ ಬಗ್ಗೆ ಚರ್ಚಿಸಲು ಗುರುವಾರ ಸಂಜೆ ಕರೆಯಲಾಗಿದ್ದ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ವರದಿಗೆ ಯಾರೂ ಯಾವುದೇ ವಿರೋಧ ವ್ಯಕ್ತಪಡಿಸಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದ್ದಾರೆ.

ಕೆಲವು ಮಾಧ್ಯಮಗಳು ವರದಿ ಮಾಡಿದಂತೆ ಚರ್ಚೆಯ ಸಮಯದಲ್ಲಿ ಕೆಲವು ಸಚಿವರು ಪರಸ್ಪರ ಏರು ಧ್ವನಿಯಲ್ಲಿ ವಾಗ್ವಾದ ನಡೆಸಿಲ್ಲ ಎಂದು ಸಿಎಂ ಸ್ಪಷ್ಟಪಡಿಸಿದ್ದಾರೆ. ನಿನ್ನೆ, ಜಾತಿ ಗಣತಿ ವರದಿ ಕುರಿತು ಸಚಿವ ಸಂಪುಟದಲ್ಲಿ ಚರ್ಚಿಸಲಾಯಿತು. ಚರ್ಚೆ ಅಪೂರ್ಣವಾಗಿದೆ ಮತ್ತು ಅದನ್ನು ಇನ್ನೊಂದು ದಿನಕ್ಕೆ ಮುಂದೂಡಲಾಗಿದೆ. ಈ ವಿಷಯವನ್ನು ಮುಂದಿನ ಸಚಿವ ಸಂಪುಟದಲ್ಲಿ ಚರ್ಚಿಸಲಾಗುವುದು.

ಯಾರೂ ಅದನ್ನು ವಿರೋಧಿಸಿಲ್ಲ ಎಂದು ಸಿದ್ದರಾಮಯ್ಯ ಹೇಳಿದರು. ಸಿಎಂ ಸಿದ್ದರಾಮಯ್ಯ ಜಾತಿ ಗಣತಿ ವರದಿ ಬಗ್ಗೆ ಯಾವುದೇ ತೀರ್ಮಾನ ಇಲ್ಲ; ಮುಂದಿನ ಸಚಿವ ಸಂಪುಟದಲ್ಲಿ ವಿಸ್ತೃತ ಚರ್ಚೆ ಶನಿವಾರ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ, ಕೆಲವು ಸಚಿವರು ಪರಸ್ಪರ ಏರು ಧ್ವನಿಯಲ್ಲಿ ವಾಗ್ವಾದ ನಡೆಸಿದರು ಎಂಬ ಮಾಧ್ಯಮ ವರದಿ ಸುಳ್ಳು ಎಂದು ಹೇಳಿದರು.


ಉದಯವಾಹಿನಿ ಚಿತ್ರ

**ಇನ್ನು ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಕೂಡ ಸಂಪುಟ ಸಭೆಯಲ್ಲಿ ಯಾವುದೇ ಆಕ್ರಮಣಕಾರಿ ವಾದಗಳನ್ನು ತಳ್ಳಿಹಾಕಿದ್ದಾರೆ. ನಾವು ನಮ್ಮ ಆಲೋಚನೆಗಳನ್ನು ಹಂಚಿಕೊಂಡಿದ್ದೇವೆ ಅಷ್ಟೇ. ಏರು ಧ್ವನಿ ಅಥವಾ ವಾಗ್ವಾದ, ಅಂತಹದ್ದೇನೂ ನಡೆದಿಲ್ಲ. ಸಲಹೆಗಳನ್ನು ನೀಡಲಾಯಿತು. ಅದನ್ನು ಹೊರತುಪಡಿಸಿ ಯಾವುದೇ ನಿರ್ಧಾರ ಕೈಗೊಂಡಿಲ್ಲ**

**-ಸಿದ್ದರಾಮಯ್ಯ, ಸಿಎಂ**

## ಬೆಲೆ ಏರಿಕೆ ವಿರುದ್ಧ ಕಾಂಗ್ರೆಸ್ ಪ್ರತಿಭಟನೆ

• ಉದಯವಾಹಿನಿ, ಬೊಮ್ಮನಹಳ್ಳಿ

ಕೇಂದ್ರ ಸರ್ಕಾರದ ಬೆಲೆ ಏರಿಕೆ ನೀತಿಯ ವಿರುದ್ಧ ಕಾಂಗ್ರೆಸ್ ಕಾರ್ಯಕರ್ತರು ಗುರುವಾರ ಎಚ್‌ಎಸ್‌ಆರ್ ಬಡಾವಣೆಯಲ್ಲಿ ಪ್ರತಿಭಟನೆ ನಡೆಸಿದರು.'ದೇಶದ ಸಂಪತ್ತನ್ನು ಅಂಬಾನಿ - ಅದಾನಿಗೆ ಅಡಮಾನ ಇಟ್ಟಿರುವ ಮೋದಿ ಸರ್ಕಾರ, ಸಾಮಾನ್ಯ ಜನರ ಮೇಲೆ ಬೆಲೆ ಏರಿಕೆಯ ಬ್ರಹ್ಮಾಸ್ತ್ರವನ್ನು ಪ್ರಯೋಗ ಮಾಡಿದೆ' ಎಂದು ಕಾಂಗ್ರೆಸ್ ಮುಖಂಡ ವಿ.ಎಸ್. ಉಗ್ರಪ್ಪ ಆರೋಪಿಸಿದರು.

ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ತೈಲ ಬೆಲೆಗಳು ಇಳಿಕೆಯಾಗಿದೆ. ಆದರೂ ಬೆಲೆ ಏರಿಕೆ ಮಾಡುವ ಮೂಲಕ ಪ್ರಧಾನಿ ನರೇಂದ್ರ ಮೋದಿ ಅವರು ಬಂಡವಾಳದಾರರ ಹಿತ ಕಾಯುತ್ತಿದ್ದಾರೆ ಎಂದು ದೂರಿದರು. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಟಿ.ವಾಸುದೇವರೆಡ್ಡಿ ಮಾತನಾಡಿ, ತೀವ್ರ ದರ ಏರಿಕೆ ಪರಿಣಾಮ ಜನರ ಬದುಕು ಸಂಕಷ್ಟಕ್ಕೆ ಸಿಲುಕಿದೆ. ಮೋದಿ ಸರ್ಕಾರ ಜನಸಾಮಾನ್ಯರಿಗೆ ಸಹಾಯ ಮಾಡುವ ಬದಲು ಬಂಡವಾಳದಾರರ 16 ಲಕ್ಷ ಕೋಟಿ ಸಾಲ ಮನ್ನಾ ಮಾಡಿದೆ. ಇದು ಜನ ವಿರೋಧಿ ಸರ್ಕಾರ ಎಂದು ಹೇಳಿದರು.

ಟ್ರಂಪ್‌ಗೆ ಹೆದರಿ ಅಮೆರಿಕದ ಆಮದು ಸರಕುಗಳ ಮೇಲಿನ ಸುಂಕವನ್ನು ಮೋದಿ ಕಡಿಮೆ ಮಾಡಿದ್ದಾರೆ. ಆದರೆ ಭಾರತದ ಸರಕುಗಳ ಮೇಲೆ ಸುಂಕ ಏರಿಸುತ್ತಿರುವ ಟ್ರಂಪ್ ವಿರುದ್ಧ ಮಾತನಾಡುವ ಧೈರ್ಯ ಇಲ್ಲ ಎಂದು ದೂರಿದರು. ಕೆಪಿಸಿಸಿ ಸದಸ್ಯ ಕೆ. ವಾಸುದೇವ, ಪದವಿದರರ ವಿಭಾಗದ ಜಿಲ್ಲಾಧ್ಯಕ್ಷ ಅನಿಲ್ ರೆಡ್ಡಿ, ವಾರ್ಡ್ ಅಧ್ಯಕ್ಷ ಜಯರಾಂ ರೆಡ್ಡಿ, ಮಂಜುನಾಥ್, ಕಾರ್ಯಕರ್ತರು ಭಾಗವಹಿಸಿದ್ದರು.

## ಉದ್ರಿಕ್ತರಿಂದ ಹಲ್ಲೆಗೊಳಗಾಗಿದ್ದ ಕಸದ ಲಾರಿ ಚಾಲಕ ಸಾವು

• ಉದಯವಾಹಿನಿ, ಬೆಂಗಳೂರು

ರಸ್ತೆ ಅಪಘಾತದಲ್ಲಿ ಬಾಲಕನ ಸಾವಿಗೀಡಾದ ಕಾರಣಕ್ಕೆ ಉದ್ರಿಕ್ತ ಗುಂಪಿನಿಂದ ಹಲ್ಲೆಗೊಳಗಾಗಿದ್ದ ಬಿಬಿಎಂಪಿ ಘನ ತ್ಯಾಜ್ಯ ಸಾಗಿಸುವ ಕಾಂಪ್ಯಾಕ್ಟರ್ ಚಾಲಕ ಚಿಕಿತ್ಸೆ ಫಲಕಾರಿಯಾಗದೆ ಗುರುವಾರ ಮೃತಪಟ್ಟಿದ್ದಾರೆ. ಕೊಂಡಯ್ಯ (59) ಎಂಬವರೇ ಕೊನೆಯುಸಿರೆಳೆದ ಲಾರಿ ಚಾಲಕ. ಮಾರ್ಚ್ 29ರಂದು ಥಣಿಸಂದ್ರದ ರೈಲ್ವೇ ಟ್ರ್ಯಾಕ್ ಬಳಿ ಕಸದ ಲಾರಿ ಹಾಗೂ ಸ್ಕೂಟರ್ ನಡುವೆ ಸಂಭವಿಸಿ, ಬಾಲಕ ಐಮಾನ್ (10) ಮೃತಪಟ್ಟಿದ್ದ.

ಅಬ್ದುಲ್ ಖಾದರ್ ಎಂಬವರು ಮಗ ಐಮಾನ್‌ನೊಂದಿಗೆ ಸ್ಕೂಟರ್‌ನಲ್ಲಿ ತೆರಳುತ್ತಿದ್ದ ವೇಳೆ ಕಸದ ಲಾರಿ ಡಿಕ್ಕಿ ಹೊಡೆದಿತ್ತು. ಪರಿಣಾಮ ರಸ್ತೆಯ ಮೇಲೆ ಬಿದ್ದ ಐಮಾನ್‌ನ ತಲೆ ಮೇಲೆ


ಉದಯವಾಹಿನಿ ಚಿತ್ರ

ಲಾರಿ ಹರಿದಿದ್ದರಿಂದ ಆತ ಸ್ಥಳದಲ್ಲೇ ಸಾವನ್ನಪ್ಪಿದ್ದ. ಹೆಣ್ಣೂರು ಸಂಚಾರ ಪೊಲೀಸ್

ವ್ಯಾಪ್ತಿಯಲ್ಲಿರುವ ರೈಲ್ವೆ ಸೇತುವೆಯ ಬಳಿಯ ಥಣಿಸಂದ್ರ ಮುಖ್ಯ ರಸ್ತೆಯಲ್ಲಿ ಈ ಘಟನೆ ಸಂಭವಿಸಿತ್ತು. ಅಪಘಾತವನ್ನು ಕಂಡು ರೊಚ್ಚಿಗೆದ್ದ ಸ್ಥಳೀಯರು, ಲಾರಿಗೆ ಬೆಂಕಿ ಹಚ್ಚಿ, ಚಾಲಕನ ಮೇಲೆ ಮನಬಂದಂತೆ ಹಲ್ಲೆ ನಡೆಸಿ, ಆಕ್ರೋಶ ವ್ಯಕ್ತಪಡಿಸಿದ್ದರು. ಮಾರಣಾಂತಿಕ ಹಲ್ಲೆಗೀಡಾದ ಕೊಂಡಯ್ಯ ಅವರನ್ನು ಸಮೀಪದ ಆಸ್ಪತ್ರೆಗೆ ದಾಖಲಾಗಿತ್ತು. ಆದರೆ, ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದ್ದಾರೆಂದು ತಿಳಿದುಬಂದಿದೆ. ಮೃತ ಕೊಂಡಯ್ಯ ಆಂಧ್ರಪ್ರದೇಶದ ಮೂಲದವರಾಗಿದ್ದು, ವೈಟ್‌ಫೀಲ್ಡ್ ಬಳಿ ವಾಸಿಸುತ್ತಿದ್ದರು ಎನ್ನ ಲಾಗಿದೆ. ಘಟನೆ ವೇಳೆ ಕೊಂಡಯ್ಯ ಮದ್ಯದ ಅಮಲಿನಲ್ಲಿದ್ದ ಎಂದು ಸ್ಥಳೀ ಯರು ಆರೋಪಿಸಿದ್ದು, ಚಾಲಕ ಕುಡಿದಿರಲಿಲ್ಲ ಎಂದು ಪೊಲೀಸರು ಸ್ಪಷ್ಟಪಡಿಸಿದ್ದಾರೆ.

ಘಟನೆ ಸಂಬಂಧ ಪೊಲೀಸರು ಕೊಲೆ ಪ್ರಕರಣ ದಾಖಲಿಸಿಕೊಂಡಿದ್ದು, ಬಾಲಾಪರಾಧಿ ಸೇರಿದಂತೆ ನಾಲ್ವರನ್ನು ಬಂಧಿಸಿದ್ದಾರೆ. ಆರೋಪಿಗಳನ್ನು ಸರೈಪಾಳ್ಯ ಮತ್ತು ಹೆಗ್ಡೆನಗರ ನಿವಾಸಿಗಳಾದ ಅಫ್ರೋಜ್, ಅಕ್ರಮ್ ಖಾನ್ ಮತ್ತು ತಬಾರಕ್ ಎಂದು ಗುರ್ತಿಸಲಾಗಿದೆ.

# ಗುಂಡಿಗಳನ್ನು ಮುಚ್ಚಿ, ಸುಗಮ ಸಂಚಾರಕ್ಕೆ ಅನುವು

### ರಸ್ತೆ ಗುಂಡಿ ದುರಸ್ತಿ: ಕ್ಷಣಾರ್ಧದಲ್ಲಿ ಸಮಸ್ಯೆ ದೂರಾಗಿಸಲು ಇಕೋಫಿಕ್ಸ್ ಬಳಕೆಗೆ ಸರ್ಕಾರ ಮುಂದು

• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿ ಬೆಂಗಳೂರು ಎಷ್ಟೇ ಅಭಿವೃದ್ಧಿಗೊಂಡರೂ ಇಲ್ಲಿನ ರಸ್ತೆ ಗುಂಡು ಸಮಸ್ಯೆಗಳಿಗೆ ಮಾತ್ರ ಪರಿಹಾರ ಸಿಕ್ಕಿಲ್ಲ. ದಿಢೀರನೆ ಉದ್ಭವವಾಗುವ ಗುಂಡಿಗಳಿಂದಾಗಿ ವಾಹನ ಸವಾರರು ನಿಯಂತ್ರಣ ಕಳೆದುಕೊಂಡು ಅಪಘಾತ ಸಂಭವಿಸಿದ ಘಟನೆಗಳು ಪ್ರತಿ ನಿತ್ಯ ನಡೆಯುತ್ತಲೇ ಇರುತ್ತವೆ. ಈ ಸಮಸ್ಯೆಗೆ ಮುಕ್ತಿ ನೀಡಲು ಸರ್ಕಾರ ಮುಂದಾಗಿದ್ದು, ಇಕೋಫಿಕ್ಸ್ ಬಳಕೆಗೆ ನಿರ್ಧರಿಸಿದೆ. ಇದರಂತೆ ತ್ರಿಪಕ್ಷೀಯ ಒಪ್ಪಂದಕ್ಕೆ ಸಹಿ ಹಾಕಿದೆ.

ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಮಂಡಳಿ – ಕೇಂದ್ರ ರಸ್ತೆ ಸಂಶೋಧನಾ ಸಂಸ್ಥೆ, ಲೋಕೋಪಯೋಗಿ ಇಲಾಖೆ ಮತ್ತು ನಗರಾಭಿವೃದ್ಧಿ ಇಲಾಖೆ, ರಾಮುಕಾ ಗ್ಲೋಬಲ್ ಸರ್ವೀಸಸ್ ನಡುವೆ ಒಪ್ಪಂದಕ್ಕೆ ಸಹಿ ಹಾಕಲಾಗಿದೆ. ವೈಜ್ಞಾನಿಕ, ಕೈಗಾರಿಕಾ ಸಂಶೋಧನಾ ಮಂಡಳಿ – ಕೇಂದ್ರ ರಸ್ತೆ ಸಂಶೋಧನಾ ಸಂಸ್ಥೆಯು ತೇವಾಂಶವಿರುವ ರಸ್ತೆಗಳಲ್ಲಿಯೂ ಕೂಡ ಹೆಚ್ಚಿನ ಕಾರ್ಮಿಕರ ಅವಶ್ಯಕತೆಯಿಲ್ಲದೆ ಕಡಿಮೆ ಸಮಯದಲ್ಲಿ ಗುಂಡಿ ಮುಚ್ಚಲು ಸಾಧ್ಯವಾಗುವಂತೆ ಎಕೋಫಿಕ್ಸ್ ಎಂಬ ರೆಡಿಮಿಕ್ಸ್ ಪದಾರ್ಥವನ್ನು ಬಳಸಿಕೊಂಡು ರಸ್ತೆಯ


ಉದಯವಾಹಿನಿ ಚಿತ್ರ

ಗುಂಡಿಗಳನ್ನು ಮುಚ್ಚುವುದನ್ನು ಕಂಡುಹಿಡಿದಿದ್ದು, ಇದರಿಂದಾಗಿ ಅತಿಯಾಗಿ ಮಳೆಯಾಗುವ ಜಿಲ್ಲೆಗಳಲ್ಲಿ ಆಗಿಂದಾಗ್ಗೆ ಉಂಟಾಗುವ ರಸ್ತೆ ಗುಂಡಿಗಳನ್ನು ತೇವಾಂಶ ಇದ್ದಾಗಲೂ ಕೂಡ ಕಡಿಮೆ ಸಮಯದಲ್ಲಿ ಗುಂಡಿಗಳನ್ನು ಮುಚ್ಚಿ, ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬಹುದಾಗಿದೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ. ಕರ್ನಾಟಕ ಸರ್ಕಾರವು, ಕೇಂದ್ರ ರಸ್ತೆ ಸಂಶೋಧನಾ ಸಂಸ್ಥೆ ಹಾಗೂ ರಾಮುಕ ಗ್ಲೋಬಲ್ ಸರ್ವಿಸಸ್ ರವರ ಸಹಯೋಗದೊಂದಿಗೆ ರಾಜ್ಯ ಹೆದ್ದಾರಿ 265 ರ ರಸ್ತೆಯಲ್ಲಿ ಪ್ರಾಯೋಗಿಕವಾಗಿ 2024ನೇ ಡಿಸೆಂಬರ್ 10 ರಂದು ಗುಂಡಿ ಮುಚ್ಚುವ ಕಾರ್ಯ ಮಾಡಲಾಗಿದ್ದು, ಇದರ ಫಲಿತಾಂಶದ ಆಧಾರದ ಮೇಲೆ ರಾಜ್ಯದಾದ್ಯಂತ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗುತ್ತಿದೆ ಎಂದು ಹೇಳಿದೆ.

**ತ್ರಿಪಕ್ಷೀಯ ಒಪ್ಪಂದಕ್ಕೆ ಸಹಿ**

ನಗರ ಪ್ರದೇಶಗಳಲ್ಲಿ ಅತಿಯಾಗಿ ಸಂಚಾರ ದಟ್ಟಣೆ ಇರುವುದರಿಂದ ಗುಂಡಿಗಳನ್ನು ಮುಚ್ಚಲು ಸಮಯ ಅವಕಾಶ ಕಡಿಮೆಯಿರುತ್ತದೆ. ಹೀಗಾಗಿ ಸಂಚಾರ ದಟ್ಟಣೆ ಕಡಿಮೆಯಿದ್ದಾಗ ಅಂದರೆ ರಾತ್ರಿ ಸಮಯದಲ್ಲಿ ಎಕೋಫಿಕ್ಸ್ ಉಪಯೋಗಿಸಿ ಗುಂಡಿಗಳನ್ನು ಸಮತಟ್ಟು ಮಾಡಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬಹುದಾಗಿದೆ ಎಂದು ಅಧಿಕಾರಿಯೊಬ್ಬರು ಹೇಳಿದ್ದಾರೆ. ಎಕೋಫಿಕ್ಸ್ 30ಕೆ.ಜಿ, 50ಕೆ.ಜಿ ಚೀಲ ಗಳಲ್ಲಿ ಲಭ್ಯವಿದ್ದು, ಅದನ್ನು ಕಾಮಗಾರಿ ಸ್ಥಳಕ್ಕೆ ಸರಾಗವಾಗಿ ಸಾಗಿಸಬಹುದಾಗಿರುತ್ತದೆ. ಏಕರೂಪ ದರಪಟ್ಟಿಯಲ್ಲಿ ಕೋಲ್ಡ್ ಮಿಕ್ಸ್ ಪದ್ಧತಿಯಲ್ಲಿ ಗುಂಡಿ ಮುಚ್ಚಲು ತಗಲುವ ಮೊತ್ತ ರೂ. 17/- ಪ್ರತಿ ಕೆ.ಜಿ.ಗೆ ನಿಗಧಿಪಡಿಸಲಾಗಿರುತ್ತದೆ. ಎಕೋಫಿಕ್ಸ್ ಪದ್ಧತಿಯಲ್ಲಿ ಸರಬರಾಜು ಮಾಡಿ ಗುಂಡಿ ಮುಚ್ಚಲು ರೂ.15.70/- ಪ್ರತಿ ಕೆ.ಜಿ. ರಂತೆ ಮಾಡಲು ಮೆ:ರಾಮುಕ ಗ್ಲೋಬಲ್ ಸರ್ವೀಸಸ್ ರವರು ಒಪ್ಪಿಕೊಂಡಿರುತ್ತಾರೆ. ಇದರಿಂದಾಗಿ ಗುಂಡಿ ಮುಚ್ಚುವ ವೆಚ್ಚದಲ್ಲಿ ಸುಮಾರು ಶೇ.10 ರಷ್ಟು ಮೊತ್ತ ಸರ್ಕಾರಕ್ಕೆ ಉಳಿತಾಯವಾಗಲಿದೆ. ಜೆ.ಎಸ್. ಡಬ್ಲ್ಯು, ಬಳ್ಳಾರಿ ರವರ ಸಹಯೋಗದೊಂದಿಗೆ ರಾಮುಕ ಗ್ಲೋಬಲ್ ಸರ್ವೀಸಸ್ ರವರು ECO-FIX READY TO USE POT HOLE REPAIR MIX ಉತ್ಪಾದನೆ ಮಾಡಿ ಕಡಿಮೆ ದರದಲ್ಲಿ ಕರ್ನಾಟಕ ರಾಜ್ಯ ವ್ಯಾಪ್ತಿಯಲ್ಲಿ ಸರಬರಾಜು ಮಾಡಲು ಒಪ್ಪಿಗೆ ನೀಡಿದ್ದಾರೆ.

### ರಾಜ್ಯದಾದ್ಯಂತ ಯೋಜನೆ

**ಕರ್ನಾಟಕ ಸರ್ಕಾರವು, ಕೇಂದ್ರ ರಸ್ತೆ ಸಂಶೋಧನಾ ಸಂಸ್ಥೆ, ರಾಮುಕ ಗ್ಲೋಬಲ್ ಸರ್ವಿಸಸ್ ರವರ ಸಹಯೋಗದೊಂದಿಗೆ ರಾಜ್ಯ ಹೆದ್ದಾರಿ 265ರ ರಸ್ತೆಯಲ್ಲಿ ಪ್ರಾಯೋಗಿಕವಾಗಿ 2024ನೇ ಡಿಸೆಂಬರ್ 10ರಂದು ಗುಂಡಿ ಮುಚ್ಚುವ ಕಾರ್ಯ ಮಾಡಲಾಗಿದ್ದು, ಇದರ ಫಲಿತಾಂಶದ ಆಧಾರದ ಮೇಲೆ ರಾಜ್ಯದಾದ್ಯಂತ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗುತ್ತಿದೆ.**

**ಲೋಕೋಪಯೋಗಿ ಇಲಾಖೆಯ ಇಲಾಖೆಯ ಎಲ್ಲಾ ಅಭಿಯಂತರರುಗಳಿಗೆ ಹಂತ ಹಂತವಾಗಿ ಎಕೋಫಿಕ್ಸ್ ಉಪಯೋಗಿಸುವುದರ ಬಗ್ಗೆ ತರಬೇತಿ ನೀಡಲಾಗುವುದು. ಇದರಿಂದಾಗಿ ಅತಿ ತುರ್ತಾಗಿ ಗುಂಡಿ ಮುಚ್ಚಿ, ಸಾರ್ವಜನಿಕರಿಗೆ ಹೆಚ್ಚಿನ ಅನೂಕೂಲವಾಗಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.**

**ಉದಯ ವಾಹಿನಿ**

**ಪ್ರಾದೇಶಿಕ**

ಶನಿವಾರ 19 ಏಪ್ರಿಲ್ 2025 | 03

## ಜನಾಂಗ ಕಾಪಾಡಿಕೊಳ್ಳುವ ಜವಾಬ್ದಾರಿ ನಮ್ಮ ಮೇಲಿದೆ

• **ಉದಯವಾಹಿನಿ, ಬಿಡದಿ**



ಮರು ಸಮೀಕ್ಷೆ ನಡೆಯಲಿ

ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆ ಬಗ್ಗೆ ಜನರಲ್ಲಿರುವ ಗೊಂದಲ ನಿವಾರಣೆಯಾಗಬೇಕು. ವಿರೋಧ ಪಕ್ಷದವರ ಆರೋಪಗಳಿಗೆ ತೆರೆ ಎಳೆಯಬೇಕು. ಹಾಗಾಗಿ, ಜನರ ಬಯಕೆಯಂತೆ ಮರು ಸಮೀಕ್ಷೆ ಮಾಡಬೇಕು ಎಂದು ಉಪ ಮುಖ್ಯಮಂತ್ರಿ ಮತ್ತು ಸಚಿವರ ಒಕ್ಕಲಿಗ ಜನಪ್ರತಿನಿಧಿಗಳ ಸಭೆಯಲ್ಲಿ ಮನವಿ ಮಾಡಿದ್ದೇವೆ ಎಂದು ಮಾಗಡಿ ಶಾಸಕ ಎಚ್.ಸಿ. ಬಾಲಕೃಷ್ಣ ಹೇಳಿದರು. ಪಟ್ಟಣದಲ್ಲಿ ಈ ಕುರಿತು ಸುದ್ದಿಗಾರರಿಗೆ ಪ್ರತಿಕ್ರಿಯಿಸಿದ ಅವರು, ಸಮೀಕ್ಷೆ ಸರಿಯಾಗಿದೆ ಎಂದು ನಾವೂ ಅಂದುಕೊಂಡಿದ್ದೆವು. ಇದೀಗ ವಿರೋಧ ವ್ಯಕ್ತವಾಗುತ್ತಿದೆ. ನಮ್ಮ ವಿರೋಧಿಗಳು ಅದನ್ನೇ ಇಟ್ಟುಕೊಂಡು ರಾಜಕೀಯ ಮಾಡುತ್ತಿದ್ದಾರೆ. ಮರು ಸಮೀಕ್ಷೆಯಿಂದ ತಪ್ಪಾಗುವುದಿಲ್ಲ. ಹಾಗಾಗಿ, ಮುಖ್ಯಮಂತ್ರಿಯನ್ನು ಇದಕ್ಕೆ ಒಪ್ಪಿಸಿ ಎಂದು ಮನವಿ ಮಾಡಿದ್ದೇವೆ ಎಂದರು. ನಮ್ಮ ಜನಾಂಗದವರನ್ನು ಕಾಪಾಡಿಕೊಳ್ಳುವ ಜವಾಬ್ದಾರಿ ನಮ್ಮ ಮೇಲಿದೆ. ಶಾಸಕ ಮತ್ತು ಸಚಿವ ಸ್ಥಾನಮಾನವನ್ನು ಜಾತಿ ಮೇಲೆಯೇ ಗುರುತಿಸುವುದರಿಂದ ನಮ್ಮ ಸಮುದಾಯದ ಹಿತ ಕಾಪಾಡಬೇಕಾಗುತ್ತದೆ. ಹೀಗಾಗಿ ಒಕ್ಕಲಿಗ ಶಾಸಕರ ಸಭೆ ಮಾಡಿದ್ದೇವೆ. ನಾವು ವರದಿ ಜಾರಿ ಮಾಡಬೇಡಿ ಎನ್ನುತ್ತಿಲ್ಲ. ಆದರೆ, ವೈಜ್ಞಾನಿಕವಾಗಿ ಮರು ಸಮೀಕ್ಷೆ ಮಾಡಿ ಜಾರಿಗೊಳಿಸಿ ಎನ್ನುತ್ತಿದ್ದೇವೆ ಎಂದು ತಿಳಿಸಿದರು. ಸರ್ಕಾರ ಜನರ ಬಯಕೆಯಂತೆ ಕೆಲಸ ಮಾಡಬೇಕು. ಜನಗಣತಿ ವೇಳೆಯಲ್ಲಿ ಜನ ಮರು ಸಮೀಕ್ಷೆ ಬಯಸುತ್ತಿದ್ದಾರೆ. ಜನರ ಬಯಕೆಗೆ ಮನ್ನಣೆ ಕೊಡಿ ಎಂದು ನಾವು ಸರ್ಕಾರದ ಮೇಲೆ ಒತ್ತಡ ಹಾಕುತ್ತಿದ್ದೇವೆ. ಮರು ಸಮೀಕ್ಷೆ ನಡೆದು ಸರಿಯಾದ ಅಂಕಿಅಂಶಗಳು ಹೊರಗೆ ಬಂದರೆ ಗೊಂದಲ ನಿವಾರಣೆಯಾಗಲಿದೆ ಎಂದರು.

ಜಾತಿಗಣತಿ ಅಲ್ಲ, ದ್ವೇಷದ ಗಣತಿ ಎಂಬ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರ ಟೀಕೆಗೆ ಪ್ರತಿಕ್ರಿಯಿಸಿದ ಬಾಲಕೃಷ್ಣ, ಅವರು ಏನೇ ಮಾತನಾಡಿದರೂ ರಾಜಕೀಯವಾಗಿಯೇ ಮಾತನಾಡುತ್ತಾರೆ. ಅವರೇ ಮುಖ್ಯಮಂತ್ರಿಯಾಗಿದ್ದಾಗ ಈ ವಿಷಯಕ್ಕೆ ತೆರೆ ಎಳೆಯಬಹುದಿತ್ತು. ಸಿಎಂ ಮತ್ತು ಡಿಸಿಎಂ ಅವರನ್ನು ಟಾರ್ಗೆಟ್ ಮಾಡುವ ಅವರ ಮಾತುಗಳು ರಾಜಕೀಯ ಪ್ರೇರಿತವೆ. ಅದಕ್ಕೆ ಮಹತ್ವ ಕೊಡುವ ಅಗತ್ಯವಿಲ್ಲ ಎಂದರು.

## ಹಣ ಪಡೆಯದೇ ಪಡಿತರ ನೀಡಿ: ಸಿಇಒ

• **ಉದಯವಾಹಿನಿ, ಮಂಡ್ಯ**



ಉದಯವಾಹಿನಿ ಚಿತ್ರ

ನ್ಯಾಯಬೆಲೆ ಅಂಗಡಿಯ ಮಾಲೀಕರು ಪಡಿತರ ವಿತರಿಸುವ ಸಂದರ್ಭದಲ್ಲಿ ಸಾರ್ವಜನಿಕರ ಬಳಿ ಹಣ ಪಡೆಯದೆ ಪಡಿತರವನ್ನು ನೀಡಬೇಕು. ಯಾವುದೇ ನ್ಯಾಯಬೆಲೆ ಅಂಗಡಿಗಳಲ್ಲಿ ಹಣ ಪಡೆಯುತ್ತಿದ್ದರೆ ಸಾರ್ವಜನಿಕರು ಸಂಬಂಧಪಟ್ಟ ಅಧಿಕಾರಿಗಳಿಗೆ ದೂರು ಸಲ್ಲಿಸಿ, ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ಆರ್. ನಂದಿನಿ ಹೇಳಿದರು. ಜಿಲ್ಲಾ ಪಂಚಾಯತಿ ಮಿನಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಜಿಲ್ಲಾ ಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಾಧಿಕಾರದ ಸಭೆಯಲ್ಲಿ ಅವರು ಮಾತನಾಡಿದರು.

ಜಿಲ್ಲಾ ಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಚಿಕ್ಕಲಿಂಗಯ್ಯ ಮಾತನಾಡಿ, ಗೃಹಲಕ್ಷ್ಮಿ ಯೋಜನೆಯಡಿ ಜಿಲ್ಲೆಯ ಅರ್ಹ ಫಲಾನುಭವಿಗಳಿಗೆ ಜನವರಿ 2024ರಿಂದ ಜನವರಿ 2025ರವರೆಗೆ 1099.09 ಕೋಟಿ ಅನುದಾನ ನೀಡಲಾಗಿದೆ. ಜಿಲ್ಲೆಯಲ್ಲಿ ಒಟ್ಟು 4,48,769 ಅರ್ಹ ಫಲಾನುಭವಿಗಳಿದ್ದು, ಜನವರಿ ತಿಂಗಳ ಗೃಹಲಕ್ಷ್ಮಿ ಹಣವನ್ನು ಡಿ.ಬಿ.ಟಿ. ಮೂಲಕ ಪಾವತಿಸಲಾಗುತ್ತಿದೆ ಎಂದರು. ಜನವರಿ ತಿಂಗಳಲ್ಲಿ 30.73 ಕೋಟಿಯನ್ನು ಈಗಾಗಲೇ ಫಲಾನುಭವಿಗಳ ಖಾತೆಗೆ ಜಮಾ ಮಾಡಲಾಗಿದ್ದು, ಬಾಕಿ ಹಣವನ್ನು ಶೀಘ್ರವೇ ಫಲಾನುಭವಿಗಳ ಖಾತೆಗೆ ಜಮಾ ಮಾಡಲಾಗುವುದು. 1278 ಫಲಾನುಭವಿಗಳು ಐ.ಟಿ, ಜಿ.ಎಸ್.ಟಿ ತೆರಿಗೆದಾರರಲ್ಲವೆಂದು ಗೂಗಲ್ ಶೀಟ್ ಮೂಲಕ ಕೇಂದ್ರ ಕಚೇರಿಗೆ ಮಾಹಿತಿ ನೀಡಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತಿ ಯೋಜನಾಧಿಕಾರಿ ಧನುಷ್, ಜಿಲ್ಲಾ ಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಪ್ರಶಾಂತ್ ಬಾಬು, ಕೆ.ಸಿ ಮತ್ತು ರಾಜೇಂದ್ರ, ಎಸ್.ಎಚ್., ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಾಜಮೂರ್ತಿ, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಸದಸ್ಯರಾದ ರುದ್ರಪ್ಪ, ವೀಣಾ, ಬಸವರಾಜು, ಮೊಹಮ್ಮದ್ ಅನ್ಸರ್, ಅನ್ಸರ್ ಪಾಷಾ, ರಮೇಶ್, ಪಿ.ಮಾದೇಶ ಪಾಲ್ಗೊಂಡಿದ್ದರು.

## ಬೀದಿಬದಿ ವ್ಯಾಪಾರಿಯ ವಾಹನಕ್ಕೆ ಕಿಡಿಗೇಡಿಗಳಿಂದ ಬೆಂಕಿ: 7 ಲಕ್ಷ ನಷ್ಟ



ಉದಯವಾಹಿನಿ ಚಿತ್ರ

• **ಉದಯವಾಹಿನಿ, ನಾಗಮಂಗಲ**

ಸಂತೆ, ಜಾತ್ರೆಗಳಲ್ಲಿ ಮಕ್ಕಳ ಆಟದ ಸಾಮಗ್ರಿಗಳನ್ನು ವ್ಯಾಪಾರ ಮಾಡಿ ಜೀವನ ನಡೆಸುತ್ತಿದ್ದ ಸಾಮಗ್ರಿ ತುಂಬಿದ ವಾಹನಕ್ಕೆ ಕಿಡಿಗೇಡಿಗಳು ಬೆಂಕಿ ಹಚ್ಚಿದ್ದು, ಸುಮಾರು 7 ಲಕ್ಷ ನಷ್ಟವಾಗಿದೆ. ತಾಲ್ಲೂಕಿನ ಬೆಳ್ಳೂರ್ ಕ್ರಾಸ್ ಬಳಿಯ ಕೆಂಬಾರೆ ಗ್ರಾಮದ ನಿವಾಸಿ ಗೀತಾ ಮಹೇಶ್ ದಂಪತಿಗೆ ಸೇರಿದ್ದ ಅಶೋಕ್ ಲೈಲ್ಯಾಂಡ್ ವಾಹನ ಮತ್ತು ಅದರಲ್ಲಿದ್ದ 2 ಲಕ್ಷಕ್ಕೂ ಅಧಿಕ ಮೌಲ್ಯದ ಸಾಮಗ್ರಿಗಳಿಗೆ ಗುರುವಾರ ರಾತ್ರಿ 2.30ರ ಸುಮಾರಿನಲ್ಲಿ ಕಿಡಿಗೇಡಿಗಳು ಬೆಂಕಿ ಹಚ್ಚಿದ್ದಾರೆ. ದಂಪತಿ ವ್ಯಾಪಾರಕ್ಕಾಗಿ ಸಾಲ ಮಾಡಿ ಸಾಮಗ್ರಿಗಳನ್ನು ಖರೀದಿಸಿದ್ದರು. ಅನಾಹುತದಲ್ಲಿ ಜೀವನಾಧಾರವಾಗಿದ್ದ ಸಾಮಗ್ರಿಗಳು ನಾಶವಾಗಿದ್ದು, ಕುಟುಂಬವು ರೋದಿಸುತ್ತಿದೆ. 15 ದಿನಗಳ ಹಿಂದೆ ಇದೇ ಊರಿನಲ್ಲಿ ಕಿಡಿಗೇಡಿಗಳು ಪಲ್ಸರ್ ಬೈಕ್‌ಗೆ ಬೆಂಕಿ ಹಚ್ಚಿದ್ದರು ಎಂದು ಸ್ಥಳೀಯರು ಹೇಳಿದರು. ಸಾಲ ಮಾಡಿ ಅಶೋಕ ಲೈಲ್ಯಾಂಡ್ ವಾಹನವನ್ನು ಖರೀದಿಸಿದ್ದೆ. ಹಬ್ಬದ ಪ್ರಯುಕ್ತ ಗುರುವಾರ ವ್ಯಾಪಾರ ಮುಗಿಸಿ ಮನೆ ಮುಂದೆ ವಾಹನ ನಿಲ್ಲಿಸಿದ್ದೆ. ಆದರೆ ರಾತ್ರಿ ಕಿಡಿಗೇಡಿಗಳು ಬೆಂಕಿ ಹಚ್ಚಿದ್ದಾರೆ. ನಮ್ಮ ಕುಟುಂಬಕ್ಕೆ ನ್ಯಾಯ ಬೇಕು' ವ್ಯಾಪಾರಿ ಮಹೇಶ್ ಮನವಿ ಮಾಡಿದರು. ಬೆಳ್ಳೂರು ಪೊಲೀಸರು ಭೇಟಿ ನೀಡಿ ಪರಿಶೀಲಿಸಿದ್ದು, ಪ್ರಕರಣ ದಾಖಲಿಸಿಕೊಂಡಿದ್ದಾರೆ.

### ಮೂರು ವರ್ಷದಲ್ಲಿ 1,445 ಅರ್ಜಿ, 912ಕ್ಕೆ ಅನುಮತಿ, 912 ಮರಗಳ ಅಂಗಾಂಗಕ್ಕೆ ಕೊಡಲಿ

## ಕುಗ್ಗುತ್ತಿರುವ ಮೈಸೂರು ನಗರದ ಹಸಿರು ವಲಯ

• **ಉದಯವಾಹಿನಿ, ಮೈಸೂರು**



ಉದಯವಾಹಿನಿ ಚಿತ್ರ

**ಮರಗಳ ತೆರವಿಗೆ ಅರ್ಜಿ**

ಮೈಸೂರು ಮಹಾನಗರ ಪಾಲಿಕೆಯಿಂದ 2024 ನೇ ಸಾಲಿನಲ್ಲಿ (ಜನವರಿಯಿಂದ ಡಿಸೆಂಬರ್‌ವರೆಗೆ) ಕಾಮಗಾರಿ ಕೈಗೊಳ್ಳಲು ಹಾಗೂ ನಾಗರಿಕರ ಕೋರಿಕೆ ಮೇರೆಗೆ ಒಟ್ಟು 93 ಮರಗಳನ್ನು ನೆಲಸಮಗೊಳಿಸಲಾಗಿದೆ. ಹೀಗೆ ಪ್ರತಿ ವರ್ಷ ಹತ್ತಾರು ಮರಗಳ ಮಾರಣ ಹೋಮ ನಡೆಯುತ್ತಿದ್ದು, ನಗರವನ್ನು ಹೊದ್ದುಕೊಂಡಿರುವ ಗ್ರೀನ್ ಕವರ್(ಹಸಿರು ಹೊದಿಕೆ) ಕ್ರಮೇಣ ತಗ್ಗುತ್ತಿದೆ. ಪರಿಣಾಮವಾಗಿ ನಗರದ ತಾಪಮಾನ ಕಳೆದ ಎರಡು ವರ್ಷಗಳಿಂದ ಊಹಿಸದ ಮಟ್ಟಕ್ಕೆ ಏರಿಕೆಯಾಗಿದೆ. ಒಂದು ಕಡೆ ಪರಿಸರ ಪ್ರೇಮಿಗಳು ಮರಗಳ ಉಳಿವಿಗಾಗಿ ಹೋರಾಟ ನಡೆಸುತ್ತಿದ್ದರೆ, ಇನ್ನೊಂದೆಡೆ ಮರವನ್ನು ತೆರವುಗೊಳಿಸುವಂತೆ ಪಾಲಿಕೆಗೆ ಕಳೆದ ಮೂರು ವರ್ಷದಲ್ಲಿ ಒಟ್ಟು 1,445 ಅರ್ಜಿಗಳು ಬಂದಿವೆ. ಕ್ಷುಲ್ಲಕ ಕಾರಣ ಇಟ್ಟು ಮರಗಳ ತೆರವಿಗೆ ಅರ್ಜಿಗಳು ಬಂದಿವೆ. ಇವುಗಳಲ್ಲಿ 912ಕ್ಕೆ ಅನುಮತಿ ನೀಡಲಾಗಿದೆ. ಇವುಗಳಲ್ಲಿ2024–25ರಲ್ಲಿ ಹೈದರಾಲಿ ರಸ್ತೆ ಅಗಲೀಕರಣ ಕಾಮಗಾರಿಗೆ 40 ಮರಗಳನ್ನು ಹನನ ಮಾಡಲಾಗಿದೆ. ಇನ್ನುಳಿದ 52 ಮರಗಳನ್ನು ನಾಗರಿಕರ ಕೋರಿಕೆ ಮೇರೆಗೆ ನಾನಾ ಕಾರಣಗಳಿಗೆ ತೆರವುಗೊಳಿಸಲಾಗಿದೆ.

**912 ಮರಗಳ ಅಂಗಾಂಗ ತೆರವು:** ಅನುಮತಿ ನೀಡಿದ 912 ಮರಗಳಲ್ಲಿ 93 ಮರಗಳನ್ನು ಪೂರ್ತಿಯಾಗಿ ತೆರವು ಗೊಳಿಸಲಾಗಿದೆ. ಇನ್ನುಳಿದ 819ಮರಗಳ ಕೊಂಬೆಗಳನ್ನು ಕತ್ತರಿಸಲಾಗಿದೆ. ಮರ ಟೊಳ್ಳಾಗಿರುವುದು, ಬೀಳುವ ಸ್ಥಿತಿಯಲ್ಲಿರುವುದು, ಮನೆಯ ಚಾವಣಿ ಮೇಲೆ ಇದೆ ಎಂಬ ಕಾರಣಕ್ಕೆ ಮರವನ್ನು ಸಂಪೂರ್ಣವಾಗಿ ತೆರವು ಗೊಳಿಸುವಂತೆ ಅರ್ಜಿ ನೀಡಿದ್ದಾರೆ. ಆದರೆ, ಪಾಲಿಕೆ ಕೊಂಬೆಗಳನ್ನು ತೆರವುಗೊಳಿಸಲು ಮಾತ್ರ ಅನುಮತಿ ನೀಡಿದೆ. ಇದರಿಂದ ಪೂರ್ಣವಾಗಿ ಮರ ತೆರವಾಗದಿದ್ದರೂ ಅದರ ಕೈ-ಕಾಲುಗಳನ್ನು ಕಡಿದು ಹಾಕಿ ಅಸ್ತಿತ್ವಕ್ಕೆ ಧಕ್ಕೆ ಬಂದಂತಾಗಿದೆ.

**ಅನಗತ್ಯ ಕಾರಣಕ್ಕೆ ಅರ್ಜಿ:** ಮರಗಳಿಂದ ಪರಿಸರಕ್ಕೆ ಆಗುತ್ತಿರುವ ಪ್ರಯೋಜನ ತಿಳಿಯದ ಕೆಲ ನಾಗರಿಕರು ಸಣ್ಣಪುಟ್ಟ ಕಾರಣಗಳನ್ನು ಇಟ್ಟುಕೊಂಡು ಮರ ತೆರವು ಮಾಡುವಂತೆ ಅರ್ಜಿ ಸಲ್ಲಿಸುತ್ತಿದ್ದಾರೆ. ಮರದಿಂದ ಉದುರುವ ಎಲೆಗಳನ್ನು ತೆರವುಗೊಳಿಸಲು ಸಾಧ್ಯವಾಗುತ್ತಿಲ್ಲ, ಮರ ಇರುವುದರಿಂದ ಇತರೆ ವಸ್ತುಗಳನ್ನು ಇಡಲು ಆಗುತ್ತಿಲ್ಲ, ನಮ್ಮ ಕಾಧಿರಿನ ಮೇಲೆ ಮರ ಬೀಳಬಹುದು ಎಂಬುದು ಸೇರಿದಂತೆ ನಾನಾ ಕಾರಣಗಳಿಗೆ ಮರ ಕಡಿಯಲು ಅನುಮತಿ ಕೋರಿ ಅರ್ಜಿ ಸಲ್ಲಿಸುತ್ತಿದ್ದಾರೆ.

**ಪಾಲನೆಯಾಗದ ನಿಯಮ:** ಅನುಮತಿ ಪಡೆದು ಮರಗಳನ್ನು ತೆರವುಗೊಳಿಸಿದರೆ ಒಂದು ಮರ ಕಡಿದರೆ 10 ಮರ ನೆಡಬೇಕು ಎಂಬ ನಿಯಮವಿದೆ. ಆದರೆ, ಈ ನೂರಾರು ಮರಗಳನ್ನು ಕಡಿದರೂ ಅದಕ್ಕೆ ಹತ್ತು ಪಟ್ಟು ಮರಗಳನ್ನು ನೆಟ್ಟಿಲ್ಲ. ಇದರಿಂದ ನಗರದಲ್ಲಿಗಣನೀಯವಾಗಿ ಪರಿಸರ ಅಸಮತೋಲನ ಉಂಟಾಗಿದೆ.

**ಸಿಎಂ ಕಚೇರಿಗೂ ಪತ್ರ**

**ಮೈಸೂರಿನ ಕೆಲ ನಾಗರಿಕರು ತಮ್ಮ ಮನೆ ಮುಂದಿನ ಮರಗಳನ್ನು ತೆರವುಗೊಳಿಸುವಂತೆ ಮುಖ್ಯಮಂತ್ರಿಗಳ ಕಚೇರಿಗೂ ಅರ್ಜಿ ಸಲ್ಲಿಸುವ ಸಾಹಸ ಮಾಡಿದ್ದಾರೆ. ಇನ್ನುಳಿದವರು ಶಾಸಕರ ಕಚೇರಿ, ಜಿಲ್ಲಾಧಿಕಾರಿ ಕಚೇರಿ, ಮೈಸೂರು ಮಹಾನಗರ ಪಾಲಿಕೆ ಕಚೇರಿಗೆ ಅರ್ಜಿ ಸಲ್ಲಿಸಿದ್ದಾರೆ. 2024-25ನೇ ಸಾಲಿನಲ್ಲಿ ಸಾರ್ವಜನಿಕರಿಂದ ಒಟ್ಟು 457 ಅರ್ಜಿ ಬಂದಿದ್ದು, ಅವುಗಳಲ್ಲಿ ಸಿಎಂ ಕಚೇರಿಗೆ-1, ಶಾಸಕರ ಕಚೇರಿಗೆ-5, ಎಂಸಿಸಿ ಕಚೇರಿಗೆ-12, ಡಿಸಿ ಕಚೇರಿಗೆ 1 ಅರ್ಜಿ ಸಲ್ಲಿಕೆಯಾಗಿವೆ. 2023-24ರಲ್ಲಿಶಾಸಕರ ಕಚೇರಿಗೆ 3, ಎಂಸಿಸಿಗೆ 1 ಅರ್ಜಿ ಬಂದಿವೆ.**

## ಅಂತೂ ಕ್ಯಾಬಿನೆಟ್ ಸಭೆ ಮಲೆ ಮಹದೇಶ್ವರ ಬೆಟ್ಟದಲ್ಲಿ ಫಿಕ್ಸ್

• **ಉದಯವಾಹಿನಿ, ಚಾಮರಾಜನಗರ**


ಕೊನೆಗೂ ಮಲೆ ಮಹದೇಶ್ವರ ಬೆಟ್ಟದಲ್ಲಿ ರಾಜ್ಯ ಸರಕಾರದ ಸಚಿವ ಸಂಪುಟ ಸಭೆ ಏ.24ಕ್ಕೆ ನಿಗದಿಯಾಗಿದ್ದು, ಅಗತ್ಯ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಭರದ ಸಿದ್ಧತೆಗಳು ಸಮರೋಪಾದಿಯಲ್ಲಿ ನಡೆಯುತ್ತಿವೆ.

ರಾಜ್ಯ ಸರಕಾರದ ಉನ್ನತ ಅಧಿಕಾರಿಗಳು, ಚಾಮರಾಜನಗರ ಜಿಲ್ಲಾಡಳಿತ ಕ್ಯಾಬಿನೆಟ್ ಸಭೆಗೆ ಅಗತ್ಯ ಇರುವ ಕ್ರಮಗಳನ್ನು ಈಗಾಗಲೇ ಕೈಗೊಂಡಿದ್ದು, ಜಿಲ್ಲಾಧಿಕಾರಿ ಶಿಲ್ಪಾನಾಗ್ ನೇತೃತ್ವದಲ್ಲಿ ನಾನಾ ಸಮಿತಿಗಳನ್ನು ರಚಿಸಲಾಗಿದೆ.

ಮಾದಪ್ಪನ ಸನ್ನಿಧಿಯಲ್ಲಿಈ ಮೊದಲು ಕಳೆದ ಫೆ.14ರಂದು ಸಚಿವ ಸಂಪುಟ ಸಭೆ ನಡೆಸಲು ಉದ್ದೇಶಿಸಲಾಗಿತ್ತು. ಆ ಬಳಿಕ ಫೆ.17ಕ್ಕೆ ಮುಂದೂಡಲಾಯಿತು. ಆದರೆ, ಸಿಎಂ ಸಿದ್ದರಾಮಯ್ಯ ಅವರಿಗೆ ಮಂಡಿ ನೋವು ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಆ ದಿನಾಂಕವನ್ನು ಮುಂದೂಡಲಾಗಿತ್ತು. ಇದೀಗ ಏ.24ಕ್ಕೆ ಕ್ಯಾಬಿನೆಟ್ ಸಭೆ ಮಾದಪ್ಪನ ಬೆಟ್ಟದಲ್ಲಿ ನಡೆಯಲಿದೆ. ಮಧ್ಯಾಹ್ನ 12ಕ್ಕೆ ಸಚಿವ ಸಂಪುಟ ಸಭೆ ಪ್ರಾರಂಭವಾಗಲಿದೆ ಎಂದು ತಿಳಿಸಲಾಗಿದೆ.

ಹಾಗಾಗಿ ಮೇಲಿಂದ ಮೇಲೆ ಮಲೆ ಮಹದೇಶ್ವರ ಬೆಟ್ಟದಲ್ಲಿ ಸಚಿವರು, ಶಾಸಕರು, ಅಧಿಕಾರಿಗಳಿಂದ ಪರಿಶೀಲನಾ ಕಾರ್ಯನಡೆಯುತ್ತಲೇ ಇದೆ. ರಾಜ್ಯ ಸರಕಾರದ ಕಾರ್ಯದರ್ಶಿ ಸಹ ಒಮ್ಮೆ ಬೆಟ್ಟಕ್ಕೆ ಭೇಟಿ ನೀಡಿ ಕ್ಯಾಬಿನೆಟ್ ಸಭೆ ನಡೆಯುವ ಸ್ಥಳ ಪರಿಶೀಲಿಸಿದ್ದಾರೆ. ಭದ್ರತೆ ಸಂಬಂಧ ರಾಜ್ಯಭದ್ರತೆ ಉಸ್ತುವಾರಿ ಅಧಿಕಾರಿಗಳು, ಪೊಲೀಸ್ ಇಲಾಖೆ ಅಗತ್ಯ ಮುನ್ನೆಚ್ಚರಿಕೆ ಕ್ರಮ ಕೈಗೊಂಡಿದೆ. ಆಯಾ ಸಮಿತಿಯ ಮುಖ್ಯ ಅಧಿಕಾರಿಗಳು, ಅವರ ತಂಡದ ವತಿಯಿಂದಲೂ ಅಗತ್ಯ ಸಿದ್ಧತಾ ಕಾರ್ಯಗಳು ವೇಗವಾಗಿ ಸಾಗಿವೆ.

ಜರ್ಮನ್ ಟೆಂಟ್‌ನಲ್ಲಿ ಸಭೆಮಲೆ ಮಹದೇಶ್ವರ ಬೆಟ್ಟದಲ್ಲಿ ಯಾವುದೇ ಕಟ್ಟಡದೊಳಗಿನ ಸಭಾಂಗಣದಲ್ಲಿ ಕ್ಯಾಬಿನೆಟ್ ಸಭೆ ನಡೆಯುತ್ತಿಲ್ಲ. ಅಲ್ಲಿನ ಸಭಾಂಗಣದಲ್ಲಿ ಅಗತ್ಯ ದಷ್ಟು ಸ್ಥಳಾವಕಾಶವಿಲ್ಲ ಎಂಬ ಕಾರಣದಿಂದ



ಉದಯವಾಹಿನಿ ಚಿತ್ರ

ಮಲೆ ಮಹದೇಶ್ವರರ ಬೃಹತ್ ಪ್ರತಿಮೆ ಇರುವ ದೀಪದಗಿರಿ ಒಡ್ಡು ಪ್ರದೇಶದಲ್ಲಿ ಜರ್ಮನ್ ಟೆಂಟ್ ಅಳವಡಿಸಿ ಅದರೊಳಗೆ ಕ್ಯಾಬಿನೆಟ್ ಸಭೆ ನಡೆಸುತ್ತಿರುವುದು ವಿಶೇಷ. ಈ ಟೆಂಟ್‌ನೊಳಗೆ ಎಲ್ಲಾ ಬಗೆಯ ಸೌಲಭ್ಯಗಳಿರುವಂತೆ ವ್ಯವಸ್ಥೆ ಮಾಡಲಾಗುತ್ತದೆ. ಸಂಪುಟದ ಸಚಿವರಾದಿಯಾಗಿ ರಾಜ್ಯ ಸರಕಾರದ ಪ್ರಧಾನ ಕಾರ್ಯದರ್ಶಿಗಳು, ಮುಖ್ಯ ಕಾರ್ಯದರ್ಶಿಗಳು, ಆಯಾ ಇಲಾಖೆ ಕಾರ್ಯದರ್ಶಿಗಳು, ನಿರ್ದೇಶಕರು ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

ಹೀಗಾಗಿ ಏ.23ರಿಂದಲೇ ರಾಜ್ಯ ಸಚಿವ ಸಂಪುಟದ ಪ್ರಮುಖ ಸಚಿವರು ಮಾದಪ್ಪನ ಸನ್ನಿಯತ್ತ ಮುಖ ಮಾಡಲಿದ್ದಾರೆ. ಸಿಎಂ ಸಿದ್ದರಾಮಯ್ಯ ಅವರು ಏ.24ರ ಬೆಳಗ್ಗೆ ಬೆಟ್ಟಕ್ಕೆ ಬಂದಿಳಿಯುವ ಸಾಧ್ಯತೆ ಇದೆ. ಸಾಕಷ್ಟು ನಿರೀಕ್ಷೆಗಳು ಮಲೆ ಮಹದೇಶ್ವರ ಬೆಟ್ಟದಲ್ಲಿ ಕ್ಯಾಬಿನೆಟ್ ಸಭೆ ಆಯೋಜನೆಗೊಂಡಿರುವ ಹಿನ್ನೆಲೆಯಲ್ಲಿ ಸಹಜವಾಗಿಯೇ ಜಿಲ್ಲೆಯ ಜನತೆಯಲ್ಲಿ ನಿರೀಕ್ಷೆಗಳು ಗರಿಗೆದರಿವೆ. ಜಿಲ್ಲೆಯ ಹಲವು ಮಹತ್ವದ ಯೋಜನೆಗಳು, ಕಾರ್ಯಕ್ರಮಗಳಿಗೆ ಕ್ಯಾಬಿನೆಟ್ ಅನುಮೋದನೆ ಸಿಗುವ ಸಾಧ್ಯತೆಗಳು ಹೆಚ್ಚಾಗಿವೆ. ಅದರಲ್ಲೂ ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಸೇರಿದಂತೆ ಜಿಲ್ಲೆಯ ನೀರಾವರಿ ಯೋಜನೆ, ಸೋಲಿಗರು, ಗಿರಿಜನರಿಗೆ ಸೂರು, ರಸ್ತೆ, ಒಳಚರಂಡಿ ಯೋಜನೆಗಳಿಗೆ ರಾಜ್ಯ ಸಂಪುಟ ಸಭೆ ಅಸ್ತು ಎನ್ನಲಿದೆ ಎಂದು ನಿರೀಕ್ಷಿಸಲಾಗಿದೆ.

ಈ ಸಂಬಂಧ ಜಿಲ್ಲೆಯ 4 ವಿಧಾನಸಭೆ ಕ್ಷೇತ್ರದ ಶಾಸಕರು ತಮ್ಮ ಕ್ಷೇತ್ರಗಳಿಗೆ ಅಗತ್ಯ ಇರುವ ಯೋಜನೆಗಳ ಕುರಿತು ಈಗಾಗಲೇ ಗಮನ ಸೆಳೆದಿದ್ದಾರೆ.

ಇತ್ತ ಜಿಲ್ಲೆಯ ಎಲ್ಲಾ ಪ್ರಮುಖ ಇಲಾಖೆಗಳಿಂದಲೂ ಹಲವು ಯೋಜನೆಗಳಿಗೆ ಪ್ರಸ್ತಾವನೆ ಸಿದ್ಧವಿದ್ದು, ಸಚಿವ ಸಂಪುಟ ಸಭೆಯ ಮುಂದೆ ಚರ್ಚೆಗೆ ಬರಲಿವೆ ಎನ್ನಲಾಗುತ್ತಿದೆ. ಅದರಲ್ಲಿ ಪ್ರಮುಖವಾದ ಯೋಜನೆ, ಕಾರ್ಯಕ್ರಮಗಳಿಗೆ ಅನುಮೋದನೆ ದೊರೆತರೆ ಜಿಲ್ಲೆಯಲ್ಲಿ ಕ್ಯಾಬಿನೆಟ್ ಸಭೆ ಆಯೋಜನೆಗೊಂಡಿದ್ದಕ್ಕೂ ಸಾರ್ಥಕತೆ ದೊರೆಯಲಿದೆ.

> **ರಾಜ್ಯ ಸಚಿವ ಸಂಪುಟ ಸಭೆ ಏ.24ಕ್ಕೆ ಮಲೆ ಮಹದೇಶ್ವರ ಬೆಟ್ಟದಲ್ಲಿಆಯೋಜನೆಗೊಂಡಿದ್ದು, ಜಿಲ್ಲಾಉಸ್ತುವಾರಿ ಸಚಿವರು, ಉಸ್ತುವಾರಿ ಕಾರ್ಯದರ್ಶಿಗಳ ಸೂಚನೆಯಂತೆ ಅಗತ್ಯ ಸಿದ್ಧತೆ ಕೈಗೊಳ್ಳಲಾಗುತ್ತಿದೆ. ಅಂದು ಮಧ್ಯಾಹ್ನ 12ಕ್ಕೆ ಕ್ಯಾಬಿನೆಟ್ ಸಭೆ ಆರಂಭಗೊಳ್ಳಲಿದೆ**
>
> -ಶಿಲ್ಪಾನಾಗ್, ಜಿಲ್ಲಾಧಿಕಾರಿ

## ಮಹಿಳೆ ಸಬಲೆ ಶಾಸಕ ಜಿ.ಟಿ ದೇವೇಗೌಡ

• **ಉದಯವಾಹಿನಿ, ಜಯಪುರ**



ಉದಯವಾಹಿನಿ ಚಿತ್ರ

ಮಹಿಳೆಯರು ಸ್ವ- ಉದ್ಯೋಗ ಮಾಡುವ ಮೂಲಕ ಆರ್ಥಿಕವಾಗಿ ಸಬಲರಾಗಬೇಕು. ಕುಟುಂಬ ನಿರ್ವಹಣೆಗೆ ಆಧಾರವಾಗುವುದರೊಂದಿಗೆ ದೇಶದ ಆರ್ಥಿಕತೆ ಬಲಗೊಳ್ಳುತ್ತದೆ ಎಂದು ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ ದೇವೇಗೌಡ ಹೇಳಿದರು.

ಹೋಬಳಿಯ ಹಾರೋಹಳ್ಳಿ ಗ್ರಾಮದಲ್ಲಿ ಎಸ್.ಪಿ ಎಂಟರ್‌ಪ್ರೈಸಸ್ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಹೊಲಿಗೆ ತರಬೇತಿ ಪಡೆದವರಿಗೆ ಪ್ರಮಾಣ ಪತ್ರ ವಿತರಿಸಿ ಮಾತನಾಡಿದರು. ಮಹಿಳೆಯರು ದುಡಿದರೆ ಸ್ವಾವಲಂಬಿ ಜೀವನ ಸಾಗಿಸಬಹುದು. ಸರ್ಕಾರಗಳು ಯೋಜನೆಗಳನ್ನು ಅನುಷ್ಠಾನಕ್ಕೆ ತಂದು ಗ್ರಾಮಾಂತರ ಪ್ರದೇಶದ ಜನರಿಗೆ ಅನುಕೂಲ ಮಾಡುತ್ತಿವೆ. ಮಹಿಳೆಯು ದುಡಿದು ಕುಟುಂಬವನ್ನು ಆರ್ಥಿಕವಾಗಿ ಬಲಗೊಳಿಸಿ, ಎಲ್ಲಾ ಸೌಲಭ್ಯಗಳನ್ನು ಕಲ್ಪಿಸಬಲ್ಲೆ ಎಂಬ ಗುರಿ ಇಟ್ಟುಕೊಳ್ಳಬೇಕು ಎಂದರು.

ಡಾ.ಬಿ.ಆರ್.ಅಂಬೇಡ್ಕರ್ ಮಹಿಳೆಯರಿಗೆ ವಿಶೇಷ ಸ್ಥಾನಮಾನ, ಸ್ವಾತಂತ್ರ್ಯ ಸಿಗುವಂತೆ ಮಾಡಿದರು. ಗ್ರಾಮಾಂತರ ಪ್ರದೇಶಗಳಲ್ಲಿ ಮಹಿಳೆಯರಿಗೆ ಉದ್ಯೋಗ ಸಿಗುವುದು ಕಷ್ಟ. ಸ್ವಯಂ ಉದ್ಯೋಗಕ್ಕೆ ಬೇಕಾದ ತರಬೇತಿ ಪಡೆದರೆ ಸಾಕು ಎಂದರು. ಎಸ್.ಪಿ ಎಂಟರ್‌ಪ್ರೈಸಸ್‌ನ ಹಾರೋಹಳ್ಳಿ ಸುರೇಶ್, ಪ್ರಿಯಾಂಕ ಸುರೇಶ್, ಗ್ರಾಮ ಪಂಚಾಯಿತಿ ಅಧ್ಯಕ್ಷ ರೇವಣ್ಣ, ನಟರಾಜು, ಅಶೋಕ್, ಕುಮಾರ್ ಹಾಜರಿದ್ದರು.

**ಹಳ್ಳಿಗಳಿಗೆ ನೀರು ಶೀಘ್ರ**

**ಹೋಬಳಿಯ ಪ್ರತಿ ಗ್ರಾಮಕ್ಕೂ ಕಬಿನಿ ಜಲಾಶಯದಿಂದ ನೀರು ಕೊಡಿಸಲಾಗುವುದು ಎಂದು ಜಿ.ಟಿ.ದೇವೇಗೌಡ ಹೇಳಿದರು. 40 ವರ್ಷಗಳ ದೂರದೃಷ್ಟಿ ಇರಿಸಿ ಕಬಿನಿ, ಹಳೆಯ ಉಂಡುವಾಡಿ ಯೋಜನೆಯ ಕಾಮಗಾರಿ ಶುರುವಾಗಿದೆ. ಪ್ರತಿ ಮನೆಗೂ ನೀರು ಒದಗಿಸಲಾಗುವುದು ಎಂದು ಭರವಸೆ ನೀಡಿದರು.**

## ದೇವಾಲಯದ ನೂತನ ದ್ವಾರಬಾಗಿಲು ಲೋಕಾರ್ಪಣೆ

• **ಉದಯವಾಹಿನಿ, ಶಿಡ್ಲಘಟ್ಟ**



ಉದಯವಾಹಿನಿ ಚಿತ್ರ

ತಾಲ್ಲೂಕಿನ ಯಣ್ಣಂಗೂರು ಗ್ರಾಮದಲ್ಲಿ ಸೋಮೇಶ್ವರ, ವೇಣುಗೋಪಾಲ, ಯೋನಾರೇಯಣಯತೀಂದ್ರ ದೇವಾಲಯ ಮಹಾದ್ವಾರದ ಕಳಸ ಕುಂಭಾಭಿಷೇಕ, ಪ್ರಾರಂಭೋತ್ಸವ ನಡೆಯಿತು. ನೂತನ ಹೆಬ್ಬಾಗಿಲು ಬಳಿ ವಿ.ಎನ್.ರಾಮಮೋಹನ್‌ಶಾಸ್ತ್ರಿ ತಂಡದವರಿಂದ ಕಳಸಸ್ಥಾಪನೆ, ಹೋಮ, ಪ್ರತಿಷ್ಟಾಪನಾ ಕಾರ್ಯಕ್ರಮ ಜರುಗಿತು. ಶಾಸಕ ಬಿ.ಎನ್.ರವಿಕು ಮಾರ್ ನಾಮಫಲಕ ಅನಾವರಣಗೊಳಿಸಿದರು.

ಪುರಾತನ ಪರಂಪರೆ, ಇತಿಹಾಸವಿರುವ ಭಾರತೀಯರ ಧಾರ್ಮಿಕ ಸಂಸ್ಕೃತಿಯನ್ನು ಉಳಿಸಿ ಯುವಪೀಳಿಗೆಯಲ್ಲಿ ನೈತಿಕ ಮೌಲ್ಯ ಬೆಳೆಸುವ ಕಾರ್ಯವಾಗಬೇಕಿದೆ ಎಂದು ಶಾಸಕ ಬಿ.ಎನ್.ರವಿಕುಮಾರ್ ಹೇಳಿದರು. ರಾಜ್ಯದಲ್ಲಿಯೇ ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರ ಹಿಂದುಳಿದ ಭಾಗವಾಗಿತ್ತು. ಕಳೆದ ಒಂದು ವರ್ಷದಿಂದ ಕ್ಷೇತ್ರದ ಎಲ್ಲಾ ಭಾಗಗಳಲ್ಲಿಯೂ ಅಭಿವೃದ್ಧಿ ಕಾರ್ಯಗಳಾಗುತ್ತಿವೆ. ಹೈಟೆಕ್ ರೇಷ್ಮೆಗೂಡು ಮಾರುಕಟ್ಟೆ, ಡಾ.ಬಿ.ಆರ್.ಅಂಬೇಡ್ಕರ್ ಭವನ, ನೌಕರರ ಭವನ, ಗುರುಭವನದ ಕಾರ್ಯಗಳು ಪ್ರಗತಿಯಲ್ಲಿವೆ ಎಂದರು. ಬೆಂಗಳೂರು ಗ್ರಾಮಾಂತರ ಜಿಲ್ಲಾ ಶರಣಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷ ಎಚ್.ಎಸ್.ರುದ್ರೇಶಮೂರ್ತಿ ಮಾತನಾಡಿ, ಯಣ್ಣಂಗೂರು ಗ್ರಾಮಕ್ಕೆ ಇತಿಹಾಸವಿದ್ದು ಕೈವಾರ ಯೋಗಿನಾರೇಯಣ ಯತೀಂದ್ರರು ಇಲ್ಲಿ ಸಂಚರಿಸಿದ್ದಾರೆ ಎಂದರು.

ತಾಲ್ಲೂಕು ಬಿಜೆಪಿ ಅಧ್ಯಕ್ಷ ಸೀಕಲ್ ಆನಂದಗೌಡ, ಬಂಕ್ ಮುನಿಯಪ್ಪ, ಕೆ.ಮಂಜುನಾಥ್, ಸಿ.ವಿ.ನಾರಾಯಣಸ್ವಾಮಿ, ತಾದೂರು ರಘು, ಕೆ.ಲಕ್ಷ್ಮಿನಾರಾಯಣರೆಡ್ಡಿ, ಹುಜಗೂರು ರಾಮಯ್ಯ, ಶ್ರೀನಿವಾಸಗೌಡ, ದ್ಯಾವಮ್ಮ ಕೆಂಪಣ್ಣ, ಶ್ವೇತಾ, ಪಿಳ್ಳಣ್ಣ, ಕುಶಾಂತ್ ರಾಜ್ ಗೌಡ ಇನ್ನಿತರರಿದ್ದರು.

## ಆಗಮಿಸಿರುವ ವಲಸೆ ನೌಕರರ ಮಾಹಿತಿಗೆ ಆಗ್ರಹ

### ಬಿಡದಿ ಕೈಗಾರಿಕಾ ಪ್ರದೇಶದಲ್ಲಿ 10 ಸಾವಿರಕ್ಕೂ ಹೆಚ್ಚು ಹೊರರಾಜ್ಯದ ವಲಸೆ ನೌಕರರು

• **ಉದಯವಾಹಿನಿ, ರಾಮನಗರ**

ರಾಜ್ಯದ ಪ್ರಮುಖ ಕೈಗಾರಿಕಾ ಪ್ರದೇಶ, ಬಿಡದಿ ಕೈಗಾರಿಕಾ ಪ್ರದೇಶದಲ್ಲಿ ಹೊರ ರಾಜ್ಯಗಳಿಂದ ಆಗಮಿಸಿರುವ ವಲಸೆ ನೌಕರರ ಮಾಹಿತಿ ಸಂಗ್ರಹಣೆಗೆ ಆಗ್ರಹ ಕೇಳಿಬರುತ್ತಿದೆ. ಬಿಡದಿ ಕೈಗಾರಿಕಾ ಪ್ರದೇಶದಲ್ಲಿ ಉತ್ತರ ಪ್ರದೇಶ, ಅಸ್ಸಾಂ, ಬಿಹಾರ್ ಸೇರಿದಂತೆ ಉತ್ತರ ಭಾರತದ ಯುವಕರು ಹೊರಗುತ್ತಿಗೆ ಆಧಾರದ ಮೇಲೆ ಕಾರ್ಮಿಕರಿಗಾಗಿ ಕೆಲಸ ನಿರ್ವಹಿಸುತ್ತಿದ್ದಾರೆ. ಇತ್ತೀಚೆಗೆ ಹುಬ್ಬಳ್ಳಿ ಯಲ್ಲಿ 5 ವರ್ಷದ ಬಾಲಕಿಯ ಪ್ರಕರಣದ ಬಳಿಕ ಬಿಡದಿ ಕೈಗಾರಿಕಾ ಪ್ರದೇಶದಲ್ಲಿಯೂ ಕಾನೂನು ಸುವ್ಯವಸ್ಥೆ ಬಗ್ಗೆ ಆತಂಕ ವ್ಯಕ್ತವಾಗಿದ್ದು, ಈ ಸಂಬಂಧ ಬಿಡದಿ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಗಾಣಕಲ್ ನಟರಾಜು ಪೊಲೀಸರಿಗೆ ಮನವಿ ಮಾಡಿದ್ದಾರೆ.

**ಏನಾಗಿದೆ?:** ಬಿಡದಿ ಕೈಗಾರಿಕಾ ಪ್ರದೇಶದಲ್ಲಿ ವ್ಯಾಪ್ತಿಯಲ್ಲಿ 100 ಕ್ಕೂ ಹೆಚ್ಚು ಕಾರ್ಖಾನೆ ಹಾಗೂ ಇತರೆ ಸಣ್ಣ ಕೈಗಾರಿಕೆಯಲ್ಲಿ ಸುಮಾರು 10,000 ಕ್ಕೂ ಹೆಚ್ಚು ಗುತ್ತಿಗೆ ಆಧಾರದ ಮೇಲೆ ಬಿಹಾರ್, ಅಸ್ಸಾಂ, ಉತ್ತರಪದೇಶ, ಮಣಿಪುರ ಮುಂತಾದ ರಾಜ್ಯಗಳ ಕಾರ್ಮಿಕರು ಹೊರಗುತ್ತಿಗೆ ಆಧಾರದ ಕೆಲಸ ನಿರ್ವಹಿಸಿತ್ತಿದ್ದಾರೆ. ಇವರುಗಳಿಗೆ ಬಿಡದಿ ಪಟ್ಟಣ, ಮೇಡನಹಳ್ಳಿ, ಅಬ್ಬನಕುಪ್ಪೆ, ಗೊಲ್ಲರಪಾಳ್ಯ ಶ್ಯಾನುಮಂಗಲ, ಬಿಲ್ಲಿಕೆಂಪನಹಳ್ಳಿ, ರಂಗೇಗೌಡನದೊಡ್ಡಿ, ಭತ್ರ -ಭಾರೆದೊಡ್ಡಿ, ಬಾನಂದೂರು, ಗೊಲ್ಲಹಳ್ಳಿ, ಲಕ್ಷ್ಮೀಸಾಗರ, ಹನುಮಂತನಗರ, ಮಂಚನಾಯಕನ ಹಳ್ಳಿ, ಶೇಷಗಿರಿಹಳ್ಳಿ, ಎಸ್.ವಿ.ಟಿ ಕಾಲೊನಿ, ಹೆಜ್ಜಾಲ, ಜಡೇನಹಳ್ಳಿ, ವಾಜರಹಳ್ಳಿ, ಬಿಡದಿ ಪುರಸಭೆ ವ್ಯಾಪ್ತಿಯ ಗ್ರಾಮಗಳಲ್ಲಿ ಬಾಡಿಗೆ ಪಡೆದು ವಾಸ ಮಾಡುತ್ತಿದ್ದಾರೆ.



ಉದಯವಾಹಿನಿ ಚಿತ್ರ

**ಗ್ರಾಮಸ್ಥರಲ್ಲಿ ಸುರಕ್ಷತೆ ಆತಂಕ**

**ಮಾಹಿತಿಯೇ ಇಲ್ಲ:** ಇನ್ನು ಉತ್ತರ ಭಾರತದ ಕಾರ್ಮಿಕರಿಗೆ ಬಾಡಿಗೆ ನೀಡುವ ಸ್ಥಳೀಯ ಮಾಲೀಕರು ಅವರ ಬಳಿ ಗುರುತಿನ ಚೀಟಿಯಾಗಲಿ, ಆಧಾರ್ ಕಾರ್ಡ್ ಸೇರಿದಂತೆ ಯಾವುದೇ ರೀತಿಯ ಮಾಹಿತಿ ಪಡೆದುಕೊಳ್ಳುವುದಿಲ್ಲ. ಹಾಗಾಗಿ ಸ್ಥಳೀಯ ಮಟ್ಟದಲ್ಲಿ ಅಕ್ರಮ ಚಟುವಟಿಕೆಗಳಲ್ಲಿ ಭಾಗಿಯಾದರೂ ಅವರ ಬಗ್ಗೆ ಮಾಹಿತಿ ಲಭಿಸುತ್ತಿಲ್ಲ.

**ಪಾಳಿಯಲ್ಲಿ ಮನೆ ಬಳಕೆ**

**ಈ ತನಕ ನಾವು ಪಾಳಿಯಲ್ಲಿ ಕಚೇರಿ, ಕಾರ್ಖಾನೆಯಲ್ಲಿ ಕೆಲಸ ನಿರ್ವಹಿಸಿದ್ದನ್ನು ಕೇಳಿದ್ದೇವೆ, ಕಂಡಿದ್ದೇವೆ. ಆದರೆ, ಬಿಡದಿ ಕೈಗಾರಿಕಾ ಪ್ರದೇಶದಲ್ಲಿ ಬಾಡಿಗೆ ಮನೆಯನ್ನು ಪಾಳಿಯ ರೀತಿಯಲ್ಲಿ ಬಳಕೆ ಮಾಡಲಾಗುತ್ತಿದೆ. ಸ್ಥಳೀಯರಿಂದ ಬಾಡಿಗೆ ಪಡೆಯುವ ಉತ್ತರ ಭಾರತದ ಯುವಕರು, ಪ್ರತಿ ಮನೆಗಳಲ್ಲಿ 10 ರಿಂದ 30 ಜನ ಪಾಳಿ ವ್ಯಾಪ್ತಿಯಲ್ಲಿ ವಸತಿ ಪಡೆದು ಕೆಲಸಕ್ಕೆ ಹೋಗಿ ಬರುತ್ತಿದ್ದಾರೆ. ಕೆಲವು ಕಾರ್ಖಾನೆಗಳು ಒಟ್ಟಿಗೆ ಕಾರ್ಮಿಕರನ್ನು ಕರೆ ತಂದು ಬಾಡಿಗೆ ಮನೆಗಳಲ್ಲಿ ಇಡುತ್ತಿದ್ದಾರೆ. ಹೆಚ್ಚಿನವರು ಯುವಕರಾಗಿದ್ದು, ಬಿಡದಿಯ ಸುತ್ತಮುತ್ತ 24 ಗಂಟೆಗಳು ತಿರುಗಾಡುತ್ತಿರುವುದನ್ನು ಸ್ಥಳೀಯರು ಗಮನಿಸಿದ್ದಾರೆ. ಒಂದು ಬಾಡಿಗೆ ಮನೆಯಲ್ಲಿ ಮೂರು ತಂಡವನ್ನು ರಚಿಸಿಕೊಳ್ಳಲಾಗುತ್ತದೆ. ಈ ಪೈಕಿ ತಂಡ ಮನೆಯಲಿ ಇದ್ದುಕೊಂಡು ವಿಶ್ರಾಂತಿ ಪಡೆದರೆ, ಇನ್ನೊಂದು ತಂಡ ಕೆಲಸಕ್ಕಾಗಿ ಕಾರ್ಖಾನೆಗೆ ತೆರಳುತ್ತದೆ.**

**ಆತಂಕಕ್ಕೆ ಕಾರಣ:** ಯುವಕರ ವರ್ತನೆಗಳು, ಸ್ಥಳೀಯ ನಿವಾಸಿಗಳಲ್ಲಿ ಆತಂಕಕ್ಕೆ ಕಾರಣವಾಗಿದೆ. ದಿನದ 24ಗಂಟೆಯು ಬಿಡದಿ ಸುತ್ತಮುತ್ತಲಿನ ಗ್ರಾಮದಲ್ಲಿ ಉತ್ತರ ಭಾರತದ ಯುವಕರ ಕಾರುಬಾರು ಕಂಡು ಬರುತ್ತಿದೆ. ಸ್ಥಳೀಯ ಬಾಡಿಗೆದಾರರು ಹೆಚ್ಚಿನ ಹಣದ ಆಸೆಗೆ ಒಂದು ಮನೆಗೆ 30 ಮಂದಿಗೆ ಬಾಡಿಗೆ ನೀಡಿದ್ದಾರೆ ಎಂಬ ಮಾತು ಕೇಳಿ ಬರುತ್ತಿದೆ. ಬಾಡಿಗೆಗೆ ನೆಲೆಸಿರುವ ಪ್ರತಿಯೊಬ್ಬರಿಂದ ಕನಿಷ್ಠ 1 ಸಾವಿರ ಬಾಡಿಗೆ ವಸೂಲಿ ಮಾಡಲಾಗುತ್ತಿದೆ.

**ಮಾಹಿತಿ ದಾಖಲಿಸಲು ಆಗ್ರಹ:** ಬಿಡದಿ ಕೈಗಾರಿಕಾ ಪ್ರದೇಶದಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಕಾರ್ಮಿಕರು, ಕಾರ್ಖಾನೆಯ ಮಾಲೀಕರು, ಬಾಡಿಗೆಗೆ ಮನೆ ನೀಡಿರುವ ಮಾಲೀಕರನ್ನು ಪೊಲೀಸರು ಸೂಕ್ತ ಕಾನೂನಿನ ಎಚ್ಚರಿಕೆ ನೀಡಬೇಕೆಂಬ ಆಗ್ರಹ ಕೇಳಿ ಬರುತ್ತಿದೆ.

**ಮಕ್ಕಳ ಭವಿಷ್ಯದ ಚಿಂತೆ:** ಬಿಡದಿಯ ನಾಗರಿಕರು – ಪೋಷಕರಲ್ಲಿ ತಮ್ಮ ಮಕ್ಕಳ ಭವಿಷ್ಯದ ಬಗ್ಗೆ ಭಯ ಶುರುವಾಗಿದೆ. ಬೇಸಿಗೆ ರಜೆ ಇರುವುದರಿಂದ ಮಕ್ಕಳು ಶಾಲೆಗೆ ಹೋಗದೇ ಮನೆಯಲ್ಲಿ ಇರುವುದರಿಂದ ಮಕ್ಕಳನ್ನು ಹೇಗೇ ನೋಡಿಕೊಳ್ಳಬೇಕು ಎಂಬುವುದರ ಬಗ್ಗೆ ಚಿಂತೆಯಾಗಿದೆ.

**ಮಾಹಿತಿ ನೀಡಬೇಕಿತ್ತು:** ಸರಕಾರ ಅಕ್ರಮ ವಲಸಿಗರನ್ನು ತಡೆಯುವ ಸಂಬಂಧ ಈ ಹಿಂದೆ ಮನೆ ಬಾಡಿಗೆ ನೀಡುವ ಮಾಲೀಕರು ಕಡ್ಡಾಯವಾಗಿಸ್ಥಳೀಯ ಪೊಲೀಸ್ ಠಾಣೆಯಲ್ಲಿಈ ಬಗ್ಗೆ ಮಾಹಿತಿ ನೀಡಬೇಕು. ಈ ವೇಳೆ ಅವರ ಆಧಾರ್ ಕಾರ್ಡ್, ಗುರುತಿನ ಚೀಟಿ ಪಡೆಯಬೇಕಿತ್ತು. ಈ ನಿಯಮವೂ ಕೇವಲ ಕಾಗದದಲ್ಲಿಯೇ ಉಳಿದುಕೊಂಡಿದೆ.

> **ಬಿಡದಿ ಕೈಗಾರಿಕಾ ಪ್ರದೇಶದಲ್ಲಿ ಕೆಲಸ ನಿರ್ವಹಿಸುತ್ತಿರುವ ಕಾರ್ಮಿಕರ ಐಡಿ ಕಾರ್ಡ್, ಮನೆ ವಿಳಾಸದ ಕಾರ್ಡ್ ತಮ್ಮ ಪೊಲೀಸ್ ಇಲಾಖೆಯ ಬೀಟ್ ವ್ಯವಸ್ಥೆಯನ್ನು ಹೆಚ್ಚಿಸಬೇಕು**
>
> **-ಗಾಣಕಲ್ ನಟರಾಜು, ಅಧ್ಯಕ್ಷ, ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ.**

## ಮಿನಿ ನ್ಯೂಸ್

### ಶೀಲದ ಮೇಲೆ ಶಂಕೆ, ತಲೆ ಮೇಲೆ ಕಲ್ಲು ಎತ್ತಿಹಾಕಿ ಪತ್ನಿಯನ್ನು ಕೊಂದ ಪತಿ

• **ಉದಯವಾಹಿನಿ, ಮಂಡ್ಯ**

ಪತ್ನಿಯ ಶೀಲ ಶಂಕಿಸಿ ಪತಿಯೇ ಕೊಲೆ ಮಾಡಿರುವ ಘಟನೆ ಶ್ರೀರಂಗಪಟ್ಟಣ ಟೌನ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಮಂಡ್ಯದ ಬಾಬುರಾಯನ ಕೊಪ್ಪಲು ಗ್ರಾಮದ ನಿವಾಸಿ ಸೌಮ್ಯ (32) ಕೊಲೆಯಾದ ನತದೃಷ್ಟೆ. ಸೌಮ್ಯ ಚಂದ್ರ ದಂಪತಿ ನಡುವೆ ಆಗಾಗ್ಗೆ ಜಗಳವಾಗುತ್ತಲೇ ಇತ್ತು. ಸೌಮ್ಯ ಶೀಲ ಶಂಕಿಸಿ ಹಲವಾರು ಬಾರಿ ಮನೆಯಲ್ಲಿ ಗಲಾಟೆ ಮಾಡುತ್ತಿದ್ದನು. ರಾತ್ರಿ ಅದೇ ವಿಚಾರಕ್ಕೆ ಜಗಳ ನಡೆದಿದ್ದು, ಆ ವೇಳೆ ಕೋಪದಲ್ಲಿ ಕೈಗೆ ಸಿಕ್ಕಿದ ಕಲ್ಲನ್ನು ತೆಗೆದುಕೊಂಡು ಸೌಮ್ಯ ತಲೆ ಮೇಲೆ ಎತ್ತಿಹಾಕಿ ಭೀಕರವಾಗಿ ಕೊಲೆ ಮಾಡಿದ್ದಾನೆ. ಸುದ್ದಿ ತಿಳಿದು ಶ್ರೀರಂಗಪಟ್ಟಣ ಟೌನ್ ಠಾಣೆ ಪೊಲೀಸರು ಸ್ಥಳಕ್ಕೆ ಬಂದು ಪರಿಶೀಲನೆ ನಡೆಸಿ ಆರೋಪಿ ಚಂದ್ರನನ್ನು ಬಂಧಿಸಿ ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮಕೈಗೊಂಡಿದ್ದಾರೆ.

### ಶ್ರೀಗಂಧ ಮರಗಳ ಕಳ್ಳತನ ಮೂವರು ಆರೋಪಿಗಳ ಬಂಧನ

• **ಉದಯವಾಹಿನಿ, ಮಾಗಡಿ**

ತಾಲ್ಲೂಕಿನ ಮಾಡಬಾಳ್ ಹೋಬಳಿಯ ಸೋಮಕ್ಕನ ಮಠ ಗ್ರಾಮದಲ್ಲಿ ಬೆಳೆದಿದ್ದ ಸುಮಾರು 2000 ಶ್ರೀಗಂಧ ಮರಗಳನ್ನು ಕಡಿದು, ಕಳ್ಳತನ ಮಾಡಿದ್ದ ಮೂವರು ಆರೋಪಿಗಳನ್ನು ಮಾಗಡಿ ಪೊಲೀಸರು ಬಂಧಿಸಿದ್ದಾರೆ. ಕುಮಾರ್ (34), ಶಂಕರ್ (28), ಮಹೇಶ್ (40) ಬಂಧಿತ ಆರೋಪಿಗಳು. ಇವರು ಕೂಲಿ ಕೆಲಸ ಮಾಡುತ್ತಿದ್ದು, ರಾಮನಗರ ತಾಲ್ಲೂಕಿನ ಇರುಳಿಗರದೊಡ್ಡಿ, ಯರೇಹಳ್ಳಿ ಗ್ರಾಮದ ನಿವಾಸಿಗಳಾಗಿದ್ದಾರೆ. ಆರೋಪಿಗಳಿಂದ ಪೊಲೀಸರು 82 ಸಾವಿರ ಮೌಲ್ಯದ ಎರಡು ದ್ವಿಚಕ್ರ ವಾಹನ ಹಾಗೂ 23.5 ಕೆ.ಜಿ ತೂಕದ ಶ್ರೀಗಂಧವನ್ನು ವಶಪಡಿಸಿಕೊಂಡಿದ್ದಾರೆ. ಆರೋಪಿಗಳು ಮದ್ಯಪಾನ ಹಾಗೂ ಮೋಜಿನ ಜೀವನ ನಡೆಸಲು ಈ ಕಳ್ಳತನ ಮಾಡಿರುವುದಾಗಿ ವಿಚಾರಣೆ ವೇಳೆ ಒಪ್ಪಿಕೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಜಮೀನು ಮಾಲೀಕರಾದ ಪಂಚಲಿಂಗಯ್ಯ ಹಾಗೂ ಮಹಲಿಂಗಯ್ಯ ಅವರು ತಮ್ಮ 12 ಎಕರೆ ಜಮೀನಿನಲ್ಲಿ ಕಳೆದ ಹತ್ತು ವರ್ಷಗಳಿಂದ 4 ಸಾವಿರಕ್ಕೂ ಹೆಚ್ಚು ಶ್ರೀಗಂಧ ಮರಗಳನ್ನು ಬೆಳೆಸಿದ್ದಾರೆ. ಏ.11ರಂದು ಸಂಜೆ ತೋಟಕ್ಕೆ ನುಗ್ಗಿದ ಕಳ್ಳರು ಸುಮಾರು 2 ಸಾವಿರ ಸ್ತ್ರೀಗಂಧ ಮರಗಳನ್ನು ಕತ್ತರಿಸಿದ್ದಾರೆ. ಈ ಬಗ್ಗೆ ಪಂಚಲಿಂಗಯ್ಯ ಮಾಗಡಿ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಈ ದೂರಿನ ಮೇರೆಗೆ ಪೊಲೀಸರು ತನಿಖೆ ಕೈಗೊಂಡು ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

### ಚನ್ನಪಟ್ಟಣ ಪ್ರಯಾಣಿಕರ ಚಿನ್ನದ ಸರ ಮರಳಿಸಿದ ಚಾಲಕ, ನಿರ್ವಾಹಕ

• **ಉದಯವಾಹಿನಿ, ಚನ್ನಪಟ್ಟಣ**

ಸರ್ಕಾರಿ ಬಸ್ಸಿನ ಒಳಗೆ ಸಿಕ್ಕ ಚಿನ್ನದ ಸರವೊಂದನ್ನು ಬಸ್ಸಿನ ಚಾಲಕ, ನಿರ್ವಾಹಕರು ಪೊಲೀಸರಿಗೆ ಒಪ್ಪಿಸಿ ಪ್ರಶಂಸೆಗೆ ಪಾತ್ರರಾಗಿದ್ದಾರೆ. ಚನ್ನಪಟ್ಟಣದಿಂದ ಕಬ್ಬಾಳು ಮಾರ್ಗವಾಗಿ ಚಲಿಸುವ ಸರ್ಕಾರಿ ಬಸ್ಸಿನಲ್ಲಿ 20 ಗ್ರಾಂ ತೂಕದ ಚಿನ್ನದ ಸರ ದೊರೆತಿದ್ದು, ಇದನ್ನು ಬಸ್ಸಿನ ಚಾಲಕ ಶೇಖರ್, ನಿರ್ವಾಹಕ ಶಿವಪ್ಪ ವಾಲೀಕಾರ್ ಅವರು ಪುರ ಠಾಣೆ ಸರ್ಕಲ್ ಇನ್‌ಸ್ಪೆಕ್ಟರ್ ರವಿಕಿರಣ್ ಅವರಿಗೆ ತಂದೊಪ್ಪಿಸಿದ್ದಾರೆ. ಬೆಂಗಳೂರಿನ ಯಲಹಂಕ ನಿವಾಸಿ ಗಣೇಶ್ ಅವರು ಬುಧವಾರ ಕಬ್ಬಾಳು ಕ್ಷೇತ್ರಕ್ಕೆ ಹೋಗಿ ಚನ್ನಪಟ್ಟಣಕ್ಕೆ ವಾಪಸ್ ಬರಲು ಸರ್ಕಾರಿ ಬಸ್ಸಿನಲ್ಲಿ ಪ್ರಯಾಣಿಸಿದ್ದರು. ಆಗ ಚಿನ್ನದ ಸರ ಕಳೆದುಕೊಂಡಿದ್ದಾರೆ. ಈ ಬಗ್ಗೆ ಗಣೇಶ್ ಅವರು ಪ್ರಯಾಣಿಕರನ್ನು ವಿಚಾರಣೆ ಮಾಡಿದರೂ ಪ್ರಯೋಜನವಾಗಿರಲಿಲ್ಲ. ಹಾಗಾಗಿ ಚನ್ನಪಟ್ಟಣ ಪುರ ಪೊಲೀಸ್ ಠಾಣೆಗೆ ದೂರು ನೀಡಿದ್ದರು.

ಪ್ರಯಾಣಿಕರಲ್ಲೂ ಇಳಿದು ಹೋದ ಸ್ವಲ್ಪ ಹೊತ್ತಿನ ನಂತರ ಚಾಲಕ ಹಾಗೂ ನಿರ್ವಾಹಕರು ಬಸ್ಸಿನಲ್ಲಿ ತಪಾಸಣೆ ನಡೆಸಿದಾಗ ಚಿನ್ನದ ಸರ ಸಿಕ್ಕಿದೆ. ಅದನ್ನು ಪುರ ಪೊಲೀಸ್ ಠಾಣೆ ಸರ್ಕಲ್ ಇನ್‌ಸ್ಪೆಕ್ಟರ್‌ಗೆ ತಂದೊಪ್ಪಿಸಿದ್ದಾರೆ. ಪೊಲೀಸರು, ಗಣೇಶ್ ಅವರನ್ನು ಠಾಣೆಗೆ ಕರೆಸಿ ಅವರಿಗೆ ಒಪ್ಪಿಸಿದರು. ಚಿನ್ನದ ಸರ ತಂದೊಪ್ಪಿಸಿದ ಚಾಲಕ ಹಾಗೂ ನಿರ್ವಾಹಕರನ್ನು ಠಾಣೆಗೆ ಕರೆಸಿ ಸನ್ಮಾನಿಸಿದ್ದಾರೆ. ಸಬ್ ಇನ್‌ಸ್ಪೆಕ್ಟರ್ ಉಷಾನಂದಿನಿ, ಸಿಬ್ಬಂದಿ ವರದರಾಜು ಹಾಜರಿದ್ದರು.

### ಹನಿಟ್ರ್ಯಾಪ್‌ಗೆ ಹೊಸ ತಿರುವು ಬಿಜೆಪಿ ಮುಖಂಡನ ವಿರುದ್ಧ ಪ್ರಕರಣ

• **ಉದಯವಾಹಿನಿ, ತುಮಕೂರು**

ಗುಬ್ಬಿ ಪಟ್ಟಣ ಪಂಚಾಯಿತಿ ಸದಸ್ಯ, ಮಾಜಿ ಅಧ್ಯಕ್ಷ ಜಿ.ಎನ್. ಅಣ್ಣಪ್ಪಸ್ವಾಮಿ ಮೇಲಿನ ಮಧುಬಾಲೆ ಯತ್ನ ಪ್ರಕರಣ ಹೊಸತಿರುವು ಪಡೆದುಕೊಂಡಿದೆ. ಪ್ರಕರಣದಲ್ಲಿ ಬಂಧನಕ್ಕೆ ಒಳಗಾಗಿದ್ದ ಯುವತಿ ಇದೀಗ ಮಹಿಳಾ ಠಾಣೆ ಮೆಟ್ಟಿಲು ಹತ್ತಿದ್ದಾರೆ. ಅಣ್ಣಪ್ಪ ಸ್ವಾಮಿ ಮದುವೆ ಮಾಡಿಕೊಳ್ಳುವುದಾಗಿ ನಂಬಿಸಿ ವಂಚಿಸಿದ್ದಾರೆ. ಪಾರ್ಕ್, ದೇವಸ್ಥಾನ ಇತರೆ ಕಡೆಗಳಲ್ಲಿ ಸುತ್ತಾಡಿ ಮೋಸ ಮಾಡಿದ್ದಾರೆ' ಎಂದು ದೂರು ನೀಡಿದ್ದು ಪ್ರಕರಣ ದಾಖಲಾಗಿದೆ.

ಫೇಸ್‌ಬುಕ್‌ನಲ್ಲಿ ಪರಿಚಯವಾದ ಯುವತಿ ಸಲುಗೆ ಬೆಳೆಸಿದ್ದರು. ಮದುವೆಯಾಗುವಂತೆ ಪೀಡಿಸುತ್ತಿದ್ದರು. ಹಲವು ಕಡೆಗಳಲ್ಲಿ ಲಾಡ್ಜ್‌ಗೆ ಬರುವಂತೆ ಒತ್ತಾಯಿಸಿದ್ದರು. ವಿಡಿಯೊ ಚಾಟ್‌ಗಳನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡು ಮರ್ಯಾದೆ ಕಳೆಯುವುದಾಗಿ ಹೆದರಿಸಿದ್ದರು. ಹಣಕ್ಕಾಗಿ ಒತ್ತಾಯಿಸುತ್ತಿದ್ದಾರೆ ಎಂದು ಅಣ್ಣಪ್ಪಸ್ವಾಮಿ ಮಾರ್ಚ್ 10ರಂದು ಗುಬ್ಬಿ ಠಾಣೆಯಲ್ಲಿ ದೂರು ನೀಡಿದ್ದರು.

### ಮಳೆ-ಗಾಳಿಗೆ ಹಾರಿ ಹೋದ ಶೀಟ್

• **ಉದಯವಾಹಿನಿ, ಗುಬ್ಬಿ**

ತಾಲ್ಲೂಕಿನ ನಿಟ್ಟೂರು ಹೋಬಳಿ ವಿರೂಪಾಕ್ಷಿಪುರ ಗ್ರಾಮದಲ್ಲಿ ಮಳೆ, ಗಾಳಿಯ ರಭಸಕ್ಕೆ ಮನೆಯ ಚಾವಣಿ ಶೀಟ್‌ಗಳು ಹಾರಿಹೋಗಿ ಕುಟುಂಬವು ರಾತ್ರಿ ಇಡೀ ಮಳೆಯಲ್ಲಿಯೇ ಕಳೆಯುವಂತಾಯಿತು. ಮಳೆಯಿಂದಾಗಿ ಮನೆಯಲ್ಲಿ ನೀರು ನಿಂತು ದವಸ, ಧಾನ್ಯ, ಬಟ್ಟೆ-ಬರೆಗಳು ಮಳೆಯಲ್ಲಿ ತೋಯ್ದು ಹೋದವು.

ಊರಿನ ಹೊರಭಾಗದ ಜಮೀನಿನಲ್ಲಿ ಮನೆ ಕಟ್ಟಿಕೊಂಡಿದ್ದ ರೈತ ಈಶ್ವರಪ್ಪ ಅವರ ಕುಟುಂಬವು ಈ ಅನಿರೀಕ್ಷಿತ ಘಟನೆಯಿಂದ ಕಂಗಾಲಾಗಿದ್ದಾರೆ. ಪೂರ್ವ ಮುಂಗಾರು ಮಳೆ ಪ್ರಾರಂಭವಾಗುತ್ತಿರುವುದರಿಂದ ತಕ್ಷಣ ಮನೆ ದುರಸ್ತಿಗೊಳಿಸಿಕೊಳ್ಳಬೇಕಿದೆ. ಪ್ರಾಕೃತಿಕ ವಿಪತ್ತು ಪರಿಹಾರದ ಅಡಿಯಲ್ಲಿ ತಾಲೂಕು ಆಡಳಿತ ಶೀಘ್ರ, ಪರಿಹಾರ ಒದಗಿಸಿದಲ್ಲಿ ಮನೆ ದುರಸ್ತಿ ಮಾಡಿಕೊಂಡು ರಕ್ಷಣೆ ಪಡೆದುಕೊಳ್ಳಲು ಸಾಧ್ಯ ಎಂದು ಈಶ್ವರಪ್ಪ ಅಳಲು ತೋಡಿಕೊಂಡರು. ಕಂದಾಯ ಅಧಿಕಾರಿಗಳು ಸ್ಥಳಕ್ಕೆ ತೆರಳಿ ಪರಿಶೀಲಿಸಿ, ಕ್ರಮ ಕೈಗೊಳ್ಳುವುದಾಗಿ ತಿಳಿಸಿದ್ದಾರೆ.

ಅಂತರಾಳದಿಂದ...
EDITORIAL


# ಯುಪಿಐ ವ್ಯವಸ್ಥೆಯಲ್ಲಿ ಅಡಚಣೆ; ಗಳಿಸಿರುವ ಖ್ಯಾತಿಗೆ ಚ್ಯುತಿ ಆಗಬಾರದು




ದೇಶದಲ್ಲಿ ಜನಪ್ರಿಯವಾಗಿರುವ ಏಕೀಕೃತ ಪಾವತಿ ವ್ಯವಸ್ಥೆಯು (ಯುಪಿಐ) ಈ ತಿಂಗಳಲ್ಲಿ ಮೂರು ಬಾರಿ ಕೈಕೊಟ್ಟಿತ್ತು. ಇದರ ಪರಿಣಾಮವಾಗಿ, ಹಣ ಪಾವತಿ ಮಾಡುವ ಸಂದರ್ಭದಲ್ಲಿ ಜನಸಾಮಾನ್ಯರು, ವರ್ತಕರು ಫಜೀತಿಗೆ ಒಳಗಾಗಿದ್ದರು. ಸಣ್ಣ ವ್ಯಾಪಾರ ಮಳಿಗೆಗಳಲ್ಲಿ ಗೊಂದಲವು ಹೆಚ್ಚು ತೀವ್ರವಾಗಿತ್ತು. ಹಣ ಪಾವತಿ ಸಾಧ್ಯವಾಗದೆ ವರ್ತಕರು ಮತ್ತು ಗ್ರಾಹಕರು ಕೆಲವು ತಾಸುಗಳವರೆಗೆ ಸಮಸ್ಯೆಗೆ ಸಿಲುಕಿದ್ದರು. ಹಿಂದಿನ ವರ್ಷದಲ್ಲಿ ಯುಪಿಐ ವ್ಯವಸ್ಥೆಯಲ್ಲಿ ಆರು ಬಾರಿ, ಕಳೆದ ಐದು ವರ್ಷಗಳಲ್ಲಿ 21 ಬಾರಿ ಸಮಸ್ಯೆ ಎದುರಾಗಿತ್ತು. ಯುಪಿಐ ವ್ಯವಸ್ಥೆಯನ್ನು ನಿರ್ವಹಣೆ ಮಾಡುವ ರಾಷ್ಟ್ರೀಯ ಪಾವತಿ ನಿಗಮವು (ಎನ್‌ಪಿಸಿಐ) ಕೆಲವೇ ತಾಸುಗಳಲ್ಲಿ ಸಮಸ್ಯೆಯನ್ನು ಪರಿಹರಿಸಿತಾದರೂ ಲಕ್ಷಾಂತರ ಮಂದಿ ಬಳಕೆದಾರರಿಗೆ ತೊಂದರೆ ಆಗಿತ್ತು. ಆನ್‌ಲೈನ್ ವಹಿವಾಟಿನಲ್ಲಿ ಶೇ 65ರಷ್ಟು ಈ ವ್ಯವಸ್ಥೆಯ ಮೂಲಕವೇ ಆಗುತ್ತಿದೆ. ಮಾರ್ಚ್ ತಿಂಗಳಲ್ಲಿ ಈ ವ್ಯವಸ್ಥೆಯ ಮೂಲಕ 1,800 ಕೋಟಿಗೂ ಹೆಚ್ಚು ವಹಿವಾಟುಗಳು ನಡೆದಿವೆ. ಇದು ಹಿಂದಿನ ತಿಂಗಳಲ್ಲಿ ಆಗಿದ್ದ ವಹಿವಾಟಿನ ಸಂಖ್ಯೆಗೆ ಹೋಲಿಸಿದರೆ ಶೇಕಡ 14ರಷ್ಟು ಹೆಚ್ಚು. 2016ರಲ್ಲಿ ಆರಂಭವಾದ ಯುಪಿಐ, ಭಾರತವು ಹೆಮ್ಮೆಯಿಂದ ಹೇಳಿಕೊಳ್ಳುವ ವ್ಯವಸ್ಥೆಗಳಲ್ಲಿ ಒಂದು. ನೋಟು ರದ್ದತಿಯ ಸಂದರ್ಭದ ಸವಾಲುಗಳು, ಕೋವಿಡ್ ಸಾಂಕ್ರಾಮಿಕ ತೀವ್ರವಾಗಿದ್ದ ಅವಧಿಯ ಸಮಸ್ಯೆಗಳು ಈ ವ್ಯವಸ್ಥೆಯು ಜನಪ್ರಿಯವಾಗಲು ಕಾರಣವಾಗಿ ಒದಗಿಬಂದವು. ಸ್ಮಾರ್ಟ್‌ಫೋನ್‌ಗಳ ಬಳಕೆ ಹೆಚ್ಚಾಗಿದ್ದು, ಡಿಜಿಟಲ್ ಅರಿವು ಹೆಚ್ಚಾಗಿದ್ದು ಈ ವ್ಯವಸ್ಥೆಯ ಬೆಳವಣಿಗೆಗೆ ಪೂರಕ ವಾದವು. ಈ ವ್ಯವಸ್ಥೆಯಲ್ಲಿ ಲೋಪಗಳು ಇಲ್ಲದಂತೆ ಎನ್‌ಪಿಸಿಐ ನಿಗಾ ವಹಿಸಬೇಕು. ಸಮಸ್ಯೆಯ ಬೇರು ಎಲ್ಲಿದೆ ಎಂಬುದನ್ನು ವಿಶ್ಲೇಷಿಸಲಾಗಿದೆ ಎಂದು ಎನ್‌ಪಿಸಿಐ ಹೇಳಿದೆ. ವಹಿವಾಟುಗಳು ಇದ್ದಕ್ಕಿದ್ದಂತೆ ಭಾರಿ ಪ್ರಮಾಣದಲ್ಲಿ ಏರಿಕೆ ಆಗಿದ್ದುದು ಸಮಸ್ಯೆಗೆ ಕಾರಣವಾಯಿತು ಎಂದು ಭಾವಿಸಲಾಗಿದೆ. ಆದರೆ ವಹಿವಾಟುಗಳ ಸಂಖ್ಯೆಯು ಹೆಚ್ಚಳವಾಗುವ ಸೂಚನೆ ಇದ್ದಾಗ ಪರಿಸ್ಥಿತಿಯನ್ನು ನಿಭಾಯಿಸಲು ಎನ್‌ಪಿಸಿಐ ಸಿದ್ಧತೆ ಮಾಡಿಕೊಂಡಿರಬೇಕಿತ್ತು. ಸಮಸ್ಯೆಗಳನ್ನು ಕಡಿಮೆ ಮಾಡುವ ಯತ್ನದ ಭಾಗವಾಗಿ, ಸ್ಪರ್ಧಾತ್ಮಕತೆಯನ್ನು ಹೆಚ್ಚಿಸಲು ಮತ್ತು ಹೊಸತನಕ್ಕೆ ಉತ್ತೇಜನ ನೀಡಲು ಡಿಜಿಟಲ್ ಪಾವತಿ ವಲಯದಲ್ಲಿ ಹೊಸ ಸಂಸ್ಥೆಯೊಂದನ್ನು ಕಟ್ಟಬೇಕು ಎಂಬ ಸಲಹೆಗಳಿವೆ. ಸಮಸ್ಯೆಗಳು ಮತ್ತೆ ಮತ್ತೆ ಎದುರಾಗದಿದ್ದರೂ ಅವು ವ್ಯವಸ್ಥೆಯ ಮೇಲಿನ ವಿಶ್ವಾಸಕ್ಕೆ ಪೆಟ್ಟು ಕೊಡುತ್ತವೆ. ವಂಚನೆಯ ಪ್ರಕರಣಗಳು ಹೆಚ್ಚಾಗುತ್ತಿರುವುದು ಇನ್ನೊಂದು ಸಮಸ್ಯೆ. 2022–23ರಲ್ಲಿ ಯುಪಿಐ ವ್ಯವಸ್ಥೆಯಲ್ಲಿ ದಾಖಲಾದ ವಂಚನೆ ಪ್ರಕರಣಗಳಲ್ಲಿನ ಹಣದ ಮೊತ್ತವು 573 ಕೋಟಿ ಇತ್ತು. ಆದರೆ ಅದು 2023–24ರಲ್ಲಿ 1,087 ಕೋಟಿಗೆ ಹೆಚ್ಚಳವಾಗಿದೆ. ಇದು ಕಳವಳಕಾರಿ ಸಂಗತಿ. ಬಳಕೆದಾರರ ಗುರುತನ್ನು ತಾಳೆ ಮಾಡುವ, ದೃಢೀಕರಿಸುವ ಬಲವಾದ ಪ್ರಕ್ರಿಯೆಗಳನ್ನು ಎನ್‌ಪಿಸಿಐ ಜಾರಿಯಲ್ಲಿ ತಂದಿದೆ. ಕೃತಕ ಬುದ್ಧಿಮತ್ತೆ, ಮೆಷಿನ್ ಲರ್ನಿಂಗ್ ಮತ್ತು ಇತರ ಆಧುನಿಕ ತಂತ್ರಜ್ಞಾನಗಳನ್ನು ಬಳಸಿ ವ್ಯವಸ್ಥೆಯನ್ನು ದೃಢವಾಗಿಸಲು ಅದು ಶ್ರಮಿಸಿದೆ. ತಂತ್ರಜ್ಞಾನವನ್ನು ಇನ್ನಷ್ಟು ಮೇಲ್ದರ್ಜೆಗೆ ಏರಿಸಿ, ಮೇಲ್ವಿಚಾರಣೆಯನ್ನು ಬಿಗಿಗೊಳಿಸಿ ಅದು ವಂಚನೆಯ ಸಾಧ್ಯತೆಯನ್ನು ಕಡಿಮೆ ಮಾಡಬೇಕು. ವಿಶ್ವದರ್ಜೆಯ ಪಾವತಿ ವ್ಯವಸ್ಥೆ ಎಂದು ಯುಪಿಐ ಗಳಿಸಿಕೊಂಡಿರುವ ಖ್ಯಾತಿಯು ಉಳಿಯಬೇಕು, ಬಳಕೆಯು ಸುಲಭವಾಗಿರಬೇಕು, ವ್ಯವಸ್ಥೆಯಲ್ಲಿ ಲೋಪಗಳು ಇರಬಾರದು. ಆಗ ಇದು ಸಾಧ್ಯವಾಗುತ್ತದೆ.

> **ಯುಪಿಐ ವ್ಯವಸ್ಥೆಯನ್ನು ಬಳಸಿ ಪ್ರತಿದಿನ 60 ಕೋಟಿ ವಹಿವಾಟುಗಳು ನಡೆಯುತ್ತಿವೆ ಎಂಬ ಅಂದಾಜು ಇದೆ. ವಹಿವಾಟುಗಳ ಸಂಖ್ಯೆಯು ಸ್ಥಿರ ಪ್ರಮಾಣದಲ್ಲಿ ಏರಿಕೆ ಕಾಣುತ್ತಿದೆ. ಹೀಗಾಗಿ, ಈ ವ್ಯವಸ್ಥೆಯಲ್ಲಿ ತೊಡಕುಗಳು ಎದುರಾದಾಗ ಉಂಟಾಗುವ ಸಮಸ್ಯೆಯ ಪ್ರಮಾಣವೂ ದೊಡ್ಡದಾಗಿಯೇ ಇರುತ್ತದೆ. ದೇಶದ ಆನ್‌ಲೈನ್ ಪಾವತಿ ವಹಿವಾಟುಗಳ ಬೆನ್ನೆಲುಬಿನಂತೆ ಯುಪಿಐ ಬೆಳೆದು ನಿಂತಿದೆ.**

# ರಾಮಾಯಣ



## ಶ್ರೀರಾಮನು ವನಕ್ಕೆ ಹೊರಟದ್ದು

• ಹಿಂದಿನ ಸಂಚಿಕೆಯಿಂದ **78ನೆಯ ಅಧ್ಯಾಯ**

ಅಕಟಕಟಾ! ಈತನ ತಾಯಿಯಾದ ಕೌಸಲ್ಯಾದೇವಿಯ ಎದೆಯು ಉಕ್ಕಿನ ಎದೆಯಾಗಿರಬೇಕು. ಸಾಕ್ಷಾತ್ ದೇವತಾಸ್ತರೂಪನಾದ ಶ್ರೀರಾಮನು ವನಕ್ಕೆ ತೆರಳುತ್ತಿದ್ದರೂ ಆ ದೇವಿಯ ಎದೆಯು ಒಡೆಯದೆ ಇದೆ. ಸೀತಾದೇವಿಯು ತನ್ನ ಪತಿಯಾದ ಶ್ರೀರಾಮನ ನೆಳಲಂತೆ ಆತನ ಸಂಗಡ ತೆರಳುವುದರಿಂದ ಕೃತಾರ್ಥಳಾದಳು. ಸೂರ್ಯನ ಪ್ರಭೆಯು ಮಹಾಮೇರುಪರ್ವತವನ್ನು ಬಿಟ್ಟು ತೊಲಗದಂತೆ ಈ ದೇವಿಯು ಧರ್ಮಮಾರ್ಗವನ್ನು ಬಿಡುವವಳಲ್ಲ! ಲಕ್ಷ್ಮಣ, ಸಾಕ್ಷಾತ್ ದೇವತಾಸ್ವರೂಪನಾಗಿ ಸಮಸ್ತ ಜನರಲ್ಲಿಯೂ ವಿನಯದಿಂದ ಪ್ರಿಯೋಕ್ತಿಗಳನ್ನೇ ನುಡಿಯುವಂಥ ನಿನ್ನ ಅಣ್ಣನಾದ ಶ್ರೀರಾಮನನ್ನು ಅನವರತ ಸೇವೆಯನ್ನು ಮಾಡುವುದರಿಂದ ನೀನು ಕೃತಾರ್ಥನಾಗುವೆ. ಆತನ ಸೇವೆಯನ್ನು ಮಾಡುವುದೇ ನಿನಗೆ ಸರ್ವಕಾರ್ಯಸಿದ್ಧಿಯನ್ನೂ ಮಹತ್ತಾದ ಶ್ರೇಯಸ್ಸನ್ನೂ ಉಂಟುಮಾಡುವುದು. ಆತನನ್ನು ಬಿಡದೆ ಹಿಂದೆ ನಡೆಯುವುದೇ ನಿನಗೆ ಸ್ವರ್ಗಸಾಧನ! ಎಂದು ನುಡಿಯುತ್ತ ಶ್ರೀರಾಮನ ಹಿಂದೆ ಹೋಗುತ್ತ ಆತನ ವಿಯೋಗದಿಂದುಂಟಾದ ದುಃಖಾತಿಶಯದಿಂದ ಪ್ರವಾಹವಾಗಿ ಸುರಿಯುತ್ತಿದ್ದ ಕಣ್ಣೀರನ್ನು ನಿಲ್ಲಿಸುವುದಕ್ಕೆ ಸಮರ್ಥರಲ್ಲದಿದ್ದರು.

ಆಮೇಲೆ ದಶರಥರಾಯನು ಅತ್ಯಂತ ದೀನಚಿತ್ತನಾಗಿ ಶ್ರೀರಾಮನನ್ನು ನೋಡಬೇಕೆಂದು ತನ್ನ ಸ್ತ್ರೀಯರನ್ನು ಕೂಡಿಕೊಂಡು ಅರಮನೆಯಿಂದ ಹೊರಕ್ಕೆ ಬಂದನು. ಅರಣ್ಯದಲ್ಲಿ ಗಂಡಾನೆಯು ಬಲೆಯಲ್ಲಿ ಸಿಕ್ಕಲು ಹೆಣ್ಣಾನೆಗಳು ದೈನ್ಯಸ್ವರದಿಂದ ಗೋಳಿಡುವಂತೆ ಅವನ ಮುಂದುಗಡೆಯಲ್ಲಿ ಬರುತ್ತಿದ್ದ ಸ್ತ್ರೀಯರು ಗೋಳಾಡುತ್ತಿದ್ದರು.. ಶ್ರೀರಾಮನು ಸಾರಥಿಯಾದ ಸುಮಂತ್ರನಿಗೆ ರಥವನ್ನು ಬೇಗ ನಡೆಯಿಸಬೇಕೆಂದು ನುಡಿದನು. ಅದನ್ನು ಕೇಳಿ ಆತನ ಹಿಂದೆ ಹೋಗುತಿದ್ದ ಜನಗಳು ರಥವನ್ನು ನಿಲ್ಲಿಸಬೇಕೆಂದು ನುಡಿದರು! ಆ ಸಾರಥಿಯು ಇತ್ತ 0ಡದವರ ಮಾತನ್ನಾ ಮೀರಲಾರದೆ ಮಧ್ಯಸ್ಥನಾಗಿ ರಥವನ್ನು ನಡೆಯಿಸಿದನು. ಆಗ ಎರಡುಪಾರ್ಶ್ವಗಳಲ್ಲಿಯೂ ಹಿಂದುಗಡೆಯಲ್ಲಿಯೂ ಬರುತ್ತಿದ್ದ ಜನರ ಕಂಬನಿಯ ಧಾರೆಗಳಿಂದ ಮಾರ್ಗದಲ್ಲಿದ್ದ ಧೂಳು ಅಡಗಿತು. ಆ ಪುರಜನರ ಕಂಬನಿಯ ಧಾರೆಗಳಿಂದ ರಸ್ತೆಗಳೆಲ್ಲ ಕೆಸರಾಯಿತು. ಸಮಸ್ತ ಜನರ ಹಾಹಾಕಾರದಿಂದ ಅಯೋಧ್ಯಾಪಟ್ಟಣವು ಕೆಂಗೆಡುತ್ತಿತ್ತು. ಕೊಳದಲ್ಲಿ ಮೀನುಗಳ ಹೊಯ್ಲುಗಳಿಂದ ಚಲಿಸುವ ತಾವರೆಗಳು ನೀರನ್ನು ಬಿಡುವಂತೆ ಶ್ರೀರಾಮನ ಹಿಂದೆ ಓಡಿಬರುವ ಪ್ರಯಾಸದಿಂದ ಸ್ತ್ರೀಯರ ಕಣ್ಣುಗಳಿಂದ ನೀರು ಸುರಿಯುತ್ತಿತ್ತು. ಈ ರೀತಿಯಲ್ಲಿ ಕಂಗೆಟ್ಟ ಜನರುಳ್ಳ ಅಯೋಧ್ಯಾಪಟ್ಟವನ್ನು ಕಂಡು ದಶರಥರಾಯನು ಹಮ್ಮೈಸಿ ಬುಡ ಕತ್ತರಿಸಲ್ಪಟ್ಟ ಮರವು ಬೀಳುವಂತೆ ದುಃಖಿತನಾಗಿ ಮೂರ್ಛೆಬಿದ್ದನು. ಶ್ರೀರಾಮನ ಹಿಂದುಗಡೆಯಲ್ಲಿ ಬರುತ್ತಿದ್ದ ಜನರು ಕೋಲಾಹಲಧ್ವನಿಯನ್ನು ಮಾಡುತ್ತಾ ದುಃ ಖಾತಿಶಯದಿಂದ ಕಂಗೆಟ್ಟ ದಶರಥರಾಯನನ್ನು ಕಂಡು ರಾಮ ರಾಮ ಎಂದು ಶೋಕಿಸಿದರು. ಶ್ರೀರಾಮನು, ಪುತ್ರವಿಯೋಗದಿಂದ ಕಂಗೆಟ್ಟು ಮುಂದುಗಾಣದೆ ರೋದನ ಮಾಡಿಕೊಂಡು ಬರುತ್ತಿದ್ದ ತಾಯಿತಂದೆಗಳನ್ನು ಹಿಂದೆ ತಿರುಗಿನೋಡಿ ಬಲೆಯಲ್ಲಿ ಸಿಕ್ಕಿದ ಹುಲ್ಲೆಯ ಮರಿಯು ತನ್ನ ತಾಯಿಯನ್ನು ಕಂಡು ದುಃಖಿಸುವಂತೆ ಧರ್ಮವೆಂಬ ಬಲೆಗೆ ಸಿಕ್ಕಿದವನಾದ್ದರಿಂದ ಮುಂದುಗಾಣದೆ ದುಃಖಿಸುತ್ತಾ ತಾಯಿತಂದೆಗಳ ಶೋಕವನ್ನು ನೋಡಲಾರದೆ ತನ್ನ ಸಾರಥಿಯಾದ ಸುಮಂತ್ರನನ್ನು ಶೀಘ್ರವಾಗಿ ರಥವನ್ನು ನಡೆಯಿಸುವಂತೆ ಆಜ್ಞೆಮಾಡಿದನು. ಅಂಕುಶದ ಪೆಟ್ಟಿನಿಂದ ಕುಂಭಸ್ಥಳದಲ್ಲಿ ನೋವು ಪಡೆದ ಆನೆಯಂತೆ ಅವರ ದುಃಖವನ್ನು ನೋಡಿ ತಡೆಯಲಾರದೆ ತೆರಳುತ್ತಿದ್ದನು. ಕರುವನ್ನು ಮನೆಯಲ್ಲಿ ಕಟ್ಟಿ ಹಸುವನ್ನು ಪ್ಯಾ ಹೊಡೆದರೆ ಆ ಠಿಠಿ ಕರುವನ್ನು ನೆನೆಸಿಕೊಂಡು ಮನೆಗೆ ಓಡಿಬರುವಂತೆ ಕೌಸಲ್ಯಾದೇವಿಯು ಹಾ ರಾಮ! ಹಾ ಲಕ್ಷ್ಮಣ ಹಾ ಸೀತಾದೇವಿ! ಎಂದು ಹಂಬಲಿಸುತ್ತ ಕಣ್ಣೀರುಬಿಡುತ್ತ ಅವರ ಬೆನ್ನು ಹಿಡಿದು ಅ ಕರ ದಿಂದ ಒಡಿ ಓಡಿ ಬರುತ್ತಿದ್ದಳು. ಶ್ರೀರಾಮನು ಅದನ್ನು ಕಂಡೂ ದೆಶರಥರಾಯನು ಸುಮಂತ್ರನನ್ನು ಕರೆದು ರಥವನ್ನು ನಿಲ್ಲಿಸಬೇಕೆಂದು ಕೂಗುವುದನ್ನು ಕೇಳಿಯೂ ಶೀಘ್ರವಾಗಿ ರಥವನ್ನು ನಡೆಯಿಸಲು ಆಜ್ಞಾಪಿಸಿದನು. ಸುಮಂತ್ರನು ಈ ರೀತಿಯಲ್ಲಿ ದಶರಥ ಶ್ರೀರಾಮರುಗಳ ಮಾತುಗಳಲ್ಲಿ ಯಾರ ಮಾತನ್ನು ಅಂಗೀಕರಿಸುವುದೆಂದು ವ್ಯಾಕುಲಚಿತ್ತನಾಗಿ ಚಕ್ರಗಳ ಮಧ್ಯದಲ್ಲಿ ಸಿಕ್ಕಿದಂತೆ ಚಿಂತಾಕ್ರಾಂತನಾದಮ. ಶ್ರೀರಾಮನು ಆತನನ್ನು ಕುರಿತು ಸುಮಂತ್ರ ದಶರಥರಾಯನು ಹಿಂದೆ ಬರುವ ವೃತ್ತಾಂತವನ್ನು ತಿಳಿಯದವನ ರೀತಿಯಲ್ಲಿ ರಥವನ್ನು ನಡೆಯಿಸು ಎಂದು ನುಡಿದನು.

ಸುಮಂತ್ರನು ನ್ನು ಅತಿಶೀಘ್ರವಾಗಿ ನಡೆಯಿಸಿದನು. ಹಿಂದೆ ಬರುತ್ತಿದ್ದ ಪ್ರಜೆಗಳು

**ಮುಂದುವರಿಯುವುದು...**

# ಇಬ್ಬಡಿ ಗ್ರಾಮದಲ್ಲಿ ವಿನೂತನವಾದ ರಾಜ್ಯಮಟ್ಟದ ಸಾಂಸ್ಕೃತಿಕ ಹಬ್ಬ

• ಉದಯವಾಹಿನಿ, ಬೆಂಗಳೂರು

**12 ಗಂಟೆಯ ಅಚ್ಚುಕಟ್ಟಾದ ನಿರೂಪಣೆ**

ಇತ್ತೀಚೆಗೆ ಹಾಸನ ನಗರದ ಅರಕಲಗೂಡು ತಾಲ್ಲೂಕಿನ ಹಿಬ್ಬಡಿ ಗ್ರಾಮದಲ್ಲಿ ಶ್ರೀ ಗ್ರಾಮ ದೇವತೆ ದ್ಯಾವಮ್ಮ ನವರ ಜಾತ್ರಾ ಮಹೋತ್ಸವ, ಬಂಡಿ ಹಬ್ಬ ಸೇವಾ ಸಮಿತಿ 2025ರ ವತಿಯಿಂದ ರಾಜ್ಯ ಮಟ್ಟದ ಸಾಂಸ್ಕೃತಿಕ ಹಬ್ಬ ವನ್ನು ಹಮ್ಮಿಕೊಳ್ಳಲಾಗಿತ್ತು. ಅಂದು ಸವಿ ಸಂಜೆ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಹಲವಾರು ಕಲಾತಂಡಗಳು ಸೇರಿ, ಭರತನಾಟ್ಯ, ಗಾಯನ, ನಾಟಕ ಎಲ್ಲಾ ಪ್ರಕಾರದ ನೃತ್ಯಗಳು, ಹಾಡುಗಳು ಇನ್ನೂ ಹಲವಾರು ಕಾರ್ಯಕ್ರಮವನ್ನು ನೀಡಿ ಕಲಾತಂಡದವರು ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರರಾದರು. ಕಾರ್ಯಕ್ರಮದ ನಿರ್ವಹಣೆ ಹಾಗೂ ನಿರೂಪಣೆಯನ್ನು ಶಿಕ್ಷಕಿ, ಸಾಹಿತಿ, ಸಾಮಾಜಿಕ ಚಿಂತಕಿ, ಸಂಸ್ಥಾಪಕ ಅಧ್ಯಕ್ಷರಾದ ' ಪ್ರತಿಮಾ ಸಾಮಾಜಿಕ ಸಾಂಸ್ಕೃತಿಕ ಅಭಿವೃದ್ಧಿ ಪ್ರತಿಷ್ಠಾನ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡಿರುವ 24 ಗಂಟೆಗಳು ನಿರೂಪಣೆ ಮಾಡಿ ದಾಖಲೆ ಮಾಡಿರುವ ಹೆಚ್. ಎಸ್. ಪ್ರತಿಮಾ ಹಾಸನ್ ರವರು ಕಾರ್ಯಕ್ರಮದ 12 ಗಂಟೆಯ ಅಚ್ಚುಕಟ್ಟಾದ ನಿರೂಪಣೆಯನ್ನು ಮಾಡಿ ಪ್ರೇಕ್ಷಕರ ಮನ ಗೆದ್ದು ಕಾರ್ಯಕ್ರಮದ ಯಶಸ್ವಿಗೆ ಪಾಲುದಾರರಾದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಗ್ರಾಮ ಪಂಚಾಯಿತಿ ಅಧ್ಯಕ್ಷರು ರಾಧಾಮಣಿ ರಾಜ ಅರಸ್ ರವರು, ದೊಡ್ಡಮಗ್ಗೆ ರಾಜೇಗೌಡರು, ಮಾಜಿ ಗ್ರಾಮ ಪಂಚಾಯಿತಿ ಸದಸ್ಯರು ಸಮಾಜ ಸೇವಕರಾದ ಕೃಷ್ಣೆ ಗೌಡರು, ಚೆನ್ನಯ್ಯ, ಹುಚ್ಚಮ್ಮ ಜವರಯ್ಯನವರು , ಇನ್ನು ಹಲವರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

# ನಾವು ದೇವರಿಗೆ ದೀಪ ಯಾಕೆ ಇಡಬೇಕು ?



ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

**ದೇವರ ಬಳಿ ತಲುಪಲು ದೀಪ**

ಪ್ರಿಯ ಬಂಧುಗಳೇ ನಾವು ದಿನ ನಿತ್ಯ ದೇವರಿಗೆ ದೀಪ ಇಟ್ಟು, ಭಕ್ತಿಯಿಂದ ದೇವರಿಗೆ ಕೈ ಮುಗಿಯುತ್ತೇವೆ. ನಮ್ಮನ್ನು ಕುತೂಹಲದಿಂದ ನೋಡಿ ಕಲಿಯುವ ಮಕ್ಕಳು ನಾವು ದೇವರಿಗೆ ದೀಪ ಯಾಕೆ ಇಡಬೇಕು? ಅದೊಂದು ದಿನ ನಮ್ಮನ್ನು ಕೇಳಿಯೇ ಬಿಡುತ್ತವೆ. ನೀವು ತಬ್ಬಿಬ್ಬುಗೊಳ್ಳುತ್ತಿರಿ. ಇದು ನಮ್ಮ ಸಂಪ್ರದಾಯ ಮಗು, ಅಜ್ಜ ಇಡುತ್ತಿದ್ದರು ಆದನಂತರ ಅಪ್ಪ ಇಡುತ್ತಿದ್ದರು ಈಗ ನಾನು ಮುಂದೆ ನೀನು ಎನ್ನುತ್ತಾ ಮಗುವನ್ನು ಸಮಾಧಾನ ಪಡಿಸುತ್ತಿರಿ. ಮಗು ಸತ್ಯ ಎನ್ನುತ್ತಾ ನಂಬಿ ಬಿಡುತ್ತದೆ. ಆದರೆ ಸತ್ಯ ಅದಲ್ಲ. ನೀವು ತಿಳಿದು ಕೊಳ್ಳಿ, ನಿಮ್ಮವರೊಂದಿಗೂ ಹಂಚಿಕೊಳ್ಳಿದೀಪ ಅನ್ನುವುದು ಬರೇ ಬೆಳಕಿಗಾಗಿ ಇಡುವುದಲ್ಲ. ಬದಲಿಗೆ ನಿಮ್ಮ ಪ್ರಾರ್ಥನೆ, ಹರಕೆಗಳನ್ನು ದೇವರಿಗೆ ತಲುಪಿಸುವವಾಹಕ. ದೀಪ ಅನ್ನುವುದು ಅಗ್ನಿಯಿಂದ ಪ್ರಜ್ವಲಿತವಾಗಿದೆ.

ನಾವು ಮಾಡುವ ಯಾಗದ ಹವಿಸನ್ನು ಹೇಗೆ ಅಗ್ನಿಯು ಆಯ ದೇವತೆಗಳಿಗೆ ಕೊಂಡೊಯ್ದು ಒಪ್ಪಿಸುತ್ತದೋ ಅದೇ ತೆರನಾಗಿ ದೀಪವೂ ನಿಮ್ಮ ಪ್ರಾರ್ಥನೆಯನ್ನು ಭಗವಂತನ ಬಳಿಗೆ ಕೊಂಡೊಯ್ಯುವ ಸಾಧನವಾಗಿದೆ. ನೀವು ಯಾವ ದೇವರನ್ನು ಪ್ರಾರ್ಥನೆ ಮಾಡುತ್ತಿರೋ ಆ ಪ್ರಾರ್ಥನೆ ನಿಮ್ಮ ಆ ದೇವರ ಬಳಿ ತಲುಪಲು ದೀಪ ಒಂದು ಮಾಧ್ಯಮ. ದೀಪವಿಲ್ಲದೆ ನಿಮ್ಮ ಪ್ರಾರ್ಥನೆ ತಲುಪಬೇಕಾದ ಜಾಗವನ್ನು ತಲುಪುವುದಿಲ್ಲ. ಹಿಂದೊಮ್ಮೆ ನಾವು ಪ್ರಾರ್ಥನೆ ಮಾಡುವಾಗ ದೀಪ ನಂದಿ ಹೋದರೆ ಅಪಶಕುನ ಅನ್ನುತ್ತಿದ್ದರು.ಯಾಕೆಂದರೆ ನಿಮ್ಮ ಪ್ರಾರ್ಥನೆ ಭಗವಂತನನ್ನು ತಲುಪಲಿಲ್ಲ ಅನ್ನುವುದೇ ಅದರ ತಾತ್ಪರ್ಯ.ಆತ್ಮ ಮತ್ತು ಪರಮಾತ್ಮನ ಮಧ್ಯೆ ಸಂಬಂಧ ಸೇತುವೆ ಒಂದು ಪುಟ್ಟ ದೀಪವಾಗಬಲ್ಲುದು.



ನೀವು ನಿತ್ಯ ಮನೆಯಲ್ಲಿ ದೇವರಿಗೆ ಅಥವಾ ಧೈವಗಳಿಗೆ ಕೈ ಮುಗಿಯುವಾಗ ಪುಟ್ಟ ದೀಪವೊಂದನ್ನು ಪ್ರಜ್ವಲಿಸುವ ಪರಿಪಾಟವನ್ನು ಇಟ್ಟುಕೊಳ್ಳಿ. ನಿಮ್ಮ ಪ್ರತಿ ಪ್ರಾರ್ಥನೆ ಮುಟ್ಟಬೇಕಾದ ಜಾಗವನ್ನು ತಟ್ಟುತ್ತದೆ. ಪ್ರಾರ್ಥನೆಗಳು ಫಲಿಸುತ್ತವೆ. ದೇವರಮತ್ತು ನಿಮ್ಮ ಸಂಬಂಧಗಳು ಹತ್ತಿರ, ಗಟ್ಟಿಯಾಗುತ್ತದೆ.

ಕಾರಣಿಕಗಳು ಮಾತಾಡುತ್ತವೆ ಇನ್ನು ಮಕ್ಕಳ ಜನ್ಮ ದಿನಾಚರಣೆಯ ಸಮಯದಲ್ಲಿ ಕ್ಯಾಂಡಲ್ ನಂದಿಸುವುದಕ್ಕಿಂತದೀಪ ಪ್ರಜ್ವಲಿಸು ವುದು ತುಂಬಾ ಸೂಕ್ತವಾದ ಆಚರವಾಗಿದೆ. ಉರಿಯುತ್ತಿರುವ ಪುಟ್ಟ ದೀಪ ನಿಮ್ಮ ಬಂಧುಗಳ ಆರೈಕೆಯನ್ನು ದೇವರ ಬಳಿಗೆ ಕೊಂಡೊಯ್ಯುತ್ತದೆ ಯಾರಾದರೂ ಕೆಟ್ಟ ಹಾರೈಕೆಯನ್ನು ಮಾಡಿದರೆ ಅವನನ್ನು ಅಲ್ಲೇ ಸುಟ್ಟು ಒಳ್ಳೆಯ ಆರೈಕೆಯನ್ನು ಮಾತ್ರ ದೇವರ ಪಾದತಳದಲ್ಲಿಡುವ ಗುಣ ಪುಟ್ಟ ಹಣತೆಗಿದೆ.

# ರಾಜ್ಯದಲ್ಲಿ ಬುರ್ಖಾ ಧರಿಸಿ ಪರೀಕ್ಷೆ ಬರೆಯಬಹುದು ಆದರೆ ಜನಿವಾರಕ್ಕೆ ಅವಕಾಶ ಇಲ್ಲ

## ಸಿಇಟಿ ಪರೀಕ್ಷೆಗೆ ವಿದ್ಯಾರ್ಥಿಗಳ ಜನಿವಾರ ತೆಗೆದು ಬರುವಂತೆ ಒತ್ತಾಯ; ಹಿಂದೂ ಜನಜಾಗೃತಿ ಸಮಿತಿ ಖಂಡನೆ



ಮೋಹನ್ ಗೌಡ

• ಉದಯವಾಹಿನಿ, ಬೆಂಗಳೂರು

ನಿನ್ನೆ ಶಿವಮೊಗ್ಗ ಮತ್ತು ಬೀದರ್ ನಲ್ಲಿ ನಡೆಯುತ್ತಿದ್ದ ಸಿಇಟಿ ಪರೀಕ್ಷಾ ಸ್ಥಳದಲ್ಲಿ ಜನಿವಾರ ಧರಿಸಿ ಬಂದಿದ್ದ ವಿದ್ಯಾರ್ಥಿಗಳಿಗೆ ಅಲ್ಲಿನ ಪರೀಕ್ಷಾ ಅಧಿಕಾರಿಗಳು ಪ್ರವೇಶ ನಿರಾಕರಿಸಿದ್ದಾರೆ. ಮತ್ತು ಜನಿವಾರ ತೆಗೆಯದ ವಿದ್ಯಾರ್ಥಿಗಳು ಪರೀಕ್ಷೆಯಿಂದ ವಂಚಿತರಾಗಬೇಕಾಯಿತು. ಈ ಘಟನೆಯನ್ನು ಹಿಂದೂ ಜನಜಾಗೃತಿ ಸಮಿತಿಯ ರಾಜ್ಯ ವಕ್ತಾರರಾದ ಶ್ರೀ. ಮೋಹನ್ ಗೌಡ ಇವರು ಖಂಡಿಸಿದ್ದಾರೆ.



ಅವರು ಮುಂದೆ ಮಾತನಾಡಿ ಜನಿವಾರ ಧರಿಸುವುದು ಬ್ರಾಹ್ಮಣರ ಧಾರ್ಮಿಕ ಆಚರಣೆ, ಅವರ ಹಕ್ಕಾಗಿದೆ.

ಆದರೆ ಪರೀಕ್ಷೆಗಾಗಿ ಅದನ್ನು ತೆಗೆಯಲು ಒತ್ತಾಯಿಸುವುದು ಅವರ ಧಾರ್ಮಿಕ ಭಾವನೆಗಳ ಮೇಲೆ ಮಾಡಿದ ಧಕ್ಕೆ ಆಗಿದೆ. ಈ ಘಟನೆಯು ಸಂವಿಧಾನದ ಆರ್ಟಿಕಲ್ 25 ರ ಉಲ್ಲಂಘನೆಯಾಗಿದೆ ಜೊತೆಗೆ ಅವರ ಅಭಿವ್ಯಕ್ತಿ ಸ್ವಾತಂತ್ರ್ಯಕ್ಕೆ ಧಕ್ಕೆ ತಂದಂತಾಗಿದೆ. ದುರ್ದೈವದ ವಿಷಯವೆಂದರೆ ರಾಜ್ಯದಲ್ಲಿ ಇಂದು ಬುರ್ಖಾ ಧರಿಸಿ ಪರೀಕ್ಷೆ ಬರೆಯಲು ಅವಕಾಶ ಇದೆ ಆದರೆ ಹಿಂದುಗಳ ಜನಿವಾರ, ಮಂಗಲಸೂತ್ರ, ಬಳೆ ಇವುಗಳನ್ನು ಪರೀಕ್ಷೆ ಅಥವಾ ಶಾಲೆಯ ಹೆಸರಿನಲ್ಲಿ ನಿಷೇಧಿಸುವ ಮೂಲಕ ಹಿಂದೂಗಳ ಧಾರ್ಮಿಕ ಭಾವನೆಗೆ ಧಕ್ಕೆ ತರಲಾಗುತ್ತಿದೆ. ಇದರಿಂದ ಪುನಃ ರಾಜ್ಯ ಸರ್ಕಾರದ ಪೊಳ್ಳು ಜಾತ್ಯತೀತತೆ ಎದ್ದುಕಾಣುತ್ತಿದೆ.

ಇಂದು ಜನಿವಾರಕ್ಕೆ ವಿರೋಧಿಸಿದವರು ನಾಳೆ ಜುಟ್ಟು ಬಿಡಬಾರದು ಎಂಬ ಆದೇಶ ಹೊರಡಿಸಬಹುದು ಹಾಗಾಗಿ ಸರಕಾರವು ಇದರ ಬಗ್ಗೆ ಸ್ಪಷ್ಟನೆ ನೀಡಬೇಕು, ಹಿಂದುಗಳಿಗೆ ಅವರ ಧಾರ್ಮಿಕ ಆಚರಣೆಗಳನ್ನು ಮಾಡಲು ಸಂವಿಧಾನದ ಅಡಿಯಲ್ಲಿ ಅವಕಾಶ ಮಾಡಿಕೊಡಬೇಕು ಎಂದು ಹಿಂದೂ ಜನಜಾಗೃತಿ ಸಮಿತಿ ಆಗ್ರಹಿಸಿದೆ.

# ಟ್ಯಾನಿಂಗ್ ತೆಗೆದುಹಾಕಬೇಕೆ ಇಲ್ಲಿದೆ ನೋಡಿ ಸುಲಭ ಪರಿಹಾರ

ಬೇಸಿಗೆ ಆರಂಭವಾದ ತಕ್ಷಣ, ಟ್ಯಾನಿಂಗ್ ಸಮಸ್ಯೆಯೂ ಪ್ರಾರಂಭವಾಗುತ್ತದೆ. ನೀವು ಸ್ವಲ್ಪ ಸಮಯ ಬಿಸಿಲಿನಲ್ಲಿ ಹೊರಗೆ ಹೋಗಿ ಬಂದರೆ ಸಾಕು, ನಿಮ್ಮ ಕೈ ಮತ್ತು ಪಾದಗಳ ಬಣ್ಣವು ಕಂದು ಬಣ್ಣಕ್ಕೆ ತಿರುಗುತ್ತದೆ. ಹಾಗಂತ ಬೇಸಿಗೆಯಲ್ಲಿ ಮನೆಯಿಂದ ಹೊರಗೆ ಹೋಗದೆ ಇರಲು ಸಾಧ್ಯವೇ?, ಹೆಚ್ಚಿನವರಿಗೆ ಮನೆಯಿಂದ ಹೊರಗೆ ಹೋಗುವ ಅನಿವಾರ್ಯ ಕೆಲಸಗಳಿರುತ್ತವೆ. ನೀವು ಸನ್‌ಸ್ಕ್ರೀನ್ ಹಚ್ಚಿಕೊಂಡು ಹೊರಗೆ ಹೋದರೂ, ನಿಮ್ಮ ದೇಹವನ್ನು ಸರಿಯಾಗಿ ಮುಚ್ಚಿಕೊಳ್ಳದಿದ್ದರೆ, ನಿಮ್ಮ ಚರ್ಮ ಟ್ಯಾನ್ ಆಗಬಹುದು.

**ಟ್ಯಾನಿಂಗ್ ತೆಗೆದುಹಾಕುವ ವಿಧಾನ:** ಟ್ಯಾನಿಂಗ್ ತೆಗೆದುಹಾಕಲು ಜನರು ಹಲವು ವಿಧಾನಗಳನ್ನು ಬಳಸುತ್ತಾರೆ. ಕ್ರೀಮ್ ಗಳಿಂದ ಹಿಡಿದು ಟ್ಯಾನಿಂಗ್ ತೆಗೆಯುವ ಚಿಕಿತ್ಸೆಗಳವರೆಗೆ ಚರ್ಮದ ಆರೈಕೆ ಮಾಡುತ್ತಾರೆ. ಆದರೆ ಮೊಸರು, ನಿಂಬೆ ಮತ್ತು ಕಡಲೆ ಹಿಟ್ಟು ಬಳಸಿ ಮನೆಯಲ್ಲಿ ತಯಾರಿಸಿದ ಫೇಸ್ ಮಾಸ್ಕ್ ನಿಮ್ಮ ಟ್ಯಾನಿಂಗ್ ಸಮಸ್ಯೆಗೆ ಉತ್ತಮ ಫಲಿತಾಂಶ ನೀಡಬಹುದು. ಈ ಬಾಡಿ ಮಾಸ್ಕ್ ಟ್ಯಾನಿಂಗ್ ತೆಗೆದುಹಾಕಿ ಚರ್ಮದ ಆರೋಗ್ಯವನ್ನು ಸುಧಾರಿಸಲು ಸಹಾಯ ಮಾಡುತ್ತದೆ. ಈ ಬಾಡಿ ಮಾಸ್ಕ್ ಅನ್ನು ಹೇಗೆ ತಯಾರಿಸುವುದು ಮತ್ತು ಅದರ ಪ್ರಯೋಜನಗಳೇನು ಎಂಬುದನ್ನು ಈ ಲೇಖನದಲ್ಲಿ ತಿಳಿಯೋಣ.





**ಮನೆಯಲ್ಲಿಯೇ ಬಾಡಿ ಮಾಸ್ಕ್ ತಯಾರಿಸುವುದು ಹೇಗೆ?**

- **ಕಡಲೆ ಹಿಟ್ಟು – 4-5 ಚಮಚಗಳು**
- **ಮುಲ್ತಾನಿ ಮಿಟ್ಟಿ – 3 ಚಮಚ**
- **ಮೊಸರು – ಅಗತ್ಯಕ್ಕೆ ತಕ್ಕಂತೆ**
- **ನಿಂಬೆ – 2 ಟೀಸ್ಪೂನ್**

**ತಯಾರಿಕೆಯ ವಿಧಾನ:** ಬಾಡಿ ಮಾಸ್ಕ್ ತಯಾರಿಸಲು, ಒಂದು ಬಟ್ಟಲಿನಲ್ಲಿ ಕಡಲೆ ಹಿಟ್ಟು ಮತ್ತು ಮುಲ್ತಾನಿ ಮಿಟ್ಟಿಯನ್ನು ಒಟ್ಟಿಗೆ ಮಿಶ್ರಣ ಮಾಡಿ. ಇದಕ್ಕೆ 2 ಚಮಚ ನಿಂಬೆ ರಸ ಸೇರಿಸಿ. ಕೊನೆಗೆ ಅದಕ್ಕೆ ಮೊಸರು ಸೇರಿಸಿ ದಪ್ಪ ಪೇಸ್ಟ್ ತಯಾರಿಸಿ. ಇದನ್ನು ದೇಹದಾದ್ಯಂತ ಹಚ್ಚಿ ಚೆನ್ನಾಗಿ ಮಸಾಜ್ ಮಾಡಿ. ಒಣಗಿದ ನಂತರ, ನೀರಿನಿಂದ ತೊಳೆಯಿರಿ, ಸೋಪ್ ಬಳಸಬೇಡಿ. ಈ ಬಾಡಿ ಮಾಸ್ಕ್ ಅನ್ನು ನೈಸರ್ಗಿಕ ಪದಾರ್ಥಗಳಿಂದ ತಯಾರಿಸಲಾಗುತ್ತದೆ. ಆದ್ದರಿಂದ, ನೀವು ಇದನ್ನು ಪ್ರತಿದಿನವೂ ಬಳಸಬಹುದು.

**ಟ್ಯಾನಿಂಗ್ ತೆಗೆದುಹಾಕಲು ಈ ಬಾಡಿ ಮಾಸ್ಕ್ ಹೇಗೆ ಕೆಲಸ ಮಾಡುತ್ತದೆ?**

ಕಡಲೆ ಹಿಟ್ಟು ಚರ್ಮವನ್ನು ಸ್ವಚ್ಛಗೊಳಿಸಲು ಸಹಾಯ ಮಾಡುತ್ತದೆ. ಮೊಸರಿನಲ್ಲಿ ಲ್ಯಾಕ್ಟಿಕ್ ಆಮ್ಲವಿದ್ದು, ಇದು ಚರ್ಮದ ವಿನ್ಯಾಸವನ್ನು ಸುಧಾರಿಸಲು ಸಹಾಯ ಮಾಡುತ್ತದೆ. ಮುಲ್ತಾನಿ ಮಿಟ್ಟಿ ಚರ್ಮವನ್ನು ತಂಪಾಗಿಸುತ್ತದೆ. ಇದನ್ನು ಹಚ್ಚುವುದರಿಂದ ಟ್ಯಾನಿಂಗ್ ಕಡಿಮೆಯಾಗುತ್ತದೆ. ನಿಂಬೆಯಲ್ಲಿ ವಿಟಮಿನ್ ಸಿ ಇದ್ದು, ಇದು ಚರ್ಮವನ್ನು ಬಿಳಿಯಾಗಿಸಲು ಸಹಾಯ ಮಾಡುತ್ತದೆ.

**ಇತರ ಪ್ರಯೋಜನಗಳು**

- **ಈ ಬಾಡಿ ಮಾಸ್ಕ್ ಚರ್ಮವನ್ನು ಮೃದು, ನಯವಾಗಿಸಲು ಸಹಾಯ ಮಾಡುತ್ತದೆ. ಮೊಸರು ಚರ್ಮವನ್ನು ಹೈಡ್ರೇಟ್ ಆಗಿಡುತ್ತದೆ, ಚರ್ಮವನ್ನು ಮೃದುವಾಗಿಸುತ್ತದೆ.**
- **ಮೊಸರು, ನಿಂಬೆ ಮತ್ತು ಕಡಲೆ ಹಿಟ್ಟು ಚರ್ಮಕ್ಕೆ ಹೊಳಪನ್ನು ತರುತ್ತದೆ. ಇದನ್ನು ಬಳಸುವುದರಿಂದ ಚರ್ಮದ ಸಮಸ್ಯೆಗಳು ಕಡಿಮೆಯಾಗುತ್ತದೆ.**
- **ಈ ಬಾಡಿ ಮಾಸ್ಕ್ ಹಚ್ಚುವುದರಿಂದ ಚರ್ಮದ ಆರೋಗ್ಯ ಸುಧಾರಿಸುತ್ತದೆ. ಇದು ಚರ್ಮಕ್ಕೆ ಹೊಳಪನ್ನು ತರುತ್ತದೆ ಮತ್ತು ಚರ್ಮವು ಆರೋಗ್ಯಕರವಾಗಿರುತ್ತದೆ.**
- **ನಿಮ್ಮ ಮುಖದ ಚರ್ಮ ಮಂದವಾಗಿದ್ದರೆ ಅಥವಾ ಕಪ್ಪು ಕಲೆಗಳಿಂದ ಕೂಡಿದ್ದರೆ, ನೀವು ಅದನ್ನು ನಿಮ್ಮ ಮುಖದ ಮೇಲೂ ಬಳಸಬಹುದು.**
- **ನಿಮಗೆ ಚರ್ಮದ ಅಲರ್ಜಿಗಳು ಅಥವಾ ಚರ್ಮದ ಸೋಂಕುಗಳಿದ್ದರೆ, ಪ್ಯಾಚ್ ಟೆಸ್ಟ್ ನಂತರವೇ ನೀವು ಈ ಬಾಡಿ ಮಾಸ್ಕ್ ಅನ್ನು ಪ್ರಯತ್ನಿಸಬೇಕು.**

# ಜನರ ಸೇವೆ ಮಾಡುವ ಸೌಭಾಗ್ಯ ನನ್ನದು: ಕೆ.ಉಮೇಶ್ ಶೆಟ್ಟಿ

## ನಿಕಟಪೂರ್ವ ಬಿಬಿಎಂಪಿ ಸದಸ್ಯರಾದ ಕೆ.ಉಮೇಶ್ ಶೆಟ್ಟಿರವರ ಅರ್ಥಪೂರ್ಣ ಹುಟ್ಟುಹಬ್ಬದ ಆಚರಣೆ

• ಉದಯವಾಹಿನಿ, ಬೆಂಗಳೂರು

**ಇಂದು ಕಾರ್ಯಕರ್ತರ ದಿನ**

ಗೋವಿಂದರಾಜನಗರ ಬಿಜೆಪಿ ಕಛೇರಿಯಲ್ಲಿ ಬೆಂಗಳೂರು ದಕ್ಷಿಣ ಜಿಲ್ಲಾ ಬಿಜೆಪಿ ಉಪಾಧ್ಯಕ್ಷರು, ನಿಕಟಪೂರ್ವ ಬಿಬಿಎಂಪಿ ಸದಸ್ಯರಾದ ಕೆ.ಉಮೇಶ್ ಶೆಟ್ಟಿರವರು ಹುಟ್ಟುಹಬ್ಬದ ಆಚರಣೆಯನ್ನ ಪಕ್ಷದ ಕಾರ್ಯಕರ್ತರು, ಅಭಿಮಾನಿಗಳು ಅರ್ಥಪೂರ್ಣವಾಗಿ ಆಚರಣೆ ಮಾಡಿದರು. ಉಚಿತ ನೇತ್ರಾ ತಪಾಸಣೆ ಶಿಬಿರ, ರಕ್ತದಾನ ಶಿಬಿರ, ವಿಕಲಚೇತನರಿಗೆ ವೀಲ್ ಚೇರ್, ಕ್ಯಾನ್ಸರ್ ಪೀಡಿತ ಮಹಿಳೆ ಆರ್ಥಿಕ ಸಹಾಯ, ಮಹಿಳೆಯರಿಗೆ ಸೀರೆ ವಿತರಣೆ ಕಾರ್ಯಕ್ರಮವನ್ನು ಲೋಕಸಭಾ ಸದಸ್ಯರಾದ ತೇಜಸ್ವಿಸೂರ್ಯರವರು, ಶಾಸಕರಾದ ಸಿ.ಕೆ. ರಾಮಮೂರ್ತಿರವರು, ನಿಕಟಪೂರ್ವ ಬಿಬಿಎಂಪಿ ಸದಸ್ಯರಾದ ಕೆ.ಉಮೇಶ್ ಶೆಟ್ಟಿರವರು, ಶ್ರೀಮತಿ ದೀಪಿಕಾ ಉಮೇಶ್ ಶೆಟ್ಟಿರವರು, ಜಿಲ್ಲಾಧ್ಯಕ್ಷರುಗಳಾದ ಎಸ್.ಹರೀಶ್, ಸಪ್ತಗಿರಿಗೌಡರವರು ವಿತರಿಸಿ ಚಾಲನೆ ನೀಡಿದರು.

ಇದೇ ಸಂದರ್ಭದಲ್ಲಿ ಕೆ.ಉಮೇಶ್ ಶೆಟ್ಟಿರವರು ಮಾತನಾಡಿ ಶುಕ್ರವಾರ ಕಾರ್ಯಕರ್ತರ ದಿನ ಅವರ ಸಂತೋಷದಲ್ಲಿ ನಾನು ಭಾಗಿಯಾಗಿದ್ದೇನೆ. ಶಾಲೆಯ ದಿನಗಳಲ್ಲಿ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಜೊತೆಯಲ್ಲಿ ಒಡನಾಟದಿಂದ ಶಿಸ್ತು, ದೇಶಭಿಮಾನ ಕಲಿತೆ ನಂತರ ಬಿಜೆಪಿ ಪಕ್ಷದಲ್ಲಿ ಕಳೆದ 20ವರ್ಷಗಳಿಂದ ಕಾರ್ಯಕರ್ತನಾಗಿ ಪ್ರಧಾನಿ ನರೇಂದ್ರ ಮೋದಿರವರು ಹೇಳಿದಂತೆ ಜನ ಸೇವಕನಂತೆ ಕೆಲಸ ಮಾಡುತ್ತಿದ್ದೇನೆ ಎಂದರು. ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ರವರು, ಕೇಂದ್ರ ಸಚಿವರಾದ ವಿ.ಸೋಮಣ್ಣರವರು, ವಿರೋಧ ಪಕ್ಷದ ನಾಯಕರಾದ ಆರ್.ಅಶೋಕ್ ರವರು, ಲೋಕಸಭಾ ಸದಸ್ಯರಾದ ಆರ್.ಅಶೋಕ್ ರವರ ನೇತೃತ್ವದಲ್ಲಿ 50ಸಾವಿರಕ್ಕೂ ಹೆಚ್ಚು ಜನರನ್ನು ಬಿಜೆಪಿ ಸದಸ್ಯರಾಗಿ ಸದ ಸ್ಯತ್ವ ನೋಂದಾಣೆ ಮಾಡಲಾಗಿದೆ. ಜನರ ಪ್ರೀತಿ, ವಿಶ್ವಾಸ ಸದಾ ಹೀಗೆ ಇರಲಿ, ಅವರ ಸೇವೆ ಮಾಡುವ ಸೌಭಾಗ್ಯ ನನಗೆ ಸಿಗಲಿ ಎಂದು ದೇವರಲ್ಲಿ ಪ್ರಾರ್ಥಿಸುತ್ತೇನೆ ಎಂದು ಹೇಳಿದರು.

ಮಂಡಲ ಅಧ್ಯಕ್ಷರಾದ ಮಂಜುನಾಥ್, ಮಾಜಿ ಪಾಲಿಕೆ ಸದಸ್ಯರುಗಳಾದ ರಾಮಪ್ಪ, ಗಂಗಭೈರಯ್ಯ, ಡಾ.ಎಸ್.ರಾಜು, ಸೋಮಶೇಖರ್, ಬಿಜೆಪಿ ಮುಖಂಡರು, ಕಾರ್ಯಕರ್ತರು, ಸ್ಥಳೀಯ ನಿವಾಸಿಗಳು ಪಾಲ್ಗೊಂಡಿದ್ದರು.


ಉದಯವಾಹಿನಿ ಚಿತ್ರ

**ವಿಧಾನಸಭೆಗೆ ಸ್ಪರ್ಧಿಸಲು ಅವಕಾಶ**

**ಬಿಜೆಪಿ ಪಕ್ಷವು ಸಾಮಾನ್ಯ ಕಾರ್ಯಕರ್ತನಾದ ನನಗೆ ನಾಗರಬಾವಿ, ಗೋವಿಂದರಾಜನಗರ ವಾರ್ಡ್‌ನಲ್ಲಿ ಪಾಲಿಕೆ ಚುನಾವಣೆಯಲ್ಲಿ ಸ್ಪರ್ಧಿಸಲು ಅವಕಾಶ ನೀಡಿತು. ಪಾಲಿಕೆ ಸದಸ್ಯನಾಗಿ 10ವರ್ಷಗಳ ಕಾಲ 2 ವಾರ್ಡ್‌ಗಳನ್ನು ಬೆಂಗಳೂರುನಗರದ ಮಾದರಿ ವಾರ್ಡ್ ಆಗಿ ನಿರ್ಮಾಣ ಮಾಡಿದೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ವಿಧಾನಸಭೆಗೆ ಸ್ಪರ್ಧಿಸಲು ಅವಕಾಶ ನೀಡಿತು.**

> **ಕೆ.ಉಮೇಶ್ ಶೆಟ್ಟಿರವರು ಜನಾನುರಾಗಿ, ಸ್ನೇಹಪರ, ಬಡವರ ಪರ ಕೆಲಸ ಮಾಡುವ ವ್ಯಕ್ತಿತ್ವ.ಪಕ್ಷದ ಕೆಲಸ ಮಾಡುವ ನಿಷ್ಠಾವಂತ ಕಾರ್ಯಕರ್ತ. ಸದಸ್ಯತ್ವ ಅಭಿಯಾನ, ಸಂಘಟನೆಯಲ್ಲಿ ಚುರುಕಿನಿಂದ ಕೆಲಸ ಮಾಡಿದ್ದಾರೆ. ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿ ಪಕ್ಷದ ಕಾರ್ಯಕರ್ತರು ಅತ್ಯಂತ ಯಶ್ವಸಿಯಾಗಿ ಸಂಘಟನೆ ಮಾಡಿದ್ದಾರೆ**
>
> **– ತೇಜಸ್ವಿಸೂರ್ಯ, ಲೋಕಸಭಾ ಸದಸ್ಯ**

> **ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರದಲ್ಲಿ ಕಳೆದ ಬಾರಿ ಕಡಿಮೆ ಅಂತರದಲ್ಲಿ ವಿಧಾನಸಭೆಯಲ್ಲಿ ಚುನಾವಣೆಯಲ್ಲಿ ಸೋಲುಂಟಾಯಿತು. ಮುಂಬರುವ ಬಿಬಿಎಂಪಿ ಚುನಾವಣೆ, ವಿಧಾನಸಭೆಯಲ್ಲಿ ಬಿಜೆಪಿ ಪಕ್ಷ ಗೆಲುವಿನ ಜಯಭೇರಿ ಬಾರಿಸಲಿದೆ. ಉತ್ತಮ ಸಂಘಟಕ, ಹೋರಾಟಗಾರ ಕೆ.ಉಮೇಶ್ ಶೆಟ್ಟಿ ರವರಿಗೆ ಮುಂದಿನ ದಿನಗಳಲ್ಲಿ ಉತ್ತಮ ಭವಿಷ್ಯವಿದೆ**
>
> **– ಸಿ.ಕೆ.ರಾಮಮೂರ್ತಿ, ಶಾಸಕ**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ** ಕೆಲಸದಲ್ಲಿ ಹಿರಿಯರಿಂದ ಒತ್ತಡ ಮತ್ತು ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ಜೀವನದ ವಾಹನವನ್ನು ಚೆನ್ನಾಗಿ ಚಲಾಯಿಸಲು ಬಯಸುತ್ತಿದ್ದರೆ ಹಣದ ಬಗ್ಗೆ ವಿಶೇಷ ಗಮನ ಹರಿಸಬೇಕು.

**ವೃಷಭ** ವೈಯಕ್ತಿಕ ಸಮಸ್ಯೆಗಳು ಮಾನಸಿಕ ಸಂತೋಷವನ್ನು ಹಾಳು ಮಾಡಬಹುದು. ಆದರೆ ಒತ್ತಡವನ್ನು ನಿಭಾಯಿಸಲು ಆಸಕ್ತಿದಾಯಕವಾದದ್ದನ್ನೇನಾದರೂ ಓದುವ ಮೂಲಕ ಸ್ವಲ್ಪ ಮಾನಸಿಕ ವ್ಯಾಯಾಮ ಮಾಡಿಕೊಳ್ಳಿ.

**ಮಿಥುನ** ನೀವು ಕೆಲವು ಗಂಭೀರ ತೊಂದರೆಗಳನ್ನು ಎದುರಿಸಲು ಸಾಧ್ಯತೆ ಯಿರುವುದರಿಂದ ನಿಮ್ಮನ್ನು ನಿಯಂತ್ರಿಸಿಕೊಳ್ಳಿ. ವಿಶೇಷವಾಗಿ ಸಣ್ಣ ಹುಚ್ಚಲ್ಲದೇ ಬೇರೇನೂ ಅಲ್ಲದ ನಿಮ್ಮ ಕೋಪವನ್ನು ನಿಯಂತ್ರಿಸಿಕೊಳ್ಳಿ.

**ಕರ್ಕಾಟಕ** ಶ್ರಮಪಡಿ, ಇದು ನಿಮ್ಮ ದಿನವಾದ್ದರಿಂದ ನೀವು ಖಂಡಿತವಾಗಿಯೂ ಅದೃಷ್ಟಶಾಲಿಯಾಗಿರುತ್ತೀರಿ. ನೀವು ಕೆಟ್ಟ ಸಮಯವನ್ನು ಹೊಂದಿರುವವರೊಂದಿಗೆ ಸಂಪರ್ಕವನ್ನು ಹೆಚ್ಚಿಸುವುದನ್ನು ತಪ್ಪಿಸಿ.

**ಸಿಂಹ** ನೀವು ವೈವಾಹಿಕ ಜೀವನವೆಂದರೆ ಕೇವಲ ಹೊಂದಾಣಿಕೆಯೆಂದು ಕೊಂಡಿದ್ದೀರಾ, ಹೌದಾದಲ್ಲಿ ನೀವು ಇದು ಅದು ನಿಮ್ಮ ಜೀವನದಲ್ಲಿ ಆದ ಅತ್ಯುತ್ತಮ ವಿಷಯವೆಂದು ತಿಳಿದುಕೊಳ್ಳುತ್ತೀರಿ.

**ಕನ್ಯಾ** ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ಹೊಸ ಒಪ್ಪಂದಗಳು ಲಾಭದಾಯಕವೆಂದು ಕಂಡರೂ ಬಯಸಿದ ಲಾಭ ತರುವುದಿಲ್ಲ.

**ತುಲಾ** ಯಾವುದಾದರೂ ಸೃಜನಾತ್ಮಕ ಕೆಲಸದಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಸೋಮಾರಿಯಾಗಿ ಕುಳಿತುಕೊಳ್ಳುವ ನಿಮ್ಮ ಅಭ್ಯಾಸ ಮಾನಸಿಕ ಶಾಂತಿಗೆ ಮಾರಣಾಂತಿಕವಾಗಬಹುದು.

**ವೃಶ್ಚಿಕ** ಮಕ್ಕಳ ನಿಮ್ಮ ಸಂಜೆಯನ್ನು ಉಲ್ಲಾಸಮಯವಾಗಿಸುತ್ತಾರೆ. ಮಂಕು ಕವಿದ ಮತ್ತು ಒತ್ತಡದ ದಿನಕ್ಕೆ ಮಂಗಳ ಹಾಡಲು ಒಂದು ಸಂತೋಷಕೂಟವನ್ನು ಯೋಜಿಸಿ. ಮಕ್ಕಳ ಸಾಂಗತ್ಯ ನಿಮ್ಮ ದೇಹವನ್ನು ಪುನಃಶ್ಚೇತನಗೊಳಿಸುತ್ತದೆ.

**ಧನಸ್ಸು** ನಿಮ್ಮ ಸಂತೋಷದ ಪ್ರಕೃತಿ ಇತರರಿಗೆ ಸಂತೋಷ ತರುತ್ತದೆ. ಇಂದು ಹಣಕಾಸಿನ ಭಾಗವು ಉತ್ತಮವಾಗಿರುತ್ತದೆ ಆದರೆ ಇದರೊಂದಿಗೆ ನೀವು ನಿಮ್ಮ ಹಣವನ್ನು ವ್ಯರ್ಥವಾಗಿ ಖರ್ಚು ಮಾಡದಂತೆ ನೋಡಿಕೊಳ್ಳಬೇಕು.

**ಮಕರ** ನೀವು ಹಾಗೆ ಮಾಡಬಾರದು. ಅದನ್ನು ತೊಂದರೆ ಇನ್ನಷ್ಟು ಹೆಚ್ಚಾಗುತ್ತದೆ ಕಡಿಮೆಯಾಗುವುದಿಲ್ಲ. ನಿಮ್ಮ ಶಕ್ತಿ ಮತ್ತು ಉತ್ಸಾಹವನ್ನು ಮರಳಿ ತರುವ ಒಂದು ಆನಂದಮಯ ಪ್ರವಾಸಕ್ಕೆ ಹೋಗುವ ಸಾಧ್ಯತೆಯಿದೆ.

**ಕುಂಭ** ಇತರರ ವಿರುದ್ಧ ದ್ವೇಷಕಾರುವುದು ಮಾನಸಿಕ ಒತ್ತಡವನ್ನು ನೀಡುತ್ತದೆ. ಇವುಗಳು ಜೀವನವನ್ನು ವ್ಯರ್ಥಗೊಳಿಸುವುದರಿಂದ ನಿಮ್ಮ ಸಾಮರ್ಥ್ಯವನ್ನು ಕೊಲ್ಲುವುದರಿಂದ ನೀವು ಈ ರೀತಿಯ ಆಲೋಚನೆಗಳನ್ನು ತಪ್ಪಿಸಬೇಕು.

**ಮೀನ** ನಿಮ್ಮ ಉತ್ತಮ ಆರೋಗ್ಯದ ಸಲುವಾಗಿ ದೀರ್ಘ ನಡಿಗೆಗೆ ಹೋಗಿ. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ. ನಿಮ್ಮ ವಂಶಸ್ಥರಿಗೆ ಏನಾದರೂ ವಿಶೇಷವಾದದ್ದನ್ನು ಯೋಜಿಸಿ.

## ರೈತರ ಕಬ್ಬಿನ ಬಿಲ್ಲು ಪಾವತಿಸುವಂತೆ ರೈತ ಮುಖಂಡರು ಪ್ರತಿಭಟನೆ

• ಉದಯವಾಹಿನಿ,ಚಿಂಚೋಳಿ

ತಾಲ್ಲೂಕು ಸೇರಿದಂತೆ ಸುತ್ತಮುತ್ತಲಿನ ಕಾಳಗಿ,ಸೇಡಂ,ಚಿತ್ತಾಪುರ,ಕಮಲಾಪೂರ, ತಾಲ್ಲೂಕಿನಲ್ಲಿ ಬೆಳೆದ ರೈತರ ಕಬ್ಬನ್ನು ಜಿಲ್ಲಾಧಿಕಾರಿಗಳ ಆದೇಶದ ಮೇರೆಗೆ ಕಾರ್ಖಾನೆಯವರು ಕಟಾವು ಮಾಡಿಕೊಂಡು ಹೋಗಿ ಸುಮಾರು ದಿನಗಳು ಕಳೆದರೂ ರೈತರು ಕಬ್ಬಿನ ಬಿಲ್ಲು ಪಾವತಿ ಮಾಡದೆ ರೈತರಿಗೆ ತೊಂದರೆ ನೀಡಿ ಅಲೆದಾಡಿಸುತ್ತಿರುವುದು ಖಂಡಿಸಿ ಹಾಗೂ ಶೀಘ್ರದಲ್ಲೇ ರೈತರ ಕಬ್ಬಿನ ಬಿಲ್ಲು ಪಾವತಿ ಮಾಡುವಂತೆ ಆಗ್ರಹಿಸಿ ಪಟ್ಟಣದ ತಹಶೀಲ್ ಕಛೇರಿ ಎದುರು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ರೈತ ಸೇನೆಯ ಕಾರ್ಯಕರ್ತರು ಪ್ರತಿಭಟನೆ ನಡೆಸಿ ತಹಶೀಲ್ದಾರ್ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿಪತ್ರ ಸಲ್ಲಿಸಿದರು.

ರೈತ ಸೇನೆ ಅಧ್ಯಕ್ಷ ವೀರಣ್ಣ ಗಂಗಾಣಿ ಮಾತನಾಡಿ ಜಿಲ್ಲಾಧಿಕಾರಿಗಳ ಆದೇಶ ಮೇರೆಗೆ ಬೀದರ ಸಕ್ಕರೆ ಕಾರ್ಖಾನೆ ಮತ್ತು ಆಳಂದ ಸಕ್ಕರೆ ಕಾರ್ಖಾನೆಗಳಿಗೆ ರೈತರು ಬೆಳೆದ ಕಬ್ಬು ಕಟಾವು ಮಾಡಿ ರವಾನಿಸಲಾಗಿದೆ ಆದರೆ 04 ತಿಂಗಳಾದರೂ ರೈತರ ಕಬ್ಬಿನ ಬಿಲ್ಲು ಪಾವತಿ ಮಾಡಿರುವುದಿಲ್ಲ,ಶೀಘ್ರದಲ್ಲೆ ಜಿಲ್ಲಾಧಿಕಾರಿ ಮಧ್ಯಸ್ಥಿಕೆ ವಹಿಸಿ ರೈತರ ಕಬ್ಬಿನ ಬಿಲ್ಲು ಪಾವತಿಸುವಂತೆ ಕಾರ್ಖಾನೆಗಳಿಗೆ ನಿರ್ದೇಶನ ನೀಡಬೇಕು.

ರೈತರ ಕಬ್ಬು ಖರೀದಿಸಿದ ಕಾರ್ಖಾನೆ 15 ದಿವಸದಲ್ಲಿ ಹಣ ಸಂದಾಯ ಮಾಡಬೇಕೆಂದು ಆದೇಶವಿದ್ದರೂ ಸಹ ರೈತರ ಕಬ್ಬಿನ ಬಿಲ್ಲು ಪಾವತಿ ಮಾಡದ ಕಾರ್ಖಾನೆಗಳ ವಿರುದ್ಧ ಜಿಲ್ಲಾಧಿಕಾರಿಗಳು ಕ್ರಮಕೈಗೊಳ್ಳಬೇಕು,ಯುಗಾದಿ ಹಬ್ಬ ಮುಕ್ತಾಯ ಆಗಿರುವುದರಿಂದ ರೈತರಿಗೆ ಬಹಳಷ್ಟು ಖರ್ಚು ವೆಚ್ಚು ಕೊಡುವುದು ಇರುತ್ತದೆ ಇಂಥಹ ಸಂದರ್ಭದಲ್ಲಿ ರೈತರಿಗೆ ಬಿಲ್ಲು ಪಾವತಿ ಮಾಡಿದರೆ ರೈತರು ನೆಮ್ಮದಿಯಿಂದ ಬದುಕಲು ಸಾಧ್ಯ ಎಂದರು. ಈ ಸಂದರ್ಭದಲ್ಲಿ ರಾಜಕುಮಾರ ತಳವಾರ,ಶ್ರೀಹರಿ ಭೈನೂರ,ಶ್ರೀಶೈಲ ರೆಡ್ಡಿ,ಚೇತನ ಅಣವಾರ,ಬಸವರಾಜ,ಮಲ್ಲಿಕಾರ್ಜುನ,ವಾಹೇದ್ ಪಟೇಲ,ಅಶೋಕ,ಶೇಖರ,ನಾಗೇಂದ್ರ ಸೇರಿದಂತೆ ಇದ್ದರು.

### ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿದೆ, ಅಭಿವೃದ್ಧಿ ಕೆಲಸಗಳು ಆಗುತ್ತಿಲ್ಲ, ಶಾಸಕರಿಗೆ ಅನುದಾನ ದೊರೆಯುತ್ತಿಲ್ಲ

## ಜಾತಿಗಳ ಮಧ್ಯೆ ವಿಷ ಬೀಜ ಬಿತ್ತಿರುವುದು ಕಾಂಗ್ರೆಸ್ ಪಕ್ಷ: ಡಾ.ಬೆಲ್ದಾಳೆ

• ಉದಯವಾಹಿನಿ ಬೀದರ್

ರಾಜ್ಯದಲ್ಲಿ ಜಾತಿ ಜನಗಣತಿ ಮಾಡಿ ಜಾತಿ ಜಾತಿಗಳ ಮಧ್ಯೆ ವಿಷ ಬೀಜ ಬಿತ್ತಿರುವುದು ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಪಕ್ಷ ಎಂದು ಭಾರತೀಯ ಜನತಾ ಪಕ್ಷದ ರಾಜ್ಯ ಕಾರ್ಯದರ್ಶಿಗಳು ಹಾಗೂ ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಡಾ ಶೈಲೇಂದ್ರ ಬೆಲ್ದಾಳೆ ವಾಗ್ದಾಳಿ ನಡೆಸಿದರು.

ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಜಾತಿ ಜನಗಣತಿ ಮಾಡಿ ಸೌಹಾರ್ದತೆಯಿಂದ ಬದುಕುತ್ತಿದ್ದ ನಮ್ಮೆಲ್ಲ ಸಹೋದರರ ಮಧ್ಯೆ ಜಗಳ ಹಚ್ಚುವ ಕಾರ್ಯ ಮಾಡಿದ್ದಾರೆ. ಈಗ ಅವರ ಸ್ವ ಪಕ್ಷದವರೇ ಇದನ್ನು ಧಿಕ್ಕರಿಸಿರುವುದರಿಂದ ಅವರಿಗೆ ಸಂಕಟ ಎದುರಾಗಿದೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರ ಸ್ವೀಕರಿಸಿ 22 ತಿಂಗಳು ಕಳೆದಿದೆ. ಅವರು ಬಂದಾಗಿನಿಂದ ರಾಜ್ಯದಲ್ಲಿ ಭ್ರಷ್ಟಾಚಾರ ತಾಂಡವಾಡುತ್ತಿದೆ, ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿದೆ, ಯಾವುದೇ ಅಭಿವೃದ್ಧಿ ಕೆಲಸಗಳು ಆಗುತ್ತಿಲ್ಲ. ಶಾಸಕರಿಗೆ ಹೆಚ್ಚಿನ ಅನುದಾನ ದೊರೆಯುತ್ತಿಲ್ಲ. ಅವರ ಸ್ವಪಕ್ಷದ ಶಾಸಕರಿಗೆ ಅನುದಾನ ದೊರೆಯುತ್ತಿಲ್ಲ.



ಉದಯವಾಹಿನಿ ಚಿತ್ರ

**60 ಜನ ಓಡಾಡುವ ಬಸ್ಸಿನಲ್ಲಿ 135ಕ್ಕೂ ಹೆಚ್ಚು ಜನರು ಓಡಾಟ**

**ಒಂದು ಕಡೆ ತಾಯಂದಿರಿಗೆ ಉಚಿತ ಬಸ್ ಪ್ರಯಾಣ ಮಾಡಲಾಗಿದೆ ಎಂದು ಹೇಳಿಕೊಂಡು ಮತ್ತೊಂದೆಡೆ ಪ್ರಯಾಣ ದರ ಹೆಚ್ಚಳ ಮಾಡಿ ಜನರ ಕಣ್ಣಿಗೆ ಮಣ್ಣೆರೆಚುವ ಕಾರ್ಯ ಈ ಸರಕಾರ ಮಾಡುತ್ತಿದೆ. ಇಲ್ಲಿಯ ವರೆಗೆ ಒಂದು ಹೊಸ ಬಸ್ ಖರೀದಿ ಮಾಡಲು ಇವರಿಂದ ಸಾಧ್ಯವಾಗಿಲ್ಲ ಉದಾಹರಣೆಯಾಗಿ ನನ್ನ ಕ್ಷೇತ್ರದ ದರೂರ್ ಹಾಗೂ ಮಣ್ಣಳ್ಳಿ ರಸ್ತೆಯಲ್ಲಿ ಓಡಾಡುತ್ತಿದ್ದ ನಾಲ್ಕು ಬಸ್ಸುಗಳ ಪೈಕಿ ಈಗ ಎರಡು ಬಸ್ಸುಗಳು ಮಾತ್ರ ಓಡಾಡುತ್ತಿವೆ. ಆ ಬಸ್ಸುಗಳಲ್ಲಿ 60 ಜನ ಓಡಾಡುವ ಬಸ್ಸಿನಲ್ಲಿ 135ಕ್ಕೂ ಹೆಚ್ಚು ಜನರು ಓಡಾಡುತ್ತಿರುವುದು ನಾಚಿಕೆಗೇಡಿನ ಸಂಗತಿ ಎಂದು ಹರಿಹೈದರು.**

ಅಭಿವೃದ್ಧಿ ಕೆಲಸಗಳು ಕುಂಠಿತವಾಗಿವೆ. ಪೆಟ್ರೋಲ್ ಹಾಗೂ ಡೀಸೆಲ್ ಮೇಲಿನ ಸುಂಕ 3 ರಿಂದದ 5 ರೂಪಾಯಿ ವರೆಗೆ ಏರಿಸಿದೆ.

ಕಾಂಗ್ರೆಸ್ಸನವರು ಕೇಂದ್ರ ಸರ್ಕಾರ ಪೆಟ್ರೋಲ್ ಡೀಸೆಲ್ ಜಾಸ್ತಿ ಮಾಡಿದೆ ಎಂದು ಹೇಳುತ್ತಿದ್ದಾರೆ ಆದರೆ ನರೇಂದ್ರ ಮೋದಿಯವರು ಪೆಟ್ರೋಲಿಯಂ ಕಂಪನಿಗಳ ಮೇಲಿನ ಆದಾಯದ ಮೇಲೆ ತೆರಿಗೆ ಹಾಕಿರುತ್ತಾರೆ. ಉದಾಹರಣೆಯಾಗಿ ಬಿ.ಪಿ.ಸಿ.ಎಲ್, ಐ ಓ ಸಿ ಎಲ್ ನಂತರಾ ಕಂಪನಿಗಳ ಲಾಭಾಂಶದಲ್ಲಿ ತೆರಿಗೆ ಹೆಚ್ಚಿಸಲಾಗಿದೆ ಹೊರತು ಜನರ ಮೇಲಲ್ಲ. ವಿದ್ಯುತ್ ಪ್ರತಿ ಯೂನಿಟ್ ಗೆ 35 ಪೈಸೆ ಜಾಸ್ತಿ ಮಾಡುವುದು ಮಾಡಿರುವುದು ಸ್ಮಾರ್ಟ್ ಮೀಟರ್ ಮೇಲೆ 950 ಇದ್ದಿದ್ದು 25,000 ವರೆಗೆ ಹೆಚ್ಚಿಸಲಾಗಿದೆ.

ನೀರಿನ ಪಂಪ್ಸೆಟ್ಟುಗಳ ದರ ರೂ.30000 ಇಂದ 3 ಲಕ್ಷದ ವರೆಗೆ ಹೆಚ್ಚಿಸಿದೆ. ಜನನ ಮರಣ ಪ್ರಮಾಣ ಪತ್ರದ ಬೆಲೆ ಸೇರಿ ಒಟ್ಟು 48 ವಸ್ತುಗಳ ಬೆಲೆ ಈ ಸರ್ಕಾರ ಹೆಚ್ಚಿಸಿದೆ.

ಆಸ್ಪತ್ರೆ ಸೇವಾ ಶುಲ್ಕ ರೂ. 50 ಇಂದ 100 ರೂಪಾಯಿಗೆ ಹೆಚ್ಚಿಸಲಾಗಿದೆ. ನೋಂದಣಿ ಶುಲ್ಕ 30% ಹೆಚ್ಚಳ ಮಾಡಲಾಗಿದೆ. ನೀರಿನ ದರ ಮೆಟ್ರೋ ದರ, ರೈತರ ಬಿತ್ತನೆ ಬೀಜ ದರ ಹೆಚ್ಚಿಸಿದೆ. ಬಾಂಡ್ ದರ ಹೆಚ್ಚಳ ಮಾಡಲಾಗಿದೆ ಒಟ್ಟಾರೆ ಅಗತ್ಯ ವಸ್ತುಗಳ ಬೆಲೆ ಈ ಸರ್ಕಾರ ಹೆಚ್ಚಿಗೆ ಮಾಡಿದೆ ಎಂದು ಆರೋಪಿಸಿದರು.

**ಬೆಲೆ ಏರಿಕೆ ಗಗನಕ್ಕೆ**

**ನಿನ್ನೆ ಮುಖ್ಯಮಂತ್ರಿಗಳು ತಮ್ಮ ಭಾಷಣದ ಮೂಲಕ ನಮ್ಮ ಸರಕಾರ ಸದೃಢವಾಗಿದೆ ಎಂದು ಹೇಳಿರುವುದು ಹಸಿ ಸುಳ್ಳು ಎರಡನೇ ಹಂತದ ಜನಾಕ್ರೋಶ ಕಾರ್ಯಕ್ರಮ ಹಮ್ಮಿಕೊಳ್ಳುವ ಮುಖ್ಯ ಉದ್ದೇಶವೆಂದರೆ ರಾಜ್ಯದಲ್ಲಿ ಬೆಲೆ ಏರಿಕೆ ಗಗನಕ್ಕೇರಿದೆ. ಪ್ರಧಾನಿ ನರೇಂದ್ರ ಮೋದಿಯವರು ದೇಶದ ಜನರಿಗೆ ಅಚ್ಚೆ ದಿನ್ ಕೊಟ್ಟರೆ, ರಾಜ್ಯ ಸರ್ಕಾರ ನಮ್ಮ ನಾಡಿಗೆ ಮಹೆಂಗಾಯಿ ದಿನ್ ನೆನಪಿಸಿದೆ. ಹಾಲಿನ ದರ ಎರಡು ವರ್ಷದಲ್ಲಿ ಮೂರು ಪಟ್ಟು ಹೆಚ್ಚಾಗಿದೆ ಅಂದರೆ ಪ್ರತಿ ತಿಂಗಳಿಗೆ 270 ಯಿಂದ ರೂ.300 ವರೆಗೆ ಹೆಚ್ಚಳ ಮಾಡಿದಂತಾಗಿದೆ.**

**ಸರ್ಕಾರದಿಂದ ಹಣ ಲೂಟಿ**

**ಮೊನ್ನೆ ಬೆಂಗಳೂರಿನಲ್ಲಿ ಕಸದ ಮೇಲೆ ಸಹ ತೆರಿಗೆ ಹಾಕಿ ಈ ಸರ್ಕಾರ ಲೂಟಿ ಮಾಡುತ್ತಿದೆ ಎಂದರು ತಪ್ಪಾಗಲಾರದು. ಮೊದಲು ಸಾವಿರ ರೂಪಾಯಿಗೆ ಇದ್ದ ಮುದ್ರಾಂಕ ಶುಲ್ಕ 5,000 ಗೆ ಹೆಚ್ಚಳವಾಗಿದೆ. 550 ಏಪಿಏ, ಎಂಪಿ, ಟಿ.ಎಮ್.ಸಿ ದರ ಹೆಚ್ಚಳವಾಗಿದೆ. ಕೃಷಿ ಭೂಮಿಗೆ ರೂ.250 ಇದ್ದುದ್ದು ಒಂದು ಸಾವಿರ ರೂಪಾಯಿಗೆ ಹೆಚ್ಚಿಸಲಾಗಿದೆ. ಮಧ್ಯದ ಬೆಲೆ 40 ಪ್ರತಿಶತ ಹೆಚ್ಚಳವಾಗಿದೆ. ಗ್ಯಾರಂಟಿ ಹಣ ಸರಿದೂಗಿಸಲು ಇಷ್ಟು ಹೆಚ್ಚಿನ ಭಾರ ಜನರ ಮೇಲೆ ಹೇರಿಸಲಾಗಿದೆ. ಬಸ್ ದರ 15 ಪ್ರತಿಶತ ಹೆಚ್ಚಳ ಮಾಡಲಾಗಿದೆ.**

## ನ್ಯಾಯಾಲಯ ಕಟ್ಟಡಕ್ಕೆ ಅನುದಾನ ಬಿಡುಗಡೆಗೆ ಒತ್ತಾಯಿಸಿ ಮೇ.5ರಿಂದ ಧರಣಿ ಸತ್ಯಾಗ್ರಹ: ಕಟ್ಟಿಮನಿ

• ಉದಯವಾಹಿನಿ, ಚಿಂಚೋಳಿ

ಪ್ರಧಾನ ಸಿವಿಲ್ ನ್ಯಾಯಾಲಯದ ಕಟ್ಟಡಕ್ಕೆ ರಾಜ್ಯ ಸರ್ಕಾರ ಹಣ ಒದಗಿಸುವಲ್ಲಿ ವಿಳಂಬ ನೀತಿ ಅನುಸರಿಸುತ್ತಿರುವ ಕಾರಣ ನ್ಯಾಯಾಲಯ ಮುಂದೆವಿರುವ ಮುಖ್ಯ ರಸ್ತೆ ಪಕ್ಕದಲ್ಲಿ ಮೇ.05 ರಿಂದ ವಕೀಲರ ಸಂಘ ಮತ್ತು ಸಮಾನ ಮನಸ್ಕ ಸಂಘಟನೆಗಳಿಂದ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗುವುದು ಎಂದು ವಕೀಲರ ಸಂಘದ ಅಧ್ಯಕ್ಷ ಶ್ರೀಮಂತ ಕಟ್ಟಿಮನಿ ತಿಳಿಸಿದ್ದಾರೆ.



ರಾಜ್ಯ ಸರ್ಕಾರದ ಲೋಕೋಪಯೋಗಿ ಇಲಾಖೆಯ ಪ್ರಧಾನ ಕಾರ್ಯದರ್ಶಿಗೆ ಪತ್ರ ಬರೆದ ಅವರು,ಅಂದಾಜು 100 ವರ್ಷಗಳ ಹಿಂದಿನ ಹಳೆಯ ಕಟ್ಟಡವಿದ್ದು ಬೀಳುವ ಹಂತದಲ್ಲಿದೆ ಅದನ್ನು ನೆಲಸಮ ಮಾಡಿ ನೂತನ ಕಟ್ಟಡ ನಿರ್ಮಾಣಕ್ಕೆ ಅನೇಕ ಬಾರಿ ಮನವಿಪತ್ರ ಪ್ರತಿಭಟನೆ ಮಾಡಿದರೂ ಸರ್ಕಾರ ಯಾವುದೇ ಕ್ರಮಕೇಗೊಳ್ಳುತ್ತಿಲ್ಲ,ಸದರಿ ವಿಷಯ ವಿಧಾನಸೌಧದ ಅಧಿವೇಶನದಲ್ಲಿ ಕೂಡ ಭರವಸೆ ನೀಡಿದರೂ ಇಲ್ಲಿಯವರೆಗೆ ಯಾವುದೇ ಪರಿಹಾರ ದೊರಕುತ್ತಿಲ್ಲಾ.

ಆದುದರಿಂದ ಮೇ.05ರ ಒಳಗೆ ಅನುದಾನ ಬಿಡುಗಡೆ ಮಾಡಿದರೆ ಒಳ್ಳೆಯದು ಇಲ್ಲಾದಿದ್ದರೆ ವಕೀಲರ ಸಂಘದ ಜೋತೆ ತಾಲ್ಲೂಕಿನ ಸಮಾನ ಮನಸ್ಕರದೊಂದಿಗೆ ಮೇ.05 ರಿಂದ ಧರಣಿ ಸತ್ಯಾಗ್ರಹ ಮಾಡಲಾಗುವುದು ಎಂದು ಪತ್ರ ಬರೆದು ಸರ್ಕಾರಕ್ಕೆ ರವಾನಿಸಿದ್ದೇನೆ ಎಂದು ತಿಳಿಸಿದ್ದಾರೆ.

## ಕಾನೂನು ಕೈಗೊತ್ತಿಕೊಳ್ಳದೇ ಠಾಣೆಗೆ ಮಾಹಿತಿ ನೀಡುವಂತೆ ಮನವಿ

• ಉದಯವಾಹಿನಿ, ಸುಳ್ಯ

ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ಸಮಸ್ಯೆಗಳ ಬಗ್ಗೆ ಮತ್ತು ಅವರಿಗೆ ಕಾನೂನು ಮಾಹಿತಿ ಹಾಗೂ ಅರಿವು ನೀಡುವ ಬಗ್ಗೆ ಸುಳ್ಯ ಪೊಲೀಸ್ ಠಾಣಾ ಸಭಾಂಗಣದಲ್ಲಿ ಮುಖಂಡರ ಸಭೆ ನಡೆಯಿತು. ಸಭೆಯ ಅಧ್ಯಕ್ಷತೆಯನ್ನು ಸುಳ್ಯ ಪೊಲೀಸ್ ಠಾಣಾ ಉಪನಿರೀಕ್ಷಕ ಸಂತೋಷ್ ಬಿ.ಪಿ. ಯವರು ವಹಿಸಿ ಮಾತನಾಡಿ 'ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದವರಿಗೆ ಕಾನೂನು ಮಾಹಿತಿ ಮತ್ತು ಅರಿವು ನೀಡುವ ಉದ್ದೇಶದಿಂದ ಈ ರೀತಿಯ ಸಭೆಗಳನ್ನು ಮಾಡುತ್ತಿದ್ದು ಕಾನೂನಿನ ನೆರವು ಪಡೆಯಲು ಪ್ರಯೋಜನವಾಗಲಿದೆ.

ಸಭೆಯಲ್ಲಿ ಭಾಗವಹಿಸಿದ್ದ ಎಸ್ಸಿ, ಎಸ್ಟಿ ಸಮುದಾಯದ ಮುಖಂಡರುಗಳು ಮಾತ



ಉದಯವಾಹಿನಿ ಚಿತ್ರ


ನಾಡಿ ಗ್ರಾಮಗಳಲ್ಲಿ ಗಳಲ್ಲಿ ಬೀಟ್ ಪೊಲೀಸರ ನೇತೃತ್ವದಲ್ಲಿ ಸಭೆ ನಡೆಸಬೇಕು. ನಗರದಲ್ಲಿ ನಡೆಯುವ ಒಂದಕ್ಕಿ ಲಾಟರಿಗೆ ಕಡಿವಾಣ ಹಾಕಬೇಕು. ಕಾಲೋನಿಗಳಲ್ಲಿ ಮದ್ಯಪಾನ ವ್ಯಸನಿಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಅಂತಹ ಕಾಲೋನಿಗಳಲ್ಲಿ ಸಭೆ ನಡೆಸಿ ಅವರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಬೇಕು ಎಂದರು. ಸಾರ್ವಜನಿಕರ ಸೇವೆಗಾಗಿ ಪೊಲೀಸ್ ಇಲಾಖೆ ದುಡಿಯುತ್ತಿದ್ದು ಜನರ

**ಯಾವುದೇ ಕಾರಣಕ್ಕೂ ತಮ್ಮ ತಮ್ಮ ಪರಿಸರಗಳಲ್ಲಿ ಗೊಂದಲಗಳು ಉಂಟಾದರೆ ಅದನ್ನು ತಾವುಗಳೇ ಪರಿಹರಿಸಲು ಹೋಗದೆ ಪೊಲೀಸ್ ಇಲಾಖೆಯ ಗಮನಕ್ಕೆ ಮಾಹಿತಿಯನ್ನು ನೀಡಬೇಕು. ಅಲ್ಲದೆ ವಾಸಿಸುವ ಪ್ರದೇಶಗಳಲ್ಲಿ ಯಾವುದಾದರೂ ಸಮಾಜ ಘಾತುಕ ಘಟನೆಗಳು ನಡೆದು ಬಂದಲ್ಲಿ ಠಾಣೆಗೆ ಮಾಹಿತಿ ನೀಡುವಂತೆ ಕೇಳಿಕೊಂಡರು.**

ಈ ಬೇಡಿಕೆಗೆ ಇಲಾಖೆಯಿಂದ ಸ್ಪಂದಿಸುವ ಭರವಸೆಯನ್ನು ಎಸ್ಐ ನೀಡಿದರು.

## ಕಾಳಿಕಾಂಬಾದೇವಿ ರಥೋತ್ಸವ 30ಕ್ಕೆ

• ಉದಯವಾಹಿನಿ, ಹಿರಿಯೂರು



ಉದಯವಾಹಿನಿ ಚಿತ್ರ

ನಗರದ ತೇರುಮಲೇಶ್ವರಸ್ವಾಮಿ ದೇವಸ್ಥಾನದ ಆವರಣದಲ್ಲಿರುವ ಕಾಳಿಕಾಂಬಾದೇವಿ ಅಮ್ಮನವರ ರಥೋತ್ಸವ ಏ.30ರಂದು ಬೆ.10.30ಕ್ಕೆ ನಡೆಯಲಿದೆ ಎಂದು ದೇವಸ್ಥಾನದ ಅರ್ಚಕರು ಹೇಳಿದ್ದಾರೆ. ಏ. 28ರಂದು ಗಂಗಾ ಪೂಜೆ, ಗಣಪತಿ ಪೂಜೆ, ಕಂಕಣ ಪೂಜೆ, ಧ್ವಜಾರೋಹಣದ ನಂತರ ಅಭಿಷೇಕ ನಡೆಯಲಿದೆ. 29ರಂದು ಬೆಳಿಗ್ಗೆ ಅಭಿಷೇಕ, ಅರ್ಚನೆ, ತೊಟ್ಟಿಲ ಪೂಜೆ ನಂತರ ಮಹಾಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ ನಡೆಯಲಿದೆ. 30ರಂದು ಅಮ್ಮನವರ ರಥೋತ್ಸವದ ಪ್ರಯುಕ್ತ ಸುಮಂಗಲಿಯರಿಂದ ತಂಬಿಟ್ಟಿನ ಆರತಿ ಮತ್ತು ಮಡ್ಲಕ್ಕಿ ಸೇವೆ ನಡೆಯಲಿದ್ದು ರಥೋತ್ಸವದ ನಂತರ ಭಕ್ತರಿಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿದೆ ಎಂದು ಅರ್ಚಕರು ತಿಳಿಸಿದ್ದಾರೆ.

## ಸ್ಕೂಟರ್ ಓಡಿಸಿದ ಬಾಲಕನ ಪೋಷಕರಿಗೆ 25 ಸಾವಿರ ದಂಡ

• ಉದಯವಾಹಿನಿ, ಚಿಕ್ಕಮಗಳೂರು

ಅಪ್ರಾಪ್ತನಿಗೆ ಸ್ಕೂಟರ್ ಚಾಲನೆ ಮಾಡಲು ಅವಕಾಶ ನೀಡಿದ್ದ ಪೋಷಕರಿಗೆ ಮೂಡಿಗೆರೆ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯ 25 ಸಾವಿರ ದಂಡ ವಿಧಿಸಿದೆ. ಮೂಡಿಗೆರೆ ಪಟ್ಟಣದ ಬಾಪು ನಗರದಲ್ಲಿ ಏ.4ರಂದು ಬಾಲಕ ಸ್ಕೂಟರ್ ಚಾಲನೆ ಮಾಡುತ್ತಿದ್ದಾಗ ಪೊಲೀಸರು ತಡೆದು ದ್ವಿಚಕ್ರ ವಾಹನ ವಶಕ್ಕೆ ಪಡೆದಿದ್ದರು. ಸ್ಕೂಟರ್ ಚಾಲನೆ ಮಾಡಲು ಅವಕಾಶ ನೀಡಿದ ಬಾಲಕನ ತಂದೆ ಮೊಹಮ್ಮದ್ ಸಿರಾಜ್ ವಿರುದ್ಧ ಪ್ರಕರಣ ದಾಖಲಿಸಿದ್ದರು. ವಿಚಾರಣೆ ನಡೆಸಿದ ನ್ಯಾಯಾಲಯ ದಂಡ ವಿಧಿಸಿ ಆದೇಶಿಸಿದೆ.

## ಏಳನೇ ಸುತ್ತಿನ ಜಾನುವಾರು ಕಾಲುಬಾಯಿ ರೋಗ ಲಸಿಕಾ ಅಭಿಯಾನ ಯಶಸ್ವಿಯಾಗಿ ಹಮ್ಮಿಕೊಳ್ಳಲು ಸೂಚನೆ

• ಉದಯವಾಹಿನಿ, ಯಾದಗಿರಿ

ಜಿಲ್ಲಾ ಪಂಚಾಯತ್ ಹಾಗೂ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ,ಯಾದಗಿರಿ ಇವರ ಸಹಯೋಗದಲ್ಲಿ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ 7ನೇ ಸುತ್ತಿನ ಕಾಲುಬಾಯಿ ರೋಗ ಲಸಿಕಾ ಅಭಿಯಾನ ಇದೇ ಏಪ್ರಿಲ್ 21ರಿಂದ ಜೂನ್ 4ರವರೆಗೆ ಯಶಸ್ವಿಯಾಗಿ ಹಮ್ಮಿಕೊಳ್ಳುವಂತೆ ಅಪರ್ ಜಿಲ್ಲಾಧಿಕಾರಿ ಶರಣ ಬಸಪ್ಪ ಕೋಟೆಪ್ಪಗೋಳ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು 7ನೇ ಸುತ್ತಿನ ಜಾನುವಾರು ಕಾಲುಬಾಯಿ ಲಸಿಕಾ ಅಭಿಯಾನ ಕುರಿತು ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ರೈತರಿಗೆ ಆರ್ಥಿಕ ಸಂಕಷ್ಟ ಉಂಟುಮಾಡುವ ಜಾನುವಾರು ಕಾಲುಬಾಯಿ ರೋಗದಿಂದ ರಾಜ್ಯ ಹಾಗೂ ಜಿಲ್ಲೆಯನ್ನು ಮುಕ್ತ ಮಾಡುವಲ್ಲಿ ಸಹಕರಿಸಬೇಕು. ಕಾಲುಬಾಯಿ ರೋಗವು ವೈರಾಣುವಿನಿಂದ ಬರುವ ಅಂಟು ಜಾಡ್ಯವಾಗಿದ್ದು,ಲಸಿಕೆ ಹಾಕುವದೊಂದೇ ರೋಗ ನಿಯಂತ್ರಿಸಲು ಏಕೈಕ ಮಾರ್ಗವಾಗಿರುವದರಿಂದ ರೈತರು ಹೈನುಗಾರರು ಸಹಕರಿಸುವಂತೆ ಸಲಹೆ ನೀಡಿದರು. ಕಾಲುಬಾಯಿ ರೋಗವು ಎತ್ತು ಹೋರಿ, ಹಸು,ಎಮ್ಮೆ ಮತ್ತು ಹಂದಿಗಳಿಗೆ ತಗಲುವ ಮಾರಕ ರೋಗವಾಗಿದೆ.ಈ



ಉದಯವಾಹಿನಿ ಚಿತ್ರ


ಹಿನ್ನೆಲೆಯಲ್ಲಿ ಲಸಿಕೆ ಹಾಕಲು ಪಶುವೈದ್ಯರು,ಪಶುಸಖಿಯರು, ಡಿಪ್ಲೊಮಾ ವಿದ್ಯಾರ್ಥಿಗಳು ಆಗಮಿಸಿದ ಸಂದರ್ಭದಲ್ಲಿ ಸಹಕರಿಸುವಂತೆ ತಿಳಿಸಿರುವ ಅವರು ನಿಗದಿತ ಯಾವುದೇ ಜಾನುವಾರು ಈ ಲಸಿಕೆಯಿಂದ ವಂಚಿತರಾಗದಂತೆ ಎಚ್ಚರಿಕೆ ವಹಿಸಲು ಅವರು. ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಉಪನಿರ್ದೇಶಕ ರಾಜು ದೇಶಮುಖ್ ಅವರು ಮಾತನಾಡಿ, ವರ್ಷದಲ್ಲಿ ಕನಿಷ್ಠ ಎರಡು ಬಾರಿ ಲಸಿಕೆ ಹಾಕುವದರಿಂದ ರೋಗ ತಡೆಗಟ್ಟಲು ಸಾಧ್ಯ..ಮೂರು ತಿಂಗಳ ಮೇಲ್ಪಟ್ಟ ಎಲ್ಲಾ ಕರುಗಳಿಗೆ ತಪ್ಪದೇ ಲಸಿಕೆ ಹಾಕಿಸಿದ ನಂತರ ಮತ್ತೊಮ್ಮೆ 3 ರಿಂದ 5 ವಾರದೊಳಗೆ ಬೂಸ್ಟರ್ ಲಸಿಕೆ ಹಾಕಿಸಲಾಗುತ್ತದೆ. ಅದರಂತೆ ದನ ಮತ್ತು ಎಮ್ಮೆ ಗಳಿಗೂ ಲಸಿಕೆ ಹಾಕಲಾಗುತ್ತಿದೆ.ಗರ್ಭಧರಿಸಿದ ಹಸು ಎಮ್ಮೆ ಗಳಿಗೂ ಲಸಿಕೆ ಹಾಕಲಾಗುತ್ತಿದ್ದು,ಹಿಂದೆ ಎಷ್ಟೇ ಬಾರಿ ಲಸಿಕೆ ಹಾಕಿಸಿದ್ದರೂ ಸಹ ಪ್ರತಿ ಆರು ತಿಂಗಳಿಗೊಮ್ಮೆ ಕೈಗೊಳ್ಳುವ ಈ ಸಾಮೂಹಿಕ ಲಸಿಕಾ ಕಾರ್ಯಕ್ರಮದಲ್ಲಿ ತಪ್ಪದೇ, ಲಸಿಕೆ ಹಾಕಿಸುವಂತೆ ಅವರು ತಿಳಿಸಿದರು.

ಪಶು ವೈದ್ಯಾಧಿಕಾರಿಗಳು ಹಾಗೂ ಇತರ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

**ಜಿಲ್ಲೆಯಲ್ಲಿ 20ನೇ ಜಾನುವಾರು ಗಣತಿ ಅನ್ವಯ ಒಟ್ಟು 2,90,774 ದನ , ಎಮ್ಮೆ,ಹಂದಿ ಗುರುತಿಸಿದೆ. ಈ ಲಸಿಕೆ ಕಾರ್ಯಕ್ರಮದ ಅಂಗವಾಗಿ 2,84,400 ಲಸಿಕೆ (ಡೋಜ್ಗಳಲ್ಲಿ) ಸರಬರಾಜು ಆಗಿವೆ. ಜಿಲ್ಲೆಯ 19 ಪಶು ಚಿಕಿತ್ಸಾಲಯ ಹಾಗೂ ಪಶು ಆಸ್ಪತ್ರೆಗಳಲ್ಲಿ 178 ವ್ಯಾಕ್ಸಿನ್ ಕ್ಯಾರಿಯರ್ಸ ಲಭ್ಯ ಇವೆ.193 ಲಸಿಕೆದಾರರ ವ್ಯವಸ್ಥೆ ಮಾಡಲಾಗಿದೆ. ತುರ್ತು ಔಷಧಿಗಳು ಲಭ್ಯ ಇವೆ ಎಂದು ಸಭೆಗೆ ತಿಳಿಸಿದರು.ಸಭೆಯಲ್ಲಿ ಅಪರ್ ಜಿಲ್ಲಾಧಿಕಾರಿಗಳು ಪ್ರಚಾರ ಸಾಮಗ್ರಿಗಳನ್ನು ಬಿಡುಗಡೆ ಮಾಡಿದರು.**

## ಗ್ಯಾರಂಟಿ ಅನುಷ್ಠಾನ ಸಮಿತಿ ಸಭೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಧಾರವಾಡ

ಧಾರವಾಡ ಪಶ್ಚಿಮ ಕ್ಷೇತ್ರದ ಗ್ಯಾರಂಟಿ ಅನುಷ್ಠಾನ ಸಮಿತಿಯ ಸಭೆಯನ್ನು ಗೀತಾ ತಾವಂಶಿ ಅವರ ಅಧ್ಯಕ್ಷತೆಯಲ್ಲಿ ಮಹಾನಗರ ಪಾಲಿಕೆಯಲ್ಲಿ ಜರುಗಿತು.

ಸಭೆಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಕುರಿತು ಇಲಾಖಾವಾರು ಅಧಿಕಾರಿಗಳು ವಿವರಿಸಿದರು.

ಗೃಹ ಲಕ್ಷ್ಮೀ ಯೋಜನೆ ಅಡಿ ಸಲ್ಲಿಸಿದ ಅರ್ಜಿಗಳಲ್ಲಿ ಎಲ್ಲರಿಗೂ ಹಣ ಬರುತ್ತಿವೆ. ಬಾಕಿ ಇರುವ 95 ಜನರಿಗೆ ಐಟಿ, ಜಿಎಸ್‌ಟಿ, ಕೆವೈಸಿ ಕಾರಣಗಳಿಂದ ಬಾಕಿ ಉಳಿದಿರುವ ಕುರಿತು ಚರ್ಚಿಸಲಾಯಿತು. ಅನ್ನಭಾಗ್ಯ ಯೋಜನೆಯಡಿ ವಿತರಣೆಯಾಗುವ ಪಡಿತರದ ದುರಪಯೋಗ ಆಗದಂತೆ ಅಧಿಕಾರಿಗಳು ಎಚ್ಚರ ವಹಿಸಬೇಕೆಂದು ಗೀತಾ ತಾವಂಶಿ ಅವರು ಹೇಳಿದರು.

ಸಭೆಯಲ್ಲಿ ಅನ್ನಭಾಗ್ಯ ಯೋಜನೆ ಬಗ್ಗೆ ಚರ್ಚಿಸಲಾಯಿತು. ಶಕ್ತಿ ಯೋಜನೆ ಬಗ್ಗೆ ಅಧಿಕಾರಿ ಬಸವರಾಜ ತೇರದಾಳ ಗೃಹ ಜ್ಯೋತಿ ಯೋಜನೆ ಬಗ್ಗೆ ಹೆಸ್ಕಾಂ ಅಧಿಕಾರಿಗಳು ವಿವರಿಸಿದರು. ಸಭೆಯಲ್ಲಿ ಸಿದ್ದೇಶ್ವರ.ರಾ.ಕಾರದಕಟ್ಟಿ, ಇರ್ಷಾದ ಬಯಕದಾರ, ಗೌಸ ನವಲೂರ. ಭರಮಪ್ಪ ಬಂಗಾರಿ. ರಾಜು ಚಲವಾದಿ, ತ್ರಿಸಿಲಾ ಜೈನ್, ಸುನಂದಾ ಕೋಲಕರ ಹಾಗೂ ಮಹಾನಗರ ಪಾಲಿಕೆಯ ಅಧಿಕಾರಿಗಳು ಅವರು ಭಾಗವಹಿಸಿದ್ದರು.

## ಕುಕನೂರು ಬಸ್ ನಿಲ್ದಾಣ: ಸೌಲಭ್ಯಗಳ ಕೊರತೆ

• ಉದಯವಾಹಿನಿ, ಕುಕನೂರು

ನೂತನ ತಾಲ್ಲೂಕು ಕೇಂದ್ರವಾದ ಪಟ್ಟಣದಲ್ಲಿ ಒಂದು ದಶಕದ ಹಿಂದೆ ಸುಸಜ್ಜಿತವಾದ ಬಸ್ ನಿಲ್ದಾಣ ನಿರ್ಮಿಸಲಾಗಿದೆ. ಆದರೆ, ಇಂದಿಗೂ ಕುಡಿಯುವ ನೀರು ಸೇರಿದಂತೆ ಇತರ ಸೌಲಭ್ಯ ಒದಗಿಸುವಲ್ಲಿ ಸಾರಿಗೆ ಇಲಾಖೆ ವಿಫಲವಾಗಿದೆ.

ಪಟ್ಟಣದ ಮುಖಾಂತರ ನಿತ್ಯ 120ಕ್ಕೂ ಹೆಚ್ಚು ಬಸ್‌ಗಳು ವಿವಿಧ ನಗರ ಹಾಗೂ ಅಂತರ್ ರಾಜ್ಯಗಳಿಗೆ ತೆರಳುತ್ತವೆ. ಆದರೆ, ಇಲ್ಲಿನ ಬಸ್ ನಿಲ್ದಾಣದಲ್ಲಿ ಇಂದಿಗೂ ಪ್ರಯಾಣಿಕರಿಗೆ ಕುಡಿಯುವ ನೀರಿನ ಸೌಲಭ್ಯ ಒದಗಿಸಿಲ್ಲ. ಇದರಿಂದಾಗಿ ಪ್ರಯಾಣಿಕರು ತೊಂದರೆ ಪಡುವಂತಾಗಿದೆ. ಗ್ರಾಮೀಣ ಭಾಗದಲ್ಲಿ ನಿತ್ಯ ಕುಕನೂರು ಪಟ್ಟಣಕ್ಕೆ ನೂರಾರು ವಿದ್ಯಾರ್ಥಿಗಳು ಆಗಮಿಸುತ್ತಾರೆ.



ಉದಯವಾಹಿನಿ ಚಿತ್ರ

ಆದರೆ, ಕುಡಿಯುವ ನೀರಿನ ಸೌಲಭ್ಯ ಇಲ್ಲದ್ದರಿಂದಾಗಿ ಬಸ್ ನಿಲ್ದಾಣದಲ್ಲಿ ಕ್ಯಾಂಟೀನ್ ಇಲ್ಲದೇ ಹೋಟೆಲ್ಗಳಿಗೆ ತೆರಳಿ ನೀರು ಕುಡಿಯಬೇಕಿದೆ. ಇನ್ನು ಶೌಚಾಲಯಗಳು ಸ್ವಚ್ಛ ಇಲ್ಲ. ಅಲ್ಲದೇ ಮಹಿಳೆಯರು ಮೂತ್ರಾಲಯಕ್ಕೆ ತೆರಳಿದರೆ 10 ಪಡೆಯುತ್ತಾರೆ ಎಂದು ಪ್ರಯಾಣಿಕರೊಬ್ಬರು ದೂರಿದರು.

**ಬಂದ್ ಆಗಿರುವ ಕ್ಯಾಂಟೀನ್ :** ಪ್ರಯಾಣಿಕರು ನಿಲ್ದಾಣದಲ್ಲಿ ಕ್ಯಾಂಟೀನ್ ವ್ಯವಸ್ಥೆ ಇಲ್ಲದೆ ಪರದಾಡುವಂತಾಗಿದೆ. ದುಬಾರಿ ಬಾಡಿಗೆಯಿಂದಾಗಿ ಕ್ಯಾಂಟೀನ್ ಕಡೆ ಬಾಡಿಗೆ ತೆಗೆದುಕೊಳ್ಳಲು ಯಾರು ಬರುತ್ತಿಲ್ಲ ಎಂದು ಪ್ರಯಾಣಿಕರೊಬ್ಬರು ಹೇಳಿದರು. ಬಸ್ ನಿಲ್ದಾಣದಲ್ಲಿ ಅಳವಡಿಲಾಗಿದ್ದ ಸಿಸಿಟಿವಿ ಕ್ಯಾಮರಾ ಕೆಟ್ಟು ವರ್ಷವೇ ಸಮೀಪಿಸುತ್ತಿದ್ದರೂ ಇಂದಿಗೂ ಅಧಿಕಾರಿಗಳು ಅತ್ತ ಗಮನ ಹರಿಸಿಲ್ಲ. ಅಲ್ಲದೇ ದುರಸ್ತಿ ಮಾಡುವ ಗೋಜಿಗೆ ಹೋಗಿಲ್ಲ. ಪಟ್ಟಣದ ಹೃದಯ ಭಾಗದಲ್ಲಿಯೇ ಬಸ್ ನಿಲ್ದಾಣ ಇರುವುದರಿಂದಾಗಿ ಖಾಸಗಿ ವಾಹನಗಳನ್ನು ಬಸ್ ನಿಲ್ದಾಣದ ಮುಂದೆಯೇ ನಿಲ್ಲಿಸಲಾಗುತ್ತಿದೆ.

### ಸಮರ್ಪಕ ಸಿಎನ್‌ಜಿ ಸಿಗದ ಕಾರಣ ಇಲ್ಲಿನ ಅನಿಲ ಪೂರೈಕೆ ಪಂಪ್‌ಗಳ ಎದುರು ವಾಹನಗಳ ಸರತಿ ಸಾಲು

## ಪೂರೈಕೆ ಕೊರತೆ: ಬೇಡಿಕೆ ಇದ್ದರೂ ಸಿಗದ ಸಿಎನ್‌ಜಿ

• ಉದಯವಾಹಿನಿ, ದಾವಣಗೆರೆ

ಜಿಲ್ಲೆಯಲ್ಲಿ ಸಂಕುಚಿತ ನೈಸರ್ಗಿಕ ಅನಿಲ (ಸಿಎನ್‌ಜಿ) ಪೂರೈಕೆಯಲ್ಲಿ ವ್ಯತ್ಯಯವಾಗಿದ್ದು, ಆಟೊ, ಕಾರು ಚಾಲಕರು ಪರದಾಡುವಂತಾಗಿದೆ. ಸಮರ್ಪಕ ಸಿಎನ್‌ಜಿ ಸಿಗದ ಕಾರಣ ಇಲ್ಲಿನ ಅನಿಲ ಪೂರೈಕೆ ಪಂಪ್‌ಗಳ ಎದುರು ವಾಹನಗಳ ಸರತಿ ಸಾಲು ಕಂಡುಬರುತ್ತಿದೆ.

ಹಲವು ದಿನಗಳಿಂದ ಇಲ್ಲಿನ ಐಟಿಐ ಗೇಟ್, ಬೈಪಾಸ್ ರಸ್ತೆ ಹಾಗೂ ಚಿಂದೋಡಿ ಲೀಲಾ ರಂಗ ಮಂದಿರದ ಬಳಿಯ ಪಂಪ್‌ಗಳ ಎದುರು ಸರತಿ ಸಾಲು ಸಾಮಾನ್ಯ ಎಂಬಂತಾಗಿದೆ.

ಅನಿಲ ತುಂಬಿಸಲು ಪಂಪ್‌ಗಳ ಎದುರು ಗಂಟೆಗಟ್ಟಲೇ ನಿಲ್ಲುವಂತಾಗಿದೆ. ಇದರಿಂದ ದಿನದಲ್ಲಿ ಬಾಡಿಗೆ ಓಡಿಸಲಾಗದೆ ಸಮರ್ಪಕ ದುಡಿಮೆಯೂ ಇಲ್ಲವಾಗಿದೆ ಎಂಬುದು ಆಟೊ ಚಾಲಕರ ಅಳಲು.

ವಾಹನಗಳಿಗೆ ಸಿಎನ್‌ಜಿ ಪೂರೈಕೆ ಆರಂಭವಾದಾಗಿನಿಂದ (ವರ್ಷದಿಂದ) ಈ ಸಮಸ್ಯೆ ಇದೆ. ನಗರದಲ್ಲಿ ಸಿಎನ್‌ಜಿ ಪಂಪ್‌ಗಳನ್ನು ಹೆಚ್ಚಿಸಬೇಕು. ಇಲ್ಲವೇ ಸಮರ್ಪಕ ಪೂರೈಕೆ ಮಾಡಬೇಕು ಎಂಬುದು ಆಟೊ, ಕಾರು ಚಾಲಕರ ಒತ್ತಾಯ.



ಉದಯವಾಹಿನಿ ಚಿತ್ರ

'ಸದ್ಯ ಅನಿಲ ಸರಬರಾಜು ಇಲ್ಲ. ಬೇರೆ ಕಂಪನಿಯಿಂದ ಪಡೆದುಕೊಂಡು ಅನಿಲ ಪೂರೈಸುತ್ತಿದ್ದೇವೆ. ಭಾರತೀಯ ಅನಿಲ ಪ್ರಾಧಿಕಾರ (ಗೇಲ್) ದಿಂದ ಎಷ್ಟು ಪೂರೈಕೆಗೆ ಅನುಮತಿ ಇದೆಯೋ ಅಷ್ಟರಲ್ಲಿ ನಮಗೆ ಅಗತ್ಯವಿರುವಷ್ಟನ್ನು ಇತರೆ ಕಂಪನಿಯಿಂದ ಪಡೆಯುತ್ತಿದ್ದೇವೆ. ಹೆಚ್ಚಿನ ಬೇಡಿಕೆಗೂ ಮನವಿ ಸಲ್ಲಿಸಿದ್ದೇವೆ' ಎಂದು ಮಹಾನಗರ ಸಿಎನ್‌ಜಿ ಗ್ಯಾಸ್ ಕಂಪನಿ (ಗೇಲ್‌ನಿಂದ ಅನುಮೋದಿತ)ಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಸುನೀಲ್ ಪೂಜಾರಿ ತಿಳಿಸಿದರು.

**ಸಿಎನ್‌ಜಿ ಪಂಪ್‌ಗಳನ್ನು ಹೆಚ್ಚಿಸಬೇಕು**

ಒಂದೊಂದು ಘಟಕಕ್ಕೆ ಗೇಲ್‌ನಿಂದ ಎಷ್ಟು ಪರವಾನಗಿ ಇರುತ್ತದೆಯೋ ಅದರ ಅನ್ವಯ ಪೂರೈಸಲು ಸಾಧ್ಯ. ಹೆಚ್ಚು ಕೊಡಿ ಎಂದು ಕೇಳುವಂತಿಲ್ಲ. ನಮ್ಮಲ್ಲೂ ಘಟಕ ನಿರ್ಮಿಸುವ ಹಾಗೂ ಗೇಲ್‌ನಿಂದ ಹೆಚ್ಚು ಬೇಡಿಕೆಗೆ ಒಪ್ಪಂದ ಮಾಡಿಕೊಳ್ಳುವ ಬಗ್ಗೆಯೂ ಚಿಂತನೆ ನಡೆದಿದೆ' ಎಂದು ಮಾಹಿತಿ ನೀಡಿದರು.

ದಾವಣಗೆರೆಯಲ್ಲಿ ಸದ್ಯ ದಿನಕ್ಕೆ 5000 ಕೆ.ಜಿ. ಮಾರಾಟವಾಗುತ್ತಿದೆ. ಈ ಪ್ರಮಾಣ ಹೆಚ್ಚಾದರೆ ನಾವು ಹೆಚ್ಚು ಪೂರೈಕೆಗೆ ಮನವಿ ಮಾಡಬಹುದು ಎಂದರು.

**6 ತಾಸು ಕಾಯುವ ಅನಿವಾರ್ಯತೆ**

**ನಗರದಲ್ಲಿ ಆಟೊ, ಕಾರು, ಶಾಲಾ ವಾಹನ, ಬಸ್ ಸೇರಿದಂತೆ 5000ಕ್ಕೂ ಹೆಚ್ಚು ಸಿಎನ್‌ಜಿ ವಾಹನಗಳು ಇವೆ. ಇವುಗಳಿಗೆ ದಿನವೊಂದಕ್ಕೆ 4 ರಿಂದ 5 ಲೋಡ್ ಅನಿಲ ಬೇಕು. ಸದ್ಯ ದಿನಕ್ಕೆ 2 ಲೋಡ್ ಇಲ್ಲವೇ 1 ಲೋಡ್ ಬರುತ್ತದೆ. ಸಿಎನ್‌ಜಿಗಾಗಿ ದಿನವೊಂದಕ್ಕೆ ಎರಡು ಬಾರಿಯಂತೆ 6 ತಾಸು ಕಾಯುವ ಅನಿವಾರ್ಯತೆ ಚಾಲಕರದ್ದು. ದಿನದಲ್ಲಿ 2 ಬಾರಿ ಅನಿಲ ಪೂರೈಸಲು ಪಂಪ್‌ಗಳ ಬಳಿ ಕಾಯಬೇಕು. ಬೆಳಿಗ್ಗೆ 8ಕ್ಕೆ ಬಂದಿದ್ದೆ. ಈಗ 11.30 ಆಗಿದೆ. ದಿನದ ಸಮಯ ಕಾಯುವುದರಲ್ಲೇ ಕಳೆದರೆ ದುಡಿಮೆ ಹೇಗೆ ಮಾಡುವುದು?' ಎಂದು ಸರಸ್ವತಿ ನಗರದ ಆಟೊ ಚಾಲಕ ಜಗದೀಶ್ ಬೇಸರಿಸಿದರು.**

**ಏಜೆನ್ಸಿ ಬಂದ್ ಮಾಡಲಿ**

**ಅಸಮರ್ಪಕ ಅನಿಲ ಪೂರೈಕೆ ಸಂಬಂಧ ಹಲವು ಬಾರಿ ಅನಿಲ ಸರಬರಾಜು ಏಜೆನ್ಸಿಗೆ ಮನವಿ ಸಲ್ಲಿಸಲಾಗಿದೆ. ಆದರೂ ಕ್ರಮ ಕೈಗೊಂಡಿಲ್ಲ. ಏಜೆನ್ಸಿ ಬಂದ್ ಮಾಡಲಿ. ಇಲ್ಲವೇ ಸಿಎನ್‌ಜಿ ಪೂರೈಕೆ ಸ್ಥಗಿತಗೊಳಿಸಲಿ. ನಾವು ಅಡುಗೆ ಅನಿಲ ಬಳಸಿಯಾದರೂ ವಾಹನ ಓಡಿಸುತ್ತೇವೆ. ವಾಹನ ಚಾಲಕರ ಬಗ್ಗೆ ಕಾಳಜಿ ಇದ್ದರೆ ನಗರದಲ್ಲಿನ ಪಂಪ್‌ಗಳನ್ನು ಹೆಚ್ಚಿಸಬೇಕು ಎಂದು ಶಾಲಾ ವಾಹನ ಮತ್ತು ಆಟೊ ಚಾಲಕರ ಸಂಘದ ದಾವಣಗೆರೆ ಜಿಲ್ಲಾ ಘಟಕದ ಅಧ್ಯಕ್ಷ ಮಂಜುನಾಥ್ ವಿ. ಒತ್ತಾಯಿಸಿದರು. 'ವಾಹನಗಳಿಗೇ ಸರಿಯಾಗಿ ಸಿಎನ್‌ಜಿ ಪೂರೈಕೆ ಸಾಧ್ಯವಾಗುತ್ತಿಲ್ಲ. ಇಂತಹ ಪರಿಸ್ಥಿತಿಯಲ್ಲಿ ನಗರದಲ್ಲಿ ಮನೆ ಮನೆಗೆ ಅನಿಲ ಪೂರೈಸುವ ಯೋಜನೆಯನ್ನೂ ಆರಂಭಿಸಲಾಗಿದೆ. ಹೀಗಾದರೆ ಪೂರೈಕೆ ಹೇಗೆ ಸಾಧ್ಯ' ಎಂದು ಪ್ರಶ್ನಿಸಿದರು.**

# ಗಾಜಾದ 1/3 ಭಾಗ ನಮ್ಮ ವಶದಲ್ಲಿದೆ: ಇಸ್ರೇಲ್

**ಜೆರುಸಲೇಂ:** ಇಸ್ರೇಲ್ ಸೇನೆ ಗಾಜಾ ಪಟ್ಟಿಯಲ್ಲಿ ಹೊಸ ವಿಭಜನಾ ರೇಖೆಗಳನ್ನು ಸೃಷ್ಟಿಸುತ್ತಿದ್ದು, ದಕ್ಷಿಣ ಗಾಜಾ ಪಟ್ಟಿಯಲ್ಲಿ ಮೊರಾಗ್ ಕಾರಿಡಾರ್ ಎಂಬ ಹೊಸ ರಸ್ತೆಯನ್ನು ನಿರ್ಮಿಸುತ್ತಿದೆ. ಇದು ಗಾಜಾ ಪಟ್ಟಿಯ ಮೂರನೇ ಒಂದು ಭಾಗವನ್ನು ತನ್ನ ನಿಯಂತ್ರಣಕ್ಕೆ ತೆಗೆದುಕೊಂಡಿದೆ. ರಫಾ ಮತ್ತು ಖಾನ್ ಯೂನಿಸ್ ನಡುವೆ ಈ ರಸ್ತೆ ಹಾದುಹೋಗುತ್ತದೆ.

ಇಸ್ರೇಲ್‌ನ ಈ ನಡೆಯಿಂದ ಇದೀಗ ರಫಾ ಮತ್ತು ಖಾನ್ ಯೂನಿಸ್ ಪರಸ್ಪರ ಬೇರ್ಪಟ್ಟಿದ್ದು, ಇಸ್ರೇಲ್ ಸೇನೆ ಈ ಪ್ರದೇಶವನ್ನು ಭದ್ರತಾ ವಲಯ ಎಂದು ಘೋಷಿಸಿದೆ. ಕಳೆದ ಮಾರ್ಚ್ 2ರಿಂದ ಗಾಜಾ ನಗರಕ್ಕೆ ಯಾವುದೇ ಮಾನವೀಯ ನೆರವು ಪ್ರವೇಶಿಸದಂತೆ ಇಸ್ರೇಲ್ ನಿರ್ಬಂಧಿಸಿದೆ.

ಕಳೆದ ಮಾರ್ಚ್ 18ರಂದು ಹಮಾಸ್‌ನೊಂದಿಗೆ ಎರಡು ತಿಂಗಳ ಕದನ ವಿರಾಮವನ್ನು ಕೊನೆಗೊಳಿಸಿದ ಇಸ್ರೇಲ್, ಗಾಜಾದ ಮೇಲೆ ಮತ್ತೆ ದಾಳಿ ಆರಂಭಿಸಿದೆ. ಅಂದಿನಿಂದ ಇಲ್ಲಿಯವರೆಗೆ 1,652 ಪ್ಯಾಲೆಸ್ತೀನಿಯನ್ನರು ಈ ದಾಳಿಗಳಲ್ಲಿ ಮೃತಪಟ್ಟಿದ್ದಾರೆ. 4,391 ಜನರು ಗಾಯಗೊಂಡಿದ್ದು, ಯುದ್ಧ ಪ್ರಾರಂಭವಾದಾಗಿನಿಂದ ಇಲ್ಲಿಯವರೆಗೆ 51,025 ಜನರು ಸಾವನ್ನಪ್ಪಿದ್ದಾರೆ ಎಂದು ಗಾಜಾ ಆರೋಗ್ಯ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಇಸ್ರೇಲ್ ಸೇನೆಯು ಮೊರಾಗ್ ಕಾರಿಡಾರ್ ಅನ್ನು ವಿಸ್ತರಿಸುತ್ತಿದೆ. ಇದು ರಫಾ ಮತ್ತು ಖಾನ್ ಯೂನಿಸ್ ನಡುವಿನ ಪ್ರದೇಶದಲ್ಲಿ ಹಾದುಹೋಗುತ್ತದೆ. ಖಾನ್ ಯೂನಿಸ್ ನಗರವು ಸಂಪೂರ್ಣವಾಗಿ ನಾಶವಾಗಿದೆ. ಕೆಲವೇ ಕೆಲವು ಕಟ್ಟಡಗಳು ಮಾತ್ರ ಉಳಿದಿವೆ ಎಂದು ವರದಿಯಾಗಿದೆ. ಕಾರ್ಯಾಚರಣೆಯ ಭಾಗವಾಗಿ ಇಸ್ರೇಲ್ ಡಿಫೆನ್ಸ್ ಫೋರ್ಸಸ್ ಗಾಜಾದ ಪ್ರಮುಖ ಪ್ರದೇಶಗಳು ಮತ್ತು ಮಾರ್ಗಗಳ ಮೇಲೆ ಸಂಪೂರ್ಣ ನಿಯಂತ್ರಣ ಸಾಧಿಸಿದೆ. ಗಾಜಾ ಪಟ್ಟಿಯ ಸುಮಾರು ಶೇ. 30ರಷ್ಟು ಪ್ರದೇಶವನ್ನು ಈಗ ಆಪರೇಷನಲ್ ಸೆಕ್ಯುರಿಟಿ ಪೆರಿಮೀಟರ್ ಎಂದು ಗೊತ್ತುಪಡಿಸಲಾಗಿದೆ ಎಂದು ಇಸ್ರೇಲ್ ಸೇನೆ ಹೇಳಿದೆ. ಮೊರಾಗ್ ಕಾರಿಡಾರ್ ಜೊತೆಗೆ, ಇಸ್ರೇಲ್ ನೆಟ್ಜಾರಿಮ್ ಕಾರಿಡಾರ್‌ನ್ನೂ ಕೂಡ ಸ್ಥಾಪಿಸಿದೆ. ಇದು ಉತ್ತರ ಗಾಜಾವನ್ನು ನಗರದ ಉಳಿದ ಭಾಗದಿಂದ ಬೇರ್ಪಡಿಸುವ ಗುರಿಯನ್ನು ಹೊಂದಿದೆ. ಏಪ್ರಿಲ್ 28 ರಂದು ಪ್ಯಾಲೆಸ್ತೀನಿಯನ್ನರ ಬಗ್ಗೆ ಇಸ್ರೇಲ್‌ನ ಮಾನವೀಯ ಜವಾಬ್ದಾರಿಗಳ ಕುರಿತು ಅಂತಾರಾಷ್ಟ್ರೀಯ ನ್ಯಾಯಾಲಯ ವಿಚಾರಣೆ ನಡೆಸಲಿದೆ. ಡಿಸೆಂಬರ್‌ನಲ್ಲಿ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯು ಹೇಗ್ ಮೂಲದ ಅಂತಾರಾಷ್ಟ್ರೀಯ ನ್ಯಾಯಾಲಯಕ್ಕೆ ಸಲಹಾ ಅಭಿಪ್ರಾಯವನ್ನು ನೀಡುವಂತೆ ಕೋರಿತ್ತು.

ಪ್ಯಾಲೆಸ್ತೀನಿಯನ್ ನಾಗರಿಕರಿಗೆ ಅಗತ್ಯವಿರುವ ವಸ್ತುಗಳನ್ನು ತಲುಪಿಸಲು ಇಸ್ರೇಲ್ ಏನು ಮಾಡಬೇಕು ಎಂಬುದನ್ನು ಸ್ಪಷ್ಟಪಡಿಸಬೇಕು ಎಂದು ವಿಶ್ವಸಂಸ್ಥೆಯು ಅಂತಾರಾಷ್ಟ್ರೀಯ ನ್ಯಾಯಾಲಯ(ಐಸಿಜೆ)ವನ್ನು ಕೋರಿದೆ.



ಬ್ಯಾಂಡ್, ಬಾಜಾ ಮೂಲಕ ಘೋಷಣೆ ಮಾಡಿದ ಇಸ್ರೇಲ್

### ಯಾವುದೇ ಮಾತುಕತೆ ಇಲ್ಲ

ಇಸ್ರೇಲ್-ಹಮಾಸ್ ಸಮರ ತಾರಕಕ್ಕೇರಿದ್ದು, ಹಮಾಸ್ ಉಗ್ರ ಸಂಘಟನೆ ತನ್ನ ವಶದಲ್ಲಿರುವ ಎಲ್ಲಾ ಇಸ್ರೇಲಿ ಒತ್ತೆಯಾಳುಗಳನ್ನು ಬಿಡುಗಡೆ ಮಾಡುವವರೆಗೂ ಯಾವುದೇ ಮಾತುಕತೆ ಇಲ್ಲ ಎಂದು ಇಸ್ರೇಲ್ ಸ್ಪಷ್ಟಪಡಿಸಿದೆ. ಹಂತ ಹಂತವಾಗಿ ಗಾಜಾ ಮೇಲೆ ನಿಯಂತ್ರಣ ಕಳೆದುಕೊಳ್ಳುತ್ತಿರುವ ಹಮಾಸ್, ಇದೀಗ ಗಾಜಾ ನಗರ ನಿವಾಸಿಗಳ ಪ್ರತಿಭಟನೆಯನ್ನೂ ಎದುರಿಸುತ್ತಿದೆ. ಈ ಎಲ್ಲಾ ಬೆಳವಣಿಗೆಗಳ ಮಧ್ಯೆ, ಗಾಜಾಪಟ್ಟಿಯ ಬಹುತೇಕ ಭಾಗಗಳ ಮೇಲೆ ಇಸ್ರೇಲ್‌ನ ನಿಯಂತ್ರಣ ಇದೀಗ ಜಾಗತಿಕವಾಗಿ ಗಮನ ಸೆಳೆದಿದೆ.

- ಪ್ಯಾಲೆಸ್ಟೈನ್‌ನ ಗಾಜಾಪಟ್ಟಿಯ ಮೂರನೇ ಒಂದು ಭಾಗವನ್ನು ಸಂಪೂರ್ಣವಾಗಿ ನಿಯಂತ್ರಣಕ್ಕೆ ತೆಗೆದುಕೊಂಡ ಇಸ್ರೇಲ್
- ರಫಾ ಮತ್ತು ಖಾನ್ ಯೂನಿಸ್‌ನ್ನು ಬೇರ್ಪಡಿಸಲು ಮೊರಾಗ್ ಕಾರಿಡಾರ್ ನಿರ್ಮಾಣಕ್ಕೆ ಚಾಲನೆ ನೀಡಿದ ಇಸ್ರೇಲ್ ಸೇನೆ
- ಏಪ್ರಿಲ್ 28 ರಂದು ಪ್ಯಾಲೆಸ್ತೀನಿಯನ್ನರ ಬಗ್ಗೆ ಇಸ್ರೇಲ್‌ನ ಮಾನವೀಯ ಜವಾಬ್ದಾರಿಗಳ ಕುರಿತು ಅಂತಾರಾಷ್ಟ್ರೀಯ ನ್ಯಾಯಾಲಯ ವಿಚಾರಣೆ

## ಭಯೋತ್ಪಾದಕ ಸಂಘಟನೆಗಳ ಪಟ್ಟಿಯಿಂದ ತಾಲಿಬಾನ್‌ನನ್ನು ತೆಗೆದು ಹಾಕಿದ ರಷ್ಯಾ

**ಮಾಸ್ಕೊ:** ಮಹತ್ವದ ಬೆಳವಣಿಗೆಯಲ್ಲಿ ರಷ್ಯಾ, ನಿಷೇಧಿತ ಭಯೋತ್ಪಾದಕ ಸಂಘಟನೆಗಳ ಪಟ್ಟಿಯಿಂದ ತಾಲಿಬಾನ್‌ನನ್ನು ತೆಗೆದುಹಾಕಿದೆ. 20 ವರ್ಷಗಳ ನಂತರ ರಷ್ಯಾ ಇಂಥದ್ದೊಂದು ನಿರ್ಧಾರ ಕೈಗೊಂಡಿದೆ. 2003 ರಲ್ಲಿ ತಾಲಿಬಾನ್ ಒಂದು ಉಗ್ರ ಸಂಘಟನೆ ಎಂದು ರಷ್ಯಾ ಘೋಷಿಸಿತ್ತು. ವಿಶ್ವದ ಅನೇಕ ರಾಷ್ಟ್ರಗಳು ಅಫಘಾನಿಸ್ತಾನದ ತಾಲಿಬಾನಿಗಳ ಸರಕಾರವನ್ನು ಪೂರ್ಣ ಪ್ರಮಾಣದಲ್ಲಿ ಒಪ್ಪಿಕೊಳ್ಳಲು ಮೀನಾಮೇಷ ಎಣಿಸುತ್ತಿವೆ.

ಈಗ ರಷ್ಯಾ ಅಫಘಾನಿಸ್ತಾನದ ಜತೆ ಉತ್ತಮ ಸಂಬಂಧ ಹೊಂದಲು ಇಂಥದ್ದೊಂದು ನಿರ್ಧಾರ ಕೈಗೊಂಡಿದೆ ಎಂದು ವಿಶ್ಲೇಷಿಸಲಾಗುತ್ತಿದೆ. ಎರಡು ದಶಕಗಳ ಸಮರದ ಬಳಿಕ ಅಮೆರಿಕ ನೇತೃತ್ವದ ನ್ಯಾಟೊ ಪಡೆಗಳು 2021ರಲ್ಲಿಅಫಘಾನಿಸ್ತಾನದಿಂದ ಹೊರಬಂದ ಬಳಿಕ ಅಲ್ಲಿತಾಲಿಬಾನಿಗಳು ತಮ್ಮದೇ ಸರಕಾರ ರಚಿಸಿಕೊಂಡರು. 2024ರ ಮಾರ್ಚ್‌ನಲ್ಲಿಮಾಸ್ಕೊದ ಹೊರಗಿನ ಕಾನ್ಸರ್ಟ್ ಹಾಲ್ ಮೇಲೆ ನಡೆದ ಉಗ್ರ ದಾಳಿಯಲ್ಲಿ145 ರಷ್ಯಾ ಪ್ರಜೆಗಳು ಮೃತರಾಗಿದ್ದರು.

ಈ ದಾಳಿಯ ಹೊಣೆಯನ್ನು ಆಫ್ಘನ್ ಮೂಲದ ಐಸಿಸ್ ಸಂಘಟನೆ 'ಇಸ್ಲಾಮಿಕ್ ಸ್ಟೇಟ್ ಖೊರಾಸನ್' ವಹಿಸಿಕೊಂಡಿತ್ತು. ಆದರೆ, ಸದ್ಯ ಸರಕಾರ ರಚನೆ ಬಳಿಕ ಘೋಷಣೆ ಮಾಡಿರುವ ತಾಲಿಬಾನ್ ಸರಕಾರವು ಅಫಘಾನಿಸ್ತಾನದಿಂದ ಇಸ್ಲಾಮಿಕ್ ಸ್ಟೇಟ್ ನಿರ್ಮೂಲನೆಗೆ ಬದ್ಧರಾಗಿದ್ದೇವೆ ಎಂದಿದೆ.



## ಮಿನಿ ನ್ಯೂಸ್

### ಮದುವೆ ಮೆರವಣಿಗೆ ವೇಳೆ ದಲಿತ ವರನ ಮೇಲೆ ಮೇಲ್ವರ್ಗದವರಿಂದ ಹಲ್ಲೆ

**ಆಗ್ರಾ:** ಮದುವೆ ಮೆರವಣಿಗೆ ವೇಳೆ ದಲಿತ ವರನ ಮೇಲೆ ಮೇಲ್ಜಾತಿಯ ಜನರ ಗುಂಪೊಂದು ಹಲ್ಲೆ ನಡೆಸಿರುವ ಘಟನೆ ಉತ್ತರ ಪ್ರದೇಶದ ಆಗ್ರಾದ ನಾಗ್ಲಾ ತನ್ನ ಪ್ರದೇಶದಲ್ಲಿ ನಡೆದಿದೆ. ಈ ಘಟನೆಯಲ್ಲಿ ಮದುವೆಯ ಪಾರ್ಟಿಯ ಹಲವಾರು ಸದಸ್ಯರು ಗಾಯಗೊಂಡಿದ್ದಾರೆ ಎಂದು ಅಲ್ಲಿನ ಪೊಲೀಸರು ಮಾಹಿತಿ ನೀಡಿದ್ದಾರೆ. ನಾಗ್ಲಾ ತನ್ನ ನಿವಾಸಿ ಅನಿತಾ ಅವರು ನೀಡಿದ ದೂರಿನ ಪ್ರಕಾರ, ಮಥುರಾದಿಂದ ತನ್ನ ಮಗಳ ಮದುವೆ ಮೆರವಣಿಗೆ ಬಂದಾಗ ಈ ಘಟನೆ ನಡೆದಿದೆ. ಮದುವೆಯು ಗ್ರಾಮದಿಂದ ಸ್ವಲ್ಪ ದೂರದಲ್ಲಿರುವ ಕಲ್ಯಾಣ ಮನೆಯಲ್ಲಿ ನಡೆಯಬೇಕಿತ್ತು ಎಂದು ಅದು ಹೇಳಿದೆ. ಡಿಜೆ ಸಂಗೀತದೊಂದಿಗೆ ಮೆರವಣಿಗೆಯು ರಸ್ತೆಯುದ್ದಕ್ಕೂ ಚಲಿಸುತ್ತಿದ್ದಂತೆ, ಮೇಲ್ಜಾತಿಯ ಪುರುಷರ ಗುಂಪು ಕೋಲುಗಳು, ಲಾಠಿಗಳೊಂದಿಗೆ ಬಂದು ವರ ಇತರರ ಮೇಲೆ ಹಲ್ಲೆ ನಡೆಸಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

### 7 ಕೋಟಿ ರೂ. ವಂಚಿಸಿದ ಐಎಫ್‌ಎಸ್ ಅಧಿಕಾರಿ ಅರೆಸ್ಟ್

**ರಾಯ್ಪುರ:** ಛತ್ತೀಸ್‌ಗಢದ ಸುಕ್ಮಾ ಜಿಲ್ಲೆಯಲ್ಲಿ ತೆಂಡು ಎಲೆಗಳ ಬೋನಸ್ ಹಣವನ್ನು ದೊಡ್ಡ ಪ್ರಮಾಣದಲ್ಲಿ ದುರುಪಯೋಗಪಡಿಸಿಕೊಂಡ ಪ್ರಕರಣಕ್ಕೆ ಸಂಬಂಧಿಸಿದಂತೆ ಆರ್ಥಿಕ ಅಪರಾಧಗಳ ವಿಭಾಗ ಮತ್ತು ಭ್ರಷ್ಟಾಚಾರ ನಿಗ್ರಹ ದಳ ಭಾರತೀಯ ಅರಣ್ಯ ಸೇವೆ ಅಧಿಕಾರಿಯನ್ನು ಬಂಧಿಸಿದೆ. ಪ್ರಾಸಿಕ್ಯೂಷನ್ ಉಪ ನಿರ್ದೇಶಕ ಮಿಥಿಲೇಶ್ ವರ್ಮಾ ಬಂಧನವನ್ನು ದೃಢಪಡಿಸಿದ್ದು, ಅಕ್ರಮಗಳ ಸಮಯದಲ್ಲಿ ಸುಕ್ಮಾದ ವಿಭಾಗೀಯ ಅರಣ್ಯ ಅಧಿಕಾರಿ (ಡಿಎಫ್‌ಒ) ಆಗಿದ್ದ ಅಧಿಕಾರಿಯನ್ನು ಅಶೋಕ್ ಕುಮಾರ್ ಪಟೇಲ್ ಎಂದು ಗುರುತಿಸಲಾಗಿದೆ.

### ಹಣ-ಹೆಂಡಕ್ಕೆ ಮತ ಮಾರಿಕೊಂಡವರು ಮುಂದಿನ ಜನ್ಮದಲ್ಲಿ ಪ್ರಾಣಿಗಳಾಗಿ ಹುಟ್ಟುತ್ತಾರೆ

**ಇಂದೋರ್:** ಹಣ, ಮದ್ಯ ಮತ್ತು ಉಡುಗೊರೆಗಳ ಆಧಾರದ ಮೇಲೆ ಮತ ಚಲಾಯಿಸುವವರ ವಿರುದ್ಧ ವಾಗ್ದಾಳಿ ನಡೆಸಿರುವ ಬಿಜೆಪಿ ಶಾಸಕಿ ಮತ್ತು ಮಧ್ಯಪ್ರದೇಶದ ಮಾಜಿ ಸಚಿವೆ ಉಷಾ ಠಾಕೂರ್ ಅವರು, ಪ್ರಜಾಪ್ರಭುತ್ವವನ್ನು ಮಾರಾಟ ಮಾಡುವ ಅಂತಹ ವ್ಯಕ್ತಿಗಳು ಒಂಟೆ, ಕುರಿ, ಮೇಕೆ, ನಾಯಿ ಮತ್ತು ಬೆಕ್ಕುಗಳಾಗಿ ಮರುಜನ್ಮ ಪಡೆಯುತ್ತಾರೆ ಎಂದು ಪ್ರತಿಪಾದಿಸಿದ್ದಾರೆ.

ತನ್ನ ಮೋವ್ ವಿಧಾನಸಭಾ ಕ್ಷೇತ್ರದ ಹಸಲ್ಪುರ ಗ್ರಾಮದಲ್ಲಿ ನಡೆದ ಸಭೆಯಲ್ಲಿ ಅವರು ನೀಡಿದ ಹೇಳಿಕೆಯ ವಿಡಿಯೊ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಭಾರಿ ವೈರಲ್ ಆಗಿದೆ. ಒಬ್ಬರ ಮತ ಪತ್ರದ ಗೌಪ್ಯತೆಯನ್ನು ಉಲ್ಲೇಖಿಸಿದ ಠಾಕೂರ್ ಅವರು, ದೇವರು ಗಮನಿಸುತ್ತಿದ್ದಾನೆ, ನಿಮ್ಮ ಮತವನ್ನು ಚಲಾಯಿಸುವಾಗ ನಿಮ್ಮ ಸಮಗ್ರತೆಯನ್ನು ಕಳೆದುಕೊಳ್ಳಬೇಡಿ ಎಂದು ಹೇಳಿದರು. ಹಣ, ಸೀರೆ, ಗಾಜು ಮತ್ತು ಮದ್ಯ ಪಡೆದು ಮತ ಚಲಾಯಿಸುವವರು ಮುಂದಿನ ಜನ್ಮದಲ್ಲಿ ಪ್ರಾಣಿಗಳಾಗಿ ಹುಟ್ಟುತ್ತಾರೆ ಎಂದು ಅವರು ಹೇಳಿದ್ದರು. ಲಾಡ್ಲಿ ಬೆಹ್ನಾ ಯೋಜನೆ ಮತ್ತು ಕಿಸಾನ್ ಸಮ್ಮಾನ್ ನಿಧಿಯಂತಹ ಬಿಜೆಪಿ ಸರ್ಕಾರದ ಅನೇಕ ಯೋಜನೆಗಳ ಮೂಲಕ ಸಾವಿರಾರು ರೂಪಾಯಿಗಳು ಪ್ರತಿ ಫಲಾನುಭವಿಯ ಖಾತೆಗಳಿಗೆ ಬರುತ್ತವೆ.

### ಅತ್ಯಾಚಾರದ ಆರೋಪಿಯನ್ನು ಬೆತ್ತಲುಗೊಳಿಸಿ ಥಳಿತ, ನಾಯಿಗಳಿಂದ ದಾಳಿ

**ಲಖನೌ:** ಉತ್ತರ ಪ್ರದೇಶದ ವಿಶೇಶ್ವರಗಂಜ್ ಪ್ರದೇಶದಲ್ಲಿ ಅತ್ಯಾಚಾರ ಆರೋಪದ ಮೇಲೆ ವ್ಯಕ್ತಿಯನ್ನು ಎತ್ತಿನ ಬಂಡಿಗೆ ಕಟ್ಟಿ, ಹಲ್ಲೆ ಮಾಡಿ ಬೆತ್ತಲೆಯಾಗಿ ಮೆರವಣಿಗೆ ಮಾಡಿರುವ ಘಟನೆ ನಡೆದಿದೆ. ಘಟನೆಯ ವಿಡಿಯೋ ಸಾಮಾಜಿಕ ಮಾಧ್ಯಮಗಳಲ್ಲಿ ವ್ಯಾಪಕವಾಗಿ ಪ್ರಸಾರವಾದ ನಂತರ ಪೊಲೀಸರು ಶುಕ್ರವಾರ ಪ್ರಕರಣ ದಾಖಲಿಸಿದ್ದಾರೆ.

22 ವರ್ಷದ ಯುವಕನ ದೇಹವನ್ನು ಬೆತ್ತಲೆಗೊಳಿಸಿ ಎತ್ತಿನ ಬಂಡಿಗೆ ಕಟ್ಟಿ ಹಾಕಿರುವುದನ್ನು ವಿಡಿಯೋ ತೋರಿಸುತ್ತದೆ. ಕೆಲವರು ನಾಯಿಯನ್ನು ಅವನ ಮೇಲೆ ದಾಳಿ ಮಾಡಲು ಪ್ರೇರೇಪಿಸುತ್ತಿರುವುದನ್ನು ಮತ್ತು ಇತರರು ಥಳಿಸಬೇಕೆಂದು ಪ್ರೋತ್ಸಾಹಿಸುತ್ತಿರುವುದು ಕೇಳಿಬರುತ್ತಿದೆ. ಆತ ಸಾಯಬೇಕು ಎಂಬ ಆಗ್ರಹ ಗುಂಪಿನಿಂದ ಕೇಳಿಬರುತ್ತಿದೆ.

ಗುರುವಾರ ವಿಡಿಯೋ ವ್ಯಾಪಕವಾಗಿ ಪ್ರಸಾರವಾದ ನಂತರ, ವ್ಯಕ್ತಿಯ ಕುಟುಂಬ ಸ್ಥಳೀಯ ಪೊಲೀಸರಿಗೆ ದೂರು ನೀಡಿದೆ.

ಮಹಿಳೆಯೊಬ್ಬರ ಲಿಖಿತ ದೂರಿನ ಆಧಾರದ ಮೇಲೆ, ಭಾರತೀಯ ನ್ಯಾಯ ಸಂಹಿತಾ ವಿಭಾಗಗಳ ಅಡಿಯಲ್ಲಿ ಹಲ್ಲೆ ಮತ್ತು ಹಾನಿಗಾಗಿ ಗುರುತಿಸಲಾಗದ ವ್ಯಕ್ತಿಗಳ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಉಪ ಪೊಲೀಸ್ ವರಿಷ್ಠಾಧಿಕಾರಿ ರಮೇಶ್ ಪಾಂಡೆ ಶುಕ್ರವಾರ ತಿಳಿಸಿದ್ದಾರೆ.

## 1971ಕ್ಕಾಗಿ ಸಾರ್ವಜನಿಕವಾಗಿ ಕ್ಷಮೆ ಕೇಳಿಬಿಡಿ

### ಎಲ್ಲವನ್ನೂ ಮರೆಯುತ್ತೇವೆ; ಪಾಕಿಸ್ತಾನಕ್ಕೆ ಬಾಂಗ್ಲಾದೇಶದ ಆಫರ್

**ಢಾಕಾ:** ಬರೋಬ್ಬರಿ 15 ವರ್ಷಗಳ ಬಳಿಕ ಬಾಂಗ್ಲಾದೇಶ ಮತ್ತು ಪಾಕಿಸ್ತಾನ ರಾಷ್ಟ್ರಗಳ ನಡುವೆ ವಿದೇಶಾಂಗ ಕಾರ್ಯದರ್ಶಿ ಮಟ್ಟದ ಮಾತುಕತೆ ನಡೆದಿದ್ದು, ಈ ಸಭೆಯಲ್ಲಿ ಬಾಂಗ್ಲಾದೇಶವು ಪಾಕಿಸ್ತಾನಕ್ಕೆ ತನ್ನ ಬೇಡಿಕೆಗಳ ಪಟ್ಟಿಯನ್ನು ಸಲ್ಲಿಸಿದೆ.

1971ರ ಬಾಂಗ್ಲಾದೇಶ ವಿಮೋಚನಾ ಯುದ್ಧದ ಸಂದರ್ಭದಲ್ಲಿ ಪಾಕಿಸ್ತಾನ ಸೇನೆ ಎಸಗಿರುವ ದೌರ್ಜನ್ಯಗಳಿಗೆ ಪ್ರತಿಯಾಗಿ, ಸಾರ್ವಜನಿಕವಾಗಿ ಕ್ಷಮೆ ಕೇಳುವಂತೆ ಬಾಂಗ್ಲಾದೇಶವು ಪಾಕಿಸ್ತಾನವನ್ನು ಒತ್ತಾಯಿಸಿದೆ. ಪೂರ್ವ ಪಾಕಿಸ್ತಾನವು ಪಾಕಿಸ್ತಾನದಿಂದ ಬೇರ್ಪಟ್ಟು ಸ್ವತಂತ್ರ ಬಾಂಗ್ಲಾದೇಶ ರಾಷ್ಟ್ರವಾದಾಗ, ಪಾಕಿಸ್ತಾನ ಸೇನೆಯು ಮವನೀಯತೆ ಮೇಲೆ ಎಸಗಿರುವ ದೌರ್ಜನ್ಯಕ್ಕಾಗಿ ಪಾಕಿಸ್ತಾನವು ಬಾಂಗ್ಲಾದೇಶದ ಕ್ಷಮೆ ಕೋರಬೇಕು ಎಂದು ಸಭೆಯಲ್ಲಿ ಒತ್ತಾಯ ಮಾಡಲಾಗಿದೆ.

ಇದೇ ವೇಳೆ ವಿಭಜನೆ ಬಳಿಕ ಪಾಕಿಸ್ತಾನದ ಒಟ್ಟು ಆಸ್ತಿಯಿಂದ 4.3 ಶತಕೋಟಿ ಅಮೆರಿಕನ್ ಡಾಲರ್ ಹಣವನ್ನು ಬಾಂಗ್ಲಾದೇಶಕ್ಕೆ ನೀಡುವಂತೆಯೂ ಸಭೆಯಲ್ಲಿ ಬಾಂಗ್ಲಾದೇಶದ ಅಧಿಕಾರಿಗಳು ಆಗ್ರಹಿಸಿದ್ದಾರೆ. ಬಾಂಗ್ಲಾದೇಶದ ವಿದೇಶಾಂಗ ಕಾರ್ಯದರ್ಶಿ ಜಶಿಮ್ ಉದ್ದೀನ್ ಮತ್ತು ಪಾಕಿಸ್ತಾನದ ವಿದೇಶಾಂಗ ಕಾರ್ಯದರ್ಶಿ ಅಮ್ನಾ ಬಲೋಚ್ ಅವರ ನಡುವೆ ಈ ಸಭೆ ನಡೆಯಿತು. ಸಭೆಯಲ್ಲಿ ಬಾಂಗ್ಲಾದೇಶವು ಪಾಕಿಸ್ತಾನದೊಂದಿಗೆ ಐತಿಹಾಸಿಕವಾಗಿ ಬಗೆಹರಿಯದ ಸಮಸ್ಯೆಗಳ ಕುರಿತು ಸುದೀರ್ಘವಾಗಿ ಚರ್ಚಿಸಿತು.

1971ರ ದೌರ್ಜನ್ಯಗಳಿಗೆ ಪಾಕಿಸ್ತಾನವು ಕ್ಷಮೆ ಕೇಳಬೇಕು ಎಂದು ಬಾಂಗ್ಲಾದೇಶ ಒತ್ತಾಯಿಸಿತು. ಬಾಂಗ್ಲಾದೇಶವು ಪಾಕಿಸ್ತಾನದಿಂದ ಬರಬೇಕಾದ 4.3 ಶತಕೋಟಿ ಅಮೆರಿಕನ್ ಡಾಲರ್ ಹಣವನ್ನೂ ಕೇಳಿದೆ. ಈ ಹಣವು 1971ರಲ್ಲಿ ಪೂರ್ವ ಪಾಕಿಸ್ತಾನ ಭಾಗವು ಬಾಂಗ್ಲಾದೇಶ ದೇಶವಾದಾಗ ಹಂಚಿಕೆಯಾಗಬೇಕಿದ್ದ ಆಸ್ತಿಯ ಭಾಗವಾಗಿತ್ತು.

ಈ ಕುರಿತು ಮಾತನಾಡಿರುವ ಜಶಿಮ್ ಉದ್ದೀನ್, ನಾವು ಪಾಕಿಸ್ತಾನದೊಂದಿಗೆ ಐತಿಹಾಸಿಕವಾಗಿ ಬಗೆಹರಿಯದ ಸಮಸ್ಯೆಗಳನ್ನು ಪ್ರಸ್ತಾಪಿಸಿದ್ದೇವೆ ಎಂದು ಹೇಳಿದ್ದಾರೆ. ಮುಂದುವರೆದು, ಈ ಸಮಸ್ಯೆಗಳ ಪಟ್ಟಿಯಲ್ಲಿ 1970ರ ಚಂಡಮಾರುತದ ಸಂತ್ರಸ್ತರಿಗೆ ಕಳುಹಿಸಿದ ವಿದೇಶಿ ಸಹಾಯದ ಹಣವನ್ನು ವರ್ಗಾಯಿಸುವುದು ಮತ್ತು 1971ರಲ್ಲಿ ಪಾಕಿಸ್ತಾನಿ ಸೈನ್ಯವು ನಡೆಸಿದ ನರಮೇಧಕ್ಕೆ ಅಧಿಕೃತವಾಗಿ ಕ್ಷಮೆ ಕೇಳುವುದು ಸೇರಿವೆ ಎಂದು ಜಶಿಮ್ ಉದ್ದೀನ್ ಸ್ಪಷ್ಟಪಡಿಸಿದ್ದಾರೆ.



- ಬರೋಬ್ಬರಿ 15 ವರ್ಷಗಳ ಬಳಿಕ ಬಾಂಗ್ಲಾದೇಶ ಮತ್ತು ಪಾಕಿಸ್ತಾನ ರಾಷ್ಟ್ರಗಳ ನಡುವೆ ವಿದೇಶಾಂಗ ಕಾರ್ಯದರ್ಶಿ ಮಟ್ಟದ ಮಾತುಕತೆ
- 1971ರ ಯುದ್ಧದ ವೇಳೆ ಪಾಕಿಸ್ತಾನ ಸೈನ್ಯ ಬಾಂಗ್ಲಾದೇಶಿಯರ ಮೇಲೆ ಎಸಗಿದ ದೌರ್ಜನ್ಯಗಳಿಗೆ ಸಾರ್ವಜನಿಕ ಕ್ಷಮೆಗೆ ಆಗ್ರಹಿಸಿದ ಬಾಂಗ್ಲಾದೇಶ
- ವಿಭಜನೆ ಸಂದರ್ಭದಲ್ಲಿ ಬಾಂಗ್ಲಾದೇಶಕ್ಕೆ ನೀಡಬೇಕಾಗಿದ್ದ 4.3 ಶತಕೋಟಿ ಅಮೆರಿಕನ್ ಡಾಲರ್ ಹಣವನ್ನು ಪಾವತಿಸುವಂತೆಯೂ ಒತ್ತಾಯ

## ಗಲಭೆ ಪೀಡಿತ ಮುರ್ಷಿದಾಬಾದ್‌ಗೆ ಭೇಟಿ ನೀಡಲಿದೆಯಂತೆ ರಾಷ್ಟ್ರೀಯ ಮಹಿಳಾ ಆಯೋಗ

**ಕೋಲ್ಕತಾ:** ಮುಂದಿನ ಕೆಲವು ದಿನಗಳಲ್ಲಿ ಗಲಭೆ ಪೀಡಿತ ಮುರ್ಷಿದಾಬಾದ್ ಜಿಲ್ಲೆಗೆ ಭೇಟಿ ನೀಡಿ ಸಂತ್ರಸ್ತ ಮಹಿಳೆಯರನ್ನು ಭೇಟಿ ಯಾಗಲಿದ್ದೇವೆ ಎಂದು ರಾಷ್ಟ್ರೀಯ ಮಹಿಳಾ ಆಯೋಗದ ಅಧ್ಯಕ್ಷೆ ವಿಜಯಾ ರಹತ್ಕರ್ ಹೇಳಿದ್ದಾರೆ.

ಏಪ್ರಿಲ್ 11 ಮತ್ತು 12 ರಂದು ಮುರ್ಷಿದಾಬಾದ್‌ನ ಕೆಲವು ಸ್ಥಳಗಳಲ್ಲಿ ಅಮಾಯಕರ ವಿರುದ್ಧ ನಡೆದ ಹಿಂಸಾಚಾರದ ಬಗ್ಗೆ ಸಮಿತಿಯು ಈಗಾಗಲೇ ಸ್ವಯಂಪ್ರೇರಿತವಾಗಿ ಗಮನ ಹರಿಸಿದೆ ಮತ್ತು ಇದನ್ನು ಪರಿಶೀಲಿಸಲು ವಿಚಾರಣಾ ಸಮಿತಿಯನ್ನು ರಚಿಸಿದೆ ಎಂದು ರಹತ್ಕರ್ ತಿಳಿಸಿದರು. ಭೇಟಿಯ ಸಮಯದಲ್ಲಿ ಮುರ್ಷಿದಾಬಾದ್‌ನ ಕೆಲವು ಭಾಗಗಳಲ್ಲಿ ಹಿಂಸಾಚಾರದಿಂದ ಬಾಧಿತರಾದ ಮಹಿಳೆಯರೊಂದಿಗೆ ನಾವು ವ್ಯಾಪಕವಾಗಿ ಮಾತನಾಡುತ್ತೇವೆ.

ಅರ್ಚನಾ ಮಜುಂದಾರ್ ಅವರಂತಹ ಇತರ ಆಯೋಗದ ಸದಸ್ಯರು ಸಹ ನನ್ನೊಂದಿಗೆ ಬರುತ್ತಾರೆ ಎಂದು ಅವರು ಹೇಳಿದರು. ಪಶ್ಚಿಮ ಬಂಗಾಳದಲ್ಲಿ ನಡೆದ ಘಟನೆಯನ್ನು ಗಂಭೀರವಾಗಿ ಪರಿಗಣಿಸಿರುವ ರಾಷ್ಟ್ರೀಯ ಮಹಿಳಾ ಆಯೋಗವು ಸ್ವಯಂಪ್ರೇರಿತವಾಗಿ ಹಿಂಸಾಚಾರವನ್ನು ಗಂಭೀರವಾಗಿ ಪರಿಗಣಿಸಿದೆ ಮತ್ತು ಹಿಂಸಾಚಾರದ ಬಗ್ಗೆ ತನಿಖೆ ನಡೆಸಲು ವಿಚಾರಣಾ ಸಮಿತಿಯನ್ನು ರಚಿಸಿದೆ ಎಂದು ಎನ್ಸಿಡಬ್ಲ್ಯು ಅಧ್ಯಕ್ಷರು ಹೇಳಿದ್ದಾರೆ. ಕೋಮು ಅಶಾಂತಿಯ ಸಮಯದಲ್ಲಿ ಹಲವಾರು ಮಹಿಳೆಯರು ಭಯಾನಕ ಕಿರುಕುಳವನ್ನು ಅನುಭವಿಸಿದ ವರದಿಗಳ ನಂತರ ಇದು ಸಂಭವಿಸಿದೆ. ಮುರ್ಷಿದಾಬಾದ್ ಜಿಲ್ಲೆಯ ಧುಲಿಯನ್ ಮತ್ತು ಶಂಶೇರ್ ಗಂಜ್ ಪ್ರದೇಶದ ಮಂದಿರ್ಪಾರಾ ಪ್ರದೇಶ ಎಂದು ಅವರು ಹೇಳಿದರು. ಹಿಂಸಾಚಾರವು ನೂರಾರು ಮಹಿಳೆಯರ ನಿರ್ಗಮನಕ್ಕೆ ಕಾರಣವಾಗಿದೆ.

ಅವರಲ್ಲಿ ಅನೇಕರು ಸುರಕ್ಷತೆಯನ್ನು ಹುಡುಕುತ್ತಾ ಭಾಗೀರಥಿ ನದಿಯನ್ನು ದಾಟಲು ಹತ್ತಿರದ ಮಾಲ್ಡಾ ಜಿಲ್ಲೆಯಲ್ಲಿ ಆಶ್ರಯ ಪಡೆಯಬೇಕಾಯಿತು ಎಂದು ರಹತ್ಕರ್ ಹೇಳಿದರು.

ಸ್ಥಳೀಯ ಸಂತ್ರಸ್ತರು, ಅವರ ಕುಟುಂಬಗಳೊಂದಿಗೆ ಸಂವಹನ ನಡೆಸುವುದಾಗಿ ಮತ್ತು ಜಿಲ್ಲಾ ಮ್ಯಾಜಿಸ್ಟ್ರೇಟ್, ಪೊಲೀಸ್ ವರಿಷ್ಠಾಧಿಕಾರಿ ಮತ್ತು ಮುರ್ಷಿದಾಬಾದ್ ಮತ್ತು ಮಾಲ್ಡಾದ ಇತರ ಹಿರಿಯ ಅಧಿಕಾರಿಗಳನ್ನು ಭೇಟಿ ಮಾಡುವುದಾಗಿ ಅವರು ತಿಳಿಸಿದರು.




## ಅಮೆರಿಕದಲ್ಲಿ ಸೆರೆಸಿಕ್ಕ ಮೋಸ್ಟ್ ವಾಂಟೆಡ್ ಉಗ್ರ

**ನವದೆಹಲಿ:** ಭಯೋತ್ಪಾದಕ ಸಂಪರ್ಕ ಹೊಂದಿರುವ ಆರೋಪದ ಮೇಲೆ ಭಾರತದ ಮೋಸ್ಟ್ ವಾಂಟೆಡ್ ಖಲಿಸ್ತಾನಿ ಉಗ್ರ ಹರ್‌ಪ್ರೀತ್ ಸಿಂಗ್ ಅಲಿಯಾಸ್ ಹ್ಯಾಪಿ ಪಸಿಯಾ ಅವನನ್ನು ಅಮೆರಿಕದಲ್ಲಿ ಬಂಧಿಸಲಾಗಿದೆ.

ಪಂಜಾಬ್‌ನಲ್ಲಿ ನಡೆದ ಅನೇಕ ಭಯೋತ್ಪಾದಕ ಸಂಬಂಧಿತ ಘಟನೆಗಳಲ್ಲಿ ಅವನ ಪಾತ್ರಕ್ಕಾಗಿ ಅವನನ್ನು ಪತ್ತೆಹಚ್ಚುತ್ತಿದ್ದ ಭಾರತೀಯ ಭದ್ರತಾ ಸಂಸ್ಥೆಗಳಿಗೆ ಈ ಬಂಧನವು ಮಹತ್ವದ ಪ್ರಗತಿಯನ್ನು ಸೂಚಿಸುತ್ತದೆ. ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್‌ಐಎ) ಪಸಿಯಾ ಬಗ್ಗೆ ಮಾಹಿತಿ ನೀಡುವವರಿಗೆ 5 ಲಕ್ಷ ರೂ.ಗಳ ಬಹುಮಾನ ಘೋಷಿಸಿತ್ತು.

ಮಾತ್ರವಲ್ಲ ಪಸಿಯಾ ಪಂಜಾಬ್ ಪೊಲೀಸರು ಮತ್ತು ಕೇಂದ್ರ ಗುಪ್ತಚರ ಘಟಕಗಳಿಗೆ ದೊಡ್ಡ ತಲೆನೋವಾಗಿ ಪರಿಣಮಿಸಿದ್ದರು. ಎಫ್‌ಬಿಐ ಮತ್ತು ಯುಎಸ್ ವಲಸೆ ಮತ್ತು ಕಸ್ಟಮ್ಸ್ ಅಧಿಕಾರಿಗಳು ಪಸಿಯಾನನ್ನು ಸ್ಯಾಕ್ರಮೆಂಟೊದಲ್ಲಿ ಬಂಧಿಸಿದ ನಂತರ ಕಸ್ಟಡಿಯಲ್ಲಿರುವ ಅವರ ಮೊದಲ ಚಿತ್ರಗಳು ಈಗ ಹೊರಬಂದಿವೆ.

ಆತನ ಬಂಧನವನ್ನು ದೃಢಪಡಿಸಿದ ಎಫ್‌ಬಿಐ ಅಧಿಕೃತ ಹೇಳಿಕೆಯನ್ನು ಬಿಡುಗಡೆ ಮಾಡಿದೆ. ಭಾರತದ ಪಂಜಾಬ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಗೆ ಕಾರಣನಾದ ಭಯೋತ್ಪಾದಕ ಹರ್ಪ್ರೀತ್ ಸಿಂಗ್‌ನನ್ನು ಬಂಧಿಸಲಾಗಿದೆ ಎಂದು ಮಾಹಿತಿ ನೀಡಿದೆ. ಎರಡು ಅಂತರರಾಷ್ಟ್ರೀಯ ಭಯೋತ್ಪಾದಕ ಗುಂಪುಗಳೊಂದಿಗೆ ಸಂಪರ್ಕ ಹೊಂದಿದ್ದ ಅವನು ಅನಾರೋಗ್ಯದಿಂದ ಅಮೆರಿಕ ಪ್ರವೇಶಿಸಿದ ಎನ್ನಲಾಗಿದೆ.





## ಜಗನ್‌ಗೆ ಸೇರಿದ ಷೇರು, ಆಸ್ತಿ ಜಪ್ತಿ

**ಹೈದರಾಬಾದ್:** ಆಂಧ್ರಪ್ರದೇಶದ ಮಾಜಿ ಮುಖ್ಯಮಂತ್ರಿ ವೈ.ಎಸ್.ಜಗನ್ ಮೋಹನ್ ರೆಡ್ಡಿಗೆ ಸೇರಿದ 27.5 ಕೋಟಿ ರೂ. ಮೌಲ್ಯದ ಷೇರುಗಳನ್ನು ಹಾಗೂ ದಾಲ್ಮಿಯಾ ಸಿಮೆಂಟ್ಸ್ (ಭಾರತ್) ಲಿಮಿಟೆಡ್ (ಡಿಸಿಬಿಎಲ್) ಹೊಂದಿದ 377.2 ಕೋಟಿ ರೂ. ಮೌಲ್ಯದ ಆಸ್ತಿಗಳನ್ನು ಕಾನೂನು ಜಾರಿ ನಿರ್ದೇಶನಾಲಯ ಹೈದರಾಬಾದ್ ಘಟಕ ತಾತ್ಕಾಲಿಕವಾಗಿ ಜಪ್ತಿ ಮಾಡಿದೆ.

ಪ್ರತಿಫಲದ ರೂಪದಲ್ಲಿ ಹೂಡಿಕೆಯ ಸೌಲಭ್ಯ ಪಡೆದು ಅವ್ಯವಹಾರ ಎಸಗಿದ್ದಾರೆ ಎಂದು ಆಪಾದಿಸಿ ಪ್ರಕರಣ ದಾಖಲಿಸಿದ 14 ವರ್ಷಗಳ ಬಳಿಕ ಈ ಕ್ರಮ ಕೈಗೊಳ್ಳಲಾಗಿದೆ. ವಶಪಡಿಸಿಕೊಂಡ ಆಸ್ತಿಗಳ ಒಟ್ಟು ಮೌಲ್ಯ 793.3 ಕೋಟಿ ರೂ. ಗಳು ಎಂದು ಡಿಸಿಬಿಎಲ್ ಸ್ಪಷ್ಟಪಡಿಸಿದೆ. ಸೆಂಟ್ರಲ್ ಬ್ಯೂರೊ ಆಫ್ ಇನ್‌ವೆಸ್ಟಿಗೇಶನ್ (ಸಿಬಿಐ) 2011ರಲ್ಲಿ ಜಗನ್ ವಿರುದ್ಧ ದಾಖಲಿಸಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಕ್ರಮ ಕೈಗೊಂಡಿದೆ. ಡಿಸಿಬಿಎಲ್ ಈ ಸಂದರ್ಭದಲ್ಲಿ ಭಾರತಿ ಸಿಮೆಂಟ್ ಕಾರ್ಪೊರೇಷನ್ ಪ್ರೈವೇಟ್ ಲಿಮಿಟೆಡ್‌ನಲ್ಲಿ ಹೂಡಿಕೆ ಮಾಡಿತ್ತು. ಜಗನ್ ಮೋಹನ್ ಪ್ರತಿನಿಧಿಸುವ ರಘುರಾಮ್ ಸಿಮೆಂಟ್ಸ್‌ನಲ್ಲಿ ಡಿಸಿಬಿಎಲ್ 95 ಕೋಟಿ ರೂ. ಹೂಡಿಕೆ ಮಾಡಿದೆ ಎಂದು ಸಿಬಿಐ ಮತ್ತು ಈಡಿ ತನಿಖೆಯಿಂದ ತಿಳಿದುಬಂದಿದೆ. ಅಂದಿನ ಮುಖ್ಯಂತ್ರಿಯಾಗಿದ್ದ ವೈ.ಎಸ್. ರಾಜಶೇಖರ ರೆಡ್ಡಿಯವರ ಪ್ರಭಾವ ಬಳಸಿಕೊಂಡು ಕಡಪಾ ಜಿಲ್ಲೆಯಲ್ಲಿ ಡಿಸಿಬಿಎಲ್‌ಗೆ 407 ಹೆಕ್ಟೇರ್ ಪ್ರದೇಶವನ್ನು ಗಣಿಗಾರಿಕೆಗಾಗಿ ಲೀಸ್ ಆಧಾರದಲ್ಲಿ ಮಂಜೂರು ಮಾಡಿಸಿದ್ದಕ್ಕೆ ಪ್ರತಿಫಲವಾಗಿ ಡಿಸಿಬಿಎಲ್ ಈ ಹೂಡಿಕೆ ಮಾಡಿದೆ ಎಂದು ಸಿಬಿಐ ಆರೋಪಿಸಿದೆ. ಇದಕ್ಕೆ ಸಂಬಂಧಿಸಿದ ಒಪ್ಪಂದದ ಅನ್ವಯ ಜಗನ್ ಮೋಹನ್ ರೆಡ್ಡಿ, ಲೆಕ್ಕ ಪರಿಶೋಧಕ ಹಾಗೂ ಮಾಜಿ ಸಂಸದ ವಿ.ವಿಜಯಸಾಯಿ ರೆಡ್ಡಿ ಮತ್ತು ಡಿಸಿಬಿಎಲ್‌ನ ಪುನೀತ್ ದಾಲ್ಮಿಯಾ ತಮ್ಮ ಷೇರುಗಳನ್ನು ರಘುರಾಮ್ ಸಿಮೆಂಟ್ಸ್‌ಗೆ ಮಾರಾಟ ಮಾಡಿ ಅಲ್ಲಿಂದ ಪಾರ್ಫಿಸಿಮ್ ಎಂಬ ಕಂಪನಿಗೆ 155 ಕೋಟಿ ರೂ.ಗೆ ಮಾರಾಟ ಮಾಡಲಾಗಿದೆ.

> ಕಾರ್ಮೆಲ್ ಏಷ್ಯಾ ಹೋಲ್ಡಿಂಗ್ಸ್ ಲಿಮಿಟೆಡ್, ಸರಸ್ವತಿ ಪವರ್ ಅಂಡ್ ಇಂಡಸ್ಟ್ರೀಸ್ ಪ್ರೈವೇಟ್ ಲಿಮಿಟೆಡ್, ಹರ್ಷಾ ಫರ್ಮ್‌ಗಳಲ್ಲಿ ಜಗನ್‌ಮೋಹನ್ ರೆಡ್ಡಿ ಹೊಂದಿದ್ದ ಷೇರುಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ. ಈ ಸಂಬಂಧ ಮಾ.31ರಂದು ತಾತ್ಕಾಲಿಕ ಮುಟ್ಟುಗೋಲು ಆದೇಶ ಹೊರಡಿಸಲಾಗಿದ್ದು, 2025ರ ಎ.15ರಂದು ಈ ಆದೇಶ ಡಿಸಿಬಿಎಲ್ ಕೈಸೇರಿದೆ. ಭೂಮಿಯ ಆರಂಭಿಕ ಖರೀದಿ ಮೌಲ್ಯ 377 ಕೋಟಿ ರೂ. ಆಗಿತ್ತು.



### ಟ್ರಂಪ್ ಅವರ ಸುಂಕ ಕೋಪ ಕಡಿಮೆ ಮಾಡುವ ಸಾಮರ್ಥ್ಯ ಇರುವ ಏಕೈಕ ಯುರೋಪಿಯನ್ ನಾಯಕಿ ನಾನೇ

## ಡೊನಾಲ್ಡ್ ಟ್ರಂಪ್ ಕೋಪ ತಣಿಸಲು ನನ್ನಿಂದ ಮಾತ್ರ ಸಾಧ್ಯ?

**ವಾಷಿಂಗ್ಟನ್ ಡಿಸಿ:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಭೇಟಿ ಮಾಡಿರುವ ಇಟಲಿ ಪ್ರಧಾನಮಂತ್ರಿ, ಜಾರ್ಜಿಯಾ ಮೆಲೋನಿ, ತಮ್ಮನ್ನು ಡೊನಾಲ್ಡ್ ಟ್ರಂಪ್ ಅವರ ಸುಂಕ ಸಮರದ ತೀವ್ರತೆಯನ್ನು ಕಡಿಮೆ ಮಾಡುವ ಸಾಮರ್ಥ್ಯ ಇರುವ ಏಕೈಕ ಯುರೋಪಿಯನ್ ನಾಯಕಿ ಎಂದು ಕರೆದುಕೊಂಡಿದ್ದಾರೆ. ಶ್ವೇತಭವನದಲ್ಲಿ ಡೊನಾಲ್ಡ್ ಟ್ರಂಪ್ ಅವರೊಂದಿಗೆ ಸುದೀರ್ಘ ಚರ್ಚೆ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಜಾರ್ಜಿಯಾ ಮೆಲೋನಿ, ಟ್ರಂಪ್ ಅವರ ವ್ಯಾಪಾರ ಯುದ್ಧವನ್ನು ಕಡಿಮೆ ಮಾಡಲು ಸಾಧ್ಯವಿರುವ ಏಕೈಕ ಯುರೋಪಿಯನ್ ನಾಯಕಿ ನಾನು ಎಂದು ಹೇಳಿದರು.

ಡೊನಾಲ್ಡ್ ಟ್ರಂಪ್ ಮತ್ತು ನಾನು ಸಂಪ್ರದಾಯವಾದಿ ಸಾಮಾನ್ಯ ನೆಲೆಯನ್ನು ಹೊಂದಿದ್ದೇವೆ. ಪಶ್ಚಿಮವನ್ನು ಮತ್ತೆ ಶ್ರೇಷ್ಠವಾಗಿಸಬೇಕು ಎಂಬ ಟ್ರಂಪ್ ಅವರ ಸಿದ್ಧಾಂತವನ್ನು ನಾನೂ ಒಪ್ಪುತ್ತೇನೆ. ಅಮೆರಿಕದ ಹೊಸ ಸುಂಕ ನೀತಿಗಳು ಕೇವಲ ಅಮೆರಿಕಕ್ಕೆ ಮಾತ್ರವಲ್ಲದೇ ಇಡೀ ಯುರೋಪ್‌ಗೆ ಭವಿಷ್ಯದಲ್ಲಿ ಒಳಿತನ್ನು ತರಲಿದೆ. ಆದರೆ ಹೆಚ್ಚುವರಿ ಸುಂಕಗಳಿಂದ ಎದುರಾಗಿರುವ ಆರ್ಥಿಕ ಸಂಕಷ್ಟಕ್ಕೂ ಪರಿಹಾರ ಹುಡುಕುವ ನಿಟ್ಟಿನಲ್ಲಿ ನಮ್ಮಿಬ್ಬರ ನಡುವಿನ ಚರ್ಚೆ ಪಲಕಾರಿಯಾಗಿದೆ ಎಂದು ಇಟಲಿ ಪ್ರಧಾನಿ ಹೇಳಿದರು. ನಾನು ಡೊನಾಲ್ಡ್ ಟ್ರಂಪ್ ಅವರನ್ನು ಇಟಲಿಗೆ ಭೇಟಿ ನೀಡುವಂತೆ ಆಹ್ವಾನಿಸಿದ್ದೇನೆ. ರೋಮ್‌ನಲ್ಲಿ ಡೊನಾಲ್ಡ್ ಟ್ರಂಪ್ ಮತ್ತು ಯುರೋಪಿಯನ್ ಯೂನಿಯನ್ ನಾಯಕರ ನಡುವೆ ಮಾತುಕತೆ ನಡೆಯಲಿದೆ. ಪಶ್ಚಿಮವನ್ನು ಮತ್ತೆ ಶ್ರೇಷ್ಠವಾಗಿಸುವ ನಮ್ಮ ಗುರಿಯನ್ನು ನಾವು ಜಂಟಿ ಪ್ರಯತ್ನದ ಮೂಲಕ ತಲುಪಲಿದ್ದೇವೆ ಎಂದು ಜಾರ್ಜಿಯಾ ಮೆಲೋನಿ ಭರವಸೆ ವ್ಯಕ್ತಪಡಿಸಿದ್ದಾರೆ.

ಇನ್ನು ಹೊಸ ಸುಂಕ ನೀತಿಗೆ ಸಂಬಂಧಿಸಿದಂತೆ ಡೊನಾಲ್ಡ್ ಟ್ರಂಪ್ ಅವರು 27 ಸದಸ್ಯ ರಾಷ್ಟ್ರಗಳ ಯುರೋಪಿಯನ್ ಯೂನಿಯನ್ ಜೊತೆಗೆ ಒಪ್ಪಂದ ಮಾಡಿಕೊಳ್ಳಲು ಮುಂದಾಗಿದ್ದಾರೆ. ಒಂದು ವೇಳೆ ಯುರೋಪ್ ರಾಷ್ಟ್ರಗಳು ನಮ್ಮೊಂದಿಗೆ ವ್ಯಾಪಾರ ಒಪ್ಪಂದ ಮಾತುಕತೆಗೆ ಮುಂದಾಗದಿದ್ದರೆ, ನಾವೇ ಅವರೊಂದಿಗೆ ಮಾತುಕತೆ ನಡೆಸುತ್ತೇವೆ. ಯುರೋಪಿಯನ್ ಯೂನಿಯನ್ ಜೊತೆ ಮಾತುಕತೆ ನಡೆಸಲು ನಮಗೆ ಯಾವುದೇ ಆತುರವಿಲ್ಲ ಎಂದು ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

ಯುರೋಪಿಯನ್ ರಾಷ್ಟ್ರಗಳು ಬಾಹ್ಯ ವಲಸೆಯ ಬಗ್ಗೆ ಜಾಗೂರಕವಾಗಿರಬೇಕು. ಉದಾರ ವಲಸೆ ನೀತಿ ಯುರೋಪ್‌ನಲ್ಲಿ ಅಶಾಂತಿಗೆ ಕಾರಣವಾಗಲಿದೆ. ಈ ರಾಷ್ಟ್ರಗಳು ನ್ಯಾಟೋ ಮೇಲಿನ ತಮ್ಮ ರಕ್ಷಣಾ ವೆಚ್ಚವನ್ನು ಹೆಚ್ಚಿಸಬೇಕು ಎಂದು ಡೊನಾಲ್ಡ್ ಟ್ರಂಪ್ ಇದೇ ವೇಳೆ ಸಲಹೆ ನೀಡಿದ್ದಾರೆ. ಉಕ್ರೇನ್‌ನಲ್ಲಿ ರಷ್ಯಾ ಯುದ್ಧದ ಬಗ್ಗೆ ಅಮೆರಿಕ ಮತ್ತು ಇಟಲಿ ನಾಯಕರ ನಡುವೆ ಭಿನ್ನಾಭಿಪ್ರಾಯಗಳಿವೆ. ಮೆಲೋನಿ ಅವರು ಉಕ್ರೇನ್‌ಗೆ ಬೆಂಬಲ ನೀಡಿದ್ದಾರೆ. ಆದರೆ ಟ್ರಂಪ್ ಅವರು ರಷ್ಯಾದ ಕಡೆಗೆ ವಾಲುತ್ತಿದ್ದಾರೆ. ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರನ್ನು ಟ್ರಂಪ್ ಟೀಕಿಸಿದ್ದಾರೆ.

ಇಟಲಿ ಪ್ರಧಾನಿ ಜಾರ್ಜಿಯಾ ಮೆಲೋನಿ ಅವರ ಅಮೆರಿಕ ಪ್ರವಾಸ ಯುರೋಪಿಯನ್ ಯೂನಿಯನ್ ಒಗ್ಗಟ್ಟನ್ನು ದುರ್ಬಲಗೊಳಿಸಬಹುದು ಎಂದು ಕೆಲವು ಸದಸ್ಯ ರಾಷ್ಟ್ರಗಳು ಆತಂಕ ವ್ಯಕ್ತಪಡಿಸಿವೆ.



ನಮ್ಮಿಬ್ಬರ ನಡುವಿನ ಚರ್ಚೆ ಪಲಕಾರಿ

> ನಾವಿಬ್ಬರೂ ವ್ಯಾಪಾರ ಒಪ್ಪಂದದ ಬಗ್ಗೆ ಚರ್ಚೆ ನಡೆಸಿದೆವು. ಟ್ರಂಪ್ ಅವರು ಈ ಮೊದಲು ಯುರೋಪಿಯನ್ ಯೂನಿಯನ್ ರಫ್ತುಗಳ ಮೇಲೆ ಶೇ. 20ರಷ್ಟು ಸುಂಕ ವಿಧಿಸಿದ್ದರು. ಆದರೆ ತಮ್ಮ ನಿರ್ಧಾರವನ್ನು 90 ದಿನಗಳವರೆಗೆ ತಾತ್ಕಾಲಿಕವಾಗಿ ರದ್ದುಪಡಿಸಿದ್ದಾರೆ. ಇದು ಯುರೋಪ್ ರಾಷ್ಟ್ರಗಳೊಂದಿಗೆ ಡೊನಾಲ್ಡ್ ಟ್ರಂಪ್ ಅವರು ಹೊಂದಿರುವ ಸ್ನೇಹ ಸಂಬಂಧಕ್ಕೆ ಸಾಕ್ಷಿ. ಆದರೆ ಹೊಸ ಸುಂಕ ನೀತಿಯಿಂದಾಗಿ ಎದುರಾಗಿರುವ ಜಾಗತಿಕ ಆರ?ಥಿಕ ಸಂಕಷ್ಟಗಳ ಬಗ್ಗೆ ನಾವು ಚಿಂತಿಸಬೇಕಿದೆ ಎಂದು ಮೆಲೋನಿ ಅಭಿಪ್ರಾಯಪಟ್ಟಿದ್ದಾರೆ.

- ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಶ್ವೇತಭವನದಲ್ಲಿ ಭೇಟಿ ಮಾಡಿದ ಇಟಲಿ ಪ್ರಧಾನಮಂತ್ರಿ ಜಾರ್ಜಿಯಾ ಮೆಲೋನಿ
- ಡೊನಾಲ್ಡ್ ಟ್ರಂಪ್ ಅವರ ಸುಂಕ ಕೋಪ ಕಡಿಮೆ ಮಾಡುವ ಸಾಮರ್ಥ್ಯ ಇರುವ ಏಕೈಕ ಯುರೋಪಿಯನ್ ನಾಯಕಿ ನಾನೇ ಎಂದ ಮೆಲೋನಿ
- ಪಶ್ಚಿಮವನ್ನು ಶ್ರೇಷ್ಠವನ್ನಾಗಿಸುವ ಇಟಲಿ ಮತ್ತು ಅಮೆರಿಕದ ಪ್ರಯತ್ನಗಳಿಗೆ ಯುರೋಪಿಯನ್ ಯೂನಿಯನ್ ಧ್ವನಿಯಾಗಲಿದೆ ಎಂದ ಮೆಲೋನಿ

## ಗುಜರಾತ್‌ನಲ್ಲಿ ಎಎಪಿ ಜತೆ ಮೈತ್ರಿ ಮುರಿದ ಕಾಂಗ್ರೆಸ್, ಇಂಡಿಯಾ ಬ್ಲಾಕ್‌ನಲ್ಲಿ ಭಿನ್ನಮತ ಮತ್ತಷ್ಟು ತೀವ್ರ

**ಅಹಮದಾಬಾದ್:** ಕಾಂಗ್ರೆಸ್ ಪಕ್ಷದ ಗುಜರಾತ್ ಘಟಕವು ಆಮ್ ಆದ್ಮಿ ಪಕ್ಷ(ಎಎಪಿ) ಜೊತೆಗೆ ಮೈತ್ರಿ ಮುರಿದುಕೊಂಡಿದ್ದು, ಇಂಡಿಯಾ ಮೈತ್ರಿ ಕೂಟದಲ್ಲಿ ಆಂತರಿಕ ಭಿನ್ನಾಭಿಪ್ರಾಯ ಮತ್ತಷ್ಟು ತೀವ್ರವಾಗಿದೆ.

ಮಹತ್ವದ ರಾಜಕೀಯ ಬೆಳವಣಿಗೆಯಲ್ಲಿ, ಗುಜರಾತ್ ಕಾಂಗ್ರೆಸ್ ಅಧ್ಯಕ್ಷ ಶಕ್ತಿಸಿನ್ಹ ಗೋಹಿಲ್ ಅವರು, ಮುಂಬರುವ ವಿಸಾವದರ್ ಮತ್ತು ಕಾಡಿ ಉಪಚುನಾವಣೆಯಲ್ಲಿ ಕಾಂಗ್ರೆಸ್ ಸ್ವತಂತ್ರವಾಗಿ ಸ್ಪರ್ಧಿಸಲಿದೆ ಎಂದು ಘೋಷಿಸಿದ್ದಾರೆ. ಇದು ಎಎಪಿ ಜೊತೆ ಚುನಾವಣಾ ಪೂರ್ವ ಮೈತ್ರಿಯ ಊಹಾಪೋಹಗಳಿಗೆ ತೆರೆ ಎಳೆದಿದೆ.

ಎಎಪಿ, ಕಾಂಗ್ರೆಸ್ ಅನ್ನು ಸಂಪರ್ಕಿಸದೆ ಏಕಪಕ್ಷೀಯವಾಗಿ ಗೋಪಾಲ್ ಇಟಾಲಿಯಾ ಅವರನ್ನು ವಿಸಾವದರ್ ಸ್ಥಾನಕ್ಕೆ ತನ್ನ ಅಭ್ಯರ್ಥಿ ಎಂದು ಘೋಷಿಸಿದ್ದು, ಇದು ಕಾಂಗ್ರೆಸ್ ಮತ್ತು ಎಎಪಿ ನಡುವೆ ಬಿರುಕಿಗೆ ಕಾರಣ ಎನ್ನಲಾಗಿದೆ.

ಕಾಂಗ್ರೆಸ್ ರಾಜಕೀಯ ವ್ಯವಹಾರಗಳ ಸಮಿತಿಯ ಪ್ರಮುಖ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಗೋಹಿಲ್, ಕಾಂಗ್ರೆಸ್ ಬ್ಯಾನರ್ ಅಡಿಯಲ್ಲಿ ಸ್ಪರ್ಧಿಸುವುದು ಪಕ್ಷದ ಸಾಮೂಹಿಕ ನಿರ್ಧಾರವಾಗಿದೆ ಎಂದು ಹೇಳಿದರು. ಎಎಪಿ ಜೊತೆ ಯಾವುದೇ ಸಮನ್ವಯತೆ ಇಲ್ಲ ಎಂಬ ಹೇಳಿಕೆಯನ್ನು ತಳ್ಳಿಹಾಕಿದ ಅವರು, ವಿಸಾವದರ್ ಅಥವಾ ವಾವ್ ಸ್ಥಾನಗಳ ಬಗ್ಗೆ ಯಾವುದೇ ಮೌನ ಅಥವಾ ಸ್ಪಷ್ಟ ಒಪ್ಪಂದವಿಲ್ಲ ಎಂದು ಒತ್ತಿ ಹೇಳಿದರು.

ಗುಜರಾತ್‌ನಲ್ಲಿ ಎಎಪಿ ಜೊತೆ ಯಾವುದೇ ಮೈತ್ರಿ ಇಲ್ಲ - ಮುಂಬರುವ ಉಪಚುನಾವಣೆಗಳಿಗೂ ಅಲ್ಲ, ಸಾರ್ವತ್ರಿಕ ಚುನಾವಣೆಗೂ ಅಲ್ಲ ಎಂದು ಗೋಹಿಲ್ ಪ್ರತಿಪಾದಿಸಿದರು.

ವಿರೋಧ ಪಕ್ಷದೊಳಗಿನ ಆಂತರಿಕ ಭಿನ್ನಾಭಿಪ್ರಾಯ ಆಡಳಿತರೂಢ ಬಿಜೆಪಿಗೆ ಲಾಭವಾಗಬಹುದು. ಈ ವರ್ಷದ ಕೊನೆಯಲ್ಲಿ ಉಪಚುನಾವಣೆ ನಡೆಯುವ ಸಾಧ್ಯತೆ ಇರುವ ವಿಸಾವದರ್‌ನಲ್ಲಿ, ವಿರೋಧ ಪಕ್ಷದ ಮತಗಳು ಬಿಜೆಪಿ ಪರವಾಗಿ ಕೆಲಸ ಮಾಡುವ ನಿರೀಕ್ಷೆಯಿದೆ. ಪಾಟಿದಾರ್‌ಗಳು ಮತ್ತು ಮೇಲ್ಜಾತಿ ಪ್ರಾಬಲ್ಯವಿರುವ ಈ ಸ್ಥಾನವು ಒಂದು ಕಾಲದಲ್ಲಿ ಮಾಜಿ ಮುಖ್ಯಮಂತ್ರಿ ಕೇಶುಭಾಯಿ ಪಟೇಲ್ ಪ್ರತಿನಿಧಿಸುತ್ತಿದ್ದರಿಂದ ಹೆಚ್ಚು ಮಹತ್ವವನ್ನು ಹೊಂದಿದೆ.



# ಆರ್‌ಸಿಬಿಗೆ ಹ್ಯಾಟ್ರಿಕ್ ಸೋಲು



## ಬೆಂಗಳೂರಿನಲ್ಲಿ ಪಂಜಾಬ್ ಕಿಂಗ್

ತವರಿನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರಿಗೆ ಹ್ಯಾಟ್ರಿಕ್ ಸೋಲಾಗಿದೆ. ಮಳೆಯ ಆಟದಲ್ಲಿ ಆರ್‌ಸಿಬಿ ವಿರುದ್ಧ ಪಂಜಾಬ್ ಕಿಂಗ್ಸ್ 5 ವಿಕೆಟ್‌ಗಳ ಜಯ ಗಳಿಸಿ ಅಂಕಪಟ್ಟಿಯಲ್ಲಿ ದ್ವಿತೀಯ ಸ್ಥಾನಕ್ಕೆ ಏರಿದೆ.

ಮಳೆಯಿಂದಾಗಿ 7:30ಕ್ಕೆ ಆರಂಭವಾಗಿದ್ದ ಪಂದ್ಯ 2 ಗಂಟೆ ತಡವಾಗಿ 9:30ಕ್ಕೆ ಆರಂಭವಾಯಿತು. ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಆರ್‌ಸಿಬಿ ಆರಂಭದಲ್ಲೇ ವಿಕೆಟ್ ಕಳೆದುಕೊಳ್ಳುತ್ತಾ ಸಾಗಿತ್ತು. ಕೊನೆಯಲ್ಲಿ ಟಿಮ್ ಡೇವಿಡ್ ಅವರ ಸ್ಫೋಟಕ ಅರ್ಧಶತಕದ ನೆರವಿನಿಂದ ಆರ್‌ಸಿಬಿ 9 ವಿಕೆಟ್ ನಷ್ಟಕ್ಕೆ 95 ರನ್ ಹೊಡೆಯಿತು.

ಸುಲಭದ ಸವಾಲನ್ನು ಬೆನ್ನಟ್ಟಿದ ಪಂಜಾಬ್ 12.1 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 98 ರನ್ ಹೊಡೆದು ಜಯ ಗಳಿಸಿತು. ಈ ಮೊದಲು ಗುಜರಾತ್ ಟೈಟಾನ್ಸ್ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಆರ್‌ಸಿಬಿ ಪಂದ್ಯವನ್ನು ಸೋತಿತ್ತು. ಈಗ ಮತ್ತೆ ತವರಿನಲ್ಲಿ ರಾಜಸ್ಥಾನದ ವಿರುದ್ಧ ಸೋತಿದೆ. ಪಂಜಾಬ್ ಪರ ನೆಹಾಲ್ ವಧೇರಾ ಔಟಾಗದೇ 33 ರನ್ (19 ಎಸೆತ, 3 ಬೌಂಡರಿ, 3 ಸಿಕ್ಸ್) ಪ್ರಿಯಾಂಶ್ ಆರ್ಯ 16 ರನ್, ಪ್ರಭುಸಿಮ್ರಾನ್ ಸಿಂಗ್ 13 ರನ್ ಹೊಡೆದು ಜಯವನ್ನು ತಂದುಕೊಟ್ಟರು.

ಆರ್‌ಸಿಬಿ ಪರ ಸಾಲ್ಟ್ 4 ರನ್, ಕೊಹ್ಲಿ 1 ರನ್, ನಾಯಕ ಪಾಟೀದರ್ 23 ರನ್ (18 ಎಸೆತ, 1 ಬೌಂಡರಿ, 1 ಸಿಕ್ಸ್ ) ಹೊಡೆದು ಔಟಾದರು.

63 ರನ್‌ಗಳಿಗೆ 9 ವಿಕೆಟ್ ಕಳೆದುಕೊಂಡಿದ್ದರೂ ಕೊನೆಯಲ್ಲಿ ಡೇವಿಡ್ ಔಟಾಗದೇ ಸ್ಫೋಟಕ 50 ರನ್ (26 ಎಸೆತ, 5 ಬೌಂಡರಿ, 3 ಸಿಕ್ಸ್) ಹೊಡೆದು ತಂಡದ ಮೊತ್ತವನ್ನು 90 ರನ್‌ಗಳ ಗಡಿಯನ್ನು ದಾಟಿಸಿದರು.

ಅರ್ಶ್‌ದೀಪ್ ಸಿಂಗ್, ಜಾನ್‌ಸೆನ್ ಚಹಲ್, ಹರ್‌ಪ್ರೀತ್ ಬಾರ್ ತಲಾ 2 ವಿಕೆಟ್ ಪಡೆದರು.



## ಮುದ್ದು ಮಗಳಿಗೆ ಮುದ್ದಾದ ಹೆಸರಿಟ್ಟ ರಾಹುಲ್- ಅಥಿಯಾ

### ಐಪಿಎಲ್‌ನಲ್ಲಿ ರಾಹುಲ್ ಪರಾಕ್ರಮ


ಟೀಂ ಇಂಡಿಯಾ ಕ್ರಿಕೆಟಿಗ ಕೆಎಲ್ ರಾಹುಲ್ ಅವರ ಪತ್ನಿ ಬಾಲಿವುಡ್ ನಟಿ ಅಥಿಯಾ ಶೆಟ್ಟಿ ಇತ್ತೀಚೆಗಷ್ಟೆ ಮುದ್ದಾದ ಮಗುವಿಗೆ ಜನ್ಮ ನೀಡಿದ್ದರು. ಮಾರ್ಚ್ 24 ರಂದು, ಅಥಿಯಾ ಹೆಣ್ಣು ಮಗುವಿಗೆ ಜನ್ಮ ನೀಡಿದ್ದರು. ಈ ಬಗ್ಗೆ ದಂಪತಿಗಳು ತಮ್ಮ ಸೋಶಿಯಲ್ ಮೀಡಿಯಾ ಖಾತೆಯಲ್ಲಿ ಪೋಸ್ಟ್ ಹಂಚಿಕೊಳ್ಳುವ ಮೂಲಕ ತಮ್ಮ ಅಭಿಮಾನಿಗಳೊಂದಿಗೆ ಮಾಹಿತಿ ಹಂಚಿಕೊಂಡಿದ್ದರು. ಹೀಗಾಗಿಯೇ ಕೆಎಲ್ ರಾಹುಲ್ ಐಪಿಎಲ್‌ನಲ್ಲಿ ತಮ್ಮ ತಂಡದ ಮೊದಲ ಪಂದ್ಯವನ್ನು ಆಡಲು ಸಾಧ್ಯವಾಗಿರಲಿಲ್ಲ. ಇದೀಗ ಕೆಎಲ್ ರಾಹುಲ್ ಮತ್ತು ಅಥಿಯಾ ಶೆಟ್ಟಿ ಮತ್ತೊಂದು ಪೋಸ್ಟ್ ಹಂಚಿಕೊಳ್ಳುವ ಮೂಲಕ ತಮ್ಮ ಮಗಳ ಹೆಸರನ್ನು ಬಹಿರಂಗಪಡಿಸಿದ್ದಾರೆ.

**ಕೆಎಲ್ ರಾಹುಲ್ ಮಗಳ ಹೆಸರೇನು**

ಕೆಎಲ್ ರಾಹುಲ್ ಪ್ರಸ್ತುತ ಐಪಿಎಲ್‌ನಲ್ಲಿ ಬ್ಯುಸಿಯಾಗಿದ್ದಾರೆ. ಡೆಲ್ಲಿ ಕ್ಯಾಪಿಟಲ್ಸ್ ಪರ ಆಡುತ್ತಿರುವ ರಾಹುಲ್ ಅದ್ಭುತ ಪ್ರದರ್ಶನ ನೀಡುತ್ತಿದ್ದಾರೆ. ಏತನ್ಮಧ್ಯೆ, ಅವರು ತಮ್ಮ ಸೋಶಿಯಲ್ ಮೀಡಿಯಾ ಖಾತೆಯಲ್ಲಿ ಒಂದು ಪೋಸ್ಟ್ ಹಂಚಿಕೊಂಡಿದ್ದಾರೆ. ಈ ಪೋಸ್ಟ್‌ನಲ್ಲಿ ಅವರು ಅಥಿಯಾ ಶೆಟ್ಟಿ ಮತ್ತು ಅವರ ಮಗಳೊಂದಿಗಿನ ಫೋಟೋವನ್ನು ಹಂಚಿಕೊಂಡಿದ್ದಾರೆ. ಇದರೊಂದಿಗೆ, ಅವರು ಶೀರ್ಷಿಕೆಯಲ್ಲಿ ತಮ್ಮ ಮಗಳ ಹೆಸರನ್ನು ಉಲ್ಲೇಖಿಸಿದ್ದು, 'ನಮ್ಮ ಮಗಳು, ನಮ್ಮ ಸರ್ವಸ್ವ. ಇವಾರಾ- ದೇವರ ಕೊಡುಗೆ. ಇವಾರಾ ಎಂಬುದು ಸಂಸ್ಕೃತ ಪದವಾಗಿದ್ದು, ಇದರ ಅರ್ಥ ದೇವರ ಕೊಡುಗೆ ಎಂದು ಬರೆದುಕೊಂಡಿದ್ದಾರೆ.

ಕೆಎಲ್ ರಾಹುಲ್ ಮತ್ತು ಅಥಿಯಾ ಶೆಟ್ಟಿ ಜನವರಿ 2023 ರಲ್ಲಿ ವೈವಾಹಿಕ ಜೀವನಕ್ಕೆ ಕಾಲಿರಿಸಿದ್ದರು. ಅವರ ವಿವಾಹ ಸಮಾರಂಭದಲ್ಲಿ ಕುಟುಂಬ ಸದಸ್ಯರು ಮತ್ತು ಆಪ್ತರು ಮಾತ್ರ ಭಾಗವಹಿಸಿದ್ದರು, ಇದಕ್ಕೂ ಮೊದಲು ಇಬ್ಬರೂ ದೀರ್ಘಕಾಲ ಡೇಟಿಂಗ್ ಮಾಡಿದ್ದರು. ಆ ಬಳಿಕ 2024 ರ ನವೆಂಬರ್‌ನಲ್ಲಿ ಸೋಶಿಯಲ್ ಮೀಡಿಯಾದಲ್ಲಿ ಪೋಸ್ಟ್‌ವೊಂದನ್ನು ಹಂಚಿಕೊಂಡಿದ್ದ ಕೆಎಲ್ ರಾಹುಲ್ ಮತ್ತು ಅಥಿಯಾ ತಾವು ಪೋಷಕರಾಗಲಿರುವ ಮಾಹಿತಿ ಹಂಚಿಕೊಂಡಿದ್ದರು.

## ಸಂಜಯ್ ಬಂಗಾರ್ ಪುತ್ರಿಗೆ ಲೈಂಗಿಕ ಕಿರುಕುಳ



### ನಗ್ನ ಚಿತ್ರಗಳನ್ನು ಕಳಿಸಿದ್ರು

ಟೀಂ ಇಂಡಿಯಾದ ಮಾಜಿ ಕ್ರಿಕೆಟಿಗ ಸಂಜಯ್ ಬಂಗಾರ್ ಪ್ರಸ್ತುತ ಐಪಿಎಲ್‌ನಲ್ಲಿ ವೀಕ್ಷಕ ವಿವರಣೆಗಾರರಾಗಿ ಕಾಣಿಸಿಕೊಳ್ಳುತ್ತಿದ್ದಾರೆ. ಏತನ್ಮಧ್ಯೆ, ಅವರ ಮಗಳು ಅನನ್ಯಾ ಬಂಗಾರ್ ಖಾಸಗಿ ಮಾಧ್ಯಮಕ್ಕೆ ನೀಡಿರುವ ಸಂದರ್ಶನವೊಂದು ಇದೀಗ ಎಲ್ಲೆಡೆ ವೈರಲ್ ಆಗುತ್ತಿದ್ದು, ಇದರಲ್ಲಿ ಅವರು ಕೆಲವು ಕ್ರಿಕೆಟಿಗರ ಮೇಲೆ ಲೈಂಗಿಕ ಕಿರುಕುಳದ ಆರೋಪ ಹೊರಿಸಿದ್ದಾರೆ. ವಾಸ್ತವವಾಗಿ ಸಂಜಯ್ ಬಂಗಾರ್ ಅವರ ಮಗಳು ಅನನ್ಯಾ ಬಂಗಾರ್ ಈ ಮೊದಲು ಹುಡುಗನಾಗಿದ್ದರು. ಆದರೀಗ ಅವರು ಹುಡುಗನಿಂದ ಹುಡುಗಿಯಾಗಿ ಬದಲಾಗಿದ್ದಾರೆ. ದೀರ್ಘಕಾಲ ಲಂಡನ್‌ನಲ್ಲಿ ವಾಸ್ತವ್ಯ ಹೂಡಿದ್ದ ಅನನ್ಯಾ ಬಂಗಾರ್ ಈಗ ಭಾರತಕ್ಕೆ ಮರಳಿದ್ದಾರೆ. ಅವರು ಇಲ್ಲಿಗೆ ಬಂದ ತಕ್ಷಣ, ಸಂದರ್ಶನವೊಂದರಲ್ಲಿ ಸ್ಫೋಟಕ ಆರೋಪಗಳನ್ನು ಮಾಡಿದ್ದಾರೆ. ಅನನ್ಯಾ ಬಂಗಾರ್ ಹೇಳುವಂತೆ, ಭಾರತದ ಒಬ್ಬ ಸ್ಟಾರ್ ಕ್ರಿಕೆಟಿಗ ಅವರೊಂದಿಗೆ ರಿಲೇಷನ್‌ಶಿಪ್‌ನಲ್ಲಿ ಇರಲು ಆಸಕ್ತಿ ಹೊಂದಿದ್ದರಂತೆ. ಅದು ಮಾತ್ರವಲ್ಲದೆ ಕೆಲವು ಆಟಗಾರರು ಅನನ್ಯಾ ಅವರಿಗೆ ಅಶ್ಲೀಲ ಚಿತ್ರಗಳನ್ನು ಕಳುಹಿಸುತ್ತಿದ್ದರಂತೆ. ಸಂದರ್ಶನದಲ್ಲಿ ತನಗಾದ ಮಾನಸಿಕ ವೇದನೆಯ ಬಗ್ಗೆ ಮಾತನಾಡಿರುವ ಅನನ್ಯಾ ಬಂಗಾರ್, ' ಕೆಲ ಕ್ರಿಕೆಟಿಗರು ತಮ್ಮ ಖಾಸಗಿ ಅಂಗಾಂಗಳ ಚಿತ್ರಗಳನ್ನು ನನಗೆ ಕಳುಹಿಸುತ್ತಿದ್ದರು. ಇನ್ನು ಕೆಲವರು, 'ಬಾ ಕಾರಿನಲ್ಲಿ ಹೋಗೋಣ, ಸೆ★★ ಮಾಡೋಣ ಎಂದು ಹೇಳುತ್ತಿದ್ದರು. ಕೆಲವು ಕ್ರಿಕೆಟಿಗರು ಎಲ್ಲಾರ ಮುಂದೆ ನನ್ನನ್ನು ನಿಂದಿಸಿ, ಆ ನಂತರ ಫೋಟೋ ಕೇಳುತ್ತಿದ್ದರು ಎಂಬ ಆರೋಪಗಳನ್ನು ಹೊರಿಸಿದ್ದಾರೆ. ಇದರ ಜೊತೆಗೆ ತಾನು ಲಿಂಗ ಬದಲಿಸಿಕೊಳ್ಳಲು ಏನೆಲ್ಲ ತ್ಯಾಗ ಮಾಡಬೇಕಾಯಿತು ಎಂಬುದರ ಬಗ್ಗೆ ಮಾತನಾಡಿರುವ ಅನನ್ಯಾ, 'ನೀನು ಲಿಂಗ ಬದಲಾಯಿಸಿಕೊಳ್ಳಲು ಇಚ್ಚಿಸಿದರೆ, ನೀನು ಕ್ರಿಕೆಟ್ ಬಿಡಬೇಕಾಗುತ್ತದೆ, ಕ್ರಿಕೆಟ್‌ನಲ್ಲಿ ಸ್ಥಾನವಿಲ್ಲ ಎಂದು ನನ್ನ ತಂದೆ ಹೇಳಿದ್ದರು. ಹಾಗೆಯೇ ನನ್ನ ತಂದೆ ಸಂಜಯ್ ಬಂಗಾರ್ ಜನಪ್ರಿಯ ವ್ಯಕ್ತಿಯಾಗಿದ್ದರಿಂದ ನಾನು ಲಿಂಗ ಬದಲಿಸಿಕೊಂಡರೆ ಜನ ನಮ್ಮ ಬಗ್ಗೆ ಏನೆಲ್ಲ ಮಾತನಾಡಿಕೊಳ್ಳುತ್ತಾರೆ ಎಂಬುದು ಒತ್ತಡವನ್ನುಂಟು ಮಾಡಿತ್ತು.

## ಬದಲಿ ಆಟಗಾರನಾಗಿ ಸಿಎಸ್‌ಕೆ ತಂಡ ಸೇರಿದ ಡೆವಾಲ್ಡ್ ಬ್ರೆವಿಸ್

2025 ರ ಐಪಿಎಲ್‌ನಲ್ಲಿ ಸತತ ಸೋಲುಗಳಿಂದ ಕಂಗೆಟ್ಟಿರುವ ಚೆನ್ನೈ ಸೂಪರ್ ಕಿಂಗ್ಸ್ ತಂಡಕ್ಕೆ ಸ್ಫೋಟಕ ಬ್ಯಾಟರ್‌ನ ಅಗಮನವಾಗಿದೆ ಶುಕ್ರವಾರ, ಏಪ್ರಿಲ್ 18 ರಂದು ತನ್ನ ಸೋಶಿಯಲ್ ಮೀಡಿಯಾ ಖಾತೆಯಲ್ಲಿ ಪೋಸ್ಟ್‌ವೊಂದನ್ನು ಹಂಚಿಕೊಂಡಿರುವ ಸಿಎಸ್‌ಕೆ ಫ್ರಾಂಚೈಸಿ, ದಕ್ಷಿಣ ಆಫ್ರಿಕಾದ ಯುವ ದಾಂಡಿಗ ಡೆವಾಲ್ಡ್ ಬ್ರೆವಿಸ್ ಅವರನ್ನು ತಂಡಕ್ಕೆ ಸೇರಿಸಿಕೊಂಡಿರುವುದಾಗಿ ತಿಳಿಸಿದೆ.

ದಕ್ಷಿಣ ಆಫ್ರಿಕಾದ ಡೆವಾಲ್ಡ್ ಬ್ರೆವಿಸ್ ಬದಲಿ ಆಟಗಾರನಾಗಿ ಸಿಎಸ್‌ಕೆ ತಂಡವನ್ನು ಸೇರಿಕೊಂಡಿದ್ದು, ಅವರು ವೇಗಿ ಗುರ್ಜಪಾನಿ ಸಿಂಗ್ ಅವರ ಸ್ಥಾನವನ್ನು ತುಂಬಲಿದ್ದಾರೆ. ವಾಸ್ತವವಾಗಿ ಗುರ್ಜಪಾನಿ ಸಿಂಗ್ ಗಾಯದ ಕಾರಣ ಇಡೀ ಟೂರ್ನಿಯಿಂದ ಹೊರಬಿದ್ದಿದ್ದು, ಅವರ ಸ್ಥಾನಕ್ಕೆ ಬ್ರೆವಿಸ್ ಆಗಮನವಾಗಿದೆ.

ಈ ಸೀಸನ್‌ನಲ್ಲಿ ಚೆನ್ನೈ ತಂಡದ ಬ್ಯಾಟಿಂಗ್ ವಿಭಾಗ ದುರ್ಬಲವಾಗಿ ಕಾಣುತ್ತಿದೆ. ಈ ಕಾರಣದಿಂದಾಗಿ ವೇಗದ ಬೌಲರ್ ಬದಲಿಗೆ ಬ್ಯಾಟ್ಸ್‌ಮನ್‌ನನ್ನು ತಂಡಕ್ಕೆ ಸೇರಿಸಿಕೊಳ್ಳಲಾಗಿದೆ.



### ಸಂಬಳ ತುಂಬಾ ಸಾಧಾರಣ

ಈ ಸೀಸನ್‌ನಲ್ಲಿ ಚೆನ್ನೈ ತಂಡವು ದೊಡ್ಡ ಸ್ಕೋರ್ ಗಳಿಸುವಲ್ಲಿ ಅಥವಾ ವೇಗವಾಗಿ ಬ್ಯಾಟಿಂಗ್ ಮಾಡುವಲ್ಲಿ ವಿಫಲವಾಗಿದೆ. ವಿಶೇಷವಾಗಿ ಅಗ್ರ ಕ್ರಮಾಂಕವು ಈ ವಿಷಯದಲ್ಲಿ ಸಂಪೂರ್ಣವಾಗಿ ವಿಫಲವಾಗಿದೆ.

ಇಂತಹ ಪರಿಸ್ಥಿತಿಯಲ್ಲಿ, ಟಿ20 ಸ್ವರೂಪದಲ್ಲಿ ಸ್ಫೋಟಕ ಬ್ಯಾಟಿಂಗ್‌ಗೆ ಹೆಸರುವಾಸಿಯಾಗಿರುವ ಡೆವಾಲ್ಡ್ ಬ್ರೆವಿಸ್ ಅವರನ್ನು ಚೆನ್ನೈ ತಂಡ ಸೇರಿಸಿಕೊಂಡಿದೆ. ಅವರ ದಾಖಲೆಯೂ ಇದಕ್ಕೆ ಸಾಕ್ಷಿಯಾಗಿದ್ದು, ಈ ಬ್ಯಾಟ್ಸ್‌ಮನ್ ಕೇವಲ 81 ಟಿ20 ಪಂದ್ಯಗಳಲ್ಲಿ 123 ಸಿಕ್ಸರ್‌ಗಳನ್ನು ಬಾರಿಸಿದ್ದಾರೆ.

ಇಷ್ಟೇ ಅಲ್ಲ, ಬ್ರೆವಿಸ್ ಪ್ರಸ್ತುತ ಅತ್ಯುತ್ತಮ ಫಾರ್ಮ್‌ನಲ್ಲಿದ್ದು, ಇತ್ತೀಚೆಗೆ ಅವರು ಕ್ರಿಕೆಟ್ ದಕ್ಷಿಣ ಆಫ್ರಿಕಾದ ಡಿವಿಷನ್-1 ಟಿ20 ಟೂರ್ನಮೆಂಟ್‌ನ ಕೊನೆಯ 6 ಇನ್ನಿಂಗ್ಸ್‌ಗಳಲ್ಲಿ ಒಂದು ಶತಕ ಮತ್ತು 3 ಅರ್ಧಶತಕಗಳನ್ನು ಬಾರಿಸಿದ್ದಾರೆ.

ತಮ್ಮ ಟಿ20 ವೃತ್ತಿಜೀವನದಲ್ಲಿ, ಬ್ರೆವಿಸ್ 145 ರ ಸ್ಟ್ರೈಕ್ ರೇಟ್‌ನಲ್ಲಿ 1787 ರನ್ ಗಳಿಸಿದ್ದಾರೆ.

ಬ್ರೆವಿಸ್ 2022 ರಲ್ಲಿ ಮುಂಬೈ ಇಂಡಿಯನ್ಸ್ ಪರ ಐಪಿಎಲ್‌ಗೆ ಪಾದಾರ್ಪಣೆ ಮಾಡಿದರು. ಮೊದಲ ಸೀಸನ್‌ನಲ್ಲಿಯೇ ಅವರು 7 ಪಂದ್ಯಗಳಲ್ಲಿ 142 ಸ್ಟ್ರೈಕ್ ರೇಟ್‌ನಲ್ಲಿ 161 ರನ್ ಗಳಿಸಿದರು. ಆದಾಗ್ಯೂ, 2023 ರಲ್ಲಿ ಅವರಿಗೆ ಅವಕಾಶ ಸಿಗಲಿಲ್ಲ. 2024 ರಲ್ಲಿ 3 ಪಂದ್ಯಗಳನ್ನಾಡಿದ್ದ ಅವರು ಕೇವಲ 69 ರನ್ ಕಲೆಹಾಕಲಷ್ಟೇ ಶಕ್ತರಾಗಿದ್ದರು. ಆ ಬಳಿಕ ಮುಂಬೈ ಅವರನ್ನು ತಂಡದಿಂದ ಬಿಡುಗಡೆ ಮಾಡಿತ್ತು.

## ಜಾಟ್' ಚಿತ್ರದಲ್ಲಿ ಧಾರ್ಮಿಕ ಭಾವನೆಗಳಿಗೆ ಧಕ್ಕೆ

ಬಾಲಿವುಡ್ ನಟ ಸನ್ನಿ ಡಿಯೋಲ್ ನಟನೆಯ 'ಜಾಟ್' ಸಿನಿಮಾಗೆ ಕಾನೂನು ಸಂಕಷ್ಟ ಎದುರಾಗಿದೆ. ಈ ಚಿತ್ರದಲ್ಲಿ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತಂದಿದ್ದಾರೆ ಎಂಬ ಆರೋಪದ ಮೇರೆಗೆ ಸನ್ನಿ ಡಿಯೋಲ್ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಧಾರ್ಮಿಕ ಭಾವನೆಗಳಿಗೆ ಧಕ್ಕೆ ತಂದಿದ್ದಾರೆ ಎಂದು 'ಜಾಟ್' ಚಿತ್ರತಂಡದ ಮೇಲೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಈ ಹಿನ್ನೆಲೆ ಭಾರತೀಯ ನ್ಯಾಯ ಸಂಹಿತಾ 299ರ ಸೆಕ್ಷನ್ ಅಡಿಯಲ್ಲಿ ನಟ ಸನ್ನಿ ಡಿಯೋಲ್,



ರಣದೀಪ್ ಹೂಡಾ , ವಿನೀತ್ ಕುಮಾರ್ ಸಿಂಗ್, ಡೈರೆಕ್ಟರ್ ಗೋಪಿಚಂದ್ ಮಲಿನೇನಿ, ನಿರ್ಮಾಪಕರಾದ ಟಿ.ಜಿ ವಿಶ್ವಪ್ರಸಾದ್, ನವೀನ್ ಯೆರ್ನೇನಿ, ವೈ ರವಿಶಂಕರ್ ವಿರುದ್ಧ ಜಲಂಧರ್ ಠಾಣೆ ಪೊಲೀಸರು ಎಫ್‌ಐಆರ್ ದಾಖಲಿಸಲಿಸಿದ್ದಾರೆ. ಈ ಚಿತ್ರದ ಒಂದು ದೃಶ್ಯವು ಇಡೀ ಕ್ರಿಶ್ಚಿಯನ್ ಸಮುದಾಯದ ಧಾರ್ಮಿಕ ಭಾವನೆಗಳಿಗೆ ತೀವ್ರ ನೋವುಂಟು ಮಾಡಿದೆ ಎಂದು ನೀಡಿರುವ ದೂರಿನಲ್ಲಿ ಉಲ್ಲೇಖಿಸಲಾಗಿದೆ. ಯೇಸುಕ್ರಿಸ್ತನ ಬಗ್ಗೆ ಅಗೌರವ ತೋರಿಸಲಾಗಿದೆ ಎಂದು ದೂರುದಾರರು ಆರೋಪಿಸಿದ್ದಾರೆ. ಇನ್ನೂ ಚಿತ್ರತಂಡ ಉದ್ದೇಶಪೂರ್ವಕವಾಗಿ ಈ ಚಿತ್ರವನ್ನು ಗುಡ್ ಫ್ರೈಡೇ ಮತ್ತು ಈಸ್ಟರ್ ತಿಂಗಳಲ್ಲಿ ಬಿಡುಗಡೆ ಮಾಡಿದ್ದಾರೆ. 'ಜಾಟ್' ಸಿನಿಮಾವು ಧಾರ್ಮಿಕ ಭಾವನೆಯನ್ನು ಕೆರಳಿಸುವ ಉದ್ದೇಶ ಹೊಂದಿದೆ. ಹಾಗಾಗಿ ನಿಷೇಧಿಸಿಬೇಕು ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಅಂದಹಾಗೆ, 'ಜಾಟ್' ಚಿತ್ರ ಏ.10ರಂದು ರಿಲೀಸ್ ಆಗಿತ್ತು. ಸನ್ನಿ ಡಿಯೋಲ್ ಹಾಗೂ ರಣದೀಪ್ ಹೂಡಾ ಪ್ರಮುಖ ಪಾತ್ರದಲ್ಲಿ ನಟಿಸಿದ್ದರು. ಇದೀಗ ಜಾರ್ಟ್ ಪಾರ್ಟ್ 2 ಬರುವ ಬಗ್ಗೆಯೂ ಚಿತ್ರತಂಡ ಅಧಿಕೃತವಾಗಿ ತಿಳಿಸಿದೆ.



## ಹುಟ್ಟುಹಬ್ಬದ ಸಂಭ್ರಮದಲ್ಲಿ ಸಂಹಿತಾ ವಿನ್ಯಾ

ಕನ್ನಡ ಚಿತ್ರರಂಗದ ಪ್ರತಿಭಾವಂತ ನಟಿ ಕಮ್ ಮಾಡೆಲ್ ಸಂಹಿತಾ ವಿನ್ಯಾ 'ಮೆಜೆಸ್ಟಿಕ್ 2' ಸಿನಿಮಾ ರಿಲೀಸ್‌ಗೆ ಎದುರು ನೋಡ್ತಿದ್ದಾರೆ. ಸಿನಿಮಾ ಕೆಲಸದ ನಡುವೆ ತನ್ನ ಹುಟ್ಟುಹಬ್ಬವನ್ನು ಆಚರಿಸಿದ್ದಾರೆ. ಈ ಸಂದರ್ಭದಲ್ಲಿ ಕನ್ನಡ ಚಿತ್ರರಂಗದ ಅನೇಕ ಗಣ್ಯರು ನಟಿಗೆ ಶುಭಹಾರೈಸಿದ್ದಾರೆ. ಹಾಲು ತುಪ್ಪ ಚಿತ್ರದ ಮೂಲಕ ಚಿತ್ರರಂಗ ಪ್ರವೇಶಿಸಿದ ಸಂಹಿತಾ ನಾಯಕಿ ಪ್ರಧಾನ 'ಸೀತಮ್ಮ ಬಂದ್ಲು ಸಿರಿಮಲ್ಲಿಗೆ ತೊಟ್ಟು' ಚಿತ್ರದಲ್ಲಿ ಅತ್ಯುತ್ತಮ ಅಭಿನಯ ನೀಡಿ ಪ್ರೇಕ್ಷಕರ ಹಾಗೂ ವಿಮರ್ಶಕರ ಪ್ರಶಂಸೆ ಗಳಿಸಿದ್ದರು. ಅಮೃತ ಘಳಿಗೆ, ವಿಷ್ಣು ಸರ್ಕಲ್, ನಸಾಬ್, ಮಿಕ್ಸಿಂಗ್ ಪ್ರೀತಿ, ಸ್ವಾಭಿಮಾನಿ ಚಿತ್ರದಲ್ಲಿ ನಟಿಸಿದ್ದಾರೆ. ತೆಲುಗು, ತಮಿಳು ಸೇರಿದಂತೆ 15ಕ್ಕೂ ಹೆಚ್ಚು ಚಿತ್ರಗಳಲ್ಲಿ ವಿಭಿನ್ನ ಪಾತ್ರಗಳನ್ನು ನಿರ್ವಹಿಸಿರುವ ಸಂಹಿತಾ ವಿನ್ಯಾಗೆ ಬಾಲಿವುಡ್‌ನಿಂದಲೂ ಆಫರ್ಸ್ ಬಂದಿದೆ. 75ಕ್ಕೂ ಹೆಚ್ಚು ರಾಷ್ಟ್ರೀಯ, ಅಂತಾರಾಷ್ಟ್ರೀಯ ಫ್ಯಾಷನ್ ಶೋಗಳಲ್ಲಿ ಸಂಹಿತಾ ವಿನ್ಯಾ ಭಾಗವಹಿಸಿದ್ದಾರೆ. ನಟಿಗೆ ಫ್ಯಾಷನ್ ಡಿಸೈನರ್ ಆಗಿ ಫಾರೆವರ್ ನವೀನ್ ಕುಮಾರ್ ಅವರು ಕಾರ್ಯನಿರ್ವಹಿಸಿದ್ದಾರೆ. ಮಾಡೆಲಿಂಗ್ ಜಗತ್ತಿನಲ್ಲೂ ತನ್ನದೇ ಆದ ಛಾಪನ್ನು ಮೂಡಿಸಿರುವ ಅಚ್ಚ ಕನ್ನಡದ ಪ್ರತಿಭೆ ಸಂಹಿತಾಗೆ ಮತ್ತಷ್ಟು ಅವಕಾಶಗಳು ಸಿಗುವಂತಾಗಲಿ ಎಂಬುದೇ ಅಭಿಮಾನಿಗಳ ಆಶಯ.



## ಸ್ಪಾರ್ಕ್‌ನಲ್ಲಿ ಪ್ರೇಮ್

### ಉಪ್ಪಿ ಅಣ್ಣನ ಮಗನ ಸಿನಿಮಾದಲ್ಲಿ ಲವ್ಲಿ ಸ್ಟಾರ್

ನೆನಪಿರಲಿ ಪ್ರೇಮ್ ಪಾತ್ರಗಳ ಆಯ್ಕೆಯಲ್ಲಿ ವಿಭಿನ್ನವಾಗಿ ಕಾಣಿಸ್ತಾರೆ. ಬರೋ ಎಲ್ಲಾ ಪಾತ್ರಗಳನ್ನೂ ಅವರು ಒಪ್ಪಿಕೊಳ್ಳುವುದಿಲ್ಲ. ಅಳೆದು ತೂಗಿ ಪ್ರೇಕ್ಷಕರಿಗೆ ಇಷ್ಟವಾಗುವ ಸಿನಿಮಾಗಳನ್ನೇ ಮಾಡುತ್ತಾ ಬಂದಿದ್ದಾರೆ. ಈಗ ಪ್ರೇಮ್ ಹೊಸ ಸಿನಿಮಾ ಒಪ್ಪಿಕೊಂಡಿದ್ದಾರೆ. ರಿಯಲ್ ಸ್ಟಾರ್ ಉಪೇಂದ್ರ ಅಣ್ಣನ ಮಗನ ನಿರಂಜನ್ ಸುಧೀಂದ್ರ ನಾಯಕನಾಗಿ ನಟಿಸುತ್ತಿರುವ 'ಸ್ಪಾರ್ಕ್ ಚಿತ್ರಕ್ಕೆ ಅವರು ಎಂಟ್ರಿ ಕೊಟ್ಟಿದ್ದಾರೆ. ಪ್ರೇಮ್ ಬರ್ತ್‌ಡೇ ಹಿನ್ನೆಲೆ ಅವರ ಪಾತ್ರದ ಲುಕ್ ಅನ್ನು ಚಿತ್ರತಂಡ ರಿವೀಲ್ ಮಾಡಿದೆ. 'ಸ್ಪಾರ್ಕ್' ಚಿತ್ರದಲ್ಲಿ ನಿರಂಜನ್ ಹೀರೋ ಆಗಿ ನಟಿಸುತ್ತಿದ್ದಾರೆ. ಈ ಚಿತ್ರದಲ್ಲಿ ಒಂದು ವಿಶಿಷ್ಟ ಪಾತ್ರದಲ್ಲಿ ನೆನಪಿರಲಿ ಪ್ರೇಮ್ ಕಾಣಿಸಿಕೊಳ್ಳುತ್ತಿದ್ದಾರೆ. ನಿರ್ದೇಶಕ ಮಹಾಂತೇಶ್ ಹಂದ್ರಾಳ್ ಲವ್ಲಿ ಸ್ಟಾರ್ ಗೊಂದು ಸ್ಪೆಷಲ್ ಪಾತ್ರ ಡಿಸೈನ್ ಮಾಡಿದ್ದಾರೆ. ಹಿಂದೆಂದೂ ಕಾಣದ ಲುಕ್‌ನಲ್ಲಿ ಪ್ರೇಮ್ ನಿಮಗೆ ಕಾಣಿಸ್ತಾರೆ. ಸ್ಪೆಷಲ್ ಪಾತ್ರವನ್ನು ಅವರಿಗಾಗಿ ಮಹಾಂತೇಶ್ ಎಣೆದಿದ್ದು, ಹೀಗಾಗಿ ಪ್ರೇಮ್ ಕೂಡ ಇಷ್ಟಪಟ್ಟು ಚಿತ್ರ ಮಾಡಲು ಮುಂದಾಗಿದ್ದಾರೆ.



## ಎಡಗೈಯೇ ಅಪಘಾತಕ್ಕೆ ಕಾರಣ

### ಶಾಖಾಹಾರಿ ಮತ್ತು ಬ್ಲಿಂಕ್

ಸ್ಯಾಂಡಲ್‌ವುಡ್‌ನಲ್ಲಿ ಯಾವ ಸಿನಿಮಾಗಳು ಸಕ್ಸಸ್‌ನ ಹಾದಿ ಕಂಡಿಲ್ಲ. ಸಪ್ಪೆಯಾಗಿರುವ ಚಂದನವನದಿಂದ ಈಗ ಭರ್ಜರಿ ಸುದ್ದಿ ಹೊರಬಂದಿದೆ. 2024ರಲ್ಲಿ ರಿಲೀಸ್ ಆಗಿದ್ದ ಸೂಪರ್ ಸಕ್ಸಸ್ ಸಿನಿಮಾಗಳಾದ 'ಬ್ಲಿಂಕ್' ಮತ್ತು 'ಶಾಖಾಹಾರಿ' ಸಿನಿಮಾದ ನಿರ್ಮಾಪಕರು ಒಟ್ಟಿಗೆ ಸೇರಿ 'ಎಡಗೈಯೇ ಅಪಘಾತಕ್ಕೆ ಕಾರಣ' ಸಿನಿಮಾ ರಿಲೀಸ್ ಮಾಡಲು ಮುಂದಾಗಿದ್ದಾರೆ.

ದಿಗಂತ್ ಮಂಚಾಲೆ ನಟನೆಯ ಸಮರ್ಥ್ ಕಡ್ಕೋಳ್ ಚೊಚ್ಚಲ ನಿರ್ದೇಶನದ ಜೊತೆಗೆ ನಿರ್ಮಾಣದ ಹೊಣೆಯನ್ನು ಹೊತ್ತುಕೊಂಡಿರುವ 'ಎಡಗೈಯೇ ಅಪಘಾತಕ್ಕೆ ಕಾರಣ' ಸಿನಿಮಾ ಅನೇಕ ಕಾರಣಗಳಿಂದ ರಿಲೀಸ್ ಆಗದೆ ಮುಂದಕ್ಕೆ ಹೋಗುತ್ತಿತ್ತು. ಆದರೆ ಈಗ ನಿರ್ಮಾಪಕ ರವಿಚಂದ್ರ, ಎ.ಜೆ ಹಾಗೂ ನಿರ್ಮಾಪಕ ರಾಜೇಶ್ ಕೀಳಂಬಿ ಸೇರಿ ಈ ಸಿನಿಮಾವನ್ನ ರಿಲೀಸ್ ಮಾಡಲು ಮುಂದೆ ಬಂದಿದ್ದಾರೆ.

ಈ ಮೂಲಕ ಈಗ ಈ ಸಿನಿಮಾಗೆ ಮತ್ತೆ ಜೀವ ಬಂದಿದೆ. ರವಿಚಂದ್ರ ಅವರು ದಿಗಂತ್ ನಟನೆಯ ಸಿನಿಮಾಗೆ ವಿತರಕರಾಗಿ ಎಂಟ್ರಿ ಕೊಟ್ಟರೆ 'ಶಾಖಾಹಾರಿ' ನಿರ್ಮಾಪಕರು ಈ ಚಿತ್ರಕ್ಕೆ ಸಹ ನಿರ್ಮಾಪಕಾಗಿ ಎಂಟ್ರಿ ಕೊಟ್ಟಿದ್ದಾರೆ. 'ಶಾಖಾಹಾರಿ' ಸಿನಿಮಾ ಬಳಿಕ ನಿರ್ಮಾಪಕರು ಯಾವುದೇ ಸಿನಿಮಾವನ್ನು ಕೈಗೆತ್ತಿಕೊಂಡಿರಲಿಲ್ಲ, ಆದರೆ ಈಗ ದಿಗಂತ್ ಸಿನಿಮಾ ಸಾಥ್ ನೀಡಿದ್ದಾರೆ ಎಂದರೆ ಈ ಸಿನಿಮಾದ ಕಂಟೆಂಟ್ ಅದ್ಭುತವಾಗಿದೆ ಎನ್ನುವುದು ಗೊತ್ತಾಗುತ್ತದೆ. ನಿರ್ಮಾಪಕರಾದ ರಾಜೇಶ್ ಮತ್ತು ರವಿಚಂದ್ರ ಇಬ್ಬರೂ ಈ ಸಿನಿಮಾ ನೋಡಿ ಇಷ್ಟಪಟ್ಟು ರಿಲೀಸ್ ಮಾಡಲು ಮುಂದೆ ಬಂದಿದ್ದಾರೆ. ನಿರ್ಮಾಪಕ ರಾಜೇಶ್ ಕೀಳಂಬಿ ಮಾತನಾಡಿ, ಈ ಸಿನಿಮಾದ ಕಂಟೆಂಟ್ ಕ್ವಾಲಿಟಿ ಅದ್ಭುತವಾಗಿದೆ. ಈ ಸಿನಿಮಾದಿಂದ ನನ್ನ ಪ್ರೊಡಕ್ಷನ್ ವ್ಯಾಲ್ಯೂ ಕೂಡ ಜಾಸ್ತಿ ಆಗುತ್ತೆ ಹಾಗಾಗಿ ಈ ಸಿನಿಮಾ ರಿಲೀಸ್ ಮಾಡಲು ಕೈಜೋಡಿಸಿದ್ದೇನೆ.



## ದಕ್ಷಿಣ ಭಾರತದಲ್ಲಿ ನನ್ನ ಹೆಸರಲ್ಲೊಂದು ದೇವಸ್ಥಾನ ಆಗಬೇಕು

### ಹೇಳಿಕೆ ಸಖತ್ ಟ್ರೋಲ್

ಬಾಲಿವುಡ್ ಬೆಡಗಿ ಊರ್ವಶಿ ರೌಟೇಲಾ ಸದಾ ಒಂದಲ್ಲಾ ಒಂದು ಹೇಳಿಕೆಯ ಮೂಲಕ ಸದ್ದು ಮಾಡುತ್ತಲೇ ಇರುತ್ತಾರೆ. ಅದೆಷ್ಟೋ ಬಾರಿ ಅವರು ಆಡಿರುವ ಮಾತಿನಿಂದ ಟ್ರೋಲ್ ಆಗಿದ್ದು ಇದೆ. ಈಗ ಮತ್ತೊಮ್ಮೆ ನಟಿ ಟ್ರೋಲಿಗರ ಬಾಯಿಗೆ ಆಹಾರವಾಗಿದ್ದಾರೆ. ಉತ್ತರಾಖಂಡದಲ್ಲಿ ನನ್ನ ಹೆಸರಿನಲ್ಲಿ ದೇವಸ್ಥಾನವಿದೆ. ಅದರಂತೆ ದಕ್ಷಿಣ ಭಾರತದಲ್ಲೂ ನನ್ನ ಹೆಸರಿನಲ್ಲಿ ಒಂದು ದೇವಸ್ಥಾನ ನಿರ್ಮಿಸಬೇಕು ಎಂದು ನಟಿ ಹೇಳಿದ್ದಾರೆ. ಊರ್ವಶಿಯ ಈ ಹೇಳಿಕೆ ಸಖತ್ ಟ್ರೋಲ್ ಆಗ್ತಿದೆ. ಸಂದರ್ಶನವೊಂದರಲ್ಲಿ ಮಾತನಾಡಿದ ಊರ್ವಶಿ, ಉತ್ತರಾಖಂಡದಲ್ಲಿ ನನ್ನ ಹೆಸರಿನಲ್ಲಿ 'ಊರ್ವಶಿ' ಎಂಬ ದೇವಾಲಯ ಈಗಾಗಲೇ ಇದೆ. ನೀವು ಬದರೀನಾಥ ದೇವಸ್ಥಾನಕ್ಕೆ ಭೇಟಿ ನೀಡಲು ಹೋದಾಗ, ಅದರ ಪಕ್ಕದಲ್ಲಿಯೇ ಒಂದು ದೇವಸ್ಥಾನವಿರುತ್ತದೆ. ಇದು ನನಗೆ ಸಮರ್ಪಿಸಲಾಗಿದೆ ಎಂದಿದ್ದಾರೆ. ದಕ್ಷಿಣ ಭಾರತದಲ್ಲೂ ನನ್ನ ಹೆಸರಿನಲ್ಲಿ ಒಂದು ದೇವಸ್ಥಾನ ಆಗಬೇಕು ಎಂದು ತಮ್ಮ ಆಸೆಯನ್ನು ವ್ಯಕ್ತಪಡಿಸಿದ್ದಾರೆ. ಈ ವೇಳೆ ನಿರೂಪಕ, ಜನರು ದರ್ಶನ ಪಡೆಯಲು ನಿಮ್ಮ ದೇವಸ್ಥಾನಕ್ಕೆ ಹೋಗುತ್ತಾರೆಯೇ ಎಂದು ಕೇಳಾದ ಪ್ರಶ್ನೆಗೆ ಊರ್ವಶಿ ನಗುತ್ತಾ, ಈಗಾಗಲೇ ದೇವಸ್ಥಾನ ಇರೋದರಿಂದ ಜನರು ದೇವಾಲಯದಲ್ಲಿ ಪ್ರಾರ್ಥಿಸುತ್ತಾರೆ. ಅಷ್ಟೇ ಅಲ್ಲ, ದೆಹಲಿ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ಸಹ ಅವರಿಗೆ ಪ್ರಾರ್ಥಿಸುತ್ತಾರೆ ಮತ್ತು ಅವರ ಫೋಟೋಗಳಿಗೆ ಹೂಮಾಲೆಗಳನ್ನು ಅರ್ಪಿಸುತ್ತಾರೆ ಎಂದು ಉತ್ತರಿಸಿದ್ದಾರೆ. ಈ ವೇಳೆ, ಅವರನ್ನು ಜನರು 'ದಂದಮಾ ಮಾಯಿ' ಕರೆಯುತ್ತಾರೆ ಎಂಬುದನ್ನು ವಿವರಿಸಿದ್ದಾರೆ. ಸದ್ಯ ದಕ್ಷಿಣ ಭಾರತದಲ್ಲೂ ನನ್ನ ಹೆಸರಲ್ಲಿ ದೇವಸ್ಥಾನ ಬೇಕು ಅವರು ನೀಡಿರುವ ಹೇಳಿಕೆಗೆ ನೆಟ್ಟಿಗರು ಕಾಲೆಳೆದಿದ್ದಾರೆ. ಅಯ್ಯೋ ಸಾಕಮ್ಮ ನಿನ್ನ ಮಾತು ಎಂದು ನೆಟ್ಟಿಗರು ಟೀಕಿಸಿದ್ದಾರೆ. ಅಂದಹಾಗೆ, ಸನ್ನಿ ಡಿಯೋಲ್ ನಟನೆಯ 'ಜಟ್' ಸಿನಿಮಾದಲ್ಲಿ ಊರ್ವಶಿ ರೌಟೇಲಾ ಸೊಂಟ ಬಳುಕಿಸಿದ್ದಾರೆ. ಈ ಸಿನಿಮಾ ಏ.10ರಂದು ತೆರೆಕಂಡಿತ್ತು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966